ಸಂಪುಟ: 04 ಸಂಚಿಕೆ: 281 ಪುಟಗಳು: 08 ಮಂಗಳವಾರ 24 ಡಿಸೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿಡಿ ಬಿಟ್ರಲ್ಲಾ ಅದೇ ಹಾಸನ ಜಿಲ್ಲೆಗೆ ಕಾಂಗ್ರೆಸ್ ಕೊಟ್ಟ ಕೊಡುಗೆ ಏನು?

• ಉದಯವಾಹಿನಿ, ಹಾಸನ

ಜಿಲ್ಲೆಗೆ ದೇವೇಗೌಡರ ಕುಟುಂಬದ ಕೊಡುಗೆ ಏನು ಎಂದು ಕೇಳಿರುವ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ತಿರುಗೇಟು ನೀಡಿರುವ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರು, ಹಾಗಾದರೆ ಈ ಜಿಲ್ಲೆಗೆ ಕಾಂಗ್ರೆಸ್ ನಾಯಕರ ಕೊಡುಗೆ ಏನು? ಎಂದು ಕೇಳಿದ್ದಾರೆ. ಕಾಂಗ್ರೆಸ್ ನಾಯಕರ ಕೊಡುಗೆ ಅದೆಂತಹದ್ದು ಎನ್ನುವುದು ನನಗೆ ಗೊತ್ತಿದೆ. ಸಿಡಿ ಬಿಟ್ರಲ್ಲಾ, ಅದೇ ತಾನೇ ಹಾಸನ ಜಿಲ್ಲೆಗೆ ಕಾಂಗ್ರೆಸ್ ನವರ ಕೊಡುಗೆ ಅದು ಬಿಟ್ಟು ಹಾಸನ ಜಿಲ್ಲೆಗೆ ಅವರು ಏನು ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದರು. ಇವತ್ತು ಹಾಸನ ಜಿಲ್ಲೆ ಅಭಿವೃದ್ಧಿ ಕಂಡಿದ್ದರೆ ದೇವೇಗೌಡರು, ರೇವಣ್ಣ ಹಾಗೂ ನಾನು ಮುಖ್ಯಮಂತ್ರಿ ಇದ್ದಾಗ ಆಗಿದ್ದು. ನಾನು ನನ್ನದೇ ಆದಂತಹ ಜವಾಬ್ದಾರಿ ನಿರ್ವಹಣೆ ಮಾಡಿದ್ದೇನೆ. ಇವರೇನು ಕೊಟ್ಟಿದ್ದಾರೆ, ಹಾಸನದ ಫ್ಲೈ ಓವರ್ ರೆಡಿ ಮಾಡಲು ಆಗಲಿಲ್ಲ ಇವರ ಯೋಗ್ಯತೆಗೆ ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು ಟಾಂಗ್ ಕೊಟ್ಟರು. ನಾವೇನಾದರೂ ಸಾರ್ವಜನಿಕ ಸಂಪತ್ತನ್ನು ಲೂಟಿ ಮಾಡಿ ಸಾಕ್ಷಿಗುಡ್ಡೆಗಳನ್ನು ನಿರ್ಮಾಣ ಮಾಡಿದರೆ ತೋರಿಸಬಹುದಿತ್ತು ಅವರು ಸಾರ್ವಜನಿಕರ ಆಸ್ತಿ, ಸರ್ಕಾರದ ಆಸ್ತಿ, ಪ್ರಕೃತಿಯನ್ನು ಲೂಟಿ ಹೊಡೆದಿರುವುದಕ್ಕೆ ಸಾಕ್ಷಿ ಇದೆ ನಾವು ಎಲ್ಲಿಂದ ತರೋದು ಸಾಕ್ಷಿ ಗುಡ್ಡೆನಾ? ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಮಹಿಳೆಯರ ಜೀವಕ್ಕೆಲ್ಲಿದೆ ಗ್ಯಾರಂಟಿ: ಆರ್.ಅಶೋಕ

• ಉದಯವಾಹಿನಿ,ಬೆಂಗಳೂರು

ಕಳೆದ ಮೂರ್ನಾಲ್ಕು ತಿಂಗಳುಗಳಿಂದ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ನಿರಂತರವಾಗಿ ನಡೆಯುತ್ತಿರುವ ಬಾಣಂತಿ ಮಹಿಳೆಯರು ಹಾಗೂ ನವ ಜಾತ ಶಿಶುಗಳ ಸಾವು ರಾಜ್ಯ ಕಾಂಗ್ರೆಸ್ ಸರ್ಕಾರದ ಹೃದಯಹೀನತೆ, ಕ್ರೂರತೆಯನ್ನು ಎತ್ತಿ ತೋರಿಸುತ್ತದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಕಿಡಿಕಾರಿದ್ದಾರೆ. ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಅಶೋಕ್, ಬಣ ಬಡಿದಾಟ, ಕುರ್ಚಿ ಕಿತ್ತಾಟದಲ್ಲಿ ಸದಾ ಮಗ್ನವಾಗಿರುವ ಸಿಎಂ ಸಿದ್ದರಾಮಯ್ಯ ಸರ್ಕಾರ ಸಂಪೂರ್ಣವಾಗಿ ನಿಷ್ಕ್ರಿಯವಾಗಿದ್ದು, ಹೆರಿಗೆಗೆಂದು ಸರ್ಕಾರಿ ಆಸ್ಪತ್ರೆಗೆ ಹೋಗುವ ಬಡ ಕುಟುಂಬಗಳ ಹೆಣ್ಣು ಮಕ್ಕಳು ಜೀವಂತವಾಗಿ ಮನೆಗೆ ವಾಪಸ್ಸು ಬರುವ ಗ್ಯಾರೆಂಟಿ ಇಲ್ಲದಂತಾಗಿದೆ ಎಂದು ಕಿಡಿಕಾರಿದ್ದಾರೆ. ರಾಜ್ಯದೆಲ್ಲೆಡೆ ಬಾಣಂತಿಯರ ಸರಣಿ ಸಾವುಗಳ ಪ್ರಕರಣ ಗಂಭೀರ ಸ್ವರೂಪ ಪಡೆದಿದ್ದರೂ ಮೊನ್ನೆಯಷ್ಟೇ ನಡೆದ ಬೆಳಗಾವಿಯ ಚಳಿಗಾಲದ ಅಧಿವೇಶನದ ನಂತರವೂ ಸಾವುಗಳು ನಿಲ್ಲುತ್ತಿಲ್ಲವೆಂದರೆ ಸರ್ಕಾರದ ಅಸಡ್ಡೆತನ ನಾಡಿನ ಬಡ ಕುಟುಂಬಗಳ ತಾಯಂದಿರ ಪ್ರಾಣಗಳಿಗೆ ಸಂಚಕಾರ ತಂದೊಡ್ಡಿದೆ ಎಂದರೆ ತಪ್ಪಾಗಲಾರದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಸರ್ಕಾರದ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ.

## ಬಿಜೆಪಿಯ ಬೆಳಗಾವಿ ಚಲೋಗೆ ಅನುಮತಿ ಇಲ್ಲ : ಗೃಹ ಸಚಿವ

• ಉದಯವಾಹಿನಿ,ಬೆಂಗಳೂರು

ಬೆಳಗಾವಿಯಲ್ಲಿ ಅಧಿವೇಶನದ ಕೊನೆಯ ದಿನದಂದು ನಡೆದ ಘಟನೆಗೆ ಸಂಬಂಧಿಸಿದಂತೆ ಬಿಜೆಪಿಯ ಎಂಎಲ್ಸಿ ಸಿಟಿ ರವಿಯವರನ್ನು ಅರೆಸ್ಟ್ ಮಾಡಲಾಗಿತ್ತು. ಈ ಒಂದು ವಿಚಾರಕ್ಕೆ ಸಂಬಂಧಪಟ್ಟಂತೆ ಬಿಜೆಪಿಯು ಕಾಂಗ್ರೆಸ್ ಸರ್ಕಾರದ ವಿರುದ್ಧ ಬೆಳಗಾವಿ ಚಲೋ ಪ್ರತಿಭಟನೆ ಹಮ್ಮಿಕೊಳ್ಳಲು ತೀರ್ಮಾನಿಸಿತ್ತು. ಇದಕ್ಕೆ ಗೃಹ ಸಚಿವ ಜಿ ಪರಮೇಶ್ವರ್ ಅವರು ಬೆಳಗಾವಿ ಜಿಲ್ಲೆಗೆ ಅನುಮತಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಬೆಳಗಾವಿ ಚಲೋಗೆ ಅನುಮತಿ ಇಲ್ಲ. ನಾವು ಕಾನೂನು ಸುವ್ಯವಸ್ಥೆ ಸರಿ ಮಾಡುತ್ತೇವೆ ಬಿಜೆಪಿ ಚಲೋಗೆ ಪರ್ಮಿಷನ್ ಕೊಡಲ್ಲ ಎಂದಿದ್ದೇವೆ ಅದಕ್ಕೂ ಮೀರಿ ಏನಾದರೂ ಮಾಡಿದರೆ ಕಾನೂನು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ.

## ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಸಿಟಿ ರವಿ ಬಳಸಿದ್ದ ಪ್ರಾಸ್ಟಿಟ್ಯೂಟ್ ಪದಕ್ಕೆ ನಾನೇ ಸಾಕ್ಷಿ

• ಉದಯವಾಹಿನಿ,ಮೈಸೂರು

ಬೆಳಗಾವಿ ಅಧಿವೇಶನದ ಕೊನೆಯ ದಿನದಂದು ಸುವರ್ಣ ಸೌಧದಲ್ಲಿ ದೊಡ್ಡ ಹೈಡ್ರಾಮಾವೇ ನಡೆದುಹೋಗಿದೆ. ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆಗೆ ಕಾಂಗ್ರೆಸ್ ಸದಸ್ಯರು ಅಂಬೇಡ್ಕರ್ ಅವರ ಫೋಟೋ ಹಿಡಿದುಕೊಂಡು ಪ್ರತಿಭಟಿಸುತ್ತಿದ್ದರೆ, ಅತ್ತ ಇನ್ನೊಂದು ಕಡೆ ಬಿಜೆಪಿಯವರು ಕೂಡ ಪ್ರತಿಭಟನೆ ಮಾಡುತ್ತಿದ್ದರು. ಈ ವೇಳೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಸಿಟಿ ರವಿ ಅವರು ಅವಾಚ್ಯ ಪದಗಳಿಂದ ನಿಂದನೆ ಮಾಡಿದ್ದಾರೆ ಈ ವಿಚಾರವಾಗಿ ಕಾಂಗ್ರೆಸ್ ಎಂಎಲ್ಸಿ ಯತೀಂದ್ರ ಸಿದ್ದರಾಮಯ್ಯ ಅವರು ಹೌದು ಸಿಟಿ ರವಿ ಆ ಪದ ಬಳಸಿದ್ದು ನಿಜ ಎಂದು ತಿಳಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಸಿಟಿ ರವಿ ಬಳಸಿದ್ದ 'ಪ್ರಾಸ್ಟಿಟ್ಯೂಟ್' ಪದಕ್ಕೆ ನಾನೇ ಸಾಕ್ಷಿ ಈಗ ಸಿಂಪತಿ ಗಿಟ್ಟಿಸಿಕೊಳ್ಳಲು ಸಿಟಿ ರವಿ ಅವರು ಡ್ರಾಮಾ ಮಾಡುತ್ತಿದ್ದಾರೆ.

# ಕಾಂಗ್ರೆಸ್‌ನಲ್ಲಿ ಈಗ ಇರುವವರೆಲ್ಲ ನಕಲಿ ಗಾಂಧಿಗಳು: ಪ್ರಹ್ಲಾದ ಜೋಶಿ

• ಉದಯವಾಹಿನಿ, ಹುಬ್ಬಳ್ಳಿ



ಈಗಿನ ಕಾಂಗ್ರೆಸ್‌ಗೂ, ಮಹಾತ್ಮ ಗಾಂಧೀಜಿಗೂ ಏನು ಸಂಬಂಧ? ಈಗಿನದು ಇಂದಿರಾ ಗಾಂಧಿಯವರ ನಕಲಿ ಕಾಂಗ್ರೆಸ್. ಹಳೇಯ ಕಾಂಗ್ರೆಸ್ ತುಂಡು ತುಂಡಾಗಿ ಹೋಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವ್ಯಂಗ್ಯವಾಡಿದರು.

ಬೆಳಗಾವಿಯಲ್ಲಿ ನಡೆಯಲಿರುವ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಶತಮಾನೋತ್ಸವದ ಕುರಿತು ಸೋಮವಾರ (ಡಿ.23) ಸುದ್ದಿಗಾರರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನಲ್ಲಿ ಈಗಿರುವವರೆಲ್ಲ ನಕಲಿ ಗಾಂಧಿಗಳು. ಅದು ಕಳ್ಳಕಾಕರರ ಗುಂಪು. ಇವರಾರು ಮಹಾತ್ಮ ಗಾಂಧೀಜಿ ಅವರ ಕಾಂಗ್ರೆಸ್‌ನ ವಾರಸುದಾರರಲ್ಲ. ನಕಲಿ ಕಾಂಗ್ರೆಸ್‌ಗೆ ಸರ್ಕಾರಿ ದುಡ್ಡು ಯಾಕೆ ಖರ್ಚು ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು. ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರನ್ನು ಕಾರಿನಲ್ಲಿ ಸುತ್ತಾಡಿಸಿದ್ದು ತನಗೆ ಗೊತ್ತಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿಕೆ ನೀಡುತ್ತಾರೆ. ಅಂದರೆ, ಗೃಹ ಸಚಿವರನ್ನೇ ಕತ್ತಲಲ್ಲಿಟ್ಟು ಪೊಲೀಸರು ಹೀಗೆ ಮಾಡಿದ್ದಾರಾ ಜಿಲ್ಲಾ ಉಸ್ತುವಾರಿ ಸಚಿವರು ಸಹ ಪೊಲೀಸರು ತಪ್ಪು ಮಾಡಿದ್ದಾರೆ ಎಂದಿದ್ದಾರೆ. ಹಾಗಾದರೆ ಸರ್ಕಾರದಲ್ಲಿ ಏನು ನಡೆಯುತ್ತಿದೆ? ಇದರ ಹಿಂದಿನ ಸೂತ್ರಧಾರರು ಯಾರು ಎನ್ನುವುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಬೇಕು ಎಂದರು.

**ಪೊಲೀಸರ ಮೇಲೆ ಆರೋಪ**

ಸಿ.ಟಿ.ರವಿ ಅವರ ಆಕ್ಷೇಪಾರ್ಹ ಹೇಳಿಕೆ ಮುಚ್ಚಿಕೊಳ್ಳಲು ಬಿಜೆಪಿ ಮುಖಂಡರು ಪೊಲೀಸರ ಮೇಲೆ ಆರೋಪ ಮಾಡುತ್ತಿದ್ದಾರೆನ್ನುವ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸುತ್ತ, ನಾವು ಯಾವಾಗಲೂ ಮರ್ಯಾದೆಯಿಂದಲೇ ವರ್ತಿಸುತ್ತಿದ್ದೇವೆ. ಅವರ ಹಾಗೆ ನಾವೇನೂ ಬಿಟ್ಟಿಲ್ಲ. ಕಾಂಗ್ರೆಸ್‌ನಲ್ಲಿ ಸಂಸ್ಕೃತಿ, ಸಂಸ್ಕಾರ ಎನ್ನುವುದೇ ಇಲ್ಲ. ಕೆಲವಷ್ಟು ನಾಯಕರನ್ನು ಹೊರತು ಪಡಿಸಿ ಉಳಿದವರೆಲ್ಲ ಅನಾಗರಿಕರ ಹಾಗೆ ವರ್ತಿಸುತ್ತಾರೆ ಎಂದು ಕುಟುಕಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ 64ನೇ ಸಭೆ ಒಟ್ಟು

# ₹ 9,823.31 ಕೋಟಿ ಬಂಡವಾಳ ಹೂಡಿಕೆಯ

ಒಂಬತ್ತು ಯೋಜನೆಗಳಿಗೆ ಹಸಿರು ನಿಶಾನೆ ತೋರಿದೆ.

**ಮೊತ್ತದ 10 ಪ್ರಸ್ತಾವನೆಗಳಿಗೆ ಅನುಮೋದನೆ**

**ರಾಜ್ಯದ ಜನರಿಗೆ ಉದ್ಯೋಗ ಅವಕಾಶ**

# ಉದ್ಯೋಗ ಸೃಷ್ಟಿ ಸಿಎಂ ಪುಷ್ಟಿ



• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ 64ನೇ ಸಭೆ ಒಟ್ಟು 9,823.31 ಕೋಟಿ ಬಂಡವಾಳ ಹೂಡಿಕೆಯ ಒಂಬತ್ತು ಯೋಜನೆಗಳಿಗೆ ಹಸಿರು ನಿಶಾನೆ ತೋರಿದೆ.

**ಸೆಮಿಕಂಡಕ್ಟರ್ ವಲಯದಲ್ಲಿ ಹೆಚ್ಚು ಹೂಡಿಕೆ:** ಅನುಮೋದನೆ ಪಡೆದ ಯೋಜನೆಗಳಲ್ಲಿ ಡಿ.ಎನ್.ಸೊಲ್ಯೂಷನ್ಸ್‌ನ 998 ಕೋಟಿ (ಐಟಿಐಆರ್, ದೇವನಹಳ್ಳಿ), ಸೈಲೆಕ್ಟ್ರಿಕ್ ಸೆಮಿಕಂಡಕ್ಟರ್ಸ್ ಮ್ಯಾನುಫ್ಯಾಕ್ಚರಿಂಗ್ 3,425.60 ಕೋಟಿ (ಕೋಚನಹಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು) ಮತ್ತು ಸನ್ಸೆರಾ ಇಂಜಿನಿಯರಿಂಗ್ ಸಂಸ್ಥೆಯ 2150 ಕೋಟಿ (ಹಾರೋಹಳ್ಳಿ) ಹೂಡಿಕೆ ಯೋಜನೆಗಳು ಹೊಸದಾಗಿವೆ. ಇವುಗಳಿಂದ ಕ್ರಮವಾಗಿ 467, 460 ಮತ್ತು 3,500 ಉದ್ಯೋಗಗಳು ಸೃಷ್ಟಿಯಾಗಲಿವೆ. ಇದರಿಂದ 5,605 ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಹೇಳಿದರು.

ಮಿಕ್ಕಂತೆ, 6 ಯೋಜನೆಗಳು ಹೆಚ್ಚುವರಿ ಬಂಡವಾಳ ಹೂಡಿಕೆಯ ಪ್ರಸ್ತಾವನೆಗಳಾಗಿವೆ. ಇವುಗಳಲ್ಲಿ ಮುಸಾಶಿ ಆಟೋ ಪಾರ್ಟ್ಸ್ (ದೊಡ್ಡಬಳ್ಳಾಪುರ) 122.66 ಕೋಟಿ, ಜೆಎಸ್ ಡಬ್ಲ್ಯು ಸಿಮೆಂಟ್ (ತೋರಣಗಲ್, ಬಳ್ಳಾರಿ) 486.82 ಕೋಟಿ, ನೈಡೆಕ್ ಇಂಡಸ್ಟ್ರಿಯಲ್ ಆಟೋಮೇಷನ್ (ಬೇಲೂರು, ಧಾರವಾಡ) 200 ಕೋಟಿ, ಎಪ್ಸಿಲಾನ್ ಕಾರ್ಬನ್ (ಸಂಡೂರು) 740 ಕೋಟಿ, ಕೆ.ಬಿ.ಸ್ಟೀಲ್ಸ್ (ಹೊಸಪೇಟೆ, ವಿಜಯನಗರ) 852.49 ಕೋಟಿ ಮತ್ತು ಸಿಫಿ ಡೇಟಾ ಮ್ಯಾನೇಜ್ಡ್ ಸರ್ವೀಸಸ್ (ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್) 847.74 ಕೋಟಿ ಹಣವನ್ನು ರಾಜ್ಯದಲ್ಲಿ ಹೆಚ್ಚುವರಿಯಾಗಿ ಹೂಡಿಕೆ ಮಾಡಲಿವೆ.

**ಕೈಗಾರಿಕೆ ಆರಂಭಿಸದಿದ್ದರೆ ಕ್ರಮ:** ಸಭೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ಸೆಮಿಕಂಡಕ್ಟರ್ ವಲಯದ ಪ್ರಥಮ ಯೋಜನೆಯು ಮೈಸೂರಿನ ಬಳಿಕ ಕೋಚನಹಳ್ಳಿಯ ಎಲೆಕ್ಟ್ರಾನಿಕ್ಸ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್‌ನಲ್ಲಿ ಅಸ್ತಿತ್ವಕ್ಕೆ ಬರಲಿದೆ. ಕೆಐಎಡಿಬಿಯಿಂದ ಜಮೀನು ಪಡೆದುಕೊಳ್ಳುವ ಉದ್ಯಮಿಗಳು/ಕಂಪನಿಗಳು ನಿಗದಿತ ಸಮಯದಲ್ಲಿ ಕೈಗಾರಿಕೆಯನ್ನು ಆರಂಭಿಸಬೇಕು. ಇಲ್ಲದಿದ್ದರೆ ದಂಡ ವಿಧಿಸುವುದು ಸೇರಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಖಡಕ್ ಎಚ್ಚರಿಕೆ ನೀಡಿದರು.

| | |
|---|---|
| 1 | 5,605 ಉದ್ಯೋಗ ಸೃಷ್ಟಿ |
| 2 | 64ನೇ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ ಸಭೆ ಬಳಿಕ ಮಾಹಿತಿ |
| 3 | ₹9,823.31 ಕೋಟಿ ಬಂಡವಾಳ ಹೂಡಿಕೆ. |

### ಸಕ್ಕರೆ ಕಾರ್ಖಾನೆಗಳ ಉತ್ಪನ್ನಗಳಲ್ಲಿ ರೈತರಿಗೆ ಲಾಭಾಂಶ

ಸಕ್ಕರೆ ಕಾರ್ಖಾನೆಗಳು ಉಪ ಉತ್ಪನ್ನಗಳ ಉತ್ಪಾದನೆಯಲ್ಲೂ ರೈತರಿಗೆ ಲಾಭಾಂಶದ ಪಾಲು ನೀಡುವ ಕುರಿತು ಪರಿಶೀಲಿಸಲಾಗುವುದು. ಮಹಾರಾಷ್ಟ್ರ ಮತ್ತು ತಮಿಳುನಾಡಿನಲ್ಲಿ ಈ ಸಂಬಂಧ ಅನುಸರಿಸುತ್ತಿರುವ ನಿಯಮಗಳನ್ನು ಅಧಿಕಾರಿಗಳು ನೋಡಬೇಕು. ಒಟ್ಟಿನಲ್ಲಿ ಕೈಗಾರಿಕೆಗಳು ಸರ್ಕಾರದ ನಿಯಮಗಳಿಗೆ ತಕ್ಕಂತೆಯೇ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿಸಿಕೊಳ್ಳಲಾಗುವುದು ಎಂದು ಸಿಎಂ ವಿವರಿಸಿದ್ದಾರೆ. ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

### ಮೈಸೂರು ಬಳಿ ಸೆಮಿಕಂಡಕ್ಟರ್ ಕ್ಲಸ್ಟರ್

ಸೆಮಿಕಂಡಕ್ಟರ್ ವಲಯದ ಪ್ರಥಮ ಯೋಜನೆಯು ಮೈಸೂರಿನ ಬಳಿಕ ಕೋಚನಹಳ್ಳಿಯ ಎಲೆಕ್ಟ್ರಾನಿಕ್ಸ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್‌ನಲ್ಲಿ ಅಸ್ತಿತ್ವಕ್ಕೆ ಬರಲಿದೆ. ಕೆಐಎಡಿಬಿಯಿಂದ ಜಮೀನು ಪಡೆದುಕೊಳ್ಳುವ ಉದ್ಯಮಿಗಳು/ಕಂಪನಿಗಳು ನಿಗದಿತ ಸಮಯದಲ್ಲಿ ಕೈಗಾರಿಕೆಯನ್ನು ಆರಂಭಿಸಬೇಕು. ಇಲ್ಲದಿದ್ದರೆ ದಂಡ ವಿಧಿಸುವುದು ಸೇರಿದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಮೆ.ಡಿ.ಎನ್. ಸಲ್ಯೂಷನ್ಸ್ ಇಂಡಿಯಾ ಪ್ರೈ.ಲಿ ಸಂಸ್ಥೆಯ 998 ಕೋಟಿ ರೂ.ಗಳ ಹೊಸ ಬಂಡವಾಳ ಹೂಡಿಕೆಯ ಯೋಜನೆಯಿಂದ 467 ಉದ್ಯೋಗ, ಮೆ. ಸೈಲೆಕ್ಟ್ರಿಕ್ ಸೆಮಿಕಂಡಕ್ಟರ್ ಮ್ಯಾನುಫ್ಯಾಕ್ಚರಿಂಗ್ ಪ್ರೈ.ಲಿ ಸಂಸ್ಥೆಯ 3425.60 ಕೋಟಿ ರೂ. ಹೂಡಿಕೆಯಿಂದ 460 ಉದ್ಯೋಗ, ಸನ್ಸೆರಾ ಇಂಜಿನಿಯರಿಂಗ್ ಲಿಮಿಟೆಡ್ ಸಂಸ್ಥೆಯ 2150 ಕೋಟಿ ರೂ. ಹೂಡಿಕೆಯಿಂದ 3500 ಉದ್ಯೋಗ ಸೃಷ್ಟಿಯಾಗುತ್ತಿರುವುದಾಗಿ ಸಿಎಂ ಸಿದ್ದರಾಮಯ್ಯ ತಿಳಿಸಿದರು.



# ವಿಧಾನ ಪರಿಷತ್‌ನಲ್ಲೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ನನಗೆ ಧಮ್ಕಿ ಹಾಕಿದ್ದಾರೆ

• ಉದಯವಾಹಿನಿ, ಚಿಕ್ಕಮಗಳೂರು



ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಕುರಿತು ಅವಾಚ್ಯ ಪದಗಳ ನಿಂದನೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಬಿಜೆಪಿ ಎಂಎಲ್ಸಿ ಸಿಟಿ ರವಿ ಅರೆಸ್ಟ್ ಆಗಿ ಇದೀಗ ಬಿಡುಗಡೆಯಾಗಿದ್ದಾರೆ.

ಚಿಕ್ಕಮಗಳೂರಿನ ಬಸವನಹಳ್ಳಿ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿ ವಿಧಾನ ಪರಿಷತ್‌ನಲ್ಲಿಯೇ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಅವರು ನನಗೆ ಧಮ್ಕಿ ಹಾಕಿದ್ದಾರೆ ಎಂದು ಗಂಭೀರವಾದಂತಹ ಆರೋಪ ಮಾಡಿದರು. ಚಿಕ್ಕಮಗಳೂರಿನ ಬಸವನಹಳ್ಳಿ ನಿವಾಸದಲ್ಲಿ ಸಿಟಿ ರವಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾತ್ರಿ ಇಡೀ ನಾಲ್ಕು ಜಿಲ್ಲೆಯಲ್ಲಿ ವ್ಯಾನ್ ನಲ್ಲಿ ನನ್ನನ್ನು ಸುತ್ತಾಡಿಸಿದ್ದಾರೆ. ಗೂಂಡಾಗಳು ನನ್ನ ಮೇಲೆ ಹಲ್ಲೆಗಯುವಂತಹ ಆಡಿಯೋ ಮತ್ತು ವಿಡಿಯೋ ಕೂಡ ಇದೆ ಈ ಬಗ್ಗೆ ಸಂಪೂರ್ಣವಾಗಿ ತನಿಖೆ ಆಗಬೇಕು ಎಂದು ಬಿಜೆಪಿ ಆಗ್ರಹಿಸಿದರು.

ಈಗಾಗಲೇ ವಿಧಾನ ಪರಿಷತ್ ಸಭಾಪತಿಗೆ ದೂರು ಕೊಟ್ಟಿದ್ದೇನೆ ಈ ಕುರಿತು ಸಭಾಪತಿಯವರು ಏನು ಕ್ರಮ ಕೈಗೊಳ್ಳುತ್ತಾರೆ ಅಂತ ನೋಡಬೇಕು. ಅಲ್ಲದೇ ಖಾನಾಪುರದಲ್ಲಿ ನನ್ನ ಕೊಲೆ ಯತ್ನದ ಬಗ್ಗೆ ದೂರು ಕೊಟ್ಟಿದ್ದೇನೆ. ಆದರೆ ಪೊಲೀಸರು ಎಫ್‌ಐಆರ್ ದಾಖಲಿಸಿಕೊಳ್ಳಲಿಲ್ಲ. ಹೆದರಿಸಿ ಗೂಂಡಾಗಿರಿ ಮಾಡಲು ಪ್ರಜಾಪ್ರಭುತ್ವ ಅವಕಾಶ ನೀಡುವುದಿಲ್ಲ ವಿಧಾನಪರಿಷತ್ ನಲ್ಲಿ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ನನಗೆ ಧಮ್ಕಿ ಹಾಕಿದ್ದಾರೆ. ಡಿಕೆ ಶಿವಕುಮಾರ್, ಚೆನ್ನರಾಜ ಹಟ್ಟಿಹೊಳಿ ಕೂಡ ನನಗೆ ಧಮ್ಕಿ ಹಾಕಿದ್ದಾರೆ.

**ವಿಧಾನ ಪರಿಷತ್ ಸಭಾಪತಿಗೆ ದೂರು**

ಸುವರ್ಣ ಸೌಧದಲ್ಲೇ ನನ್ನ ಮೇಲೆ ದಾಳಿಗೆ ಪ್ರಯತ್ನ ನಡೆದಿತ್ತು. ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್‌ದೂರಿನ ಮೇರೆಗೆ ನನ್ನ ವಿರುದ್ಧ ಕ್ರಮ ಕೈಗೊಳ್ಳುತ್ತಾರೆ ನಾನು ನೀಡಿದ ದೂರಿನ ಮೇಲೆ ಯಾಕೆ ಪೊಲೀಸರು ಯಾವುದೇ ಕ್ರಮ ಕೈಗೊಳ್ಳಲಿಲ್ಲ ವಿಧಾನ ಪರಿಷತ್‌ನಲ್ಲಿ ನನ್ನ ತಾಯಿ ತಂಗಿ ಪತ್ನಿಯ ಬಗ್ಗೆ ಮಾತನಾಡಿದರು.

ಈ ಮಹಾತಾಯಿ ಮಾತನಾಡಿದ್ದನ್ನು ತಾವೆಲ್ಲರೂ ನೋಡಿದ್ದೀರಿ ರಾತ್ರಿ ಇಡೀ ಊರೂರು, ಕಾಡುಮೇಡು ಸುತ್ತಿಸುವಂತೆ ಆದೇಶ ಇತ್ತ? ಬೆಳಗಾವಿ, ರಾಯಭಾಗ ಲೋಕಾಪುರಕ್ಕೆ ಕರೆದೊಯ್ದಿದ್ದು ಯಾಕೆ? ಎಂದು ಪ್ರಶ್ನಿಸಿದರು.


# ಪೊಲೀಸರ ವರ್ತನೆಗೆ ಸಭಾಪತಿ ಬಸವರಾಜ್ ಹೊರಟ್ಟಿ ಕೆಂಡಾಮಂಡಲ

## ಸದನದ ಒಳಗೆ ನಡೆಯುವ ಘಟನೆಗಳಿಗೆ ಪೊಲೀಸರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ತಿಳಿಸಿದ್ದಾರೆ

• ಉದಯವಾಹಿನಿ,ಬೆಂಗಳೂರು

ಬೆಳಗಾವಿಯ ಸುವರ್ಣಸೌಧದ ಕಲಾಪದ ವೇಳೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್‌ಮೇಲೆ ಬಿಜೆಪಿ ಸದಸ್ಯ ಸಿ.ಟಿ ರವಿ ಅಶ್ಲೀಲ ಪದ ಪ್ರಯೋಗ ಬಳಸಿದ ನಿಂದನೆ ಪ್ರಕರಣ ಮುಗಿದ ಅಧ್ಯಾಯ ಎಂದು ಹೇಳಿರುವ ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಪೊಲೀಸರ ನಡೆಗೆ ಕೆಂಡಮಂಡಲವಾಗಿದ್ದಾರೆ. ಬೆಂಗಳೂರಿನ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಸಿ.ಟಿ ರವಿ ಮತ್ತು ಲಕ್ಷ್ಮಿ ಹೆಬ್ಬಾಳ್ಕರ್ ಪ್ರಕರಣ ಇದೀಗ ಮುಗಿದ ಅಧ್ಯಾಯ. ಡಿ.19ರಂದೇ ಸದನದಲ್ಲಿ ರೂಲಿಂಗ್ ಕೊಟ್ಟಿದ್ದೇನೆ. ಅನಿರ್ದಿಷ್ಟಾವಧಿವರೆಗೆ ಮುಂದೂಡಿಕೆ ಆಗಿದೆ.

ಸದನದ ಒಳಗೆ ನಡೆಯುವ ಘಟನೆಗಳಿಗೆ ಪೊಲೀಸರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ತಿಳಿಸಿದ್ದಾರೆ. ಮಹಜರು ಮಾಡುವುದಾಗಿ ಪೊಲೀಸರು ನನ್ನ ಬಳಿ ಕೇಳಿದರೂ ನಾನು ಅದಕ್ಕೆ ನಾವು ಅನುಮತಿ ಕೊಟ್ಟಿಲ್ಲ ಎಂದು ಸ್ಪಷ್ಟಪಡಿಸಿದರು. ಸದನದಲ್ಲಿ ನಡೆದಿದೆ ಎನ್ನಲಾದ ಘಟನೆ ಬಗ್ಗೆ ಕೂಲಂಕುಷವಾಗಿ ಚರ್ಚೆ ಮಾಡಿದ್ದೇವೆ. ಸದನದವನ್ನು ಅನಿರ್ದಿಷ್ಟವಾಧಿಗೆ ಮುಂದೂಡಿಕೆ ಬಳಿಕ ಸಿಟಿ ರವಿ ಬಂಧನ ಆಗಿತ್ತು. ಸದ್ಯ, ಎರಡೂ ಕಡೆಯಿಂದ ನಮಗೆ ಯಾವುದೇ ದೂರು ಬಂದಿಲ್ಲ. ಹಕ್ಕುಚ್ಯುತಿ ಆಗಿದೆ ಎಂದು ದೂರು ಕೊಟ್ಟರೆ ನಂತರ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.



ಸಿ.ಟಿ. ರವಿ ಅವರಿಗೆ ಏನಾದರೂ ಆದರೆ, ಸುಮನೆ ಬಿಡುವುದಿಲ್ಲ ಎಂದು ನೇರವಾಗಿಯೇ ಕಮೀಷನರ್‌ಗೆ ಹೇಳಿ. ಬೆಳಗ್ಗೆ ತನಕವೂ ನಾನು ಟ್ರ್ಯಾಕ್ ಮಾಡ್ತೆ, ಬೆಳಗ್ಗೆ, 5 ಗಂಟೆಗೆ ಎಸ್ಪಿಗೂ ಕೂಡ ಮಾತನಾಡಿದೆ. ಅಲ್ಲದೇ ಈಗಾಗಲೇ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನಿಸಿದವರ ವಿರುದ್ಧ ಕ್ರಮ ಕೈಗೊಳ್ಳಲು ಪೊಲೀಸ್ ಆಯುಕ್ತರಿಗೆ ಸೂಚಿಸಿದ್ದೇನೆ ಎಂದು ವಿವರಿಸಿದ್ದಾರೆ. ಇನ್ನೂ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಪರಿಷತ್ನಲ್ಲಿ ನಿಂದನೆ ಆರೋಪ ಪ್ರಕರಣದಲ್ಲಿ ಮಹಿಳಾ ಆಯೋಗಕ್ಕೆ ಸಭಾಪತಿಗೆ ಕೇಳುವ ಅಧಿಕಾರ ಇಲ್ಲ, ಅವರು ಪತ್ರ ಬರೆಯಲಿ, ಆದ್ರೆ ಅದಕ್ಕೆ ನಾನು ಉತ್ತರ ಕೊಡಬೇಕಾಗಿಯೂ ಇಲ್ಲ. ಬೇಕಾದರೆ ಬೇರೆಯವರಿಗೆ ನೋಟೀಸ್ ಕೊಡಲಿ ಎಂದು ತಿಳಿಸಿದ್ದಾರೆ.

ರಾತ್ರಿ ಒಂದೂವರೆ ಗಂಟೆಗಳ ಕಾಲ ನಾನು ಈ ಕೇಸ್ ಟ್ರ್ಯಾಕ್ ಮಾಡಿದ್ದೀನಿ.ಸಣ್ಣ ಘಟನೆಯಾದರೆ ನೀವೇ ಜವಾಬ್ದಾರಿ ಎಂದು ಪೊಲೀಸರಿಗೆ ತಿಳಿಸ ನಾನು ಮೂರು ಬಾರಿ ಫೋನ್‌ನಲ್ಲಿ ಸಿ.ಟಿ ರವಿ ಜೊತೆಗೆ ಮಾತನಾಡಿದ್ದೇನೆ.

ಸುವರ್ಣ ವಿಧಾನ ಸೌಧದಲ್ಲಿ ಎಂಎಲ್ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನ ಪ್ರಕರಣ ಸಂಬಂಧ ಬೆಳಗಾವಿ ತಾಲ್ಲೂಕಿನ ಹಿರೇಬಾಗೇವಾಡಿ ಠಾಣೆಯಲ್ಲಿ 10 ಜನ ಅಪರಿಚಿತರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಸೆಕ್ರೆಟರಿ ಕಚೇರಿಯಿಂದ ಕಮಿಷನರ್ ಕಚೇರಿಗೆ ದೂರಿನ ಪತ್ರ ಸಲ್ಲಿಕೆಯಾಗಿತ್ತು.

> ಸದನವನ್ನು ಅರ್ನಿಷ್ಟಾವಧಿವರೆಗೆ ಮುಂದೂಡಿ ಬಾಗಿಲು ಹಾಕಿದ ಮೇಲೆ ಪೊಲೀಸರು ಮಹಜರು ಮಾಡಲು ಅವಕಾಶ ನೀಡಿಲ್ಲ. ಘಟನೆಗೆ ಸಂಬಂಧಪಟ್ಟಂತೆ ಹೊರಗಿನ ವಿಚಾರಕ್ಕೆ ದೂರು ಕೊಟ್ಟಿದ್ದರೆ ಅದರ ಬಗ್ಗೆ ನಾವು ಹಸ್ತಕ್ಷೇಪ ಮಾಡುವುದಿಲ್ಲ. ಆದರೆ, ಆ ದಿನ ರಾತ್ರಿ 1 ಗಂಟೆ ತನಕವೂ ಸಿ.ಟಿ.ರವಿ ಜೊತೆ ಸಂಪರ್ಕದಲ್ಲೆ. ಪೊಲೀಸ್ ಆಯುಕ್ತರ ಜೊತೆಗೆ ಮಾತನಾಡಿ ಎಚ್ಚರಿಕೆ ಕೊಟ್ಟಿದ್ದೇನೆ ಎಂದರು.
>
> -ಬಸವರಾಜ್ ಹೊರಟ್ಟಿ

ಎಂಎಲ್‌ಸಿ ಡಿ.ಎಸ್.ಅರುಣ್, ಎಸ್.ವಿ ಸಂಕನೂರ, ಕಿಶೋರ್ ಬಿ.ಆರ್. ಬೆಂಗಳೂರಿನ ಕಾರ್ಯದರ್ಶಿ ಕಚೇರಿಗೆ ದೂರು ಸಲ್ಲಿಸಿದ್ದರು. ಅಲ್ಲಿಂದ ಬೆಳಗಾವಿ ನಗರ ಪೊಲೀಸ್ ಆಯುಕ್ತರ ಕಚೇರಿಗೆ ಪತ್ರ ರವಾನೆಯಾಗಿತ್ತು. ಅದರಂತೆ, ಹಿರೇಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಲಾಗಿದೆ.

### ವಿಡಿಯೋ ಚಿತ್ರೀಕರಣ ಆಗಿಲ್ಲ

ನಮಲ್ಲಿ ವೀಡಿಯೋ, ಆಡಿಯೋ ಇದ್ದರೆ ಮಾತ್ರ ಪರಿಗಣನೆ ಮಾಡುತ್ತೇವೆ. ಬೇರೆ ಯಾರಾದ್ರೂ ಕಳಿಸಿದರೆ, ಪರಿಶೀಲನೆಗಾಗಿ ಎಫ್‌ಎಸ್‌ಎಲ್ ಗೆ ಕಳುಹಿಸುತ್ತೇವೆ. ಸದನ ಮುಗಿದ ಮೇಲೆ ಯಾವುದೇ ವಿಡಿಯೋ ಚಿತ್ರೀಕರಣ ಆಗಿಲ್ಲ. ಎಂದು ಪುನರುಚ್ಚರಿಸಿದರು. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು, ರವಿಯನ್ನು ನಕಲಿ ಎನ್‌ಕೌಂಟರ್ ಮಾಡುವ ದುರುದ್ದೇಶದಿಂದ ಇಡೀ ರಾತ್ರಿಸುತ್ತಿಸಿದರು ಎಂಬ ಆರೋಪದ ವಿಚಾರವಾಗಿ ನನಗೆ ಗೊತ್ತಿಲ್ಲ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹7,745/Gram24ct ₹7,100/Gram22ct ಬೆಳ್ಳಿ: ₹91.40/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

# ಗವಿಮಠದ ಭೇಟಿ

ಈದಿನ ಕೊಪ್ಪಳದ ಗವಿಮಠದ ಅಭಿನವ ಗವಿಸಿದ್ಧೇಶ್ವರ ಶ್ರೀಗಳ ಭೇಟಿ ಮಾಡಿದೆವು.ಭಾಗ್ಯನಗರದ ಶಿವಪ್ರಕಾಶಾನಂದ ಶ್ರೀ, ಶಿವರಾಮಕೃಷ್ಣಾನಂದ ಶ್ರೀ, ಆಕಾಶ ಜೊತೆಗಿದ್ದರು. ನಾವು ಸಂಸ್ಕೃತ ವ್ಯಾಕರಣ ಅಧ್ಯಾಪಕರೆಂದು ತಿಳಿದು ಸಂತಸಗೊಂಡರು. ತಮ್ಮ ಗುರುಗಳು ತಮಗೆ ಸ್ನಾನ ಪೂಜೆ ಪ್ರಸಾದ ಮಾಡುವಾಗಲೂ ಹೇಳಿಕೊಡುತ್ತಿದ್ದ ಲಘು ಸಿದ್ಧಾಂತ ಕೌಮುದಿಯ ಪಾಠವನ್ನು ನೆನೆದರು. ಪ್ರಾದೂಹೋಢೋಢ್ಯೇಷೈಷ್ಯೇಷು (= ಪ್ರ + ಊಹ, ಪ್ರ+ ಊಢ, ಪ್ರ+ ಊಢಿ, ಪ್ರ+ ಏಷ, ಪ್ರ+ ಏಷ್ಯ ಇಲ್ಲಿ ವೃದ್ಧಿಸಂಧಿಯಾಗಿ ಪ್ರೌಹ ಪ್ರೌಢ ಪ್ರೌಢಿ ಪ್ರೈಷ ಪ್ರೈಷ್ಯ ಎಂದಾಗುತ್ತದೆ.), ನೃತ್ತಾವಸಾನೇ ನಟರಾಜರಾಜೋ ನನಾದ ಢಕ್ಕಾಂ ನವಪಂಚವಾರಂ. ಉದ್ಧರ್ತುಕಾಮೋ ಸನಕಾದಿಸಿದ್ಧಾನ್ ಏತದ್ವಿಮರ್ಶೇ ಶಿವಸೂತ್ರಜಾಲಮ್( ನಟರಾಜರಾಜ ಶಿವ ಸನಕಾದಿ ಸಿದ್ಧ ಋಷಿಗಳ ಉದ್ಧಾರಕ್ಕಾಗಿ ನೃತ್ಯದ ವೇಳೆ ಡಮರುಗವನ್ನು ಹದಿನಾಲ್ಕು ಬಾರಿ ನುಡಿಸಿದನು. ಇದರಿಂದ ಹೊರಹೊಮ್ಮಿದ ಅಇಉಣ್ ಮುಂತಾದ ಅಕ್ಷರ ಸಮುದಾಯವನ್ನು ಶಿವಸೂತ್ರ ಎನ್ನುವೆನು.) ಮುಂತಾದ್ದನ್ನು ಯಥಾವತ್ತಾಗಿ ಉಲ್ಲೇಖಿಸಿದರು. ಅಂದಿನದು ಇಂದಿಗೂ ಉಳಿದಿದೆಯಲ್ಲ! ಎಂದೆ. ಮಠೀಯ ಜವಾಬ್ದಾರಿಯಲ್ಲಿ ಅಕ್ಷರಕೃಷಿಗೆ ಸಮಯದ ಕೊರತೆಯನ್ನು ಮೆಲುಕಿದರು.

# 2ನೇ ವಿಮಾನ ನಿಲ್ದಾಣ : ಸಚಿವ ವಿ. ಸೋಮಣ್ಣ ಬೇಡಿಕೆ ಏನು?


## ನೆಲಮಂಗಲದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ರೈತರು ವಿರೋಧ ವ್ಯಕ್ತಪಡಿಸಿದ್ದಾರೆ

• ಉದಯವಾಹಿನಿ,ಬೆಂಗಳೂರು

ಬೆಂಗಳೂರಿನ 2ನೇ ವಿಮಾನ ನಿಲ್ದಾಣ ಎಲ್ಲಿ ನಿರ್ಮಾಣವಾಗಲಿದೆ. ಈ ಕುರಿತ ಗುಟ್ಟನ್ನು ಕರ್ನಾಟಕ ಸರ್ಕಾರ ಬಿಟ್ಟುಕೊಟ್ಟಿಲ್ಲ. ಹಲವು ಪ್ರದೇಶಗಳ ಹೆಸರುಗಳು ಕೇಳಿ ಬರುತ್ತಿವೆ. ನೆಲಮಂಗಲದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ರೈತರು ವಿರೋಧ ವ್ಯಕ್ತಪಡಿಸಿದ್ದಾರೆ. ಸರ್ಕಾರದ ಅಧಿಕೃತ ಮಾಹಿತಿಯ ಪ್ರಕಾರ ಯಾವುದೇ ಸ್ಥಳವನ್ನು ಇನ್ನೂ ಸಹ ಅಂತಿಮಗೊಳಿಸಿಲ್ಲ. ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಶೀಘ್ರವೇ ಈ ಕುರಿತು ವರದಿ ಸಲ್ಲಿಕೆಯಾಗಲಿದೆ. ಸೋಮವಾರ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ, ತುಮಕೂರು ಸಂಸದ ವಿ. ಸೋಮಣ್ಣ ಬೆಂಗಳೂರಿನ 2ನೇ ವಿಮಾನ ನಿಲ್ದಾಣದ ಕುರಿತು ಮಾತನಾಡಿದ್ದಾರೆ. ತುಮಕೂರಿನಲ್ಲಿಯೇ ವಿಮಾನ ನಿಲ್ದಾಣ ನಿರ್ಮಾಣವಾಗಬೇಕು ಎಂಬ ಗೃಹ ಸಚಿವ ಡಾ. ಜಿ. ಪರಮೇಶ್ವರ ಕೂಗಿಗೆ ವಿ. ಸೋಮಣ್ಣ ಸಹ ಪರೋಕ್ಷವಾಗಿ ಬೆಂಬಲ ಘೋಷಣೆ ಮಾಡಿದ್ದಾರೆ.

**ವಿ. ಸೋಮಣ್ಣ ಸಹ ಪರೋಕ್ಷವಾಗಿ ಬೆಂಬಲ ಘೋಷಣೆ**

ವಿ. ಸೋಮಣ್ಣ ಹೇಳಿದ್ದೇನು? ತುಮಕೂರಿನಲ್ಲಿ ಮಾತನಾಡಿದ ವಿ. ಸೋಮಣ್ಣ, 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕುರಿತು ಸಂಬಂಧಪಟ್ಟವರೊಂದಿಗೆ ನಾನು ಎರಡು ಬಾರಿ ಮಾತನಾಡಿದ್ದೇನೆ. ಯಾರೊಂದಿಗೆ ಮಾತನಾಡಿದ್ದೇನೆ ಎಂದು ನಾನು ಹೇಳಲು ಬಯಸುವುದಿಲ್ಲ ಎಂದು ಹೇಳಿದರು. ಹೊಸೂರಿನಲ್ಲಿ ವಿಮಾನ ನಿಲ್ದಾಣ ಮಾಡಬೇಕು ಎಂದು ತಮಿಳುನಾಡು ಸರ್ಕಾರ ಹೇಳಿದೆ. ವಿಮಾನ ನಿಲ್ದಾಣದ ವಿಚಾರದಲ್ಲಿ ನನ್ನ ಮೊದಲ ಆದ್ಯತೆ ತುಮಕೂರು-ಬೆಂಗಳೂರು ನಡುವೆ ಎಲ್ಲಿಯಾದರೂ ಮಾಡಿ. ಇಲ್ಲವಾದಲ್ಲಿ ಹೆಚ್ಎಎಲ್‌ನಲ್ಲಿ ಈಗಿರುವ ನಿಲ್ದಾಣವನ್ನು ಪೂರ್ತಿಯಾಗಿ ಪುನರ್ ಅಭಿವೃದ್ಧಿಗೊಳಿಸಬಹುದು, ಖರ್ಚು ಸಹ ಕಡಿಮೆಯಾಗಲಿದೆ ಎಂದರು. ತಾಂತ್ರಿಕವಾಗಿಯೂ ತುಮಕೂರಿನಲ್ಲಿ ವಿಮಾನ ನಿಲ್ದಾಣ ಮಾಡಲು ಅನುಕೂಲವಾಗಲಿದೆ. ಹತ್ತಾರಯ ಬೈಪಾಸ್‌ಗಳು ಇಲ್ಲಿ ಬರುತ್ತವೆ. ಬೆಂಗಳೂರು ಹೊರತುಪಡಿಸಿದರೆ ನಾಗಾಲೋಟದಲ್ಲಿ ತುಮಕೂರು ಬೆಳೆಯುತ್ತಿದೆ. ತುಮಕೂರಿಗೆ ಹೊಂದಿಕೊಂಡಿರುವ ದಾಬಸ್ ಪೇಟೆ, ನೆಲಮಂಗಲದಲ್ಲಿಯೂ ಮಾಡಲು ನಮ್ಮ ತರಕಾರಿಲ್ಲ ಎಂದು ವಿ. ಸೋಮಣ್ಣ ತಿಳಿಸಿದರು. ತಮಿಳುನಾಡು ಸರ್ಕಾರದ ಹೊಸೂರು ವಿಮಾನ ನಿಲ್ದಾಣ ಘೋಷಣೆ ಬಳಿಕ ಕರ್ನಾಟಕ ಸರ್ಕಾರ ಬೆಂಗಳೂರು ಸಮೀಪ ಮತ್ತೊಂದು ವಿಮಾನ ನಿಲ್ದಾಣ ಯೋಜನೆ ಘೋಷಣೆ ಮಾಡಿತು. ಆದರೆ 2ನೇ ವಿಮಾನ ನಿಲ್ದಾಣ ಎಲ್ಲಿ ನಿರ್ಮಾಣವಾಗಲಿದೆ ಎಂಬುದು ಇನ್ನೂ ಸಹ ಅಂತಿಮಗೊಂಡಿಲ್ಲ. ಡಾ. ಜಿ. ಪರಮೇಶ್ವರ ತುಮಕೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಬೇಕು ಎಂದು ಒತ್ತಾಯಿಸುತ್ತಿದ್ದಾರೆ. ನೆಲಮಂಗಲದಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾಗಲಿದೆ ಎಂಬ ಸುದ್ದಿಗಳು ಹಬ್ಬಿವೆ. ಆದರೆ ಇನ್ನೂ ಸಹ ಖಚಿತವಾಗಿಲ್ಲ. ಈ ಕುರಿತು ಡಿ. ಕೆ. ಶಿವಕುಮಾರ್ ಮಾತನಾಡಿದ್ದು, ಈಗ ಇರುವ ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಇರುವುದು ಎರಡು ರನ್‌ವೇ, ಮುಂದಕ್ಕೆ ಎರಡು ರನ್ ವೇ ಸಾಲದು. ಅದಕ್ಕೆ ಮುಂಜಾಗ್ರತೆಯಾಗಿ ಎರಡನೇ ಏರ್ ಪೋರ್ಟ್ ಮಾಡಬೇಕು ಎಂದು ಹತ್ತಾರು ಸಭೆಗಳು ಆಗಿವೆ. ಈಗಲೇ ಇದರ ಬಗ್ಗೆ ತಯಾರಿ ಮಾಡಿಕೊಳ್ಳಬೇಕು. ಅದಕ್ಕಾಗಿ ಏಳೆಂಟು ಜಾಗ ಗುರುತಿಸಲಾಗುತ್ತಿದೆ. ನೀರು, ರಸ್ತೆ ಸೇರಿ ಹಲವು ಸೌಕರ್ಯ ನೋಡಿಕೊಂಡು ಏರ್‌ಪೋರ್ಟ್ ನಿರ್ಮಾಣ ಮಾಡಬೇಕು ಎಂದು ಹೇಳಿದ್ದಾರೆ. ಭೂಮಿ, ಗುಡ್ಡ ಗಾಡು ನೋಡಿಕೊಂಡು ಆಯ್ಕೆ ಮಾಡುತ್ತಾರೆ. ನಾವು ಜಾಗ ಅಂತಿಮಗೊಳಿಸಿ ದೆಹಲಿಗೆ ವರದಿ ಕಳಿಸಬೇಕಾಗುತ್ತದೆ. ಅವರು ಬಂದು ಎಲ್ಲಾ ವರದಿ ನೋಡಿ ಯಾವ ಸ್ಥಳದಲ್ಲಿ ಏರ್‌ಪೋರ್ಟ್ ಮಾಡಲಿದ್ದಾರೆ? ಯಾವಾಗ ಅನುಮತಿ ನೀಡುತ್ತಾರೆಯೋ ಅಂದಿನಿಂದ ಕೆಲಸ ಆಗಬೇಕು. 2034ರೊಳಗೆ ಹೊಸ ಏರ್‌ಪೋರ್ರ್ಟ್ ಕೆಲಸ ನಡೆಯಬೇಕು. ಇದಕ್ಕೆ ಸುಮಾರು ನಾಲ್ಕು ಸಾವಿರ ಎಕರೆ ಜಾಗ ಬೇಕಾಗುತ್ತದೆ' ಎಂದು ತಿಳಿಸಿದರು.



**ದೆಹಲಿ, ಮುಂಬೈ ಬಿಟ್ಟರೆ ಮೂರನೆಯದ್ದೇ ಬೆಂಗಳೂರು ಏರ್‌ಪೋರ್ಟ್. 150 ಕಿಲೋ ಮೀಟರ್ ನಡುವೆ ನಿಲ್ದಾಣ ಮಾಡುವಂತಿಲ್ಲ. ಈಗ 2 ರನ್ ವೇಗಳಿವೆ. ಇಲ್ಲಿರುವ ಗೋಥ್‌ಗೆ ಈ 2 ರನ್ ವೇ ಸಾಕಾಗಲ್ಲ. ಒಪ್ಪಂದ ಮುಗಿಯುವುದೊರಳಗೆ ಮತ್ತೊಂದು ಮಾಡಬೇಕು. ಆ ಒಪ್ಪಂದ 2034ಕ್ಕೆ ಕ್ಲೋಸ್ ಆಗಲಿದೆ ಎಂದು ಹೇಳಿದ್ದಾರೆ.**

**ನಾನು ವಿಮಾನ ನಿಲ್ದಾಣದ ವಿಚಾರದಲ್ಲಿ ಕೇಂದ್ರ ಸರ್ಕಾರಕ್ಕೆ ಯಾವುದೇ ಮನವಿ ಮಾಡಿಲ್ಲ.ಇದು ಕೇಂದ್ರದ ಯೋಜನೆಯಲ್ಲ. ರಾಜ್ಯದ ಯೋಜನೆಯಾಗಿದೆ. ಆದ್ದರಿಂದ ಇವತ್ತು ಅಥವ ನಾಳೆ ನಾನು ರಾಜ್ಯಕ್ಕೆ ಪತ್ರವೊಂದನ್ನು ಈ ವಿಚಾರದಲ್ಲಿ ಬರೆಯಲಿದ್ದೇನೆ ಎಂದರು.**

# ವಿವಿಯ ನಿವೃತ್ತ ರಿಜಿಸ್ಟರ್ ಜೊತೆ ಪತ್ನಿಯ ಅಕ್ರಮ ಸಂಬಂಧ : ಪತ್ನಿ ಆತ್ಮಹತ್ಯೆ

• ಉದಯವಾಹಿನಿ,ಬೆಂಗಳೂರು

ಬೆಂಗಳೂರಿನಲ್ಲಿ ವಿಶ್ವವಿದ್ಯಾಲಯದ ನಿವೃತ್ತ ರಿಜಿಸ್ಟರ್ ಒಬ್ಬರ ಜೊತೆಗೆ ತನ್ನ ಪತ್ನಿ ಅಕ್ರಮ ಸಂಬಂಧ ಹೊಂದಿದ್ದಾಳೆ ಎಂದು ಮನನೊಂದು, ಲಾರಿ ಮಾಲೀಕನೊಬ್ಬ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ನಲ್ಲಿ ನಡೆದಿದೆ.ಹೌದು ಪತ್ನಿಯ ಅನೈತಿಕ ಸಂಬಂಧಕ್ಕೆ ಬೇಸತ್ತು ಪತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಮಹಾಲಕ್ಷ್ಮೀ ಲೇಔಟ್ ಠಾಣಾ ವ್ಯಾಪ್ತಿಯಲ್ಲಿ ಈ ಒಂದು ಘಟನೆ ನಡೆದಿದೆ ತಡರಾತ್ರಿ 11 ಗಂಟೆಯ ಸುಮಾರಿಗೆ ಲಾರಿ ಮಾಲಿಕ ಸ್ವಾಮಿ (45) ಎನ್ನುವರು ಆತ್ಮಹತ್ಯೆಗೆ ಶರಣಾಗಿದ್ದಾರೆ.ಸ್ಥಳಕ್ಕೆ ಮಹಾಲಕ್ಷ್ಮಿ ಲೇಔಟ್ ಠಾಣೆ ಪೊಲಿಸರು ಭೇಟಿ ನೀಡಿ ಇದೀಗ ಪರಿಶೀಲನೆ ನಡೆಸುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಮೃತ ಸ್ವಾಮಿ ಪತ್ನಿಯು ಬೆಂಗಳೂರಿನ ವಿವಿಯ ನಿವೃತ್ತ ರಿಜಿಸ್ಟರ್ ಜೊತೆಗೆ ಅಕ್ರಮ ಸಂಬಂಧ ಆರೋಪ ಕೇಳಿಬರುತ್ತಿದೆ. ಬೆಂಗಳೂರಿನ ವಿಶ್ವವಿದ್ಯಾಲಯ ನಿವೃತ್ತ ರೆಜಿಸ್ಟರ್ ವಿರುದ್ಧ ಈ ಒಂದು ಆರೋಪ ಕೇಳಿ ಬಂದಿದೆ. ಅಕ್ರಮ ಸಂಪರ್ಕದ ಬಳಿಕ ಸಂಸಾರ ಹಾಳಾಗಿದೆ. ನಿವೃತ್ತ ರಿಜಿಸ್ಟರ್ ಪತ್ನಿಗೂ ಕೂಡ ಈ ವಿಷಯ ಗೊತ್ತಾಗಿ ಬುದ್ದಿ ಹೇಳಿದರು. ಆದರೂ ಕೂಡ ಸ್ವಾಮಿ ಪತ್ನಿ ತನ್ನ ಕೆಲಸ ಬಿಟ್ಟಿರಲಿಲ್ಲ ಎಂದು ಗಂಭೀರವಾದ ಆರೋಪ ಕೇಳಿ ಬಂದಿದೆ. ಮೃತ ಸ್ವಾಮಿಯ ಸಂಬಂಧಿ ನಾಗರಾಜ್ ಸ್ವಾಮಿ ಪತ್ನಿಯ ವಿರುದ್ಧ ಗಂಭೀರವಾದ ಆರೋಪ ಮಾಡಿದ್ದಾರೆ.

# ಅಹಿತಕರ ಘಟನೆ ನಡೆದರೆ ಡಿಸಿಪಿಗಳೇ ಹೊಣೆ

• ಉದಯವಾಹಿನಿ,ಬೆಂಗಳೂರು



ಇನ್ನೇನು ಕೇವಲ ಒಂದು ವಾರದಲ್ಲಿ ಹೊಸ ವರ್ಷಾಚರಣೆ ಸಮೀಪಿಸಿದ್ದು, 2024ಕ್ಕೆ ವಿದಾಯ ಹೇಳಿ 2025ನೇ ವರ್ಷವನ್ನು ಸ್ವಾಗತಿಸುವ ಮೂಲಕ ಎಲ್ಲೆಡೆ ಹೊಸ ವರ್ಷಾಚರಣೆಯನ್ನು ಅತ್ಯಂತ ಸಡಗರ ಸಂಭ್ರಮದ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಈಗಾಗಲೇ ಕಠಿಣ ಕ್ರಮ ಕೈಗೊಳ್ಳುವಂತೆ ಸಭೆ ನಡೆಸಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ತಿಳಿಸಿದರು.

ಈ ಕುರಿತು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹೊಸ ವರ್ಷಾಚರಣೆಯ ದಿನ ಯಾವುದೇ ಅಹಿತಕರ ಘಟನೆ ಆಗಬಾರದು. ಪ್ರತಿ ವರ್ಷದಂತೆ ಈ ವರ್ಷವೂ ಎಲ್ಲಾ ರೀತಿಯ ಭದ್ರತೆಗೆ ಕ್ರಮ ಕೈಗೊಳ್ಳಲಾಗಿದೆ. ಬಂದೋಬಸ್ತ್ ಕ್ರಮಗಳನ್ನು ಕೈಗೊಳ್ಳುವಂತೆ ಈಗಾಗಲೇ ಸಭೆ ನಡೆಸಲಾಗಿದೆ. ಮಹಿಳಾ ಸುರಕ್ಷತೆಗೆ ಹೆಚ್ಚು ಒತ್ತು ನೀಡಲಾಗಿದೆ. ಈ ಕುರಿತು ಈಗಾಗಲೇ ಸಭೆ ನಡೆಸಿದ್ದು, ಸಭೆಯಲ್ಲಿ ಬೆಂಗಳೂರು ನಗರದ ಪೊಲೀಸ್ ಆಯುಕ್ತರು ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಕೂಡ ಭಾಗಿಯಾಗಿದ್ದರು.

ನಗರದಲ್ಲಿ 7 ಲಕ್ಷ ಜನ ಮಿಡ್ ನೈಟ್ ಸೆಲೆಬ್ರೇಶನ್ನಲ್ಲಿ ಭಾಗಿಯಾಗುತ್ತಾರೆ ಏನೇ ಅಹಿತಕರ ಘಟನೆ ನಡೆದರೂ ಆ ಏರಿಯಾ ಡಿಸಿಪಿ ಹೊಣೆಯಾಗಲಿದ್ದಾರೆ. ಟ್ರಾಫಿಕ್ ನಿರ್ವಹಣೆಯ ಸಮಸ್ಯೆ ಆಗದಂತೆ ಮೆಟ್ರೋ, ಆಟೋಗಳು ಮತ್ತು ಬಸ್ಸುಗಳ ಓಡಾಟ ಸೇರಿದಂತೆ ಹಲವು ಅಗತ್ಯ ಕ್ರಮ ಕೈಗೊಳ್ಳುತ್ತೇವೆ.

ಅಲ್ಲದೇ ಎಂಜಿ ರಸ್ತೆ, ಬ್ರಿಗೇಡ್ ರಸ್ತೆಯಲ್ಲಿ ಸಂಭ್ರಮಾಚರಣೆಗೆ ನಿರ್ಬಂಧ ಇಲ್ಲ ಎಂದು ಬೆಂಗಳೂರಿನಲ್ಲಿ ಗೃಹ ಸಚಿವ ಜಿ ಪರಮೇಶ್ವರ್ ತಿಳಿಸಿದರು. ಎಂಜಿ ರೋಡ್, ಕೋರಮಂಗಲ ಸೇರಿದಂತೆ ಎಲ್ಲೆಲ್ಲಿ ಜನದಟ್ಟಣೆ ಇರುತ್ತದೊ ಅಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ. ಹೊಸ ವರ್ಷಾಚರಣೆಗೆ ಅವರ ಸಂತೋಷಕ್ಕೆ ಅಡ್ಡಿಯಾಗಬಾರದು ಎಂದು ಈಗಾಗಲೇ ಈ ಕುರಿತು ಕ್ರಮ ಕೈಗೊಳ್ಳಲು ಸಭೆ ನಡೆಸಲಾಗಿದೆ. ವಿಶೇಷವಾಗಿ ಮಹಿಳೆಯರ ಸುರಕ್ಷತೆಗಾಗಿ ಹೆಚ್ಚು ಗಮನ ಹರಿಸಲಾಗುತ್ತಿದೆ. ಬಾರ್ ಅಂಡ್ ರೆಸ್ಟೋರೆಂಟ್ ಸೇರಿದಂತೆ ಅದರಲ್ಲೂ ಪ್ರಮುಖವಾಗಿ ಡ್ರಗ್ಸ್ ಕುರಿತಂತೆ ಎಚ್ಚರಿಕೆ ವಹಿಸಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ತಿಳಿಸಿದರು.

# ಬೆಂಗಳೂರಿನ ವಾಹನ ದಟ್ಟಣೆ ನಿವಾರಣೆಗೆ ರೆಡಿಯಾಯ್ತು ಹೊಸ ಪ್ಲಾನ್?

• ಉದಯವಾಹಿನಿ,ಬೆಂಗಳೂರು

ಸಿಲಿಕಾನ್ ಸಿಟಿ ಟ್ರಾಫಿಕ್ ಕಂಟ್ರೋಲ್‌ಗೆ ಹೊಸ ಯೋಜನೆ ಜಾರಿಗೊಳಿಸಲು ತೀರ್ಮಾನಿಸಲಾಗಿದೆ. ನಗರದ ಟ್ರಾಫಿಕ್ ಸಮಸ್ಯೆ ನಿವಾರಣೆ ಕುರಿತಂತೆ ದೆಹಲಿಯ ಖಾಸಗಿ ಸಂಸ್ಥೆ ನಡೆಸಿರುವ ಅಧ್ಯಯನದ ವರದಿ ಆಧರಿಸಿ ಹೊಸ ಯೋಜನೆ ಜಾರಿಗೊಳಿಸಲು ಬಿಬಿಎಂಪಿ ಸಜ್ಜಾಗಿದೆ. ನಗರದ ವಾಹನ ದಟ್ಟಣೆ ನಿವಾರಿಸಲು 54 ಸಾವಿರ ಕೋಟಿ ರೂ.ಗಳ ಯೋಜನೆಯ ಡಿಪಿಆರ್ ಸಿದ್ಧವಾಗಿದ್ದು ಅವುಗಳನ್ನು ಹಂತ ಹಂತವಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಅದರಲ್ಲೂ ಮುಖ್ಯವಾಗಿ ಕಳೆದ ರಾಜ್ಯ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದ್ದ ಮೂವರು ಮಹತ್ವದ ಯೋಜನೆಗಳನ್ನು ಜಾರಿಗೊಳಿಸಲು ರೂಪುರೇಷೆ ಸಿದ್ಧಪಡಿಸಲಾಗಿದೆ. ಇದರ ಜೊತೆಗೆ ಪಾಲಿಕೆಯಿಂದ ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿರೋ ಯೋಜನೆಗಳನ್ನು ಕ್ರೋಢಿಕರಿಸಿ ಯೋಜನೆಗಳ ವೆಚ್ಚ, ಅನುಷ್ಠಾನದ ಮಾರ್ಗ ಹಾಗೂ ಪರಿಸರದ ಮೇಲಿನ ಪರಿಣಾಮಗಳನ್ನು ಒಳಗೊಂಡ ವರದಿ ಸಿದ್ಧಪಡಿಸಲಾಗಿದೆ. ಹೊಸ ಯೋಜನೆಯಲ್ಲಿ ಹಾಲಿ ಇರುವ ರಸ್ತೆ, ಜಂಕ್ಷನ್, ಇಂಟರ್ ಜಂಕ್ಷನ್ ಸಂಚಾರಕ್ಕೆ ಹಲವು ಸಲಹೆಗಳನ್ನು ನೀಡಲಾಗಿದೆ. ಮೈಸೂರು ರಸ್ತೆ, ತುಮಕೂರು ರಸ್ತೆ, ಹಳೆ ಮದ್ರಾಸ್ ರಸ್ತೆ ಸೇರಿದಂತೆ ಪ್ರಮುಖ ಐದು ರಸ್ತೆಗಳನ್ನು ಮರು ವಿನ್ಯಾಸಗೊಳಿಸಲು ಸೂಚನೆ ನೀಡಲಾಗಿದೆ. ಅಂಡರ್ ಪಾಸ್, ಮೇಲೆತ್ತುವೆ, ಸಂಪರ್ಕ ರಸ್ತೆಗಳನ್ನು ಮಾಡುವುದಕ್ಕೆ ಹೆಚ್ಚು ಒತ್ತು ನೀಡುವಂತೆಯೂ ವರದಿಯಲ್ಲಿ ಸಲಹೆ ನೀಡಲಾಗಿದೆ.


ಉದಯವಾಹಿನಿ ಚಿತ್ರ

**ಜತೆಗೆ 12 ಎಲಿವೇಟೆಡ್ ಕಾರಿಡಾರ್, ಎರಡು ಕಿರು ಫ್ಲೈ ಓವರ್, ಎರಡು ಡಬಲ್ ಡೆಕ್ಕರ್ ಕಾರಿಡಾರ್ ಮತ್ತು ಎರಡು ಹೊಸ ಸುರಂಗ ರಸ್ತೆ ನಿರ್ಮಾಣ ಮಾಡುವುದು ಹೊಸ ಯೋಜನೆಯಲ್ಲಿ ಸೇರಿವೆ. ಸಾರ್ವಜನಿಕರಿಗೆ ಅನುಕೂಲ ವಾಗುವಂತೆ ಮೆಟ್ರೋ ರೈಲು ಯೋಜನೆ ಗಳನ್ನು ಜಾರಿಗೆ ತರಬೇಕು ಎನ್ನುವುದು ಸೇರಿದಂತೆ ಹತ್ತು ಹಲವು ಯೋಜನೆಗಳ ಅನುಷ್ಠಾನದ ವರದಿ ಸಿದ್ದ ಪಡಿಸಲಾಗಿದೆ ಎಂದು ಬಿಬಿಎಂಪಿ ಮೂಲಗಳು ಈ ಸಂಜೆಗೆ ತಿಳಿಸಿವೆ.**

# ವೈದ್ಯರ ನಿರ್ಲಕ್ಷ್ಯ ಆರೋಪ

• ಉದಯವಾಹಿನಿ,ಬೆಂಗಳೂರು

ಸಾಲು, ಸಾಲು ದುರಂತ ಕಣ್ಣ ಮುಂದೆ ಇರುವಾಗಲೇ ಬೆಂಗಳೂರಲ್ಲಿ ಬಾಣಂತಿಯೊಬ್ಬರ ಸಾವಾಗಿದೆ. ಒಂದು ತಿಂಗಳಿನಿಂದ ಖಾಸಗಿ ಆಸ್ಪತ್ರೆಯಲ್ಲಿದ್ದ ಮಹಿಳೆ ಕೊನೆಗೂ ಜೀವ ಬಿಟ್ಟಿದ್ದಾರೆ.ಬಳ್ಳಾರಿ, ರಾಯಚೂರು, ಬೆಳಗಾವಿಯ ಬಳಿಕ ಇದೀಗ ಬೆಂಗಳೂರಿನಲ್ಲಿಯೂ ಬೆಂಗಳೂರಿನ ನಾಗರಬಾವಿಯ ಖಾಸಗಿ ಆಸ್ಪತ್ರೆಯಲ್ಲಿ ಬಾಣಂತಿ ಅನುಷಾ ಮೃತಪಟ್ಟಿದ್ದಾರೆ. ಒಂದು ತಿಂಗಳ ಹಿಂದೆ ಗಂಡು ಮಗುವಿಗೆ ಜನ್ಮ ನೀಡಿದ್ದ ಅನುಷಾ, ಅನಾರೋಗ್ಯದಿಂದಾಗಿ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾರೆ. ವೈದ್ಯರ ನಿರ್ಲಕ್ಷ್ಯದಿಂದ ಸಾವಾಗಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.ಬಾಣಂತಿಯೊಬ್ಬರ ಸಾವಾಗಿದೆ.ಖಾಸಗಿ ಆಸ್ಪತ್ರೆಗೆ ದಾಖಲಾದ ಮಹಿಳೆಗೆ ಸಿಟಿ ಸ್ಕ್ಯಾನಿಂಗ್, ಎಂಆರ್‌ಐ ಸ್ಕ್ಯಾನಿಂಗ್ ಮಾಡಿಸಿದ್ದಾರೆ. ಗುರುವಾರ ಲಿವರ್ ಪ್ರಾಬ್ಲಂ ಎಂದ ವೈದ್ಯರು ಶುಕ್ರವಾರ ಅನುಷಾಗೆ ಆಪರೇಷನ್ ಮಾಡಿದ್ದಾರೆ. ಆಪರೇಷನ್ ಆದ ಮೇಲೆ ಅನುಷಾ ಯಾರ ಜೊತೆನೂ ಮಾತನಾಡಿಲ್ಲ. ಇದಾದ ಮೇಲೆ ವೈದ್ಯರು ಹಾರ್ಟ್ ಪ್ರಾಬ್ಲಂ ಆಗಿದೆ ಎಂದಿದ್ದಾರೆ. ಕೊನೆಗೆ ಇಂದು ಬೆಳಗಿನ ಜಾವ 4 ಗಂಟೆಗೆ ಅನುಷಾ ಮೃತಪಟ್ಟಿದ್ದಾರೆ. ನಾಲ್ಕು ದಿನಗಳಿಂದ ನಾಲ್ಕುವರೆ ಲಕ್ಷ ಬಿಲ್ ಮಾಡಿರೋ ಆಸ್ಪತ್ರೆ ಸಿಬ್ಬಂದಿ, ನಾಲ್ಕು ಲಕ್ಷ ಹಣ ಕೊಟ್ರೆ ಮೃತದೇಹ ಕೊಡ್ತೀವಿ ಎಂದು ಹೇಳಿದ್ದಾರೆ ಎಂದು ಕುಟುಂಬಸ್ಥರು ಆರೋಪ ಮಾಡುತ್ತಿದ್ದಾರೆ.

# ಬೆಂಗಳೂರು ರೈಲು ನಿಲ್ದಾಣದಲ್ಲಿ ಥರ್ಮಲ್ ಪ್ರಿಂಟರ್ ಬಳಕೆ ಆರಂಭ..!

• ಉದಯವಾಹಿನಿ,ಬೆಂಗಳೂರು

ಕಾಯ್ದಿರಿಸದ ರೈಲ್ವೆ ಟಿಕೆಟ್ ವಂಚನೆ ತಪ್ಪಿಸುವ ಸಲುವಾಗಿ ಬೆಂಗಳೂರು ರೈಲ್ವೆ ವಿಭಾಗವು ಥರ್ಮಲ್ ಪ್ರಿಂಟರ್‌ಗಳ ಬಳಕೆಯನ್ನು ಆರಂಭ ಮಾಡಿದೆ. ಕೆಎಸ್‌ಆರ್ ಬೆಂಗಳೂರು ರೈಲ್ವೇ ನಿಲ್ದಾಣದ ಮುಖ್ಯ ದ್ವಾರದಲ್ಲಿರುವ ಎರಡು ಕೌಂಟರ್‌ಗಳಲ್ಲಿ 2 ಥರ್ಮಲ್ ಪ್ರಿಂಟರ್‌ಗಳ ಬಳಕೆಯನ್ನು ಭಾನುವಾರದಿಂದ ಆರಂಭಿಸಲಾಗಿದ್ದು, ಕೆಆರ್ ಪುರಂ, ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಮತ್ತು ಯಶವಂತಪುರದ ರೈಲು ನಿಲ್ದಾಣಗಳಲ್ಲೂ ಇಂದಿನಿಂದ ಆರಂಭವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂ ರೈಲ್ವೆ ವಿಭಾಗದ ವಾಣಿಜ್ಯ ವ್ಯವಸ್ಥಾಪಕ ಎವಿ ಕೃಷ್ಣ ಚೈತನ್ಯ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪ್ರಿಂಟಿಂಗ್ ಯಂತ್ರಗಳನ್ನು ಬಳಸಿಕೊಂಡು ಕಾಯ್ದಿರಿಸದ ಟಿಕೆಟ್‌ಗಳನ್ನು ನಕಲು ಮಾಡುವ ಬೆಳವಣಿಗೆಗಳು ಹೆಚ್ಚಾಗಿವೆ. ಉತ್ತರ ಭಾರತದಲ್ಲಿ ಹೆಚ್ಚು ಪ್ರಕರಣಗಳು ವರದಿಯಾಗಿವೆ. ಇದಕ್ಕೆ ಕಡಿವಾಣ ಹಾಕುವಂತೆ ರೈಲ್ವೇ ಇಲಾಖೆ ದೇಶದ ಎಲ್ಲಾ ವಲಯಗಳಿಗೆ ನಿರ್ದೇಶನ ನೀಡಿತ್ತು. ಆದ್ದರಿಂದ, ಥರ್ಮಲ್ ಪ್ರಿಂಟರ್‌ಗಳ ಬಳಕೆ ಮಾಡಲು ನಿರ್ಧರಿಸಿದ್ದೇವೆ. ಥರ್ಮಲ್ ಪ್ರಿಂಟರ್ ಗಳಿಂದ ಟಿಕೆಟ್‌ಗಳನ್ನು ನಕಲು ಮಾಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಥರ್ಮಲ್ ಪ್ರಿಂಟರ್‌ಗಳಲ್ಲಿ ಶಾಖ ಸಂವೇದಕಗಳನ್ನು ಬಳಸಿ ಟಿಕೆಟ್‌ಗಳನ್ನು ನೀಡಲಾಗುತ್ತದೆ. ಪ್ರತಿ ಟಿಕೆಟ್‌ಗೆ ವಿಶಿಷ್ಟವಾದ ಕಿಖ ಕೋಡ್ ಅನ್ನು ರಚಿಸಲಾಗುತ್ತದೆ, ಖಿಖಇ ಗಳು ಯಾವುದೇ ಟಿಕೆಟ್ ಅನ್ನು ಯಾದೃಚ್ಛಿಕವಾಗಿ ಪರಿಶೀಲಿಸಲು, ಅಪ್ಲಿಕೇಶನ್ ಅನ್ನು ಬಳಸಿಕೊಂಡು ಪರಿಶೀಲನೆ ಮಾಡಬಹುದು. ಪ್ರಸ್ತುತ ಬಳಕೆಯಲ್ಲಿರುವ ಡಾಟ್ ಮ್ಯಾಟ್ರಿಕ್ಸ್ ಪ್ರಿಂಟರ್ ಗಳು ಟಿಕೆಟ್ ನೀಡಲು 20 ಸೆಕೆಂಡುಗಳನ್ನು ತೆಗೆದುಕೊಳ್ಳುತ್ತದೆ. ಆದರೆ, ಥರ್ಮಲ್ ಪ್ರಿಂಟರ್‌ಗಳು ಕೇವಲ 3 ಸೆಕೆಂಡುಗಳಲ್ಲಿ ಟಿಕೆಟ್ ನೀಡಲಿವೆ. ಪ್ರಕ್ರಿಯೆಯು ಹೆಚ್ಚು ವೇಗವಾಗಿರುತ್ತದೆ, ಇದರಿಂದ ಸಾರ್ವಜನಿಕರಿಗೂ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ. ಸಾಂಪ್ರದಾಯಿಕ ಮುದ್ರಕಗಳ ವಿಷಯಕ್ಕೆ ಬಂದರೆ, ಇವುಗಳು 1,000 ಟಿಕೆಟ್‌ಗಳನ್ನು ಮುದ್ರಿಸಿದ ನಂತರ ರಿಬ್ಬನ್ ಕಾರ್ಟ್ರಿಡ್ಜ್ ಅನ್ನು ಬದಲಾಯಿಸಬೇಕು. ಥರ್ಮಲ್ ಪ್ರಿಂಟರ್‌ಗಳ ವಿಷಯದಲ್ಲಿ ಹಾಗಿಲ್ಲ ಪ್ರತಿ ಕೌಂಟರ್ ಪ್ರತಿದಿನ 52 ರೂಪಾಯಿಗಳನ್ನು ಉಳಿಸುತ್ತದೆ, ಇದು ಸ್ವಲ್ಪ ಮಿತವ್ಯಯಕಾರಿಯಾಗಿದೆ ಎಂದು ವಿವರಿಸಿದ್ದಾರೆ.


ಉದಯವಾಹಿನಿ ಚಿತ್ರ

**ಈ ಪ್ರಿಂಟರ್ ಗಳನ್ನು ಭಾನುವಾರದಿಂದ ಬಳಕೆ ಮಾಡಲಾಗುತ್ತಿದ್ದು. ಎರಡೂ ಪ್ರಿಂಟರ್ ಗಳು ತಲಾ 100 ಟಿಕೆಟ್‌ಗಳನ್ನು ನೀಡಿವೆ. ಆರಂಭಿಕ ದಿನವಾಗಿದ್ದರಿಂದ ಸೀಮಿತ ಸಂಖ್ಯೆಯಲ್ಲಿ ಮಾತ್ರ ಟಿಕೆಟ್ ನೀಡಲಾಗಿದೆ. ಸೋಮವಾರದಿಂದ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಲಾಗುತ್ತದೆ. ಅಕ್ಟೋಬರ್ 2025ರ ವೇಳೆಗೆ ಎಲ್ಲಾ ವಿಭಾಗಗಳಲ್ಲೂ ಥರ್ಮಲ್ ಪ್ರಿಂಟರ್‌ಗಳ ಬಳಕೆ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.**

# ರೂ.21 ಸಾವಿರ ಕೋಟಿ ರಕ್ಷಣಾ ಸಾಮಗ್ರಿ ರಫ್ತು: ಸಲಹೆಗಾರ ಸತೀಶ್ ರೆಡ್ಡಿ

• ಉದಯವಾಹಿನಿ,ಆನೇಕಲ್

ಶಸ್ತ್ರಾಸ್ತ್ರ ತಯಾರಿಕೆಯಲ್ಲಿ ಭಾರತ ಸ್ವಾವಲಂಬಿಯಾಗುತ್ತಿದೆ. 2023ನೇ ಸಾಲಿನಲ್ಲಿ ?21 ಸಾವಿರ ಕೋಟಿ ರಕ್ಷಣಾ ಉಪಕರಣಗಳನ್ನು ರಫ್ತು ಮಾಡಲಾಗಿದೆ. ಮುಂದಿನ ದಿನಗಳಲ್ಲಿ ?50 ಸಾವಿರ ಕೋಟಿ ಗುರಿ ಹೊಂದಲಾಗಿದೆ. ರಕ್ಷಣಾ ಕ್ಷೇತ್ರದಲ್ಲಿ ಭಾರತ ನಾಯಕನಾಗಬೇಕು ಎಂಬುದು ಗುರಿಯಾಗಿದೆ ಎಂದು ರಕ್ಷಣಾ ಸಚಿವಾಲಯದ ಸಲಹೆಗಾರ, ಡಿಆರ್‌ಡಿಓ ಆಡಳಿತ ಮಂಡಳಿ ಅಧ್ಯಕ್ಷ ಡಾ.ಜಿ.ಸತೀಶ್ ರೆಡ್ಡಿ ಹೇಳಿದರು. ಅಲಯನ್ಸ್ ವಿಶ್ವವಿದ್ಯಾಲಯದ 13ನೇ ಘಟಿಕೋತ್ಸವದಲ್ಲಿ ಮಾತನಾಡಿ, ಸ್ಟಾರ್ಟ್ ಅಪ್‌ಗೆ ಇತ್ತೀದಿನ ದಿನಗಳಲ್ಲಿ ಭಾರಿ ಬೆಂಬಲ ವ್ಯಕ್ತವಾಗುತ್ತಿದೆ. ಹೊಸ ಹೊಸ ಸಂಶೋಧನೆಗಳು, ನವೀನ ಮಾರುಕಟ್ಟೆ ಗ್ರಾಹಕರನ್ನು ಸೆಳೆಯುತ್ತಿದೆ ಎಂದರು. ದೇಶದಲ್ಲಿ ?4.38 ಕೋಟಿ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯುತ್ತಿದ್ದಾರೆ. 14 ಲಕ್ಷ ಮಂದಿ ವಿದ್ಯಾರ್ಥಿಗಳು ಎಂಜಿನಿಯರಿಂಗ್ ಪದವಿ ಪಡೆಯುತ್ತಿದ್ದಾರೆ. ಪಿಎಚ್‌ಡಿಗಳ ಸಂಖ್ಯೆಯಲ್ಲಿ ಭಾರತ ಜಾಗತಿಕವಾಗಿ 3ನೇ ಸ್ಥಾನದಲ್ಲಿದೆ. ಐಐಟಿಗಳಲ್ಲಿ ಅಧ್ಯಯನ ನಡೆಸುವ ಶೇ.75ರಷ್ಟು ಮಂದಿ ವಿದೇಶಗಳಿಗೆ ತೆರಳುತ್ತಾರೆ. ವಿದೇಶಗಳಿಗೆ ತೆರಳುವ ಬದಲಿಗೆ ಭಾರತದ ಅಭಿವೃದ್ಧಿಗೆ ನಿಮ್ಮ ಶಕ್ತಿಯನ್ನು ಮೀಸಲಿಡುವ ಅವಶ್ಯಕತೆಯಿದೆ ಎಂದು ಹೇಳಿದರು ಕಾರ್ಯಕ್ರಮ ಉದ್ಘಾಟಿಸಿದ ಗೋವಾ ರಾಜ್ಯದ ರಾಜ್ಯಪಾಲ ಎಸ್. ಶ್ರೀಧರನ್ ಪಿಳ್ಳೆ, ವಿದ್ಯಾರ್ಥಿಗಳು ಪಡೆದ ಪದವಿ ಸಮಾಜದ ಅಭಿವೃದ್ಧಿಗೆ ಉಪಯೋಗವಾಗಬೇಕು. ಪದವೀಧರರು ಉಜ್ವಲ ಭವಿಷ್ಯದೊಂದಿಗೆ ಬಲಿಷ್ಠ ಭಾರತವನ್ನು ನಿರ್ಮಾಣ ಮಾಡಬೇಕು ಎಂದರು.

# ವ್ಯಾಪ್ತಿಯಲ್ಲಿ ಇ-ಖಾತಾ ಕಾಲಮಿತಿಯೊಳಗಾಗಿ ವಿಲೇವಾರಿ ಮಾಡಿ

• ಉದಯವಾಹಿನಿ,ಬೆಂಗಳೂರು



ಬಿಬಿಎಂಪಿ ವ್ಯಾಪ್ತಿಯಲ್ಲಿ ಇ-ಖಾತಾ ಅರ್ಜಿಗಳನ್ನು ಕಾಲಮಿತಿಯೊಳಗಾಗಿ ವಿಲೇವಾರಿ ಮಾಡಲು ಮುಖ್ಯ ಆಯುಕ್ತರಾದ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಾಲಿಕೆ ವ್ಯಾಪ್ತಿಯ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಇ- ಖಾತಾ ಪಡೆಯುವ ಸಲುವಾಗಿ ನಾಗರೀಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಪಾಲಿಕೆಯಿಂದ ಸಾಕಷ್ಟು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಆಯಾ ವಲಯ ವ್ಯಾಪ್ತಿಯಲ್ಲಿ ಇ-ಖಾತಾ ಪಡೆಯಲು ಬಂದ ಅರ್ಜಿಗಳನ್ನು ಕಾಲಮಿತಿಯೊಳಗಾಗಿ ವಿಲೇವಾರಿ ಮಾಡಲು ಸೂಚನೆ ನೀಡಿದರು.

ಕಂದಯಾ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದಿಲ್ ರವರು ಮಾತನಾಡಿ, ಇ-ಖಾತಾ ನೀಡುವ ವಿಚಾರವಾಗಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಂತಿಮ ಇ-ಖಾತಾ ಪಡೆಯಲು ಸುಮಾರು 67 ಸಾವಿರ ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, 61 ಸಾವಿರಕ್ಕೂ ಹೆಚ್ಚು ಇ- ಖಾತಾಗಳನ್ನು ವಿತರಿಸಲಾಗಿದೆ. ಪ್ರತಿನಿತ್ಯ ಬರುವ ಅರ್ಜಿಗಳನ್ನು ನಿಗದಿತ ಸಮಯದೊಳಗಾಗಿ ವಿಲೇವಾರಿ ಮಾಡಿ ನಾಗರೀಕರಿಗೆ ಇ-ಖಾತ ಸಿಗುವಂತೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಆಸ್ತಿ ತೆರಿಗೆ ಸಂಗ್ರಹಿಸಲು ಸೂಕ್ತ ಕ್ರಮವಹಿಸಿ: ಬಿಬಿಎಂಪಿ ವ್ಯಾಪ್ತಿಯಲ್ಲಿ ಹೆಚ್ಚು ಬಾಕಿ ಆಸ್ತಿ ತೆರಿಗೆ ಉಳಿಸಿಕೊಂಡಿರುವ ಸುಸ್ತಿದಾರರಿಂದ ಆಸ್ತಿ ತೆರಿಗೆಯನ್ನು ವಸೂಲಿ ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಆಯಾ ವಲಯ ವ್ಯಾಪ್ತಿಯಲ್ಲಿ ಹೆಚ್ಚು ಬಾಕಿ ಆಸ್ತಿ ತೆರಿಗೆ ಉಳಿಸಿಕೊಂಡಿರುವವರ ಪಟ್ಟಿ ಮಾಡಿಕೊಳ್ಳಬೇಕು. ಅನಂತರ ಪಟ್ಟಿಯ ಅನುಸಾರ ವಾಣಿಜ್ಯ ಕಟ್ಟಡಗಳಿಗೆ ಬೀಗ ಮುದ್ರೆ ಹಾಕಿ ಬಾಕಿ ಆಸ್ತಿ ತೆರಿಗೆಯನ್ನು ಸಂಗ್ರಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ನಾಗರೀಕರಿಂದ ಬರುವ ದೂರುಗಳಿಗೆ ಕೂಡಲೆ ಸ್ಪಂದಿಸಿ:** ಬಿಬಿಎಂಪಿ ವ್ಯಾಪ್ತಿಯಲ್ಲಿ ಸಹಾಯ 2.0, ಐಪಿಜಿಆರ್ ಎಸ್, ಸಾಮಾಜಿಕ ಜಾಲತಾಣ ಸೇರಿದಂತೆ ಇನ್ನಿತರೆ ಕಡೆಗಳಿಂದ ನಾಗರೀಕರಿಂದ ಬರುವ ದೂರುಗಳನ್ನು ಆದ್ಯತೆ ಮೇರೆಗೆ ಕಾಲಮಿತಿಯೊಳಗಾಗಿ ಇತ್ಯರ್ಥಪಡಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಹೊಸ ವರ್ಷಾಚರಣೆಗೆ ಗೈಡ್ ಲೈನ್ಸ್

• ಉದಯವಾಹಿನಿ,ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಭಯೋತ್ಪಾದಕ ಚಟುವಟಿಕೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೊಸ ವರ್ಷಾಚರಣೆ ಸಂದರ್ಭದಲ್ಲಿ ಅಂತಹ ಚಟುವಟಿಕೆಗಳು ಶಾಂತಿ, ಸುವ್ಯವಸ್ಥೆಗೆ ಭಂಗವನ್ನುಂಟು ಮಾಡುವ ಸಾಧ್ಯತೆಗಳು ಇರುವ ಹಿನ್ನೆಲೆಯಲ್ಲಿ ಅಂತವರ ಮೇಲೆ ನಿಗಾ ವಹಿಸಿ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಿ ಎಂದು ಎಲ್ಲಾ ಅಧಿಕಾರಿಗಳಿಗೆ ನಗರ ಪೊಲೀಸ್ ಆಯುಕ್ತ ದಯಾನಂದ ಅವರು ಸೂಚಿಸಿದ್ದಾರೆ. ಹೊಸ ಸಂಭ್ರಮಾಚರಣೆ ವೇಳೆ ಹದ್ದಿನ ಕಣ್ಣಿಡಲು ಪೊಲೀಸರು ಸಕಲ ತಯಾರಿ ಮಾಡಿಕೊಂಡಿದ್ದರೂ ಸುಮಾರು 36 ಅಂಶಗಳ ಗೈಡ್‌ಲೈನ್ಸ್‌ನ್ನು ನಗರದ ಎಲ್ಲಾ ಅಧಿಕಾರಿಗಳಿಗೆ ಕಳುಹಿಸಿ ಆಯುಕ್ತರು ನಿರ್ದೇಶನ ನೀಡಿದ್ದಾರೆ. ಇಂತಹ ಸಂದರ್ಭದಲ್ಲಿ ಕಿಡಿಗೇಡಿಗಳು ಅಟ್ಟಹಾಸ ಮೆರೆಯುವ ಸಾಧ್ಯತೆ ಇದ್ದು, ಅಂತಹವರ ಬಗ್ಗೆ ಹೆಚ್ಚಿನ ಜಾಗೃತಿ ವಹಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಆದೇಶಿಸಿದ್ದಾರೆ. ಹೊಸ ವರ್ಷಾಚರಣೆ ವಿರೋಧಿಸುವ ಸಂಘ ಸಂಸ್ಥೆಗಳ ಬಗ್ಗೆ ಗುಪ್ತವಾಗಿ ಮಾಹಿತಿ ಸಂಗ್ರಹಿಸಿ ಎಂದು ಸೂಚಿಸಿರುವ ಅವರು, ಮಾಲ್ಗಳಲ್ಲಿ ಸಿಸಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿಡುವಂತೆ ಅಲ್ಲಿನ ಸಿಬ್ಬಂದಿಗಳಿಗೆ ಸೂಚನೆ ನೀಡಬೇಕು.

# ಮುಂದಿನ ದಿನಗಳಲ್ಲಿ ಬೆಂಗಳೂರಿಗೆ ವಲಸೆ ಬರುವವರ ಸಂಖ್ಯೆ ಹೆಚ್ಚಾಗಲಿದೆ

• ಉದಯವಾಹಿನಿ,ಬೆಂಗಳೂರು

ಹವಾಮಾನ ಬದಲಾವಣೆಯನ್ನು ಪರಿಹರಿಸುವಲ್ಲಿ ವಿಫಲವಾದರೆ ಮುಂಬರುವ ದಿನಗಳಲ್ಲಿ ಬೆಂಗಳೂರಿಗೆ ದೊಡ್ಡ ಪ್ರಮಾಣದ ವಲಸೆ ಇರಲಿದೆ ಎಂದು ಇನ್ಫೋಸಿಸ್ ಸಂಸ್ಥಾಪಕ ನಾರಾಯಣಮೂರ್ತಿ ಆತಂಕವನ್ನು ಹೊರಹಾಕಿದ್ದಾರೆ.ಪುಣೆಯ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಈ ವಲಸೆಗಳನ್ನು ತಪ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಎಲ್ಲಾ ಪ್ರಮುಖ ಭಾರತೀಯ ನಗರಗಳು ತೀವ್ರತೆಯ ವಿವಿಧ ಹಂತಗಳಲ್ಲಿ ಒಂದೇ ರೀತಿಯ ಸವಾಲುಗಳನ್ನು ಎದುರಿಸುತ್ತಿವೆ. ಹೀಗಾಗಿ ತಪ್ಪಿಸಿಕೊಳ್ಳಲು ಬೇರೆ ಸ್ಥಳವಿಲ್ಲದೇ, ನಾವು ಅವರ ಸ್ವಂತ ನಗರಗಳಲ್ಲಿ ಈ ಸಮಸ್ಯೆಗಳನ್ನು ನಿಭಾಯಿಸಬೇಕು. ಹವಾಮಾನ ಬದಲಾವಣೆಯ ಪರಿಣಾಮವನ್ನು ಪರಿಹರಿಸಲು ಎರಡು ವಿಧಾನದ ಅಗತ್ಯವಿದೆ, ಜನರು ತಮ ಸ್ಥಳೀಯ ಭೂಪ್ರದೇಶಗಳಲ್ಲಿ ಆರಾಮವಾಗಿ ಬದುಕುವುದನ್ನು ರೂಢಿಸಿಕೊಳ್ಳಬೇಕು ಎಂದು ಕನ್ಸಲ್ ಇನ್ನೂ ಸಿವ್‌ನ ಬ್ರಾಂಡ್ ಗುರು, ಹರೀಶ್ ಬಿಜೂರ್ ಹೇಳಿದ್ದಾರೆ. ಇದರರ್ಥ ಸಣ್ಣ ಪಟ್ಟಣಗಳು, ಹಳ್ಳಿಗಳು, ಹವಾಮಾನ-ದುರ್ಬಲ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡುವುದು.ಕಠಿಣ ಹವಾಮಾನ ಪರಿಸ್ಥಿತಿಗಳನ್ನು ಎದುರಿಸುತ್ತಿರುವ ಒಳನಾಡುಗಳು, ಅವುಗಳ ಪ್ರದೇಶಗಳನ್ನು ಗುರುತಿಸಬೇಕು, ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಗ್ಗಿಸಲು ಅಗತ್ಯವಾದ ಸಂಪನ್ಮೂಲ ಸಜ್ಜುಗೊಳಿಸಬೇಕು.

# ನಾನಿನ್ನು ಸತ್ತಿಲ್ಲ, ಬದುಕಿದ್ದೇನೆ ಈ ಡಿಕೆಶಿ ಇನ್ನು ಕಾಂಗ್ರೆಸ್ ಪಕ್ಷದ ಅಧ್ಯಕ್ಷ

## ಮಹಾತ್ಮ ಎಂಬ ಹೆಸರು ಪಡೆದ ನಾಯಕನ ಸ್ಮರಣೆ ಮಾಡುವ ಆಚರಣೆ ವೇಳೆ ಪ್ರತಿಭಟನೆ

• ಉದಯವಾಹಿನಿ,ಬೆಂಗಳೂರು

ಬೆಳಗಾವಿಯಲ್ಲಿ ಶತಮಾನೋತ್ಸವ ಕಾರ್ಯಕ್ರಮ ಆಚರಣೆ ವೇಳೆ ಬಿಜೆಪಿಯವರು ಪ್ರತಿಭಟನೆಗೆ ಮುಂದಾಗಿದ್ದು, ನಾನಿನ್ನು ಸತ್ತಿಲ್ಲ, ಬದುಕಿದ್ದೇನೆ. ಈ ಡಿ.ಕೆ.ಶಿವಕುಮಾರ್ ಇನ್ನೂ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸ್ಥಾನದಲ್ಲಿದ್ದಾನೆ. ಬಿಜೆಪಿಯವರ ಪ್ರತಿಭಟನೆಗೆ ನಾನು ಹೆದರುವುದಿಲ್ಲ ಎಂದು ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸವಾಲೆಸೆದರು. ಮಹಾತ್ಮಾ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ.

ಆಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ, ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ನೀಡಿದ್ದಾರೆ. ಇದೆಲ್ಲವೂ ಅವರ ನೇತೃತ್ವದ ಹೋರಾಟದ ಫಲ. ಇದೆಲ್ಲವನ್ನು ಉಳಿಸಿಕೊಂಡು ಸರಿಯಾದ ರೀತಿಯಲ್ಲಿ ಜಾರಿಯಲ್ಲಿಡಬೇಕು. ಗಾಂಧೀಜಿ ಅವರನ್ನು ದಿನನಿತ್ಯ ನೆನೆಯಬೇಕು ಎಂಬ ಕಾರಣಕ್ಕೆ ಮಹಾತ್ಮ ಗಾಂಧಿಜಿ ಅವರ ಭಾವಚಿತ್ರವನ್ನು ನೋಟುಗಳ ಮೇಲೆ ಮುದ್ರಣ ಮಾಡಲಾಗಿದೆ. ಮಹಾತ್ಮ ಎಂಬ ಹೆಸರು ಪಡೆದ ನಾಯಕನ ಸ್ಮರಣೆ ಮಾಡುವ ಆಚರಣೆ ವೇಳೆ ಪ್ರತಿಭಟನೆ ಮಾಡುತ್ತೇವೆ ಎಂದರೆ ನಾವು ಹೆದರುತ್ತೇವಾ? ಎಂದು ಸವಾಲೆಸೆದರು.

ಸಿ.ಟಿ. ರವಿ ಅವರನ್ನು ಸುತ್ತಾಡಿಸಿದ್ದರ ಬಗ್ಗೆ ಮಾತನಾಡುವ ಬಿಜೆಪಿಯವರು ಸಿ.ಟಿ ರವಿ ಮಹಿಳೆಯರ ಬಗ್ಗೆ ಆಡಿರುವ ಮಾತಿನ ಬಗ್ಗೆ ಯಾರೂ ಕೇಳುತ್ತಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಈ ವಿಚಾರವನ್ನು ಮಾಧ್ಯಮಗಳು ಪ್ರಶ್ನೆ ಮಾಡಬೇಕು. ಈ ವಿಚಾರವಾಗಿ ನಾವು ಈಗ ಮಾತನಾಡುವುದಿಲ್ಲ. 27ರಂದು ಕಾರ್ಯಕ್ರಮಗಳು ಮುಗಿಯಲಿ ನಂತರ ಮಾತನಾಡುತ್ತೇವೆ ಎಂದು ಹೇಳಿದರು. ರಾಜ್ಯದಲ್ಲಿ ಏನೇ ನಡೆದರೂ ಡಿ.ಕೆ. ಶಿವಕುಮಾರ್ ಕಾರಣ ಎಂಬ ರೀತಿ ಬಿಂಬಿಸಲಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನೀವು ಬಲಿಷ್ಠರಾಗಿದ್ದಷ್ಟು ಹೆಚ್ಚು ಶತ್ರುಗಳು. ನೀವು ಕಡಿಮೆ ಶಕ್ತಿಶಾಲಿಯಾದರೆ ಕಡಿಮೆ ಶತ್ರುಗಳು, ನೀವು ದುರ್ಬಲರಾಗಿದ್ದರೆ ಯಾವುದೇ ಶತ್ರುಗಳಿರುವುದಿಲ್ಲ. ಹೆಚ್ಚು ಕೆಲಸ ಮಾಡಿದಷ್ಟು ಹೆಚ್ಚು ತಪ್ಪುಗಳು, ಕಡಿಮೆ ಕೆಲಸ ಮಾಡಿದಷ್ಟು ಕಡಿಮೆ ತಪ್ಪುಗಳು, ಕೆಲಸಗಳೇ ಮಾಡದಿದ್ದರೆ ತಪ್ಪುಗಳೇ ಇರುವುದಿಲ್ಲ ಎಂದು ತಿಳಿಸಿದರು. ಸರ್ಕಾರಕ್ಕೆ ನಾಡಿನ ಭವಿಷ್ಯದ ಬಗ್ಗೆ ಚಿಂತೆ ಇಲ್ಲ ಎಂಬ ಕುಮಾರಸ್ವಾಮಿ ಅವರ ಟೀಕೆ ಬಗ್ಗೆ ಕೇಳಿದಾಗ, ಕುಮಾರಸ್ವಾಮಿ ಬಗ್ಗೆ, ಚನ್ನಪಟ್ಟಣದಲ್ಲಿ ಪ್ರತ್ಯೇಕವಾಗಿ ಮಾತನಾಡುತ್ತೇನೆ ಎಂದು ಹೇಳಿದರು.

ಇದು ಸಂಪೂರ್ಣ ಸರ್ಕಾರಿ ಕಾರ್ಯಕ್ರಮ. ಭದ್ರತಾ ದೃಷ್ಟಿಯಿಂದ ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಆಹ್ವಾನ ಇರುವುದಿಲ್ಲ. ಬೆಳಗಾವಿಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಇತರೆ ವಿಶೇಷ ಅತಿಥಿಗಳಿಗೆ ಆಹ್ವಾನ ನೀಡಲಾಗುವುದು ಎಂದು ತಿಳಿಸಿದರು. ದೇಶದಾದ್ಯಂತ ಎಷ್ಟು ಜನ ಕಾಂಗ್ರೆಸ್ ನಾಯಕರು ಆಗಮಿಸುತ್ತಿದ್ದಾರೆ ಎಂದು ಕೇಳಿದಾಗ, ದೇಶಾದ್ಯಂತ ಕಾಂಗ್ರೆಸ್ ಪಕ್ಷದ ಪ್ರಮುಖ 500ರಿಂದ 600 ಜನ ಕಾಂಗ್ರೆಸ್ ನಾಯಕರು ಮಾತ್ರ ಆಗಮಿಸುತ್ತಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ಎಲ್ಲಾ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಎಲ್ಲಾ ರಾಜ್ಯಗಳ ಶಾಸಕಾಂಗ ಪಕ್ಷದ ನಾಯಕರು, ಸಂಸದರು ಆಗಮಿಸಲಿದ್ದಾರೆ. ಇವರೆಲ್ಲರೂ ಸಾರ್ವಜನಿಕ ಸಮಾವೇಶದಲ್ಲಿ ಭಾಗವಹಿಸಲಿದ್ದು, ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸಮಿತಿಯ ಸದಸ್ಯರು ಮಾತ್ರ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.



**ಸುವರ್ಣ ಸೌಧದ ಗಾಂಧಿ ಪ್ರತಿಮೆ ಅನಾವರಣ ಕಾರ್ಯಕ್ರಮಕ್ಕೆ ಎಲ್ಲಾ ಪಕ್ಷಕ್ಕೂ ಆಹ್ವಾನ ಇದೆಯೇ ಎಂದು ಕೇಳಿದಾಗ, ವಿರೋಧ ಪಕ್ಷಗಳ ನಾಯಕರು, ಸಂಸದರು, ಉಭಯ ಸದನಗಳ ಸಭಾಧ್ಯಕ್ಷರು ಹಾಗೂ ಸಭಾಪತಿಗಳು, ಎಲ್ಲಾ ಪಕ್ಷಗಳ ಶಾಸಕರು ಹಾಗೂ ಪರಿಷತ್ ಸದಸ್ಯರು ಸೇರಿ ಎಲ್ಲಾ ಪಕ್ಷಗಳಿಗೂ ಆಹ್ವಾನ ನೀಡಲಾಗುವುದು.**

**ಸಿ.ಟಿ ರವಿ ಅವರನ್ನು ಫೇಕ್ ಎನ್ ಕೌಂಟರ್ ಮಾಡುವ ಹುನ್ನಾರ ನಡೆದಿತ್ತು ಎಂಬ ಪ್ರಹ್ಲಾದ್ ಜೋಷಿ ಅವರ ಹೇಳಿಕೆ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ ಅವರು, ನಾನು ಜೋಷಿ ಅವರ ಹೇಳಿಕೆಗೆ ಉತ್ತರ ಕೊಡುವುದಿಲ್ಲ. ಅದಕ್ಕೆ ಗೃಹಸಚಿವರು, ಪೊಲೀಸರು ಉತ್ತರ ನೀಡುತ್ತಾರೆ ಎಂದು ತಿಳಿಸಿದರು.**

# ಸಮಸ್ಯೆಗೆ ಕಿವಿಯಾದ 'ಆಪ್ತ ಗೆಳತಿ ನಿಮ್ಮ ಬಳಿಗೆ' ಎಂಬ ವಿಭಿನ್ನ ಕಾರ್ಯಕ್ರಮ

## • ಹೆಣ್ಣು ಮಕ್ಕಳಿಗೆ ಧೈರ್ಯ ತುಂಬುವ ಹಾಗೂ ಅವರ ಸಮಸ್ಯೆಗಳಿಗೆ ತುರ್ತು ಸ್ಪಂದಿಸುವ ಉದ್ದೇಶ

• ಉದಯವಾಹಿನಿ ಚಾಮರಾಜನಗರ

ಲೈಂಗಿಕ ದೌರ್ಜನ್ಯ, ಪುಂಡರ ಹಾವಳಿ, ಮಾನಸಿಕ ಹಿಂಸೆ, ದೈಹಿಕ ಹಲ್ಲೆಸೇರಿದಂತೆ ಯಾರ ಬಳಿಯೂ ಹೇಳಿಕೊಳ್ಳಲಾಗದೆ ನೋವು ಅನುಭವಿಸುವ ಹೆಣ್ಣು ಮಕ್ಕಳಿಗೆ ಧೈರ್ಯ ತುಂಬುವ ಹಾಗೂ ಅವರ ಸಮಸ್ಯೆಗಳಿಗೆ ತುರ್ತು ಸ್ಪಂದಿಸುವ ಉದ್ದೇಶದಿಂದ ಜಿಲ್ಲಾ ಪೊಲೀಸ್ ಇಲಾಖೆ 'ಆಪ್ತ ಗೆಳತಿ ನಿಮ್ಮ ಬಳಿಗೆ' ಎಂಬ ವಿಭಿನ್ನ ಕಾರ್ಯಕ್ರಮ ಅನುಷ್ಠಾನಗೊಳಿಸಿದೆ.

**ಏನಿದು 'ಆಪ್ತ ಗೆಳತಿ ನಿಮ್ಮ ಬಳಿಗೆ':** ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ವಿದ್ಯಾಸಂಸ್ಥೆಗಳ ಒಳಗೆ ಹಾಗೂ ಹೊರಗೆ ಹಲವು ರೀತಿಯ ದೌರ್ಜನ್ಯ, ಮಾನಸಿಕ, ದೈಹಿಕ ಕಿರುಕುಳ ಅನುಭವಿಸುತ್ತಾರೆ. ಕೆಲವರು ಧೈರ್ಯವಾಗಿ ಸಮಸ್ಯೆಗಳನ್ನು ಹೇಳಿಕೊಂಡರೆ ಕೆಲವರು ಭಯದಿಂದ ಯಾರ ಬಳಿಯೂ ಹೇಳಿಕೊಳ್ಳದೆ ಹಿಂಸೆ ಅನುಭವಿಸುತ್ತಾರೆ. ಅಂತವರ ನೋವಿಗೆ 'ಆಪ್ತ ಗೆಳತಿ ನಿಮ್ಮ ಬಳಿಗೆ' ಕಾರ್ಯಕ್ರಮ ಕಿವಿಯಾಗಲಿದೆ ಎನ್ನುತ್ತಾರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ.

ಪೋಷಕರು, ಶಿಕ್ಷಕರು, ಆಪ್ತರು, ಸಂಬಂಧಿಗಳ ಬಳಿಯೂ ಹೇಳಿಕೊಳ್ಳಲಾಗದವರು ಧೈರ್ಯವಾಗಿ ಸಮಸ್ಯೆ ಹೇಳಿಕೊಳ್ಳಬೇಕು ಎಂಬ ಉದ್ದೇಶದಿಂದ 'ಆಪ್ತ ಗೆಳತಿ ನಿಮ್ಮ ಬಳಿಗೆ' ಎಂಬ ಸಲಹಾ ಪೆಟ್ಟಿಗೆಗಳನ್ನು ಜಿಲ್ಲೆಯ 250ಕ್ಕೂ ಹೆಚ್ಚು ಪ್ರೌಢಶಾಲೆಗಳು ಹಾಗೂ ಕಾಲೇಜುಗಳಲ್ಲಿ ಇರಿಸಲಾಗಿದೆ.

ಸಂತ್ರಸ್ತರು ಮುಕ್ತವಾಗಿ ನೋವು ಹಂಚಿಕೊಳ್ಳಬಹುದು ಎಂದು ಎಸ್‌ಪಿ ಕವಿತಾ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿದರು.

**ಕಾರ್ಯ ನಿರ್ವಹಣೆ ಹೇಗೆ:** ಹೆಣ್ಣುಮಕ್ಕಳಿಗೆ ಬಸ್ ನಿಲ್ದಾಣ, ಶಾಲಾ ಕಾಲೇಜು ಆವರಣ, ಸಾರ್ವಜನಿಕ ಸ್ಥಳಗಳಲ್ಲಿ ಕಿರುಕುಳ ನೀಡುತ್ತಿದ್ದರೆ, ಬಸ್‌ಗಳಲ್ಲಿ ಬರುವಾಗ, ಹೋಗುವಾಗ ಚುಡಾಯಿಸುತ್ತಿದರೆ, ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರು, ಸಿಬ್ಬಂದಿಗಳು ಲೈಂಗಿಕ ದೌರ್ಜನ್ಯ ಎಸಗಿದರೆ ಅಥವಾ ಒತ್ತಾಯಿಸುತ್ತಿದ್ದರೆ, ಇಷ್ಟವಿಲ್ಲದಿದ್ದರೂ ಪ್ರೀತಿಸುವಂತೆ ದುಂಬಾಲು ಬೀಳುತ್ತಿದ್ದರೆ, ಆಪ್ತರು, ಸಂಬಂಧಿಗಳಿಂದ ಕಿರುಕುಳ ಅನುಭವಿಸುತ್ತಿದ್ದರೆ ಸಂತ್ರಸ್ತರು ಧೈರ್ಯವಾಗಿ 'ಆಪ್ತ ಗೆಳತಿ ನಿಮ್ಮ ಬಳಿಗೆ' ಸಲಹಾ ಪೆಟ್ಟಿಗೆಗೆ ದೂರು ಬರೆದು ಹಾಕಬಹುದು. ದೂರು ನೀಡಿದವರ ಹೆಸರನ್ನಾಗಲಿ, ಮಾಹಿತಿಯನ್ನಾಗಲಿ ಬಹಿರಂಗಪಡಿಸದೆ ಗೌಪ್ಯವಾಗಿ ಇರಿಸಲಾಗುವುದು ಕಿರುಕುಳ ನೀಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಿ ಸಂತ್ರಸ್ತರ ನೋವಿಗೆ ಸ್ಪಂದಿಸಲಾಗುವುದು ಎನ್ನುತ್ತಾರೆ ಎಸ್‌ಪಿ. ದೂರು ಪೆಟ್ಟಿಗೆಗಳನ್ನು ಇರಿಸಿ ಒಂದು ತಿಂಗಳು ಕಳೆಯುವಷ್ಟರಲ್ಲಿ 23 ದೂರುಗಳು ಬಂದಿದ್ದು ಎಲ್ಲವನ್ನೂ ಖುದ್ದು ಪರಿಶೀಲಿಸಿ ಬಗೆಹರಿಸಲಾಗಿದೆ. ಕೆಲವು ದೂರುಗಳಲ್ಲಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗಿದ್ದು, ಕೆಲವು ದೂರುಗಳಲ್ಲಿ ಪ್ರಕರಣ ದಾಖಲಿಸದೆ ಸಮಸ್ಯೆಗೆ ಮುಕ್ತಿ ನೀಡಲಾಗಿದೆ ಎನ್ನುತ್ತಾರೆ .

**ಪಾರದರ್ಶಕ ವ್ಯವಸ್ಥೆ:** ಶಾಲಾ ಕಾಲೇಜುಗಳಲ್ಲಿ ಇರಿಸಿರುವ ಆಪ್ತ ಗೆಳತಿ ನಿಮ್ಮ ಬಳಿಗೆ' ದೂರು ಪೆಟ್ಟಿಗೆಗಳನ್ನು ಪ್ರತಿ ಶನಿವಾರ ಶಿಕ್ಷಕರ ಸಮ್ಮುಖದಲ್ಲಿ ತೆರೆದು ಎಷ್ಟು ದೂರುಗಳು ಬಂದಿವೆ ಎಂಬ ವಿವರವನ್ನು ವಿದ್ಯಾಸಂಸ್ಥೆಯ ರಿಜಿಸ್ಟರ್‌ನಲ್ಲಿ ದಾಖಲಿಸಲಾಗುತ್ತದೆ. ಬಳಿಕ ದೂರುಗಳ ಪ್ರತಿಯನ್ನು ಆಯಾ ವ್ಯಾಪ್ತಿಯ ಠಾಣೆಗಳಲ್ಲಿ ತೆರೆದು ತುರ್ತು ಕ್ರಮ ವಹಿಸಲಾಗುತ್ತದೆ. ಪೊಲೀಸರು ತೆಗೆದುಕೊಂಡ ಕ್ರಮಗಳ ಬಗ್ಗೆ, ಪ್ರತಿ ನಡೆಯುವ ಜೂಮ್ ಮೀಟಿಂಗ್‌ನಲ್ಲಿ ಖುದ್ದು ಪರಿಶೀಲಿಸುತ್ತೇನೆ. ಕಾರ್ಯಕ್ರಮ ಅನುಷ್ಠಾನಗೊಂಡ ಅಲ್ಪ ಅವಧಿಯಲ್ಲಿ ಉತ್ತಮ ಸ್ಪಂದನೆ ದೊರೆತಿರುವುದು ಖುಷಿ ತಂದಿದೆ. ಬಹುಶಃ ಪೊಲೀಸ್ ಇಲಾಖೆ ವ್ಯಾಪ್ತಿಯಲ್ಲಿ ಇದು ಪ್ರಥಮ ಕಾರ್ಯಕ್ರಮ.

### ಎಲ್ಲಾ ದೂರುಗಳು ವಿಲೇವಾರಿ

**ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು, ವಿಶೇಷವಾಗಿ ಹೆಣ್ಣುಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಕವಿತಾ ಅವರ ಮಾರ್ಗದರ್ಶನದಲ್ಲಿ ಜಾರಿಗೆ ಬಂದಿರುವ 'ಆಪ್ತ ಗೆಳತಿ ನಿಮ್ಮ ಬಳಿಗೆ' ದೂರುಕೇಂದ್ರಕ್ಕೆ ಒಂದೇ ತಿಂಗಳಿನಲ್ಲಿ 23 ದೂರುಗಳು ಬಂದಿದ್ದು ನಿರೀಕ್ಷೆಗೂ ಮೀರಿ ಸ್ಪಂದನ ವ್ಯಕ್ತವಾಗಿದೆ. ದೂರುಕೇಂದ್ರಕ್ಕೆ ಬಂದ ಎಲ್ಲ ದೂರುಗಳು ವಿಲೇವಾರಿಯಾಗಿವೆ.**


ಉದಯವಾಹಿನಿ ಚಿತ್ರ

**ಪುಂಡರ ಹಾವಳಿಗೆ ಬ್ರೇಕ್' ಇಷ್ಟವಿಲ್ಲದಿದ್ದರೂ ಯುವಕನೊಬ್ಬ ಮದುವೆಯಾಗು ಎಂದು ದುಂಬಾಲು ಬಿದ್ದಿದ್ದಾನೆ ಬಸ್‌ನಲ್ಲಿ ಕಾಲೇಜಿಗೆ ಬರುವಾಗ ಪುಂಡನೊಬ್ಬ ಚುಡಾಯಿಸುತ್ತಿದ್ದಾನೆ ಮನೆಗೆ ಹೋಗುವಾಗ ದಾರಿಯಲ್ಲಿ ಕಿರುಕುಳ ನೀಡುತ್ತಾರೆ ಎಂಬೆಲ್ಲ ದೂರುಗಳು ಬಂದಿದ್ದು ಪುಂಡರ ಹೆಡೆಮುರಿ ಕಟ್ಟಲಾಗಿದೆ. ದೌರ್ಜನ್ಯಕ್ಕೆ ಒಳಗಾದವರು ಹೆದರಬೇಕಿಲ್ಲ. ಧೈರ್ಯವಾಗಿ ಪೊಲೀಸ್ ಇಲಾಖೆಗೆ ದೂರು ನೀಡಬೇಕು -ಬಿ.ಟಿ.ಕವಿತಾ ಎಸ್‌ಪಿ**

**ದೌರ್ಜನ್ಯಕ್ಕೆ ಒಳಗಾದವರು ಹೆದರಬೇಕಿಲ್ಲ**

# ಜಲಜೀವನ್ ಮಿಷನ್ ಕಾಮಗಾರಿ: ರಸ್ತೆ ಹಾಳು

• ಉದಯವಾಹಿನಿ ಚೇಳೂರು

ಮನೆ ಮನೆಗೆ ಜೀವಜಲ ಹರಿಸಲು ಕೈಗೊಂಡಿರುವ ಜಲಜೀವನ್ ಮಿಷನ್ ಯೋಜನೆಯು ಹಳ್ಳಿ ರಸ್ತೆಗಳ ಚಹರೆಯನ್ನೇ ಬದಲಿಸಿದ್ದು ಚಿಲಕಲನೇರ್ಪು ಜನತೆಯ ಆಕ್ರೋಶಕ್ಕೆ ಕಾರಣವಾಗಿದೆ. ನೂತನ ಚೇಳೂರು ತಾಲ್ಲೂಕಿನ ಚಿಲಕಲನೇರ್ಪು ಗ್ರಾಮದಲ್ಲಿ ಎಂಜಿನಿಯರ್ ಹಾಗೂ ಗುತ್ತಿಗೆದಾರರು ಇಡೀ ರಸ್ತೆಯನ್ನೇ ಎರಡು ತುಂಡು ಮಾಡಿ ಪೈಪ್ ಅಳವಡಿಸಿದ್ದಾರೆ.ಗ್ರಾಮಸ್ಥರು ಇಂದಿಗೂ ಸೀಳು ರಸ್ತೆಯಲ್ಲಿಯೇ ಓಡಾಡುತ್ತಿದ್ದಾರೆ.

ಸಿಮೆಂಟ್ ರಸ್ತೆಗಳ ಚಹರೆ ಹಾಳಾಗದಂತೆ ಪೈಪ್‌ಗಳನ್ನು ರಸ್ತೆಯ ಎಡ ಅಥವಾ ಬಲ ಅಂಚಿನಲ್ಲಿ ಅಳವಡಿಸಿ ಎಂಬ ಸ್ಪಷ್ಟ ಸೂಚನೆ ಇದ್ದರೂ, ಗುತ್ತಿಗೆದಾರರು ಮನಬಂದಂತೆ ರಸ್ತೆಗಳನ್ನು ಅಗೆದಿದ್ದಾರೆ.ರಸ್ತೆಯ ಮಧ್ಯದಲ್ಲೇ ಗುಂಡಿ ತೆಗೆದು ಪೈಪ್ ಹೂಳಲಾಗಿದೆ. ಆದರೆ ತೆಗೆದಿರುವ ಗುಂಡಿಗಳನ್ನು ಕ್ರಮಬದ್ಧವಾಗಿ ಮುಚ್ಚಿಲ್ಲ, ದ್ವಿಚಕ್ರ ವಾಹನಗಳಲ್ಲಿ ಓಡಾಡುವವರ ಸ್ಥಿತಿಯಂತೂ ಭಯಾನಕ. ಇತ್ತ ಜಲ ಜೀವನ್ ಯೋಜನೆಯ ಕಾಮಗಾರಿಗೆ ರಸ್ತೆ ಬಗೆದು ಆರು ತಿಂಗಳು ಕಳೆಯುತ್ತಾ ಬಂದರೂ ಇನ್ನೂ ಪೂರ್ಣವಾಗುವ ಲಕ್ಷಣ ಗೋಚರಿಸುತ್ತಿಲ್ಲ.ದಾರಿ ಮಧ್ಯೆಯೇ ಗುಂಡಿ ತೋಡಿರುವುದರಿಂದ ರಸ್ತೆಯೂ ಹಾಳಾಗಿದೆ.


ಉದಯವಾಹಿನಿ ಚಿತ್ರ

ಸಂಬಂಧಿಸಿದ ಗುತ್ತಿಗೆದಾರರು ಇದೆ ಗ್ರಾಮದವರು ಆಗಿದ್ದರೂ ಸಹ ಸರಿಪಡಿಸುವಲ್ಲಿ ವಿಫಲರಾಗಿದ್ದಾರೆ. ಆಗಿರುವ ತೊಂದರೆ ನಿವಾರಿಸದಿದ್ದಲ್ಲಿ ತಾಲ್ಲೂಕು ಪಂಚಾಯಿತಿ ಮುಂಭಾಗವೇ ಪ್ರತಿಭಟನೆ ಹಮ್ಮಿಕೊಳ್ಳುವುದು ಎಂದು ಗ್ರಾಮಸ್ಥರು ತಿಳಿಸಿದರು.

ಅನಾಹುತವಾದರೆ ಯಾರು ಹೊಣೆ ಜೆಜೆಎಂ ಕಾಮಗಾರಿ ಹೆಸರಿನಲ್ಲಿ ಗ್ರಾಮದ ಹಲವಾರು ರಸ್ತೆ ಉದ್ದಕ್ಕೂ ಗುಂಡಿ ತೋಡಲಾಗಿದೆ. ಗ್ರಾ.ಪಂ ಅಧಿಕಾರಿಗಳಗೆ ತಿಳಿದರೂ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸುವ ಗೋಜಿಗೆ ಹೋಗಿಲ್ಲ ಗುಂಡಿಯೊಳಗೆ ಬಿದ್ದು ಕೈ ಕಾಲು ಪೆಟ್ಟು ಮಾಡಿಕೊಳ್ಳುವುದು ಸಾಮಾನ್ಯವಾಗಿದೆ. ಜೀವಕ್ಕೆ ಅನಾಹುತವಾದರೆ ಯಾರು ಹೊಣೆ.

# ಅಯ್ಯಪ್ಪ ದೇಗುಲಕ್ಕೆ ಸರ್ವಧರ್ಮೀಯರ ಪೂಜೆ

• ಉದಯವಾಹಿನಿ ಸೋಮವಾರಪೇಟೆ

ಭಕ್ತರ ಇಷ್ಟಾರ್ಥಗಳನ್ನು ಪೂರೈಸುತ್ತಿರುವ ಸಮೀಪದ ಶ್ರೀ ಅಯ್ಯಪ್ಪ ದೇವಾಲಯ ಪುನರ್ ಪ್ರತಿಷ್ಠಾ ಮತ್ತು ಬ್ರಹ್ಮಕಲಶೋತ್ಸವದ ಸಿದ್ಧತೆಯಲ್ಲಿದೆ. ಮಡಿಕೇರಿಯಿಂದ ಹಾಸನಕ್ಕೆ ತೆರಳುವ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಂತಿರುವ ಬಜೆಗುಂಡಿ ಗ್ರಾಮದಲ್ಲಿ ದಾನಿಗಳ ಸ್ಥಳದಲ್ಲಿ ಸರ್ವ ಧರ್ಮಿಯರೂ ಸೇರಿ ಅಯ್ಯಪ್ಪಸ್ವಾಮಿ, ಗಣಪತಿ ಹಾಗೂ ಸುಬ್ರಹ್ಮಣ್ಯ ದೇವರುಗಳು ಒಂದೇ ಸ್ಥಳದಲ್ಲಿರುವಂತೆ ನೂತನವಾಗಿ ದೇವಾಲಯ ನಿರ್ಮಿಸಿ ಅದಕ್ಕೆ ಪೂಜೆ ನಡೆಸಿಕೊಂಡು ಬರುತ್ತಿರುವುದು ವಿಶೇಷ.ಈ ದೇವಾಲಯವು ಬಜೆಗುಂಡಿ ಗ್ರಾಮ ಸೇರಿದಂತೆ ಹತ್ತು ಹಲವು ಗ್ರಾಮಗಳ ಜನರ ಪ್ರಮುಖ ದೇವಾಲಯವಾಗಿದೆ.

ಪ್ರತಿನಿತ್ಯ ಹಾಗೂ ಕಾಲಕಾಲಕ್ಕೆ ವಿಶೇಷ ಪೂಜೆ, ಪುನಸ್ಕಾರ ನಡೆಯುವುದರೊಂದಿಗೆ, ಪ್ರತಿವರ್ಷ ಕಾರ್ತಿಕ ಪೂಜೆ ಹಾಗೂ ಮಾರ್ಚ್ ತಿಂಗಳಲ್ಲಿ ವಿಜೃಂಭಣೆಯ ಜಾತ್ರೋತ್ಸವ ನಡೆಯುತ್ತದೆ.

ಧಾರ್ಮಿಕ ಉತ್ಸವದಲ್ಲಿ ಎಲ್ಲಾ ಜಾತಿ, ಎಲ್ಲಾ ಧರ್ಮಿಯರೂ ಪಾಲ್ಗೊಳ್ಳುವುದು ವಿಶೇಷ ಈ ದೇವಾಲಯದ ಅಭಿವೃದ್ಧಿ ಹಾಗೂ ಕಾರ್ಯಕ್ರಮಗಳಿಗೆ ಎಲ್ಲರೂ ಧನ ಸಹಾಯ ಮಾಡುತ್ತಾ ಬಂದಿದ್ದಾರೆ.


ಉದಯವಾಹಿನಿ ಚಿತ್ರ

ದಾನಿಗಳು ನೀಡಿದ ಖಾಲಿ ಜಾಗದಲ್ಲಿ 6 ದಶಕಗಳ ಹಿಂದೆ ಸ್ಥಳೀಯ ನಿವಾಸಿಗಳಾದ ವೆಲ್ಲಚ್ಚಿ ಹಾಗೂ ಕೃಷ್ಣ ಗುರುಸ್ವಾಮಿ ಅವರು ಪೂಜೆ ಪ್ರಾರಂಭಿಸಲು, ಕಾರೆಕೊಪ್ಪ ಗ್ರಾಮದ ಪೂವಯ್ಯ ಹಾಗೂ ಬಳಗುಂದ ಗ್ರಾಮದ ಜೋಯಪ್ಪ ಅವರು ಚಿಕ್ಕ ಗುಡಿ ಕಟ್ಟಲು ನೆರವಾದರು.

ನಂತರದ 40 ವರ್ಷಗಳಲ್ಲಿ ಅದು ದುಃಸ್ಥಿತಿಗೆ ತಲುಪಿದ ಸಂದರ್ಭ ನೂತನ ಕಟ್ಟಡ ನಿರ್ಮಾಣ ಮಾಡಲು ಇದ್ದ ಗುಡಿಯನ್ನು ನೆಲಸಮ ಮಾಡಲಾಯಿತು. ನಂತರ ದೇವಾಲಯ ನಿರ್ಮಿಸಲು ಹಣಕಾಸಿನ ಮುಗ್ಗಟ್ಟಿನಿಂದಾಗಿ ಯೋಜನೆ ಕಾರ್ಯಗತವಾಗಲಿಲ್ಲ.

ಅದೇ ಸಂದರ್ಭ ರಾಜ್ಯ ಸರ್ಕಾರದ ಒಳಚರಂಡಿ ನಿಗಮದ ಅಧ್ಯಕ್ಷರಾಗಿದ್ದ ಕೆ.ಪಿ. ಚಂದ್ರಕಲಾ ಅವರ ನೇತೃತ್ವದಲ್ಲಿ ಈಗಿನ ನೂತನ ದೇವಾಲಯ ನಿರ್ಮಾಣ ಮಾಡಲು ಸಹಕಾರಿಯಾಗಿ, 2011ರಲ್ಲಿ ಸುಂದರ ದೇವಾಲಯ ಲೋಕಾರ್ಪಣೆಗೊಂಡಿತು.

ಇಲ್ಲಿ ಅಯ್ಯಪ್ಪ ದೇವರೊಂದಿಗೆ, ಗಣಪತಿ, ಸುಬ್ರಹ್ಮಣ್ಯ ದೇವರುಗಳು ಗುಡಿಗಳ ನಿರ್ಮಾಣವಾಗಿರುವುದು ವಿಶೇಷ ಬೇರೆಲ್ಲೂ ಈ ಒಟ್ಟಿಗೆ ದೇವಾಲಯವನ್ನು ನಿರ್ಮಿಸಿರುವುದು ಕಡಿಮೆ.

**ದೇವಾಲಯದಲ್ಲಿ ವಾರ್ಷಿಕ ಅಯ್ಯಪ್ಪ ವಿಳಕ್ಕು ಪೂಜೆ, ಮಂಡಲ ಪೂಜೆ ಸೇರಿದಂತೆ ದೈನಂದಿನ ಪೂಜೆಗಳು ಶ್ರದ್ಧಾ ಭಕ್ತಿಯಿಂದ ನಡೆಯುತ್ತಿದ್ದು, ಸರ್ವರೂ ಪೂಜೆಯಲ್ಲಿ ಪಾಲ್ಗೊಳ್ಳಲು ಅವಕಾಶವಾಗಿದೆ**
**-ಬಿ.ಟಿ. ರವಿ, ಸಮಿತಿಯ ಪದಾಧಿಕಾರಿ**

# ಸದ್ದು ಮಾಡುತ್ತಿರುವ ಪಾದಚಾರಿ ರಸ್ತೆ ತೆರವು

• ಉದಯವಾಹಿನಿ ಚಿಂತಾಮಣಿ

ನಗರದ ಎಂ.ಜಿ.ರಸ್ತೆಯಲ್ಲಿ ಇತ್ತೀಚೆಗೆ ದ್ವಿಚಕ್ರವಾಹನದಲ್ಲಿ ತೆರಳುತ್ತಿದ್ದ ದಂಪತಿ ಅಪಘಾತಕ್ಕೀಡಾಗಿ ಸ್ಥಳದಲ್ಲೇ ಮೃತಪಟ್ಟರು. ಈ ಘಟನೆ ಸಾರ್ವಜನಿಕರಲ್ಲಿ ತೀವ್ರ ಸಂಚಲನ ಸೃಷ್ಟಿಸಿದೆ. ಚೇಳೂರು ರಸ್ತೆಯಲ್ಲಿ ಖಾಸಗಿ ಬಸ್‌ಗೆ ಸಿಲುಕಿ ವ್ಯಕ್ತಿಯೊಬ್ಬ ಮೃತಪಟ್ಟಿದ್ದರು.

ಅಪಘಾತಗಳಿಗೆ ಕಾರಣಗಳು ಎಲ್ಲೆಡೆ ಚರ್ಚೆಗೆ ಗ್ರಾಸವಾಗಿದೆ. ನಗರದಲ್ಲಿ ದಿನೇ ದಿನೇ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ. ರಸ್ತೆಯ ವರ್ಕ್ ಶಾಪ್ ಒಂದರ ಪಾದಚಾರಿ ರಸ್ತೆ ಒತ್ತುವರಿಯಾಗಿದೆ. ಇಲ್ಲೇ ಅಪಘಾತ ಆಗಿದೆ. ಯಾವುದೇ ತಪ್ಪಿಲ್ಲದಿದ್ದರೂ ಬಸ್ ಚಾಲಕನ ಕುಟುಂಬವು ಸಂಕಷ್ಟ ಎದುರಿಸುವಂತಾಗಿದೆ.

ಈ ಘಟನೆ ನಗರದ ನಾಗರಿಕರ ಕಣ್ಣು ತೆರೆಸಿದೆ. ಎಲ್ಲೆಡೆ ಚರ್ಚೆ ಆಗುತ್ತಿದ್ದು ನಗರಸಭೆ ಮತ್ತು ಪೊಲೀಸ್ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ನಗರಸಭೆ ಮತ್ತು ಪೊಲೀಸ್ ಇಲಾಖೆ ಎಚ್ಚೆತ್ತುಕೊಂಡಿದ್ದು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಒತ್ತುವರಿ ತೆರವುಗೊಳಿಸಲು ಮುಂದಾಗಿದೆ ಒತ್ತುವರಿ ಮಾಡಿಕೊಂಡಿರುವವರಿಗೆ ತೆರವು ಮಾಡಲು ಸೋಮವಾರದವರೆಗೆ ಸಮಯ ನೀಡಿದ್ದಾರೆ. ತೆರವುಗೊಳಿಸುವಂತೆ ಆಟೊ ಮೂಲಕ ಪ್ರಚಾರ ಮಾಡುತ್ತಿದ್ದಾರೆ. ತೆರವುಗೊಳಿಸದಿದ್ದರೆ ಪೊಲೀಸ್ ಬಂದೋಬಸ್ತ್‌ನಲ್ಲಿ ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ತೆರವುಗೊಳಿಸುತ್ತಾರೆ. ದಂಡ ಹಾಕಿ ವಸೂಲಿ ಮಾಡುವುದಾಗಿ ಪೌರಾಯುಕ್ತರು ಎಚ್ಚರಿಸಿದ್ದಾರೆ. ಫುಟ್‌ಪಾತ್ ಮತ್ತು ರಸ್ತೆಗಳ ಒತ್ತುವರಿ ತೆರವುಗೊಳಿಸಲು ಹಿಂದೆಯೂ ಅನೇಕ ಪ್ರಯತ್ನಗಳು ನಡೆದು ಸ್ಥಗಿತಗೊಂಡಿತ್ತು.


ಉದಯವಾಹಿನಿ ಚಿತ್ರ

ನಗರದ ಎಂ.ಜಿ.ರಸ್ತೆಯ ಅಗಲೀಕರಣದ ಸಮಸ್ಯೆ ದಶಕಗಳಿಂದ ಪರಿಹಾರ ಕಾಣದ ಸಮಸ್ಯೆ ಆಗಿದೆ. ಹೆದ್ದಾರಿ ಅಧಿಕಾರಿಗಳು ಅನೇಕ ಬಾರಿ ಸರ್ವೆ ಮಾಡಿ ಅಗಲೀಕರಣಕ್ಕೆ ಗುರುತು ಮಾಡಿದ್ದರೂ ಕಾರ್ಯಗತವಾಗಲಿಲ್ಲ. ಕೆಲವೇ ಕೆಲವು ಪ್ರಭಾವಿಗಳಿಂದ ನಗರದ ಜನರು ಸಂಚಾರ ದಟ್ಟಣೆಯ ಸಮಸ್ಯೆ ಅನುಭವಿಸಬೇಕಾಗಿದೆ ಎಂದು ಜನರು ಅಸಮಾಧಾನ ವ್ಯಕ್ತಪಡಿಸುತ್ತಾರೆ. ಸರ್ಕಾರಿ ಆಸ್ಪತ್ರೆಯಿಂದ ಸರ್ಕಾರಿ ಬಸ್ ನಿಲ್ದಾಣದವರೆಗೆ ರಸ್ತೆಯ ವಿಸ್ತರಣೆ ನನೆಗುದಿಗೆ ಬಿದ್ದಿದೆ. ಜನದಟ್ಟಣೆ, ಸಂಚಾರದ ಒತ್ತಡ ಹೆಚ್ಚಾಗಿರುವ ಎಂ.ಜಿ.ರಸ್ತೆ ಸೇರಿದಂತೆ ಮುಖ್ಯ ರಸ್ತೆಗಳ ವಿಸ್ತರಣೆಗೆ ಕ್ರಮಕೈಗೊಳ್ಳಬೇಕು ಎನ್ನುವುದು ಸಾರ್ವಜನಿಕರ ಒತ್ತಾಯ.

### ದಟ್ಟಣೆಗೆ ಪರಿಹಾರ ಸಿಕ್ಕಿಲ್ಲ

**ಈ ಬಾರಿಯಾದರೂ ಕಾರ್ಯಗತಗೊಳ್ಳುವುದೇ ಎನ್ನುವುದು ಯಕ್ಷಪ್ರಶ್ನೆಯಾಗಿದೆ. ವಾಣಿಜ್ಯ ಕೇಂದ್ರವಾದ ಚಿಂತಾಮಣಿ ನಗರ ಶರವೇಗದಲ್ಲಿ ಬೆಳೆಯುತ್ತಿದೆ. ಆದರೆ ಜನಸಂಖ್ಯೆ ಹಾಗೂ ನಗರದ ಬೆಳವಣಿಗೆಗೆ ತಕ್ಕಂತೆ ಸೌಲಭ್ಯಗಳು ದೊರೆಯದೆ ಸಾರ್ವಜನಿಕರು ಕಿರಿಕಿರಿ ಅನುಭವಿಸುವಂತಾಗಿದೆ. ನಗರದ ಸಂಚಾರ ದಟ್ಟಣೆಗೆ ಪರಿಹಾರ ಸಿಕ್ಕಿಲ್ಲ.**

# ಗ್ರಾಮೀಣ ಪತಕರ್ತರ ಸಂಘದಿಂದ ಉತ್ತಮ ಕೆಲಸ

• ಉದಯವಾಹಿನಿ ನಂಜನಗೂಡು

ತಾಲ್ಲೂಕು ಪತ್ರಕರ್ತರ ಸಂಘವು 24X7 ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ತಹಶೀಲ್ದಾರ್ ಶಿವಕುಮಾರ್ ತಿಳಿಸಿದರು. ನಂಜನಗೂಡು ಪತ್ರಕರ್ತರ ಸಂಘದಲ್ಲಿ ತಾಲ್ಲೂಕು ಪತ್ರಕರ್ತರ ವತಿಯಿಂದ 2005ರ ಕ್ಯಾಲೆಂಡರ್ ಬಿಡುಗಡೆ ಮಾಡಿದ ನಂತರ ಮಾತನಾಡಿದ ಅವರು ಪ್ರತಿಯೊಂದು ಗ್ರಾಮಾಂತರ ಪ್ರದೇಶದಲ್ಲಿ ಆಗುವ ಯಾವುದೇ ಸಮಾರಂಭ ಆಗಬಹುದು ಅವಗಡಾಗಬಹುದು ವರದಿ ಮಾಡುತ್ತಾ ನಮ್ಮ ಜೊತೆ ಕೈಜೋಡಿಸುತ್ತಾ ಬಂದಿದೆ ಎಂದರು ಅದೇ ರೀತಿ ಪತ್ರಕರ್ತರ ಜವಾಬ್ದಾರಿ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಸಂಘಗಳು ರಾಜಕೀಯ ಸ್ವರೂಪ ತಾಳುತ್ತಿದೆ. ಗ್ರಾಮೀಣ ಪ್ರದೇಶದ ಪತ್ರಕರ್ತರ ಹಾಗೂ ಪತ್ರಕರ್ತರ ಕಷ್ಟಸುಖಗಳಲ್ಲಿ ಸಂಘಗಳು ಸಹಕರಿಸಬೇಕು ಎಂದರು. ನಾನು ಈಗ ಎರಡನೇ ಬಾರಿ ಅಧ್ಯಕ್ಷನಾದ ಮೇಲೆ ಪತ್ರಿಕರ್ತರ ಮಕ್ಕಳ 27 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ. ಪತ್ರಿಕಾ ಸಂಘದಲ್ಲಿ ಪತ್ರಕರ್ತರ ಕುಟುಂಬಕ್ಕೆ ಆರೋಗ್ಯ ತಪಾಸಣೆಸಿದ್ದೀರಾ.


ಉದಯವಾಹಿನಿ ಚಿತ್ರ

ಉತ್ತಮ ಸೇವೆ ಮಾಡುವ ಪತ್ರಕರ್ತರಿಗೆ ಸನ್ಮಾನ. ಪತ್ರಕರ್ತರ ಭವನ ನವೀಕರಣಕ್ಕೆ 15ಲಕ್ಷ. ಮುಖ್ಯಮಂತ್ರಿ ಅವರನ್ನು ಎಕರೆಸಿ ಪತ್ರಿಕಾ ದಿನಾಚರಣೆ ಪತ್ರಿಕಾ ಚಾಯಾಗ್ರಾಹಕರಿಗೆ ಸನ್ಮಾನ ರಂತೆ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿದ್ದೇವೆ ಐದು ತಿಂಗಳಲ್ಲಿ ಎಂದರು. ನಾವು ಸಂಘದ ಅಧ್ಯಕ್ಷರಾದ ಮೇಲೆ ನಮ್ಮ ಕೆಲಸದ ಜೊತೆಗೆ ಸಂಘದ ಏಳಿಗೆ ದುಡಿಯಬೇಕು. ಅದೇ ರೀತಿ ಜವಾಬ್ದಾರಿ ಹೆಚ್ಚಾಗಿರುತ್ತದೆ ಅದನ್ನು ಅರಿತು ನಡೆಯಬೇಕು ಎಂದರು ಗ್ರಾಮೀಣ ಪ್ರದೇಶದ ಪತ್ರಕರ್ತ ಸಂಘಗಳು ಉತ್ತಮ ರೀತಿ ಕೆಲಸ ಮಾಡುತ್ತಿವೆ ಸಂಘದಲ್ಲಿ ಚುನಾವಣೆ ಬರುತ್ತದೆ ಹೋಗುತ್ತದೆ ಸೋತು ಗೆದ್ದವರು ಅದನ್ನೆಲ್ಲ ಮರೆತು ಒಂದಾಗಿ ಕೆಲಸ ಮಾಡಬೇಕು ಎಂದು ಕಿವಿ ಮಾತು ಹೇಳಿದರು.

# 4.50 ಲಕ್ಷ ಮೌಲ್ಯದ ಗಾಂಜಾ ಜಪ್ತಿ

• ಉದಯವಾಹಿನಿ, ತುಮಕೂರು

ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ತಿಲಕ್ ಪಾರ್ಕ್ ಠಾಣೆಯ ಪೊಲೀಸರು ಬಂಧಿಸಿ, 4.50 ಲಕ್ಷ ಮೌಲ್ಯದ 1 ಕೆ.ಜಿ 266 ಗ್ರಾಂ ಗಾಂಜಾ ಸೊಪ್ಪು, ಒಂದು ಕಾರ್ ಜಪ್ತಿ ಮಾಡಿದ್ದಾರೆ. ನಗರದ ಸಪ್ತಗಿರಿ ಬಡಾವಣೆಯ ಆರ್.ಎಲ್.ರವಿ ಬಂಧಿತ. ಈತ ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣ ಹೋಬಳಿಯ ಕುರೆಹಳ್ಳಿ ನಿವಾಸಿ. ಕೆಲ ದಿನಗಳಿಂದ ನಗರದಲ್ಲಿ ನೆಲೆಸಿದ್ದ. ರವಿ ಕಾರಿನಲ್ಲಿ ಗಾಂಜಾ ಸೊಪ್ಪು ತಂದು ನಗರದ ವಿವಿಧೆಡೆ ಮಾರಾಟ ಮಾಡುತ್ತಿದ್ದ.

ನೈಫ್ ಪ್ಯಾಲೆಸ್ ಹಿಂಭಾಗ ಗಾಂಜಾ ಮಾರಾಟ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ರವಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಡಿವೈಎಸ್‌ಪಿ ಕೆ.ಆರ್.ಚಂದ್ರಶೇಖರ್, ತಿಲಕ್ ಪಾರ್ಕ್ ಠಾಣೆಯ ಸಿಪಿಐ ಜಿ.ಪುರುಷೋತ್ತಮ, ಪಿಎಸ್‌ಐ ಸಂಜಯ್ ಕುಮಾರ್ ಕಾಂಬ್ಳೆ, ಎಎಸ್‌ಐ ನಂಜೇಗೌಡ, ಸಿಬ್ಬಂದಿ ಎಂ.ಎಸ್.ಅಬೀದ್, ಲೋಕೇಶ್ ಬಾಬು, ಸಿದ್ದಲಿಂಗಾರಾಧ್ಯ, ಸಿದ್ದೇಶ್ವರ, ಲೋಕೇಶ್, ನಿಜಾಮುದ್ದೀನ್, ಸುನಿಲ್ ಲಮಾಣಿ, ಸುನಿಲ್‌ಕುಮಾರ್, ರಾಮಕೃಷ್ಣ, ಶಶಿಕುಮಾರನಾಯ್ಕ, ಪರಶುರಾಮ ಹೊಸಮನಿ, ಯೋಗೀಶ್ ಅವರ ತಂಡ ಕಾರ್ಯಾಚರಣೆ ನಡೆಸಿತ್ತು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ತಿಳಿಸಿದ್ದಾರೆ.

# ನಿರ್ವಹಣೆ ಕೊರತೆ: ಮುಳ್ಳಿನ ಪೊದೆಯಂತಾದ ಉದ್ಯಾನವನ

• ಉದಯವಾಹಿನಿ, ಕೆಜಿಎಫ್

ಕೇಂದ್ರ ಸರ್ಕಾರಿ ಸ್ವಾಮ್ಯದ ಉದ್ಯಮ ಬೆಮಲ್ ತನ್ನ ಸಿಎಸ್ ಆರ್ ನಿಧಿಯಿಂದ ಅಭಿವೃದ್ಧಿಪಡಿಸಿದ್ದ ಉದ್ಯಾನವನವು ಈಗ ನಿರ್ವಹಣೆ ಕೊರತೆಯಿಂದ ಮುಳ್ಳು ಪೊದೆಗಳ ಉದ್ಯಾನವಾಗಿ ಮಾರ್ಪಟ್ಟಿದೆ. ನಗರದ ಊರಿಗಾಂ ಫ್ಲೈಲೈಟ್ಸ್ ವೃತ್ತದ ಬಳಿ ರಸ್ತೆಯ ಎರಡೂ ಬದಿ ಬೆಮಲ್ ನಾಲ್ಕು ಉದ್ಯಾನ ಅಭಿವೃದ್ಧಿಪಡಿಸಿತ್ತು. ಚೆಂದದ ಗಿಡಗಳು ಮತ್ತು ವಾಟರ್ ಫಾಲ್ಸ್ ನಿರ್ಮಾಣ ಮಾಡಲಾಗಿತ್ತು.

ನಂದಿದುರ್ಗ ಮೈನ್ ಕಮಾನಿನಿಂದ ಹುಣಸೆ, ಹತ್ತಿ, ಮಹಾಗನಿ, ಪೀಪಲ್ ಟೀ ಗಿಡಗಳನ್ನು ನೆಡೆಲಾಗಿತ್ತು. ಅವುಗಳ ಭದ್ರತೆಗೆ ಪ್ಲಾಸ್ಟಿಕ್ ಡ್ರಮ್‌ಗಳನ್ನು ಅಳವಡಿಸಲಾಗಿತ್ತು. ರೈಲ್ವೆ ಯೂನಿಟ್ ರಸ್ತೆ ಬದಿ ಅಶೋಕ ಗಿಡಗಳು ಸೇರಿ ಒಟ್ಟಾರೆ ನಾಲ್ಕು ಸಾವಿರ ಗಿಡಗಳನ್ನು ಹಾಕಲಾಗಿತ್ತು. ಬೊಂಬುಗಳನ್ನು ನೆಟ್ಟು, ಸಾರ್ವಜನಿಕರು ಕುಳಿತುಕೊಳ್ಳಲು ಬೆಂಚ್‌ಗಳನ್ನೂ ಅಳವಡಿಸಲಾಗಿತ್ತು. ಬಸ್ ಪ್ರಯಾಣಿಕರ ಅನುಕೂಲಕ್ಕಾಗಿ ತಂಗುದಾಣವನ್ನೂ ನಿರ್ಮಿಸಿ, ಭದ್ರತೆ ಮತ್ತು ನಿರ್ವಹಣೆಗಾಗಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಆದರೆ ಕಾಲಕ್ರಮೇಣ ಆರ್ಥಿಕ ಮಿತವ್ಯಯ ಸಾಧಿಸುವ ದೃಷ್ಟಿಯಿಂದ ಭದ್ರತಾ ಸಿಬ್ಬಂದಿಯನ್ನು ತೆಗೆಯಲಾಯಿತು. ಬೆಮಲ್ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಕೂಡ ಉದ್ಯಾನವನ್ನು ನಿರ್ಲಕ್ಷ್ಯ ಮಾಡತೊಡಗಿದರು. ಒಂದು ಕಾಲಕ್ಕೆ ನಗರಕ್ಕೆ ಆಗಮಿಸುವವರಿಗೆ ಫ್ಲೈಲೈಟ್ಸ್ ವೃತ್ತ ಮತ್ತು ಅದರ ಸುತ್ತಲೂ ಅಂದದ ಉದ್ಯಾನ ಕಣ್ಮನ ಸೆಳೆಯುತ್ತಿದ್ದವು. ಬೆಮಲ್ ನಿರ್ವಹಣೆ ಮಾಡುವುದನ್ನು ನಿಲ್ಲಿಸಿದ ಬಳಿಕ ನಗರಸಭೆಯು ಅದರ ಕಾಳಜಿ ವಹಿಸಿಕೊಳ್ಳಲಿಲ್ಲ.


ಉದಯವಾಹಿನಿ ಚಿತ್ರ

ಇದರಿಂದಾಗಿ ಇಂದು ಇಡೀ ಉದ್ಯಾನ ಪೊದೆಗಳಿಂದ, ಮುಳ್ಳು ಗಿಡಗಳಿಂದ ತುಂಬಿದೆ. ಕೆಲ ಬಗೆಯ ಆಕರ್ಷಕ ಮತ್ತು ಅಪರೂಪದ ಗಿಡಗಳು ಮುಳ್ಳು ಪೊದೆಗಳ ಮಧ್ಯದಿಂದ ಇಂದಿಗೂ ಕಾಣಸಿಗುತ್ತದೆ. ಆದರೆ, ಅವುಗಳ ಚೆಂದವನ್ನು ಮುಳ್ಳುಪೊದೆಗಳು ಮುಚ್ಚಿಹಾಕಿವೆ. ಬೆಮಲ್ ಈಗ ತೋಟಗಾರಿಕೆ ಇಲಾಖೆಯನ್ನು ಮುಚ್ಚಿದೆ.

### ನಿಲ್ದಾಣ ಅಂದ ಕಳೆದುಕೊಂಡಿದೆ

**ಇಲಾಖೆಯಲ್ಲಿದ್ದ ತೋಟಗಾರಿಕೆ ಅಧಿಕಾರಿಗಳು ನಿವೃತ್ತರಾದ ನಂತರ ತೋಟಗಾರಿಕೆ ಉಸ್ತುವಾರಿಯನ್ನು ಈಗ ಗುತ್ತಿಗೆ ನೌಕರರು ನಿರ್ವಹಿಸುತ್ತಿದ್ದಾರೆ. ಬೆಮಲ್ ನಿರ್ಮಾಣ ಮಾಡಿದ್ದ ಬಸ್ ನಿಲ್ದಾಣ ಅಂದ ಕಳೆದುಕೊಂಡಿದೆ. ಅದರಲ್ಲಿದ್ದ ಬೋರ್ಡ್ ಮತ್ತು ಗ್ರಾನೈಟ್ ಕಲ್ಲುಗಳನ್ನು ಕಳ್ಳರು ಕದೊಯ್ದಿದ್ದಾರೆ. ನಿಲ್ದಾಣ ಕಸ ಕಡ್ಡಿಗಳಿಂದ ಕೂಡಿದ್ದು, ಬಂಗಾರಪೇಟೆ ಕಡೆಗೆ ಹೋಗುವ ಪ್ರಯಾಣಿಕರು ನಿಲ್ದಾಣ ಬಿಟ್ಟು ರಸ್ತೆ ಬದಿಯಲ್ಲೇ ಬಸ್‌ಗಳಿಗಾಗಿ ಕಾಯುವ ದುಃಸ್ಥಿತಿ ಎದುರಾಗಿದೆ.**

# ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗೆ ಮರುಜೀವ

## • ಲಕ್ಷಾಂತರ ಜನರು ಪರೋಕ್ಷವಾಗಿ ಬದುಕು ಕಟ್ಟಿಕೊಂಡಿದ್ದ ಅಂತಹ ವೈಭವದ ದಿನಗಳು ಮರುಕಳಿಸುವ ದಿನಗಳು ದೂರವಿಲ್ಲ

• ಉದಯವಾಹಿನಿ, ಮಂಡ್ಯ

ಭದ್ರಾವತಿಯಲ್ಲಿರುವ ಸರ್ ಎಂ.ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯನ್ನು ಸುಮಾರು 15,000 ಕೋಟಿ ರೂ.ವೆಚ್ಚದಲ್ಲಿ ಪುನಶ್ಚೇತನಗೊಳಿಸಲು ನಿರ್ಧರಿಸಲಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ನಿರುದ್ಯೋಗ ನಿವಾರಣೆ ಮಾಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಅನೇಕ ಉಪಕ್ರಮಗಳನ್ನು ಕೈಗೊಂಡಿದೆ. ಕೈಗಾರಿಕಾಭಿವೃದ್ಧಿಗೆ ಹೆಚ್ಚು ಒತ್ತು ಕೊಡಲಾಗುತ್ತಿದೆ.

ಆ ನಿಟ್ಟಿನಲ್ಲಿಯೇ ಭದ್ರಾವತಿ ಕಾರ್ಖಾನೆಗೆ ಮರುಜೀವ ಕೊಡಲು ತೀರ್ಮಾನ ಮಾಡಲಾಗಿದೆ ಎಂದರು. ಮೈಸೂರು ಮಹಾ ಸಂಸ್ಥಾನದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯ ಅವರ ದೂರದೃಷ್ಟಿಯ ಫಲವಾಗಿ ಭದ್ರಾವತಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ ಸ್ಥಾಪನೆ ಆಗಿತ್ತು. ಸಾವಿರಾರು ಜನರಿಗೆ ಅಲ್ಲಿ ಉದ್ಯೋಗ ಅವಕಾಶ ಸಿಕ್ಕಿತ್ತು. ಲಕ್ಷಾಂತರ ಜನರು ಪರೋಕ್ಷವಾಗಿ ಬದುಕು ಕಟ್ಟಿಕೊಂಡಿದ್ದರು. ಅಂತಹ ವೈಭವದ ದಿನಗಳು ಮರುಕಳಿಸುವ ದಿನಗಳು ದೂರವಿಲ್ಲ ಎಂದು ಅವರು ಹೇಳಿದರು.

**15,000 ಕೋಟಿ ರೂ. ವೆಚ್ಚದಲ್ಲಿ ಪುನರ್‌ಶ್ಚೇತನ**

**ಐಐಟಿ ಸ್ಥಾಪನೆಗೆ ಸಚಿವರ ಸ್ಪಂದನೆ:** ಮಂಡ್ಯದ ಕೆಆರ್‌ಎಸ್ ಬಳಿ ಐಐಟಿ ಸ್ಥಾಪನೆ ಮಾಡುವ ಬಗ್ಗೆ ಶಾಸಕ ದಿನೇಶ್ ಗೂಳಿಗೌಡ ಮಾಡಿದ ಮನವಿಯ ಬಗ್ಗೆ ಸಕಾರಾತಕವಾಗಿ ಸ್ಪಂದಿಸಿದ ಕೇಂದ್ರ ಸಚಿವರು, ಈ ಬಗ್ಗೆ ಪರಿಶೀಲನೆ ಮಾಡೋಣ. ಸಂಬಂಧಪಟ್ಟ ಕೇಂದ್ರ ಸಚಿವರ ಜತೆ ಖಂಡಿತಾ ಚರ್ಚೆ ಮಾಡುತ್ತೇನೆ. ರಾಜ್ಯದಲ್ಲಿ ಈಗಾಗಲೇ ಒಂದು ಐಐಟಿ ಸ್ಥಾಪನೆಯಾಗಿದೆ, ಎಲ್ಲರೂ ಒಟ್ಟಿಗೆ ಪ್ರಯತ್ನ ಮಾಡಿ ರಾಜ್ಯಕ್ಕೆ ಮತ್ತೊಂದು ಐಐಟಿ ತರೋಣ. ಅದಕ್ಕೆ ಎಲ್ಲರ ಸಹಕಾರ ಇರಲಿ ಎಂದು ತಿಳಿಸಿದರು. ತ್ರಿಭಾಷಾ ಸೂತ್ರಕ್ಕಿಂತ ದ್ವಿಭಾಷಾ ಸೂತ್ರ ಅಗತ್ಯ ಎಂದು ಸಮ್ಮೇಳನದ ಅಧ್ಯಕ್ಷರು ಪ್ರತಿಪಾದಿಸಿದ್ದಾರೆ. ಆದರೆ, ಗ್ರಾಮೀಣ ಪ್ರದೇಶದ ಪೋಷಕರಿಗೆ ಬೃಹತ್ತಾದ ಸವಾಲು ಇದೆ.

**ಸಮಾಜದ ಶಾಂತಿ ಕಾಪಾಡುವ ಸಿನಿಮಾಗಳು ಬರಲಿ :** ಇಂದಿನ ಚಿತ್ರರಂಗದಲ್ಲಿ ಉತ್ತಮ, ಸದಭಿರುಚಿಯ ಚಿತ್ರಗಳು ಬರಬೇಕು, ಉತ್ತಮ ಕಥೆಗಳ, ಸಮಾಜಕ್ಕೆ ಒಳ್ಳೆಯದು ಮಾಡುವ ಸಿನಿಮಾಗಳು ಹೆಚ್ಚೆಚ್ಚು ಬರಬೇಕು. ಸಮಾಜದಲ್ಲಿ ನೆಮದಿಯ ವಾತಾವರಣ ನೆಲೆಸಬೇಕಿದೆ.

ಮನುಷ್ಯ ಸಂಬಂಧಗಳು ಹಾಳಾಗಬಾರದು. ಅವುಗಳನ್ನು ಕಾಪಾಡಿಕೊಳ್ಳಬೇಕು. ಹಳ್ಳಿಗಳಲ್ಲಿ ಎಲ್ಲರೂ ಕೂತು ಪಂಕ್ತಿಭೋಜನ ಮಾಡುವ ದಿನಗಳು ಮತ್ತೆ ಬರಬೇಕು. ಈಗ ಎಲ್ಲವೂ ಇದೆ, ಆದರೆ ಏನೂ ಇಲ್ಲದ ಪರಿಸ್ಥಿತಿಯಲ್ಲಿ ನಾವಿದ್ದೇವೆ. ಹಿಂದಿನ ನಮ್ಮ ಸಂಸ್ಕೃತಿ, ಬಾಂಧವ್ಯ, ಸಂಬಂಧಗಳು ಮರುಕಳಿಸಬೇಕು ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

**ಕನ್ನಡ ಶಾಲೆಗಳಿಗೆ ಪ್ರೋತ್ಸಾಹ ಕೊಡುವ ವಿಷಯದಲ್ಲಿ ಲೋಪಗಳಾಗಿವೆ. ಅದನ್ನು ನಾವು ಸರಿ ಮಾಡಿಕೊಳ್ಳಬೇಕು. ಇಲ್ಲವಾದರೆ ಮಕ್ಕಳು, ಪೋಷಕರು ಮಾತೃಭಾಷೆಯಿಂದ ವಿಮುಖರಾಗುತ್ತಾರೆ ಎಂದು ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು**
**-ಹೆಚ್.ಡಿ.ಕುಮಾರಸ್ವಾಮಿ**

### ಕನ್ನಡವನ್ನು ಉಳಿಸಬೇಕು

**ಒಂದು ಕಡೆ ತಮ ಮಾತೃಭಾಷೆ ಕನ್ನಡವನ್ನು ಉಳಿಸಬೇಕು, ಇನ್ನೊಂದು ಕಡೆ ಜಾಗತಿಕ ಓಟಕ್ಕೆ ಅನುಗುಣವಾಗಿ ತಮ ಮಕ್ಕಳ ಭವಿಷ್ಯವನ್ನೂ ಕಟ್ಟಿಕೊಡಬೇಕು. ಇಂತಹ ತಳಮಳ, ಸವಾಲು, ಆತಂಕದಲ್ಲಿ ಪೋಷಕರು ಇದ್ದಾರೆ. ಅದಕ್ಕೆ ಪರಿಹಾರವೇನು ಎಂಬ ಬಗ್ಗೆ ನಾವೆಲ್ಲರೂ ಆಲೋಚನೆ ಮಾಡಬೇಕು ಎಂದು ಎಂದು ಅವರು ಪ್ರತಿಪಾದಿಸಿದರು.**

# ಮಿನಿ ನ್ಯೂಸ್

## ಕೆರೆ ಏರಿ ಒಡೆದು ನೀರು ಪೋಲು


ಉದಯವಾಹಿನಿ ಚಿತ್ರ

• ಉದಯವಾಹಿನಿ ಗುಂಡ್ಲುಪೇಟೆ

ತಾಲ್ಲೂಕಿನ ವಡೆಯನಪುರ ಬಸವನಕಟ್ಟೆ ಕೆರೆಯ ಕೋಡಿ ಬೀಳುವ ಜಾಗದಲ್ಲಿ ಏರಿ ಒಡೆದು ನೀರು ಹೊರ ಬರುತ್ತಿದ್ದು, ರೈತರು ಆತಂಕಗೊಂಡಿದ್ದಾರೆ. ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ಹುತ್ತೂರು ಏತ ನೀರಾವರಿ ಜಲಾಶಯದಿಂದ ವಡ್ಡಗೆರೆ ಮತ್ತು ಅದರ ಮುಂದಿನ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಈಗ ವಡೆಯನಪುರ ಬಸವನಕಟ್ಟೆ ಕೆರೆ ತುಂಬಿದ್ದು, ಕೋಡಿಯಲ್ಲಿ ನೀರು ಹರಿಯುವ ಜೊತೆಗೆ ಟ್ರ್ಯಾಕ್ಟರ್ ಓಡಾಟದಿಂದ ಸವಕಳಿಯಾಗಿತ್ತು.

ಏರಿ ಭಾಗದಲ್ಲಿ ನೀರು ಹೊರ ಹರಿಯುತ್ತಿದ್ದು ಏರಿಗೆ ಅಪಾಯವಾಗುವ ಸಾಧ್ಯತೆ ಇದೆ. ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಆರಿಸಿಣ ಬೆಳೆಗಾರರ ರಾಜ್ಯ ಸಂಘಟನೆ ಸಂಚಾಲಕ ನಾಗಾರ್ಜುನಕುಮಾರ್ ಒತ್ತಾಯಿಸಿದ್ದಾರೆ.

## ಅಮಿತ್ ಶಾ ಕ್ಷಮೆಗೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ ಮಡಿಕೇರಿ

ಈ ಕೂಡಲೇ ಕೇಂದ್ರ ಸಚಿವ ಅಮಿತ್ ಶಾ ಅವರು ಸಾರ್ವಜನಿಕರಲ್ಲಿ ಕ್ಷಮೆ ಕೇಳಬೇಕೆಂದು ಒತ್ತಾಯಿಸಿ ಸಿಪಿಐ (ಎಂ) ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ವತಿಯಿಂದ ನೆಲ್ಲಿಹುದಿಕೇರಿ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು. ಸಂಸತ್ತಿನಲ್ಲಿ ಕೇಂದ್ರ ಸಚಿವ ಅಮಿತ್ ಶಾ ಅವರು ಬಿ.ಆರ್.ಅಂಬೇಡ್ಕರ್ ಅವರು ಅಪಮಾನ ಮಾಡಿದ್ದಾರೆ ಎಂದು ಅವರು ಇದೇ ವೇಳೆ ಆರೋಪಿಸಿದರು.

ಈ ವೇಳೆ ಮಾತನಾಡಿದ ಕೊಡಗು ಜಿಲ್ಲಾ ಸಿಪಿಐ(ಎಂ) ಸಂಘಟನಾ ಸಮಿತಿ ಕಾರ್ಯದರ್ಶಿ ಎಚ್.ಬಿ.ರಮೇಶ್, 'ದೇಶದಲ್ಲಿ ಎಲ್ಲರಿಗೂ ಸಮಾನ ಅವಕಾಶ ನೀಡಿದ ಅಂಬೇಡ್ಕರ್ ಕುರಿತು ಅಮಿತ್ ಶಾ ಆಡಿರುವ ಮಾತುಗಳನ್ನು ಒಪ್ಪಲು ಸಾಧ್ಯವಿಲ್ಲ' ಎಂದು ಖಂಡಿಸಿದರು.

ಪಕ್ಷದ ನೆಲ್ಲಿಹುದಿಕೇರಿ ಶಾಖಾ ಕಾರ್ಯದರ್ಶಿ ಪಿ.ಆರ್.ಭರತ್ ಮಾತನಾಡಿ, ಬಿಜೆಪಿಯ ಇಂತಹ ನಡವಳಿಕೆಗಳಿಂದಲೇ ಹಂತ ಹಂತವಾಗಿ ಸಂಸತ್ತಿನಲ್ಲಿನ ಅವರ ಸ್ಥಾನಗಳು ಕಡಿಮೆಯಾಗುತ್ತಿವೆ. ಜನರು ತಿರಸ್ಕಾರ ಮಾಡಲು ಆರಂಭಿಸಿದ್ದಾರೆ. ಒಂದು ವೇಳೆ ಬಿಜೆಪಿ ಇದೇ ಬಗೆಯ ನಡವಳಿಕೆ ತೋರಿದರೆ ಇನ್ನು ಮುಂದೆಯೂ ಜನರು ದೊಡ್ಡ ಮಟ್ಟದಲ್ಲಿ ಹೋರಾಟಕ್ಕೆ ಇಳಿಯಲಿದ್ದಾರೆ' ಎಂದು ಅವರು ಎಚ್ಚರಿಕೆ ನೀಡಿದರು. ಟಿ.ಟಿ. ಉದಯನ್, ಹಬೀಬ್ ಮುಸ್ತಾಫ ಶೌಕತ್, ಬೋಜಿ, ಲಲಿತಾ, ಚಂದ್ರನ್, ಮಣಿ, ಕಾವೇರಿ ಭಾಗವಹಿಸಿದ್ದರು.

## ಪಿಯುಸಿ ವಿದ್ಯಾರ್ಥಿನಿ ಆತ್ಮಹತ್ಯೆ

• ಉದಯವಾಹಿನಿ ಕೋಲಾರ

ಪಿಯುಸಿ ವಿದ್ಯಾರ್ಥಿನಿ ಒಬ್ಬಳು ಹಾಸ್ಟೆಲ್ ನಲ್ಲಿ ಮಂಚಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೋಲಾರದ ಶ್ರೀನಿವಾಸಪುರ ಪಟ್ಟಣದ ಹೊರವಲಯದ ಹಾಸ್ಟೆಲ್ ನಲ್ಲಿ ಈ ಒಂದು ಘಟನೆ ನಡೆದಿದೆ. ಮೃತ ವಿದ್ಯಾರ್ಥಿನಿಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಗಂಗರೇಕಾಲುವೆ ಗ್ರಾಮದ ಬಿಂದುಶ್ರೀ (17) ಎಂದು ತಿಳಿದು ಬಂದಿದೆ. ಶ್ರೀನಿವಾಸಪುರ ಪಟ್ಟಣದ ಹೊರವಲಯದ ಭೈರವೇಶ್ವರ ಕಾಲೇಜಿನಲ್ಲಿ ಪಿಯುಸಿ ಓದುತ್ತಿದ್ದ ಯುವತಿ ಕಾಲೇಜು ಹಾಸ್ಟೆಲ್‌ನಲ್ಲಿ ವಾಸವಾಗಿದ್ದಳು. ಆದರೆ ಇಂದು ಬಾಲಕಿ ಹಾಸ್ಟೆಲ್ ಮಂಚಕ್ಕೆ ಯುವತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ ಎಂದು ಮಾಹಿತಿ ದೊರೆತಿದೆ. ವಿದ್ಯಾರ್ಥಿನಿಯ ಆತ್ಮಹತ್ಯೆ ಕುರಿತು ಶ್ರೀ ನಿವಾಸಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿದು ಬಂದಿದೆ.

## ವಿದ್ಯುತ್ ಅವಘಡಕ್ಕೆ ಪತಿ ಬಲಿ
### ಪ್ರಾಣಾಪಾಯದಿಂದ ಪಾರಾದ ತಾಯಿ, ಪತ್ನಿ

• ಉದಯವಾಹಿನಿ, ಮೈಸೂರು

ಮೈಸೂರಿನಲ್ಲಿ ಘೋರ ದುರಂತ ಒಂದು ಸಂಭವಿಸಿದ್ದು, ಮನೆಯಲ್ಲಿ ತಡರಾತ್ರಿ ವಿದ್ಯುತ್ ಅವಘಡ ಸಂಭವಿಸಿದ್ದರಿಂದ, ವ್ಯಕ್ತಿಯೋರ್ವ ಸಾವನ್ನಪ್ಪಿದ್ದು ಅದೃಷ್ಟವಶಾತ್ ಆತನ ಪತ್ನಿ ಹಾಗೂ ತಾಯಿ ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ಮೈಸೂರು ಜಿಲ್ಲೆ ಟಿ ನರಸೀಪುರ ತಾಲ್ಲೂಕಿನ ಕೊತ್ತೆಗಾಲ ಗ್ರಾಮದಲ್ಲಿ ನಡೆದಿದೆ. ಹೌದು ಈ ಒಂದು ವಿದ್ಯುತ್ ಅವಘಡದಲ್ಲಿ ಲೋಕೇಶ್ (33) ಎನ್ನುವ ವ್ಯಕ್ತಿ ಸಾವನ್ನಪ್ಪಿದ್ದರೆ ತಡರಾತ್ರಿ ಲೋಕೇಶ್ ಪತ್ನಿ ಹಾಗೂ ತಾಯಿಗೆ ವಿದ್ಯುತ್ ತಗುಲಿದೆ.

ಈ ಸಂದರ್ಭದಲ್ಲಿ ತಾಯಿ ಹಾಗೂ ಪತ್ನಿಯನ್ನು ರಕ್ಷಿಸಲು ಲೋಕೇಶ್ ಮುಂದಾಗಿದ್ದಾರೆ ಈ ವೇಳೆ ವಿದ್ಯುತ್ ಶಾಕ್ ನಿಂದ ಲೋಕೇಶ್ ಮೃತಪಟ್ಟಿದ್ದಾರೆ. ಲೋಕೇಶ್ ಪತ್ನಿ ಕಾವ್ಯ ಹಾಗೂ ತಾಯಿ ನಾಗಮ್ಮಗೆ ಗಂಭೀರವಾಗಿ ಗಾಯವಾಗಿದ್ದು, ತಕ್ಷಣ ಅವರನ್ನ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಚೆಸ್ಕಾಂ ಹಾಗೂ ಪೊಲೀಸರ ಭೇಟಿ ಪರಿಶೀಲನೆ ನಡೆಸಿದ್ದಾರೆ. ಟಿ ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಗನ ಸಾವಿನ ಸುದ್ದಿ ಕೇಳಿ ತಾಯಿಯೂ ಕೊನೆಯುಸಿರು

• ಉದಯವಾಹಿನಿ, ಮಂಡ್ಯ

ಜಿಲ್ಲೆಯಲ್ಲಿ ಮನಕಲಕುವ ಘಟನೆ ಎನ್ನುವಂತೆ ಮಗ ಸಾವನ್ನಪ್ಪಿರುವಂತ ಸುದ್ದಿಯನ್ನು ಕೇಳಿದಂತ ತಾಯಿ ಕೂಡ ಕುಸಿದು ಬಿದ್ದು ಸ್ಥಳದಲ್ಲೇ ಸಾವನ್ನಪ್ಪಿರುವಂತ ಘಟನೆ ನಡೆದಿದೆ. ಮಂಡ್ಯದ ಮೆಟ್ಕಲ್ ಗ್ರಾಮದ ಕೃಷ್ಣಮೂರ್ತಿ(20) ಎಂಬಾತ ಅಪಘಾತದಲ್ಲಿ ಸಾವನ್ನಪ್ಪಿದ್ದನು. ಈ ವಿಷಯ ತಿಳಿದಂತ ಆತನ ತಾಯಿ ಮಹದೇವಮ್ಮ ಕುಸಿದು ಬಿದ್ದು ಸಾವನ್ನಪ್ಪಿರುವುದಾಗಿ ತಿಳಿದು ಬಂದಿದೆ. ಅಂದಹಾಗೇ ಡಿ.21ರಂದು ಈ ಘಟನೆ ನಡೆದಿದೆ.

ಎರಡು ದಿನಗಳ ಬಳಿಕ ತಡವಾಗಿ ಬೆಳಕಿಗೆ ಬಂದಿದೆ. ಬೈಕ್ ನಲ್ಲಿ ತೆರಳುತ್ತಿದ್ದಂತ ಕೃಷ್ಣಮೂರ್ತಿ ನಿಯಂತ್ರಣ ತಪ್ಪಿ ವಿದ್ಯುತ್ ಕಂಬಕ್ಕೆ ಡಿಕ್ಕಿಯಾಗಿ ತೀವ್ರವಾಗಿ ಗಾಯಗೊಂಡಿದ್ದನು. ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೇ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದನು. ಈ ವಿಷಯನ್ನು ಗ್ರಾಮಸ್ಥರು ಆತನ ತಾಯಿ ಮಹದೇವಮ್ಮಗೆ ತಿಳಿಸಿದ್ದರು. ಈ ವಿಷಯ ತಿಳಿದು ಆಘಾತಗೊಂಡ ಅವರು ಸಾವನ್ನಪ್ಪಿದ್ದಾರೆ.

# ಪ್ರವಾಸಿ ತಾಣಗಳಲ್ಲಿ ಶೌಚಾಲಯಗಳ ಕೊರತೆ: ವಿದ್ಯಾರ್ಥಿಗಳು ಪರದಾಟ

**• ವಿಶ್ವಪ್ರಸಿದ್ಧ ಪ್ರವಾಸಿ ತಾಣದ ಆವರಣದಲ್ಲಿ ಶೌಚಾಲಯ ಸೌಲಭ್ಯ ಕಲ್ಪಿಸಿಲ್ಲವೇಕೆ ಎಂದು ಶಾಲಾ ಶಿಕ್ಷಕರ ಪ್ರಶ್ನೆ**

• ಉದಯವಾಹಿನಿ ಚಿತ್ರದುರ್ಗ

ನಾವು ಮೈಸೂರು ಜಿಲ್ಲೆಯ ಪ್ರೌಢಶಾಲೆಯೊಂದರ 110 ಮಕ್ಕಳೊಂದಿಗೆ ಪ್ರವಾಸಕ್ಕೆ ಬಂದಿದ್ದೇವೆ. ರಾತ್ರಿ ಹೊರಟು ಬೆಳಿಗ್ಗೆ 6 ಗಂಟೆಗೆ ಸರಿಯಾಗಿ ಚಿತ್ರದುರ್ಗದ ಕಲ್ಲಿನ ಕೋಟೆ ತಲುಪಿದೆವು.

ನಮ್ಮ ಮಕ್ಕಳಿಗೆ, ಸಿಬ್ಬಂದಿಗೆ ಕೋಟೆಯ ಬಳಿ ಶೌಚಾಲಯ ಇರಬಹುದು ಎಂದು ಭಾವಿಸಿದ್ದೆವು. ಆದರೆ ಅಲ್ಲಿ ಯಾವುದೇ ಶೌಚಾಲಯ ಸೌಲಭ್ಯವಿಲ್ಲದ ಕಾರಣ ನಮ್ಮ ಮಕ್ಕಳು ಪರದಾಡಬೇಕಾಯಿತು. ಬಾಲಕರು ಬಯಲಿನಲ್ಲಿ ಶೌಚ ಮಾಡಿದರು, ಬಾಲಕಿಯರನ್ನು ಸಾರಿಗೆ ಸಂಸ್ಥೆ ಬಸ್ ನಿಲ್ದಾಣದ ಆವರಣಕ್ಕೆ ಕಳುಹಿಸಬೇಕಾಯಿತು.

**ಅಧಿಕಾರಿಗಳ ವಿರುದ್ಧ ಹಿಡಿಶಾಪ**

ವಿಶ್ವಪ್ರಸಿದ್ಧ ಪ್ರವಾಸಿ ತಾಣದ ಆವರಣದಲ್ಲಿ ಶೌಚಾಲಯ ಸೌಲಭ್ಯ ಕಲ್ಪಿಸಿಲ್ಲವೇಕೆ' ಎಂದು ಆ ಶಾಲೆಯ ಮುಖ್ಯಶಿಕ್ಷಕರು ಪ್ರಶ್ನಿಸಿದರು.

ಡಿಸೆಂಬರ್ ಆರಂಭವಾದೊಡನೆ ರಾಜ್ಯದಾದ್ಯಂತ ಶಾಲಾ ವಿದ್ಯಾರ್ಥಿಗಳು ಪ್ರವಾಸಕ್ಕೆ ತೆರಳುತ್ತಾರೆ. ನಗರದ ಕೋಟೆ ಆವರಣಕ್ಕೆ ಬರುವ ಶಾಲಾ ಮಕ್ಕಳು ಶೌಚಾಲಯವಿಲ್ಲದೇ ಪರದಾಡುತ್ತಿರುವ ಸ್ಥಿತಿ ಇಂದು ನಿನ್ನೆಯದಲ್ಲ. ಸ್ಥಳೀಯ ಜನಪ್ರತಿನಿಧಿಗಳು, ಜಿಲ್ಲಾಡಳಿತ ಭಾರತೀಯ ಪುರಾತತ್ವ ಮತ್ತು ಸರ್ವೇಕ್ಷಣಾ (ಎಎಸ್ಐ) ಅಧಿಕಾರಿಗಳಿಗೆ ಈ ವಿಷಯ ಚೆನ್ನಾಗಿ ಗೊತ್ತಿದೆ. ಆದರೂ ಪ್ರವಾಸಕ್ಕೆ ಬರುವ ಶಾಲಾ ವಿದ್ಯಾರ್ಥಿಗಳಿಗೆ, ಪ್ರವಾಸಿಗರಿಗೆ ಇಲ್ಲಿಯವರೆಗೂ ಕನಿಷ್ಠ ಶೌಚಾಲಯ ಸೌಲಭ್ಯವನ್ನೂ ಒದಗಿಸಿಕೊಡಲು ಸಾಧ್ಯವಾಗಿಲ್ಲ. ರಾಜ್ಯದ ಮೂಲೆಮೂಲೆಗಳಿಂದ ಜನರು ಚಿತ್ರದುರ್ಗಕ್ಕೆ ಪ್ರವಾಸಕ್ಕೆ ಬರುತ್ತಾರೆ. ಸಾಮಾನ್ಯವಾಗಿ ಬೆಳಿಗ್ಗೆಯ ಹೊತ್ತಿನಲ್ಲಿಯೇ ಮಕ್ಕಳು ಚಿತ್ರದುರ್ಗಕ್ಕೆ ಬರುತ್ತಿದ್ದಾರೆ. ಕೋಟೆಯ ಆವರಣದಲ್ಲಿ ಶೌಚಕ್ಕೆ ಯಾವುದೇ ಸೌಲಭ್ಯ ಇಲ್ಲದ ವಿಚಾರ ಗೊತ್ತಾಗಿ ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.

ಕೋಟೆಯ ಒಳಭಾಗದಲ್ಲಿ ಒಂದೆರಡು ಕಡೆ ಶೌಚಾಲಯಗಳಿವೆ. ಆದರೆ ಅಲ್ಲಿ ಸರಿಯಾಗಿ ನೀರು ಬಾರದಿರುವ ಕಾರಣ ಮಕ್ಕಳು, ಪ್ರವಾಸಿಗರ ಬಳಕೆಗೆ ಯೋಗ್ಯ ಸ್ಥಿತಿಯಲ್ಲಿ ಇಲ್ಲ. ಕೋಟೆಯೊಳಗೆ ಹಲವೆಡೆ ಹೈಟೆಕ್ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅವುಗಳನ್ನು ನಿರ್ಮಾಣ ಮಾಡಿ ಹಲವು ವರ್ಷಗಳು


ಉದಯವಾಹಿನಿ ಚಿತ್ರ

> ಚಂದ್ರವಳ್ಳಿ ತಾಣಕ್ಕೆ ಕೇವಲ ಇಬ್ಬರು ಭದ್ರತಾ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ. ದೊಡ್ಡ ತಾಣಕ್ಕೆ ಅವರಿಂದ ಏನೂ ಮಾಡಲು ಸಾಧ್ಯವಾಗುವುದಿಲ್ಲ. ಭದ್ರತಾ ಸಿಬ್ಬಂದಿಯ ಕಣ್ಣು ತಪ್ಪಿಸಿ ಅನೈತಿಕ ಚಟುವಟಿಕೆ ನಡೆಸುವವರನ್ನು ತಡೆಯಲು ಸಾಧ್ಯವಾಗುವುದಿಲ್ಲ ಎಂದು ಸ್ಥಳೀಯ ನಿವಾಸಿಯೊಬ್ಬರು ತಿಳಿಸಿದರು.

ಕಳೆದಿದ್ದರೂ ಇಲ್ಲಿಯವರೆಗೂ ಉದ್ಘಾಟನೆ ಮಾಡಿಲ್ಲ. ಕೋಟೆಯ ಹೊರ ಭಾಗದಲ್ಲಿ ಮಾಹಿತಿ ಕೇಂದ್ರ, ಭದ್ರತಾ ಕೊಠಡಿ ಹಾಗೂ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಅವುಗಳನ್ನು ನಿರ್ಮಿಸಿಯೇ ಹಲವು

**ಪ್ರವಾಸಿಗರಿಗೆ ಅಪಾಯ**

> ಆ ಘಟಕದ ಯಂತ್ರ ಕೆಟ್ಟು ಹೋಗಿದ್ದರೂ ಅದನ್ನು ರಿಪೇರಿ ಮಾಡಿಲ್ಲ. ಕೋಟೆಯೊಳಗೆ ಸ್ವಚ್ಛತೆಯ ಕೊರತೆಯೂ ಕಾಡುತ್ತಿದೆ. ಎಲ್ಲೆಲ್ಲೂ ಗಿಡಗಂಟಿಗಳು ಬೆಳೆದು ನಿಂತಿರುವ ಕಾರಣ ಪ್ರವಾಸಿಗರಿಗೆ ಅಪಾಯವಿದೆ. ಹಲವಡೆ ನಾಗರಹಾವುಗಳು ಪತ್ತೆಯಾಗಿವೆ' ಎಂದು ಸ್ಥಳೀಯೊಬ್ಬರು ಆರೋಪಿಸಿದರು.

ವರ್ಷಗಳು ಕಳೆದಿದ್ದರೂ ಇಲ್ಲಿಯವರೆಗೂ ಅವುಗಳ ಬಾಗಿಲು ತೆರೆದಿಲ್ಲ. ಕೋಟೆಯ ಒಳಗೆ ಕುಡಿಯುವ ನೀರಿನ ಕೊರತೆಯೂ ಪ್ರವಾಸಿಗರನ್ನು ಕಾಡುತ್ತಿದೆ. ಆವರಣದಲ್ಲಿ ಶುದ್ಧ ನೀರಿನ ಸಣ್ಣ ಘಟಕವೊಂದನ್ನು ಸ್ಥಾಪನೆ ಮಾಡಲಾಗಿದೆ. ಆದರೆ ಅದರಲ್ಲಿ ಶುದ್ಧ ನೀರು ಬರುತ್ತಿಲ್ಲ ಅದರ ನೀರು ಕುಡಿದು, ರುಚಿ ನೋಡಿ ಪ್ರವಾಸಿಗರು ನೀರು ಚೆನ್ನಾಗಿಲ್ಲ ಎಂದುಕೊಂಡು ತೆರಳುತ್ತಾರೆ.

**ಜೋಗಿಮಟ್ಟಿಯಲ್ಲೂ ಇದೇ ಕತೆ:** ಕರ್ನಾಟಕದ ಊಟಿ ಎಂದೇ ಪ್ರಸಿದ್ಧಿ ಪಡೆದಿರುವ ಜೋಗಿಮಟ್ಟಿ ಪ್ರವಾಸಿ ತಾಣ ಕೂಡ ಮೂಲ ಸೌಲಭ್ಯಗಳಿಂದ ವಂಚಿತವಾಗಿದೆ. ಜೋಗಿಮಟ್ಟಿ ಅರಣ್ಯ ಪ್ರದೇಶ ಪ್ರವೇಶಿಸುತ್ತಿದ್ದಂತೆಯೇ ಕೆಟ್ಟ ರಸ್ತೆ ಸ್ವಾಗತ ಕೋರುತ್ತದೆ. ಅದೇ ರಸ್ತೆಯಲ್ಲಿ ಪ್ರವಾಸಿಗರು ವಾಹನ ಚಾಲನೆ ಮಾಡಿಕೊಂಡು ತೆರಳುತ್ತಾರೆ. ಪಾರ್ಕಿಂಗ್ ಪ್ರದೇಶದಿಂದ ಮುಂದಿನ ಗುಡ್ಡದವರೆಗೆ ಮೆಟ್ಟಿಲುಗಳನ್ನು ಮಾಡಲಾಗಿದೆ. ಗುಡ್ಡದ ಮೇಲೆ ಕುಳಿತು ಪ್ರವಾಸಿಗರು ಕೆಳಗಿನ ವಿಹಂಗಮ ನೋಟವನ್ನು ಕಣ್ತುಂಬಿಕೊಳ್ಳುತ್ತಾರೆ. ಮಂಜು ಮುಸುಕಿದ ವಾತಾವರಣದ ಆಹ್ಲಾದವನ್ನು ಸವಿಯಲು ಪ್ರವಾಸಿಗರು ಮುಂಜಾನೆಯೇ ಅಲ್ಲಿಗೆ ತೆರಳುತ್ತಾರೆ. ಪ್ರವಾಸಿಗರಿಗೆ ಕನಿಷ್ಠ ಶೌಚಾಲಯವೂ ಇಲ್ಲದ ಕಾರಣ ಅವರು ಪರದಾಡಬೇಕಾಗಿದೆ.

ಅರಣ್ಯ ಇಲಾಖೆಯಿಂದ ಕಾಟೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಅಲ್ಲಿ ಕೊಠಡಿಗಳಲ್ಲಿ ಮಾತ್ರ ಶೌಚಾಲಯಗಳಿವೆ. ಉಳಿದಂತೆ ಪ್ರವಾಸಿಗರಿಗಾಗಿ ಯಾವುದೇ ಶೌಚಾಲಯವಿಲ್ಲ.

ಈ ಕುರಿತು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಪ್ರವಾಸಿಗರು ದೂರುತ್ತಾರೆ.

## ಡಿ.24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ, ಸರಸ್ವತಿ ಕಾನೂನು ಕಾಲೇಜು, ಎಸ್.ಜೆ.ಎಂ ಕಾನೂನು ಕಾಲೇಜು, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಸಹಯೋಗದಲ್ಲಿ ಇದೇ ಡಿ.24ರಂದು ಬೆಳಿಗ್ಗೆ 10.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ''ರಾಷ್ಟ್ರೀಯ ಗ್ರಾಹಕರ ದಿನಾಚರಣೆ'' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

''ಗ್ರಾಹಕರ ನ್ಯಾಯಕ್ಕಾಗಿ ವರ್ಚುವಲ್ ವಿಚಾರಣೆಗಳು ಮತ್ತು ಡಿಜಿಟಲ್ ಹಾದಿ'' ಎಂಬ ಘೋಷವಾಕ್ಯದೊಂದಿಗೆ ದಿನಾಚರಣೆ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರ ಸದಸ್ಯ ಕಾರ್ಯದರ್ಶಿ ಮತ್ತು 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಚೈತ್ರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್.ಎನ್.ಮೀನಾ, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಡಾ.ಎಂ. ಹೆಚ್.ಸುಧಾದೇವಿ, ಎಸ್.ಜೆ.ಎಂ ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ದಿನೇಶ್ ಭಾಗವಹಿಸುವರು. ಪ್ರಧಾನ ಕಾನೂನು ನೆರವು ಅಭಿರಕ್ಷಕ ಎಸ್.ವಿಜಯ್ ಕುಮಾರ್ ಅವರು ''ಗ್ರಾಹಕರ ಸಂರಕ್ಷಣಾ ಕಾಯ್ದೆ'' ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

## ತನಿಖೆ ವಿಳಂಬ: ಪರಿಶಿಷ್ಟರ ಅಹವಾಲು ಆಲಿಸುವ ಸಭೆಯಲ್ಲಿ ಆಕ್ರೋಶ

• ಉದಯವಾಹಿನಿ ಮಂಗಳೂರು

ನಗರದ ಕಾಲೇಜೊಂದರ ಉಪನ್ಯಾಸಕರ ದಾಖಲಾತಿಗಳ ಪ್ರತಿ ತೆಗೆದಿರಿಸಿಕೊಂಡು ಕಾಲೇಜಿನ ಆಡಳಿತ ಮಂಡಳಿ ಕಿರುಕುಳ ನೀಡಿದ ಪ್ರಕರಣದ ತನಿಖೆ ಸಮರ್ಪಕವಾಗಿ ನಡೆಸಿಲ್ಲ ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಹವಾಲು ಆಲಿಸುವ ಸಭೆಯಲ್ಲೇ ಮುಖಂಡರು ಧರಣಿ ನಡೆಸಲು ಮುಂದಾದರು.

ಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ದಲಿತ ಸಂಘರ್ಷ ಸಮಿತಿ ಸಂಚಾಲಕ ಎಸ್.ಪಿ. ಆನಂದ, ಉಪನ್ಯಾಸಕ ರೋಹಿತ್ ಕುಮಾರ್ ದಾಖಲಾತಿಗಳ ಮೂಲಪ್ರತಿ ತೆಗೆದಿಟ್ಟುಕೊಂಡು ಕಿರುಕುಳ ನೀಡಿದ ಪ್ರಕರಣದಲ್ಲಿ ಪ್ರಾಂಶುಪಾಲರ ಬದಲು ಉಪ ಪ್ರಾಂಶುಪಾಲರನ್ನು ವಿಚಾರಣೆ ನಡೆಸಲಾಗಿದೆ. ಇದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಎಸಿಪಿಯವರಲ್ಲಿ ವಿಚಾರಿಸಿ ಆಗಿರುವ ಕ್ರಮದ ಬಗ್ಗೆ ತಿಳಿಸುತ್ತೇನೆ' ಎಂದು ಸಭೆಯ ಅಧ್ಯಕ್ಷತೆ ವಹಿಸಿದ್ದ ಡಿಸಿಪಿ ಸಿದ್ಧಾರ್ಥ್ ಗೋಯಲ್ ಹೇಳಿದರು.


ಉದಯವಾಹಿನಿ ಚಿತ್ರ

**ಕಿರುಕುಳ ನೀಡಿದ ಪ್ರಕರಣ**

ಇದರಿಂದ ತೃಪ್ತರಾಗದ ಆನಂದ್ ಹಾಗೂ ಇತರರು, ಇಂತಹ ದೌರ್ಜನ್ಯಗಳ ತನಿಖೆಯಲ್ಲಿ ವಿಳಂಬ ಸಲ್ಲದು' ಎಂದು ಧರಣಿ ಕುಳಿತರು.

ಡಿಸಿಪಿ ಗೋಯಲ್ ಎಸಿಪಿ ಬಳಿ ವಿಚಾರಿಸುವುದಾಗಿ ತಿಳಿಸಿದರೂ ಈ ರೀತಿ ನಡೆದುಕೊಳ್ಳುವುದು ಸರಿಯಲ್ಲ. ಪ್ರಾಂಶುಪಾಲರು ಅನಾರೋಗ್ಯಕ್ಕೊಳಗಾಗಿದ್ದ ಕಾರಣ ಉಪಪ್ರಾಂಶುಪಾ ಲರನ್ನು ವಿಚಾರಿಸಲಾಗಿದೆ. ಹಾಗಾದರೆ ಸಂಜೆಯದರೂ ಈ ವಿಷಯದ ಕುರಿತೇ ಮಾತನಾಡೋಣ ಎಂದರು. ಅಷ್ಟರಲ್ಲಿ ಪೊಲೀಸ್ ಅಧಿಕಾರಿಗಳು ಧರಣಿ ನಿರತರನ್ನು ಸಮಾಧಾನಪಡಿಸಿದರು. ಬಾಳೆಪುಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 12 ಕೊರಗ ಕುಟುಂಬಗಳ ಮನೆಯ ಬಳಿ ಕಸ ಸುರಿಯಲಾಗುತ್ತಿದೆ. ಅದನ್ನು ತೆರವುಗೊಳಿಸಬೇಕು' ಎಂದು ಸ್ಥಳೀಯ ನಿವಾಸಿ ಬಾಬು ಒತ್ತಾಯಿಸಿದರು.

ಪರಿಶಿಷ್ಟರ ಅಹವಾಲು ಆಲಿಸಲು ಜಿಲ್ಲಾಧಿಕಾರಿ ನೇತೃತ್ವದಲ್ಲಿ ನಡೆದ ಸಭೆಯಲ್ಲೂ ಈ ಬಗ್ಗೆ ಚರ್ಚೆಯಾಗಿದ್ದು ಸಮಸ್ಯೆ ನಿವಾರಣೆಗೆ ಕ್ರಮವಹಿಸಲಾಗಿದೆ ಎಂದು ಡಿಸಿಪಿ ತಿಳಿಸಿದರು. ಮಹಿಳಾ ಪೊಲೀಸ್ ಠಾಣೆಯ ಎಸ್ಐ ಮತ್ತು ಇನ್‌ಸ್ಪೆಕ್ಟರ್ ದರ್ಜೆಯ ಅಧಿಕಾರಿಗಳನ್ನಾಗಿ ಮಹಿಳೆಯರನ್ನೇ ನೇಮಿಸಬೇಕು. ಇಲ್ಲದಿದ್ದರೆ ಸಂತ್ರಸ್ತರು ಮುಕ್ತವಾಗಿ ದೂರನ್ನು ನೀಡಲು ಕಷ್ಟವಾಗುತ್ತದೆ' ಆನಂದ್ ಹೇಳಿದರು.

## 7ನೇ ವರ್ಷದ ಕ್ರಿಕೆಟ್ ಪಂದ್ಯ ಅದ್ದೂರಿ ಆಚರಣೆ: ನಾಗರಾಜ ಗಸ್ತಿ

• ಉದಯವಾಹಿನಿ, ಸಿಂಧನೂರು

ಚೈತ್ರಾ ಸಿಸಿ ಗೆಳೆಯರು ಬಳಗದಿಂದ ಪ್ರತಿ ವರ್ಷ ಕ್ರಿಕೆಟ್ ಪಂದ್ಯಾವಳಿ ನಾಗರಾಜ ಗಸ್ತಿ ಅವರು ನೇತೃತ್ವದಲ್ಲಿ ನಡೆಯುತ್ತಿ ಬಂದಿದ್ದು. ಸಿಂಧನೂರನ ಕ್ರಿಕೆಟ್ ಪ್ರೇಮಿಗಳಿಗೆ ಮನವಿ ಮಾಡುವುದರ ಮೂಲಕ ಈ ವರ್ಷ ಒಂದು ವಿಶೇಷ ರೀತಿಯಲ್ಲಿ ಡಿ 25 ರಂದು ಪಂದ್ಯಾವಳಿ ಪ್ರಾರಂಭಗೊಳ್ಳಲಿದೆ ಎಂದು ಅವರು ಹೇಳಿದರು

ನಗರದ ಪತ್ರಿಕಾ ಭವನದಲ್ಲಿ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಚೈತ್ರಾ ಸಿಸಿ ಗೆಳೆಯರು ಬಳಗದ ಅಧ್ಯಕ್ಷರಾದ ನಾಗರಾಜ ಗಸ್ತಿ ಅವರು ನೇತೃತ್ವದಲ್ಲಿ ಕ್ರಿಕೆಟ್ ಹೊಂದಿಲ್ಲ ಅದರ ಜೊತೆಗೆ ಅನೇಕ ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದ್ದಾರೆ.

ಬುದ್ಧಿಮಾಂದ್ಯ ಮಕ್ಕಳ ಶಾಲೆ ಮತ್ತು ಕಾರುಣ್ಯ ವೃಂದಾ ಶ್ರಮ ಹಾಗೂ ತಾಲ್ಲೂಕು ಕ್ರೀಡಾಂಗಣದಲ್ಲಿ ನಗರದ ಆಸ್ಪತ್ರೆಯ ಹೃದಯಾಘಾತ ಸಂಭವಿಸಿದಾಗ ಅವರು ಮನೆಗೆ ಹೋಗಿ ಸಹಾಯ ಮಾಡಿದ್ದಾರೆ ಇದೆ ರೀತಿ ಸಮಾಜ ಮುಖಿ ಕಾರ್ಯಗಳು ಮಾಡುತ್ತಾ ಬಂದಿದ್ದಾರೆ ಎಂದು ವೀರೇಶ್ ಬಾವಿ ಮನೆ ತಿಳಿಸಿದರು.

ಪಥಮ ಬಹುಮಾನ 01 ಲಕ್ಷ ರೂ ಹಾಗೂ ಟ್ರೋಫಿ ಸ್ಥಳಿಯ ಶಾಸಕರು ಹಂಪನಗೌಡ ಬಾದರ್ಲಿ ಅವರು ನೀಡಲಿದ್ದಾರೆ. ದ್ವಿತೀಯ ಬಹುಮಾನ 55.555 ರೂ ಹಾಗೂ ಟ್ರೋಫಿ ವಿಧಾನ ಪರಿಷತ್ ಸದಸ್ಯರು ಬಸನಗೌಡ ಬಾದರ್ಲಿ ಅವರು ನೀಡಲಿದ್ದಾರೆ.



ಉದಯವಾಹಿನಿ ಚಿತ್ರ

ತೃತೀಯ ಬಹುಮಾನ 33.333 ಹಾಗೂ ಟ್ರೋಫಿ ಫಯಾಜ್ ಫೀರ್ ಅವರು ನೀಡಲಿದ್ದಾರೆ. ಇದೇ ರೀತಿ ಅನೇಕ ದಾನಿಗಳು ಸಹಾಯ ರೂಪದಲ್ಲಿ ಕೊಡುಗೆಗಳನ್ನು ನೀಡಿದ್ದಾರೆಂದು ಎಂದು ಹೇಳಿದರು

ಈ ಪಂದ್ಯಾವಳಿಯಲ್ಲಿ 09 ಕ್ರಿಕೆಟ್ ತಂಡಗಳು ಭಾಗವಹಿಸಲಿದ್ದು. ಇದರಲ್ಲಿ ಪ್ರತಿ ದಿನ ಮೂರು ಪಂದ್ಯಾವಳಿ ಮೈದಾನಕ್ಕೆ ಇಳಿಯಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ. ರಾಘವೇಂದ್ರ ಬಸವರಾಜ ನಾರಾಯಣ ಸೈಯದ್. ರವಿಕುಮಾರ್ ವೀರಭದ್ರಯ್ಯ. ಡೈಮಂಡ್. ಸೇರಿದಂತೆ ಅನೇಕ ಇದ್ದರು.

> ನಂತರ ಪತ್ರಿಕಾ ಭವನದಲ್ಲಿ ಕ್ರಿಕೆಟ್ ಪಂದ್ಯಾವಳಿ ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಚೈತ್ರಾ ಸಿಸಿ ಗೆಳೆಯರು ಬಳಗದ ಅಧ್ಯಕ್ಷ ನಾಗರಾಜ ಗಸ್ತಿ ಅವರು ಪ್ರತಿ ವರ್ಷದಂತೆ ಈ ವರ್ಷವೂ ಕ್ರಿಕೆಟ್ ಪಂದ್ಯಾವಳಿ ಟ್ರೋಫಿ ನಡೆಸುತ್ತಾ ಬಂದಿದ್ದು.ಆದರೆ ಈ ವರ್ಷ 07ನೇ ವರ್ಷದ ಕ್ರಿಕೆಟ್ ಪಂದ್ಯಾವಳಿ ಆಗಿದ್ದರಿಂದ ಈ ಬಾರಿ ವಿಶೇಷವಾಗಿ ಬಹುಳ ವಿಜ್ರಂಭಣೆಯಿಂದ ಪಂದ್ಯಾವಳಿ ಆಚರಣೆ ಮಾಡಬೇಕೆಂದು ಕಮಿಟಿ ಎಲ್ಲಾ ಸದಸ್ಯರು ಸೇರಿ ಈ ತೀರ್ಮಾನವನ್ನು ಕೈಗೊಂಡಿದ್ದಾರೆ. ಆದ್ದರಿಂದ ಈ ಯಶಸ್ವಿಗೆ ತಾಲೂಕಿನ ಎಲ್ಲಾ ಗುರು ಹಿರಿಯರು ಹಾಗೂ ಯುವಕರು ಸಹಕಾರದ ಜೊತೆಗೆ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಬೇಕು **-ನಾಗರಾಜ ಗಸ್ತಿ**
> ಚೈತ್ರಾ ಸಿಸಿ ಗೆಳೆಯರು ಬಳಗದ ಅಧ್ಯಕ್ಷ

## ಹೋರಾಟಗಾರರ ಆದರ್ಶ ಮೈಗೂಡಿಸಿಕೊಳ್ಳಿ

• ಉದಯವಾಹಿನಿ ರಾಣೆಬೆನ್ನೂರು

ಮೂರ್ತಿ ಪ್ರತಿಷ್ಠಾಪಿಸುವುದರ ಜೊತೆಗೆ ಮಹಾತ್ಮರ ದಾರ್ಶನಿಕರ, ಸ್ವಾತಂತ್ರ್ಯ ಹೋರಾಟಗಾರರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು. ತಮ್ಮ ಮಕ್ಕಳಿಗೆ ಶೈಕ್ಷಣಿಕ ಪ್ರಾತಿನಿಧ್ಯ ನೀಡುವ ಮೂಲಕ ಮಹಾತ್ಮರ ಋಣ ತೀರಿಸಬೇಕು ಎಂದು ಕಾಗಿನೆಲೆ ಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ ಹೇಳಿದರು.

ನಗರದ ಹಲಗೇರಿ ರಸ್ತೆಯ ಬೈಪಾಸ್ ಹತ್ತಿರದಲ್ಲಿ ನೂತನವಾಗಿ ನಿರ್ಮಿಸಿರುವ ಕಾಂತ್ರಿವೀರ ಸಂಗೊಳ್ಳಿ ರಾಯಣ್ಣನ ಕಂಚಿನ ಪುತ್ಥಳಿ ಅನಾವರಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು. ಮೂರ್ತಿ ಪ್ರತಿಷ್ಠಾಪಿಸುವುದರಿಂದ ಕುರುಬ ಸಮಾಜವು ಸಂಘಟನೆ ಆಗುವುದಿಲ್ಲ, ಬದಲಾಗಿ ಅಭಿಮಾನ ಬರುತ್ತದೆ. ಆದರೆ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಂಡು ಮುನ್ನಡೆದರೆ ಸಮಾಜ ಪ್ರಗತಿ ಹೊಂದಲು ಸಾಧ್ಯ. ಈ ನಿಟ್ಟಿನಲ್ಲಿ ಎಲ್ಲರೂ ಸಮಾಜದ ಸಂಘಟನೆಗೆ ಆದ್ಯತೆ ನೀಡಬೇಕು ಎಂದರು.ನಾನು ಇದುವರೆಗೂ ಎಲ್ಲಿಯೂ ಮೂರ್ತಿ ಪ್ರತಿಷ್ಠಾಪನೆ, ಅನಾವರಣ ಮಾಡಿಲ್ಲ. ಸುಕ್ಷೇತ್ರ ದೇವರಗುಡ್ಡದಲ್ಲಿ ಇತ್ತೀಚೆಗೆ ನಡೆದ ಸಂಗೊಳ್ಳಿ ರಾಯಣ್ಣ ಮೂರ್ತಿ ಪ್ರತಿಷ್ಠಾಪನೆಗೆ ಸ್ವತಃ ಮುಖ್ಯಮಂತ್ರಿ ಆಗಮಿಸಿದ್ದರೂ ಸಹ ನಾನು ಅಲ್ಲಿಗೆ ಹೋಗಲಿಲ್ಲ. ಆದರೆ ರಾಣೆಬೆನ್ನೂರಿನಲ್ಲಿ ನಡೆದ ರಾಯಣ್ಣ ಪುತ್ಥಳಿ ಅನಾವರಣದಿಂದ ದೂರ ಉಳಿದು ಸಮಾರಂಭದಲ್ಲಿ ಮಾತ್ರ ಭಾಗವಹಿಸಿದ್ದೇನೆ' ಎಂದರು.


ಉದಯವಾಹಿನಿ ಚಿತ್ರ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಗೆಳೆಯರ ಬಳಗದ ಅಧ್ಯಕ್ಷ ಕುಬೇರಪ್ಪ ಕೊಂಡಜ್ಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬೀರಲಿಂಗೇಶ್ವರ ದೇವಸ್ಥಾನದ ಅರ್ಚಕ ಭರಮಪ್ಪ ಪೂಜಾರ ನೇತೃತ್ವ ವಹಿಸಿದ್ದರು. ಶಾಸಕ ಪ್ರಕಾಶ ಕೋಳಿವಾಡ ಸಮಾರಂಭವನ್ನು ಉದ್ಘಾಟಿಸಿದರು. ವಿಧಾನಸಭಾ ಉಪ ಸಭಾಪತಿ ರುದ್ರಪ್ಪ ಲಮಾಣಿ ನಾಮಫಲಕ ಉದ್ಘಾಟಿಸಿದರು. ಮಾಜಿ ಶಾಸಕ ಅರುಣಕುಮಾರ ಪೂಜಾರ ರಾಯಣ್ಣನ ಪುತ್ಥಳಿಯನ್ನು ಅನಾವರಣಗೊಳಿಸಿದರು.

## ರಾಶಿ ಕಾಪಾಡಲು ರೈತರ ಪರದಾಟ

• ಉದಯವಾಹಿನಿ ಕವಿತಾಳ

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ಸುರಿದ ಧಾರಾಕಾರ ಮಳೆ ರೈತರಿಗೆ ಸಂಕಷ್ಟ ತಂದೊಡ್ಡಿದೆ. ರಾಶಿ ಮಾಡಿ ಬಯಲು ಜಾಗದಲ್ಲಿ ಹಾಕಿದ್ದ ರೈತರು ಅಕಾಲಿಕ ಮಳೆಯಿಂದ ತೊಗರಿ ಕಾಪಾಡಲು ಇಡೀ ರಾತ್ರಿ ಪರದಾಡಿದರು.

ತೊಗರಿ ಕಟಾವು ಭರದಿಂದ ಸಾಗಿದ್ದು ಹಲವು ರೈತರು ತೊಗರಿ ಕಟಾವು ಮಾಡಿ ಬಿಸಿಲಿಗೆ ಒಣಗಲು ಹಾಕಿದ್ದಾರೆ, ಕಟಾವು ಯಂತ್ರ ಸಿಗದ ಕೆಲವು ರೈತರು ರಾಶಿ ಮಾಡಲು ಕಾಯುತ್ತಿದ್ದಾರೆ. ಈ ಸಂದರ್ಭದಲ್ಲಿ ಸುರಿದ ಮಳೆಯಿಂದ ತೊಗರಿಗೆ ಹಾನಿ ಉಂಟಾಗಲಿದೆ. ಎಂದು ರೈತರು ಹೇಳಿದರು.

ಮಳೆಯ ನಿರೀಕ್ಷೆ ಮಾಡದೆ ಕಟಾವು ಮಾಡಿ ಬಯಲು ಪ್ರದೇಶದಲ್ಲಿ ಒಣಗಲು ಹಾಕಿದ ತೊಗರಿ ಮಳೆಗೆ ತೊಯಿದೆ, ಕಟಾವು ಮಾಡದ ತೊಗರಿಯೂ ಮಳೆಯಿಂದ ನೆಲ ಕಚ್ಚಿದೆ' ಎಂದು ರೈತರು ಅಳಲು ತೋಡಿಕೊಂಡರು.

ರಾಶಿ ಮಾಡಿದ ತೊಗರಿಗೆ ಪ್ಲಾಸ್ಟಿಕ್ ಹೊದಿಕೆ ಹಾಕಿ ಮುಚ್ಚಿದ್ದರೂ ಜೋರು ಮಳೆಯಿಂದ ನೀರು ಹರಿದು ತಳ ಭಾಗದಲ್ಲಿ ಅಲ್ಪ ಸ್ವಲ್ಪ ತೊಗರಿ ತೊಯ್ದಿವೆ, ಅದನ್ನು ಹಾಗೆಯೇ ಬಿಟ್ಟರೆ ಮೊಳಕೆಯೊಡೆಯುತ್ತದೆ. ಮತ್ತೆ ಒಣಗಲು ಹಾಕಬೇಕು, ಕಟಾವು ಮಾಡದ ತೊಗರಿ ಬುಡ್ಡಿ ಬಿರುಕು ಬಿಟ್ಟು ಹಾಳಾಗುತ್ತದೆ, ಒಟ್ಟಾರೆ ಅಕಾಲಿಕ ಮಳೆಯಿಂದ ನಮ್ಮ ಅನುಭವಿಸುವಂತಾಗಿದೆ' ಎಂದು ರೈತ ತಿಮ್ಮಣ್ಣ ಯಾದವ ಹೇಳಿದರು.

## ಬಿಳಿಜೋಳ ಬೆಳೆಗೆ ವರವಾದ ಶೀತಗಾಳಿ

• ಉದಯವಾಹಿನಿ ಹುಲಸೂರ

ಕಳೆದ ಎರಡು ಮೂರು ದಿನಗಳಿಂದ ಬೀಸುತ್ತಿರುವ ಶೀತ ಗಾಳಿ ಹಾಗೂ ಚಳಿಯು ಬಿಳಿಜೋಳದ ಬೆಳೆಗೆ ವರವಾಗಿ ಪರಿಣಮಿಸಿದೆ. ಇದರಿಂದಾಗಿ ರೈತರು ಉತ್ತಮ ಇಳುವರಿ ನಿರೀಕ್ಷೆಯಲ್ಲಿದ್ದಾರೆ. ತಾಲ್ಲೂಕಿನ ವ್ಯಾಪ್ತಿಯಲ್ಲಿ 1,096 ಹೆಕ್ಟೇರ್ ಪ್ರದೇಶದಲ್ಲಿ ಬಿಳಿಜೋಳ ಬಿತ್ತನೆಯಾಗಿದೆ.

ಹಿಂಗಾರು ಹಂಗಾಮಿನ ಬಿಳಿಜೋಳ ಬಿತ್ತನೆ ಮಾಡಿದ ರೈತರ ಮೊಗದಲ್ಲಿ ಈಗ ಮಂದಹಾಸ ಮೂಡಿದೆ.

ರಾಸಾಯನಿಕ ಗೊಬ್ಬರದ ನೆರವಿಲ್ಲದೆ ಹಾಗೂ ಮಳೆಯ ನಿರೀಕ್ಷೆಯಿಲ್ಲದೆ ಜೋಳ ಕೇವಲ ಚಳಿ ಮತ್ತು ಇಬ್ಬನಿಯಿಂದ ಬೆಳೆಯುತ್ತದೆ. ಕಳೆದ ಎರಡು-ಮೂರು ದಿನಗಳಿಂದ ಬೀಸುತ್ತಿರುವ ಶೀತಗಾಳಿ ಹಾಗೂ ಚಳಿಯು ಬಿಳಿಜೋಳದ ಇಳುವರಿ ಹೆಚ್ಚಳಕ್ಕೆ ಸಹಕಾರಿಯಾಗಿ ಪರಿಣಮಿಸಿದೆ.

ಈಗಾಗಲೇ ಜೋಳ ಹುಲುಸಾಗಿ ಬೆಳೆದಿದೆ. ಒಂದೂವರೆ ತಿಂಗಳ ಹೊತ್ತಿಗೆ ಜೋಳ ತೆನೆ ಕಟ್ಟುವ ಹಂತಕ್ಕೆ ಬರಲಿದೆ ಎಂದು ರೈತರು ಹೇಳುತ್ತಾರೆ. ಈ ಭಾಗದ(ಕಲ್ಯಾಣ ಕರ್ನಾಟಕದ) ಜನರು ಬಿಳಿ ಜೋಳದ ರೊಟ್ಟಿಯನ್ನು ಹೆಚ್ಚಾಗಿ ಊಟ ಮಾಡುವುದರಿಂದ ಹಾಗೂ ಜಾನುವಾರುಗಳಿಗೆ ಜೋಳದ ದಂಟು(ಕಣಿಕೆ) ಬೇಕಾಗಿರುವುದರಿಂದ ಬಹಳಷ್ಟು ರೈತರು ತಮ್ಮ ಜಮೀನುಗಳಲ್ಲಿ ಬೆಲೆ ಕಡಿಮೆಯಿದ್ದರೂ ಬಿಳಿ ಜೋಳವನ್ನು ಬೆಳೆಯುತ್ತಾರೆ.


ಉದಯವಾಹಿನಿ ಚಿತ್ರ

ಕಳೆದ ಸೆಪ್ಟೆಂಬರ್ ಹಾಗೂ ಅಕ್ಟೋಬರ್ ಮೊದಲ ವಾರದಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಜಮೀನಿನಲ್ಲಿ ನೀರು ತೇವಾಂಶ ಹೆಚ್ಚಾದ ಕಾರಣ ಜೋಳ ಬಿತ್ತನೆ ವಿಳಂಬವಾಗಿತ್ತು. ಕೇವಲ ನಾಲ್ಕೂವರೆ ತಿಂಗಳಲ್ಲಿ ಬರುವ ಬಿಳಿ ಜೋಳ ಈ ಭಾಗದ ರೈತರು ಪಾಲಿಗೆ ಅಮೃತವರ್ಷಿಣಿಯಾಗಿದೆ. ಸುನಿಲ ಕುಲಕರ್ಣಿ, ರೈತಶೀತ ಗಾಳಿ ಬೀಸುತ್ತಿರುವುದರಿಂದ ಬಿಳಿ ಜೋಳಕ್ಕೆ ಅನುಕೂಲವಾಗಿದೆ. ಇದರಿಂದ ಇಳುವರಿಯು ಹೆಚ್ಚಾಗಿ ತೆನೆಗಳು ದಪ್ಪವಾಗುತ್ತವೆ.

ದನಗಳಿಗೂ ಮೇವಿನ ಕೊರತೆ ಉಂಟಾಗುವುದಿಲ್ಲ ಗೌತಮ, ಸಹಾಯಕ ನಿರ್ದೇಶಕ, ಕೃಷಿ ಇಲಾಖೆ ಶೀತಗಾಳಿಯಿಂದ ಜೋಳದ ಬೆಳೆಗೆ ಉತ್ತಮವಾಗಿದೆ. ಬಿಳಿಜೋಳಕ್ಕೆ ತಂಪಾದ ಗಾಳಿ ಹಾಗೂ ಇಬ್ಬನಿಯಿಂದ ಮಳೆ ಬರದಿದ್ದರೂ ತೆನೆಗಳಲ್ಲಿ ಕಾಳು ಕಟ್ಟುವ ಪ್ರಮಾಣ ಹೆಚ್ಚಾಗುತ್ತದೆ

**ಬಂಪರ್ ಬೆಲೆ**

> ಕಳೆದ ವರ್ಷ ಕ್ವಿಂಟಲ್ ಬಿಳಿಜೋಳವು ಸುಮಾರು 5,500 ರಿಂದ 6,000ಕ್ಕೆ ಮಾರಾಟವಾಗಿತ್ತು. ಬಿಳಿಜೋಳವನ್ನು ಬೆಳೆದ ರೈತರಿಗೆ ಕೈತುಂಬಾ ಹಣ ಬಂದಿತ್ತು. ಆದರೆ ಬಿಳಿಜೋಳ ಪ್ರಸ್ತುತ ಕ್ವಿಂಟಲ್‌ಗೆ 3,000 ರಿಂದ 3500 ಕ್ಕೆ ಮಾರಾಟವಾಗುತ್ತಿದೆ.

# 71 ನೀರಿನ ಘಟಕ ಬಂದ್: ಬೇಸಿಗೆಯಲ್ಲಿ ಗತಿಯೇನು?

**• ಮಳೆ ಕೊರತೆ ಹಾಗೂ ಕೊಳವೆ ಬಾವಿಗಳು ಬತ್ತಿದ ಕಾರಣ ನೀಡಿ, ಶುದ್ಧ ಕುಡಿಯುವ ನೀರಿನ ಘಟಕಗಳ ಬಂದ್**

• ಉದಯವಾಹಿನಿ ಹಾವೇರಿ

ಜಿಲ್ಲೆಯಲ್ಲಿ ಚಳಿಗಾಲ ಶುರುವಾಗಿದ್ದು, ಕೆಲವೇ ತಿಂಗಳಿನಲ್ಲಿ ಬೇಸಿಗೆ ದಿನಗಳು ಆರಂಭವಾಗಲಿವೆ. ಕಳೆದ ವರ್ಷ ಬೇಸಿಗೆ ಸಂದರ್ಭದಲ್ಲಿ ಜಿಲ್ಲೆಯ ಹಲವು ಕಡೆಗಳಲ್ಲಿ ನೀರಿಗೆ ಹಾಹಾಕಾರ ಉಂಟಾಗಿತ್ತು. ಈ ಬಾರಿ ಮಳೆಗಾಲದಲ್ಲಿ ಉತ್ತಮ ಮಳೆಯಾಗಿದೆ. ಅಷ್ಟಾದರೂ, ಮುಂಬರುವ ಬೇಸಿಗೆಯಲ್ಲಿ ನೀರಿಗೆ ಹಾಹಾಕಾರ ಉಂಟಾಗುವ ಭಯ ಜನರನ್ನು ಕಾಡುತ್ತಿದೆ. ಮಳೆಗಾಲ ಕಳೆದು ಚಳಿಗಾಲ ಆರಂಭವಾಗಿದ್ದರೂ ಜಿಲ್ಲೆಯ 71 ಶುದ್ಧ ಕುಡಿಯುವ ಘಟಕಗಳಿಗೆ ಬೀಗ ಹಾಕಲಾಗಿವೆ. ನಿರ್ವಹಣೆ ಕೊರತೆ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಈ ಘಟಕಗಳು ಬಂದ್ ಆಗಿದ್ದು, ಜನರಿಗೆ ಶುದ್ಧ ಕುಡಿಯುವ ನೀರು ಮರೀಚಿಕೆಯಾಗಿದೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಿಂದ ಜಿಲ್ಲೆಯಲ್ಲಿ 686 ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲಾಗಿದೆ.

ಈ ಪೈಕಿ 71 ಘಟಕಗಳು ಹಲವು ತಿಂಗಳಿನಿಂದ ಬಂದ್ ಆಗಿದ್ದು, ಇದುವರೆಗೂ ಘಟಕಗಳು ಮರು ಆರಂಭವಾಗಿಲ್ಲ. ನೀರು ಶುದ್ಧೀಕರಣಕ್ಕೆಂದು ಹಾಕಿರುವ ಟ್ಯಾಂಕ್ ಹಾಗೂ ಉಪಕರಣಗಳು ಒಂದೊಂದಾಗಿ ತುಕ್ಕು ಹಿಡಿಯುತ್ತಿದ್ದು ಘಟಕಗಳು ಪಾಳು ಬೀಳುತ್ತಿವೆ. ಮಳೆ ಕೊರತೆ ಹಾಗೂ ಕೊಳವೆ ಬಾವಿಗಳು ಬತ್ತಿದ ಕಾರಣ ನೀಡಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಬಂದ್ ಮಾಡಿ ಹಲವು ತಿಂಗಳಾಗಿದೆ. ಕೆಲ ಘಟಕಗಳ ನಿರ್ವಹಣೆ ಗುತ್ತಿಗೆ ಅವಧಿ ಮುಗಿದಿದ್ದರಿಂದ, ಬಾಗಿಲು ಮುಚ್ಚಲಾಗಿವೆ. ಶುದ್ಧ ಕುಡಿಯುವ ನೀರು ಘಟಕ ಗಳ ನಿರ್ವಹಣೆ ಮಾಡದ ಜಿಲ್ಲಾಡಳಿತ, ಮುಂಬರುವ ಬೇಸಿಗೆಯಲ್ಲಿ ನೀರಿಗೆ ಹಾಹಾಕಾರ ವಾದರೆ ಏನು ಮಾಡುತ್ತದೆ ? ಹೊಣೆಗಾರರು ಯಾರು? ಎಂದು ಜನರು ಪ್ರಶ್ನಿಸುತ್ತಿದ್ದಾರೆ.

**ಅಧಿಕಾರಿಯಿಂದ ತಪ್ಪು ಮಾಹಿತಿ**

> ಬ್ಯಾಡಗಿ ತಾಲ್ಲೂಕಿನ ತಡಸ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ಆರು ತಿಂಗಳಾಗಿದೆ. ಆದರೆ, ಘಟಕಗಳ ಬಗ್ಗೆ ಅಧಿಕಾರಿಗಳು ತಪ್ಪು ಮಾಹಿತಿ ನೀಡುತ್ತಿದ್ದಾರೆ. 'ಬ್ಯಾಡಗಿ ತಾಲ್ಲೂಕಿನಲ್ಲಿ 79 ಘಟಕ ನಿರ್ಮಿಸಿದ್ದು, ಎಲ್ಲಾ ಕಡೆಯೂ ನೀರು ಲಭ್ಯವಾಗುತ್ತಿದೆ' ಎಂದು ಎಇಇ ಸುರೇಶ ಬೇಡರ ಹೇಳುತ್ತಿದ್ದಾರೆ. ಆದರೆ, ಜಿಲ್ಲಾಡಳಿತದ ಪ್ರಕಾರ ಬ್ಯಾಡಗಿ ತಾಲ್ಲೂಕಿನಲ್ಲಿ 87 ಘಟಕಗಳಿವೆ. ಇದರಲ್ಲಿ 6 ಘಟಕಗಳು ಬಂದ್ ಆಗಿವೆ.


ಉದಯವಾಹಿನಿ ಚಿತ್ರ

ಕನಕಾಪುರದ ಪ್ರಮುಖ ರಸ್ತೆಯಲ್ಲಿರುವ ಘಟಕ ಬಂದ್ ಆಗಿ ಹಲವು ತಿಂಗಳಾಗಿದೆ. ಮರು ಆರಂಭಕ್ಕೆ ಮನವಿ ಸಲ್ಲಿಸಿದರೂ ಅಧಿಕಾರಿಗಳು ಸ್ಪಂದಿಸಿಲ್ಲ. ಇದರಿಂದಾಗಿ ಶುದ್ಧ ಕುಡಿಯುವ ನೀರು ತರಲು ಕಿ.ಮೀ. ಗಟ್ಟಲೇ ಅಕ್ಕ-ಪಕ್ಕದ ಗ್ರಾಮ ಹಾಗೂ ಹಾವೇರಿಗೆ ಹೋಗಿ ಬರಬೇಕಾದ ಸ್ಥಿತಿ ಇದೆ' ಎಂದು ತಿಳಿಸಿದರು.

> ಹಲವು ಗ್ರಾಮಗಳಲ್ಲಿ ಕಲುಷಿತ ನೀರು ಕುಡಿಯುವುದರಿಂದ ಆರೋಗ್ಯ ಸಮಸ್ಯೆಗಳು ಕಾಣಿಸುತ್ತಿವೆ. ವೃದ್ಧರು ಹಾಗೂ ಮಕ್ಕಳು, ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಇದಕ್ಕೆ ಪರಿಹಾರವಾಗಿ ಹಲವು ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಲಾಗಿದೆ. ಆದರೆ, ಈ ಘಟಕಗಳನ್ನು ಬಂದ್ ಮಾಡಿರುವುದರಿಂದ ಜನರಿಗೆ ಶುದ್ಧ ಕುಡಿಯುವ ನೀರು ಸಿಗುತ್ತಿಲ್ಲ' ಎಂದು ಕನಕಾಪುರದ ರೈತ ಶಂಕರಪ್ಪ ಹೇಳಿದರು.

**ಜನರಿಗೆ ಶುದ್ಧ ಕುಡಿಯುವ ನೀರು ಮರೀಚಿಕೆ**

ಹಾವೇರಿ ತಾಲ್ಲೂಕಿನ ಬಮ್ಮನಕಟ್ಟಿಯಲ್ಲಿರುವ ಘಟಕ ಬಂದ್ ಆಗಿದ್ದು, ಉಪಕರಣಗಳು ತುಕ್ಕು ಹಿಡಿದಿವೆ. ಹರವಿ ಗ್ರಾಮದಲ್ಲಿರುವ ಘಟಕ ಬಂದ್ ಆಗಿ ಹಲವು ತಿಂಗಳಾಗಿದೆ. ಈ ಘಟಕದಲ್ಲಿ ನಿರುಪಯುಕ್ತ ವಸ್ತುಗನ್ನು ಇರಿಸಲಾಗಿದ್ದು ಗೋದಾಮು ಆಗಿ ಪರಿವರ್ತನೆಗೊಂಡಿವೆ. ತಾಲ್ಲೂಕಿನ ತಡಸದಲ್ಲಿರುವ ಘಟಕ ಪಾಳು ಬಿದ್ದಿದೆ. ಸುತ್ತಲೂ ಕಸ ಬೆಳೆದಿದೆ. ನೀರು ಸಂಗ್ರಹ ಟ್ಯಾಂಕ್ ತುಕ್ಕು ಹಿಡಿಯುತ್ತಿದೆ. ಶುದ್ಧ ಕುಡಿಯುವ ನೀರಿಗಾಗಿ ಹಲವೆಡೆ ಅಲೆಯುವಂತಾಗಿದೆ ಎಂದು ಗ್ರಾಮ ಸ್ಥರು ದೂರಿದರು.

**ರಾಣೆಬೆನ್ನೂರಿನಲ್ಲೂ ಸಮಸ್ಯೆ:** ರಾಣೆಬೆನ್ನೂರು ನಗರ ಹಾಗೂ ತಾಲ್ಲೂಕಿನ ಹಲವು ಕಡೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲಾಗಿದೆ. ಈ ಪೈಕಿ ಕೆಲವರು ಘಟಕಗಳು, ನಿರ್ವಹಣೆ ಕೊರತೆಯಿಂದ ಬಂದ್ ಆಗಿವೆ. ತಾಲ್ಲೂಕಿನ ಮೇಡೇರಿಯಲ್ಲಿ ಎರಡು ಘಟಕಗಳಿದ್ದು, ಒಂದು ಘಟಕ ಕೆಟ್ಟು ಹಲವು ತಿಂಗಳಾಗಿದೆ. ಈ ಬಗ್ಗೆ ಗ್ರಾಮ ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಎಂಜಿನಿಯರ್ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ ಎಂದು ಗ್ರಾಮಸ್ಥರು ದೂರಿದರು. ಗಂಗಾಜಲ ತಾಂಡಾದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎದುರಿಗಿರುವ ಘಟಕವೂ ಬಂದ್ ಆಗಿದೆ.

## ಮಿನಿ ನ್ಯೂಸ್

### ಹಣ್ಣು, ತರಕಾರಿ ಮಾರಾಟಕ್ಕೆ ಮಳಿಗೆ ಲಭ್ಯ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ (ಜಿಲ್ಲಾ ಹಾಪ್‌ಕಾಮ್ಸ್) ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ನೇರವಾಗಿ ರೈತರಿಂದ ಖರೀದಿಸಿದ ತಾಜಾ ಹಣ್ಣು ಮತ್ತು ತರಕಾರಿಗಳನ್ನು ಸೂಕ್ತ ದರದಲ್ಲಿ ಗ್ರಾಹಕರಿಗೆ ಮಾರಾಟ ಮಾಡುವ ವ್ಯವಸ್ಥೆಯನ್ನು ಸಂಘವು ನಿರ್ವಹಿಸುತ್ತಿದೆ.

ನಗರದ ಬ್ಯಾಂಕ್ ಕಾಲೋನಿ, ವಿದ್ಯಾನಗರ ಬಡಾವಣೆ, ತರಳ ಬಾಳು ನಗರ ಮತ್ತು ಸರಸ್ವತಿಪುರಂ ಬಡಾವಣೆ ಸೇರಿದಂತೆ ಒಟ್ಟು ನಾಲ್ಕು ಮಳಿಗೆಗಳು ಲಭ್ಯವಿವೆ.

ಸಂಘದ ನಿಬಂಧನೆಗೆ ಒಳಪಟ್ಟು, ಈ ಮಾರಾಟ ಮಳಿಗೆಗಳಲ್ಲಿ ಹಣ್ಣು ತರಕಾರಿಗಳನ್ನು ಮಾರಾಟ ಮಾಡಲು ಆಸಕ್ತಿಯುಳ್ಳವರು ನಗರದ ತುರುವನೂರು ರಸ್ತೆ, ಎಸ್.ಪಿ.ಆಫೀಸ್ ಹತ್ತಿರದ ಜಿಲ್ಲಾ ಹಾಪ್‌ಕಾಮ್ಸ್ ಕಚೇರಿಗೆ ಅಥವಾ ಜಿಲ್ಲಾ ಹಾಪ್‌ಕಾಮ್ಸ್ ಅಧ್ಯಕ್ಷರ ದೂರವಾಣಿ ಸಂಖ್ಯೆ 8197824949, ವ್ಯವಸ್ಥಾಪಕ ನಿರ್ದೇಶಕರು-9900054307, ಕಾರ್ಯದರ್ಶಿ 7892174640 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಹಾಪ್ ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

### ಸಿಟಿ ರವಿ ವಿರುದ್ಧ ಕಠಿಣ ಕ್ರಮಕ್ಕೆ ಸುರ್ಜೇವಾಲಾ ಆಗ್ರಹ

• ಉದಯವಾಹಿನಿ ಬೆಳಗಾವಿ

ಇತ್ತೀಚೆಗೆ ವಿಧಾನ ಪರಿಷತ್ತಿನಲ್ಲಿ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಆಕ್ಷೇಪಾರ್ಹ ಪದ ಬಳಸಿರುವ ಬಿಜೆಪಿ ಎಂಎಲ್‌ಸಿ ಸಿಟಿ ರವಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಸೋಮವಾರ ಒತ್ತಾಯಿಸಿದ್ದಾರೆ. ಬಿಜೆಪಿಯನ್ನು ಮಹಿಳಾ ವಿರೋಧಿ ಎಂದು ಕರೆದ ಅವರು, ಕಳೆದ ವಾರ ಸಂಸತ್ತಿನಲ್ಲಿ ಬಿಆರ್ ಅಂಬೇಡ್ಕರ್ ವಿರುದ್ಧದ ಹೇಳಿಕೆಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಟೀಕಿಸಿದರು. 'ಬಿಜೆಪಿಯವರು ದೇಶದ ಮಹಿಳೆಯರನ್ನು ಪದೇ ಪದೇ ಅವಮಾನಿಸುತ್ತಿದ್ದಾರೆ. ಮಹಿಳೆಯರು, ಯುವಕರು, ರೈತ ಮತ್ತು ದಲಿತ, ಬುಡಕಟ್ಟು ಮತ್ತು ಹಿಂದುಳಿದ ವರ್ಗಗಳನ್ನು ವಿರೋಧಿಸುವುದೇ ಬಿಜೆಪಿಯ ಗುಣವಾಗಿದೆ. ಬಿಜೆಪಿ ನಾಯಕರು ಮಹಿಳಾ ನಾಯಕಿಯರ ವಿರುದ್ಧ ಅವಹೇಳನಕಾರಿ ಪದ ಬಳಸುತ್ತಿರುವುದು ಖಂಡನೀಯ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ನಾನು ಕರ್ನಾಟಕ ಸರ್ಕಾರವನ್ನು ಒತ್ತಾಯಿಸುತ್ತೇನೆ' ಎಂದು ಸುರ್ಜೇವಾಲಾ ಇಲ್ಲಿ ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

### 9 ಮಂದಿ ಅಯ್ಯಪ್ಪಸ್ವಾಮಿ ಮಾಲಾಧಾರಿಗಳಿಗೆ ಗಂಭೀರ ಗಾಯ, ಕೆಎಂಸಿ ಆಸ್ಪತ್ರೆಗೆ

• ಉದಯವಾಹಿನಿ ಹುಬ್ಬಳ್ಳಿ

ಸಿಲಿಂಡರ್ ಸ್ಫೋಟಗೊಂಡ ಪರಿಣಾಮ 9 ಮಂದಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡಿರುವ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೊನಿಯ ಈಶ್ವರ ದೇವಸ್ಥಾನದಲ್ಲಿ ಈ ಘಟನೆ ನಡೆದಿದ್ದು ಅಡುಗೆ ಅನಿಲದ ಸಿಲಿಂಡರ್ ಸ್ಫೋಟಗೊಂಡು 9 ಅಯ್ಯಪ್ಪ ಮಾಲಾಧಾರಿಗಳು ತೀವ್ರ ಗಾಯಗೊಂಡಿದ್ದಾರೆ.

ಬಹುತೇಕ ಎಲ್ಲರ ದೇಹ ಶೇ 50 ರಷ್ಟು ಸುಟ್ಟು ಹೋಗಿದ್ದು, 58 ವರ್ಷದ ಅಜ್ಜಾಸ್ವಾಮಿ ಅವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.ಮೂಲಗಳ ಪ್ರಕಾರ ಭಾನುವಾರ ತಡರಾತ್ರಿ 1.30ರ ವೇಳೆ ಈ ಘಟನೆ ನಡೆದಿದ್ದು, ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಾಯಗೊಂಡ ಮಾಲಾಧಾರಿಗಳನ್ನು ಕೆಎಂಸಿ-ಆರ್ ಐಗೆ ದಾಖಲಿಸಲಾಗಿದೆ. ಗಾಯಾಳುಗಳನ್ನು ರಾಜು ಹರ್ಲಾಪುರ (21), ಸಂಜಯ ಸವದತ್ತಿ (20), ವಿನಾಯಕ ಬಾತಕೇರ(12), ಪ್ರಕಾಶ ಬಾತಕೇರ(42), ಮಂಜು ತೋರದ(22), ಅಜ್ಜಾಸ್ವಾಮಿ (58), ಪ್ರವೀಣ ಚಲವಾದಿ(24), ತೇಜಸ್ ರೆಡ್ಡಿ (26) ಮತ್ತು ಶಂಕರ ರಾಯನಗೌಡ್ರ(29) ಎಂದು ಗುರುತಿಸಲಾಗಿದ್ದು, ಇವರೆಲ್ಲ ಸಾಯಿ ನಗರದ ನಿವಾಸಿಗಳು ಎಂದು ತಿಳಿದುಬಂದಿದೆ.


### ಅಂಗನವಾಡಿ ನಿರ್ಮಾಣಕ್ಕೆ 25 ಲಕ್ಷ ಮೌಲ್ಯದ ಜಾಗ ನೀಡಿದ ಗ್ರಾ.ಪಂ. ಸದಸ್ಯ

• ಉದಯವಾಹಿನಿ ಕೊಣನೂರು

ಅಂಗನವಾಡಿ ಕಟ್ಟಡ ನಿರ್ಮಾಣಕ್ಕಾಗಿ ಸ್ವಂತ ನಿವೇಶನವನ್ನು ದಾನ ಮಾಡುವ ಮೂಲಕ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಿದ ಇಲ್ಲಿನ ಗ್ರಾಮ ಪಂಚಾಯಿತಿ ಸದಸ್ಯ ಡಿ.ಮಂಜುನಾಥ ಮಾದರಿಯಾಗಿದ್ದಾರೆ. ತಮ್ಮ ಊರಿನಲ್ಲಿ ಅಂಗನವಾಡಿ ಕೇಂದ್ರ ನಿರ್ಮಿಸಲು ಸ್ಥಳ ದೊರಕದೇ ಇರುವುದರಿಂದ ರಾಮನಾಥಪುರ ಹೋಬಳಿಯ ಕೇರಳಾಪುರದ ನಿವಾಸಿ ಡಿ.ಮಂಜುನಾಥ್, 25 ಲಕ್ಷ ಬೆಲೆಬಾಳುವ 30X40 ಅಳತೆಯ ತಮ್ಮ ಸ್ವಂತ ನಿವೇಶನವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹೆಸರಿಗೆ ದಾನ ನೀಡಿದ್ದಾರೆ. ಕೇರಳಾಪುರದ ಪಟ್ಟಸಾಲಿ ನೇಕಾರ ಸಮುದಾಯ ಮುಖಂಡ, ಉದ್ಯಮಿ. ಮತ್ತು ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ಹಾಲಿ ಸದಸ್ಯರಾಗಿರುವ ಡಿ.ಮಂಜುನಾಥ್, ಒಂದು ವರ್ಷದ ಹಿಂದೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿದ್ದರು.

ಆಗ ಕೇರಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ, ಕುಡಿಯುವ ನೀರು ಮತ್ತು ಮೂಲಸೌಕರ್ಯ ಒದಗಿಸುವಲ್ಲಿ ಸ್ಪಂದಿಸುತ್ತಿದ್ದರು. ಪಂಚಾಯಿತಿಯಲ್ಲಿ ಇತ್ಯರ್ಥವಾಗದೇ ಉಳಿದಿದ್ದ ಜನತೆಗೆ ಸಂಬಂಧಿಸಿದ ಕಡತಗಳನ್ನು ಪೂರ್ಣಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಸುಮಾರು ಹತ್ತು ಸಾವಿರ ಜನಸಂಖ್ಯೆಯಿರುವ ಕೇರಳಾಪುರದಲ್ಲಿ ಮೊದಲಿದ್ದ 3 ಅಂಗನವಾಡಿಗಳ ಜೊತೆಗೆ 4ನೇ ಅಂಗನವಾಡಿ ಕಟ್ಟಡ ಮಂಜೂರಾಗಿತ್ತು.

ನಿವೇಶನ ಸಿಗದೇ ಒಂದು ವರ್ಷದಿಂದ ಕಟ್ಟಡ ನಿರ್ಮಾಣಕ್ಕೆ ಹಿನ್ನಡೆಯಾಗಿತ್ತು. ಇದೀಗ ತಮ್ಮ ಆಸ್ತಿಯನ್ನೇ ನೀಡುವ ನಿರ್ಧಾರ ಮಾಡಿದ ಡಿ.ಮಂಜುನಾಥ್, ಡಿ. 18 ರಂದು ಗ್ರಾಮ ಪಂಚಾಯಿತಿಯಲ್ಲಿ ನಡೆದ ಗ್ರಾಮಸಭೆಯಲ್ಲಿ ನಿವೇಶನದ ಪತ್ರವನ್ನು ಮಹಿಳಾ ಮತ್ತು ಮಕ್ಕಳ ಇಲಾಖೆಯ ಅಧಿಕಾರಿಗಳಿಗೆ ಹಸ್ತಾಂತರಿಸಿದ್ದಾರೆ.



ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ:** ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ನೀವು ಇತರರ ಮೇಲೆ ಹೆಚ್ಚುವರಿ ಖರ್ಚು ಮಾಡಬಯಸುತ್ತೀರಿ.

**ವೃಷಭ:** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ.

**ಮಿಥುನ:** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

**ಕರ್ಕಾಟಕ:** ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ.

**ಸಿಂಹ:** ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ.

**ಕನ್ಯಾ:** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು.

**ತುಲಾ:** ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ.

**ವೃಶ್ಚಿಕ:** ಪತ್ನಿ ನೀವು ಹುರಿದುಂಬಿಸಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು.

**ಧನಸ್ಸು:** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಮಕರ:** ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು.

**ಕುಂಭ:** ನಿಮ್ಮ ಆಸಕ್ತಿಗಳನ್ನು ಮುಂದುವರಿಸಲು ಅಥವಾ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ.

**ಮೀನ:** ಸಂಬಂಧಿಗಳು ಬೆಂಬಲ ನೀಡುತ್ತಾರೆ ಮತ್ತು ನಿಮ್ಮ ಮನಸ್ಸಿಗೆ ಆ ಹೊರೆಯಾದ ಆ ತೊಂದರೆಯನ್ನು ಕಡಿಮೆ ಮಾಡುತ್ತಾರೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ.

# ಸಿ.ಟಿ.ರವಿ ಅವರನ್ನು ರಾತ್ರಿಯೆಲ್ಲಾ ಸುತ್ತಿಸಬೇಕಿತ್ತಾ?: ಹೆಚ್.ಡಿ.ಕುಮಾರಸ್ವಾಮಿ

## ● ಸಿ.ಟಿ.ರವಿ ಪ್ರಕರಣದಲ್ಲಿ ಬೆಳಗಾವಿ ಪೊಲೀಸರು ನಡೆದುಕೊಂಡ ರೀತಿಯ ಬಗ್ಗೆ ತೀವ್ರ ಬೇಸರ

• **ಉದಯವಾಹಿನಿ, ಹಾಸನ**

ಸಿ.ಟಿ.ರವಿ ಪ್ರಕರಣದಲ್ಲಿ ಬೆಳಗಾವಿ ಪೊಲೀಸರು ನಡೆದುಕೊಂಡ ರೀತಿಯ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ಬಿಜೆಪಿ ಸ್ನೇಹಿತರು ಸರಿಯಾದ ರೀತಿಯಲ್ಲಿ ಕಾನೂನು ಹೋರಾಟ ಮಾಡಿದರೆ ಪ್ರಕರಣಕ್ಕೆ ಸಂಬಂಧಪಟ್ಟ ಎಲ್ಲಾ ಪೊಲೀಸ್ ಅಧಿಕಾರಿಗಳೆಲ್ಲಾ ಸಸ್ಪೆಂಡ್ ಆಗುತ್ತಾರೆ ಎಂದರು.

ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿಯಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಕೇಂದ್ರ ಸಚಿವರು, ರಾಜ್ಯಸಭೆಯಲ್ಲಿನ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಇವರು ವಿಧಾನಸಭೆಯಲ್ಲಿ ಚರ್ಚೆ ಮಾಡಿದ್ದಾರೆ. ಇದು ರಾಜ್ಯಸಭೆಯಲ್ಲಿ ಪ್ರಾರಂಭವಾದದ್ದು. ಈ ವಿಷಯ ಆ ಸದನಕ್ಕೆ ಸಂಬಂಧಪಟ್ಟ ವಿಷಯ. ಅಮಿತ್ ಶಾ ಅವರು ವಿಧಾನ ಪರಿಷತ್ ಸದಸ್ಯರಾ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಉತ್ತರ ಕರ್ನಾಟಕದ ಸಮಸ್ಯೆ ಬಗ್ಗೆ ಚರ್ಚೆಗೆ ವಿಶೇಷವಾದ ಅವಕಾಶ ಕೊಡುತ್ತೇವೆ ಎಂದು ಡಂಗೂರ ಹೊಡೆದರು.

ನಿನ್ನೆಯೂ ಒಬ್ಬ ಹೆಣ್ಣುಮಗಳು ಬಳ್ಳಾರಿಯಲ್ಲಿ ಮಗುವಿಗೆ ಜನ್ಮ ಕೊಡುವಾಗ ತೀರಿಕೊಂಡಿದ್ದಾಳೆ.

> ತಮಗೆ ಬೇಕಾದಂತೆ ಕೇಸ್‌ಗಳನ್ನು ಬುಕ್ ಮಾಡುತ್ತಿದ್ದಾರೆ. ಯಾವ ರೀತಿ ಅವರ ವಿರೋಧಿಗಳನ್ನು ಸದೆಬಡೆಯಬೇಕೆಂದು ಅಧಿಕಾರ ದುರುಪಯೋಗ, ಕಾನೂನಿನ ಉಲ್ಲಂಘನೆ ಎಂಬುದು ಸರಕಾರದಿಂದಲೇ ಆಗುತ್ತಿದೆ. ನಾನು ಈಗಷ್ಟೇ ದೇವಸ್ಥಾನದಲ್ಲಿ ಪೂಜೆ ಮಾಡಿ ಬಂದು ನಿಂತು ಹೇಳುತ್ತಿದ್ದೇನೆ, ಕಾಲವೇ ಇದಕ್ಕೆಲ್ಲ ಉತ್ತರ ಕೊಡುತ್ತದೆ
> **-ಹೆಚ್.ಡಿ.ಕುಮಾರಸ್ವಾಮಿ**

ಪ್ರತಿನಿತ್ಯ ಈ ಸಾವುಗಳು ಸಂಭವಿಸುತ್ತಿವೆ.

ಇದ್ಯಾವುದರ ಬಗ್ಗೆ ರಾಜ್ಯ ಸರಕಾರಕ್ಕೆ ಕಿಂಚಿತ್ತೂ ಚಿಂತೆ ಇಲ್ಲ ಎಂದು ಕೇಂದ್ರ ಸಚಿವರು ಕಟುವಾಗಿ ಟೀಕಿಸಿದರು. ಈ ಸರಕಾರಕ್ಕೆ ನಾಡಿನ ಭವಿಷ್ಯದ ಬಗ್ಗೆ ಚಿಂತೆ ಇಲ್ಲ ಕೆಲವು ಪೊಲೀಸ್ ಅಧಿಕಾರಿಗಳನ್ನು ಇಟ್ಟುಕೊಂಡು ರಾಜಕೀಯ ವಿರೋಧಿಗಳನ್ನು ದಮನ ಮಾಡಲು ಹೊರಟಿದ್ದಾರೆ.

ಸಿ.ಟಿ.ರವಿ ಅವರನ್ನು ರಾತ್ರಿಯೆಲ್ಲಾ ಸುತ್ತಿಸಬೇಕಿತ್ತಾ? ಅವರು ಒಬ್ಬ ಜನಪ್ರತಿನಿಧಿ ಇದ್ದಾರೆ. ಬಂಧಿಸುವುದಿದ್ದರೆ ನೇರವಾಗಿ ಬೆಂಗಳೂರಿನ ಜನಪ್ರತಿನಿಧಿ ಕೋರ್ಟ್ ಕರೆದುಕೊಂಡು ಬರಬಹುದಿತ್ತು. ರಾತ್ರಿಯಲ್ಲಾ ಸುತ್ತಿಸಬೇಕಾದ ಅವಶ್ಯಕತೆ ಏನಿತ್ತು? ಇದಕ್ಕೆಲ್ಲ ಯಾರು ಡೈರೆಕ್ಷನ್ ಕೊಟ್ಟವರು? ಬಿಜೆಪಿ ಸ್ನೇಹಿತರು ಸರಿಯಾದ ರೀತಿ ಕಾನೂನು ವ್ಯಾಪ್ತಿಯಲ್ಲಿ ಹೋರಾಟ ಮಾಡಿದರೆ ಅಧಿಕಾರಿಗಳೆಲ್ಲಾ ಸಸ್ಪೆಂಡ್ ಆಗುತ್ತಾರೆ. ಮಂತ್ರಿಯೊಬ್ಬರ ಚಿತಾವಣೆಯಿಂದ ಯಾವ ಅಧಿಕಾರಿಗಳು ಸಿ.ಟಿ.ರವಿಗೆ ಮಾನಸಿಕವಾಗಿ ಹಿಂಸೆ ಕೊಟ್ಟಿದ್ದಾರೆ ಅವರು ಅದರ ಪ್ರತಿಫಲ ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದರು.

**ಸೇಡಿನ ರಾಜಕೀಯ;** ರಾಜ್ಯಕ್ಕೆ ಕೆಟ್ಟ ದಿನಗಳು ಕಾದಿವೆ, ಸಚಿವ ಸತೀಶ್ ಜಾರಕಿಹೊಳಿ ಅವರು ಸಿ.ಟಿ.ರವಿ ಅವರನ್ನು ಕೋರ್ಟ್ ಮುಂದೆ ಹಾಜರುಪಡಿಸಿ ಎಂದು ಹೇಳಿದ್ದಾರೆ.




**ಸರಕಾರಕ್ಕೆ ನಾಡಿನ ಭವಿಷ್ಯದ ಚಿಂತೆ ಇಲ್ಲ**

ಈ ರಾಜ್ಯದಲ್ಲಿ ಗೃಹ ಸಚಿವರು ಎನ್ನುವವರು ಇದ್ದಾರಾ? ಕಳೆದ ಆರೇಳು ತಿಂಗಳಿನಿಂದ ಹಲವಾರು ಪ್ರಕರಣಗಳು ಈ ರಾಜ್ಯದಲ್ಲಿ ನಡೆಯುತ್ತಿವೆ. ಕರ್ನಾಟಕಕ್ಕೆ ಭವಿಷ್ಯದಲ್ಲಿ ಅತ್ಯಂತ ಕೆಟ್ಟ ದಿನಗಳು ಕಾದಿವೆ. ರಾಜಕಾರಣದಲ್ಲಿ ವೈಷಮ್ಯ, ದ್ವೇಷ ಬೆಳೆಯಲು ಇವರು ಬೀಜ ಬಿತ್ತನೆ ಮಾಡಿದ್ದಾರೆ.

ಮುಂದೆಯೂ ಸಹ ಇಂತಹುದೇ ಕೆಟ್ಟ ಪರಿಸ್ಥಿತಿ ಮುಂದುವರಿಯುತ್ತದೆ ಎನ್ನುವುದರಲ್ಲಿ ಯಾವುದೇ ಅನುಮಾನ ಬೇಡ ಎಂದು ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು. ರಾಜ್ಯದ ಪೊಲೀಸ್ ವ್ಯವಸ್ಥೆ ಇಡೀ ದೇಶಕ್ಕೆ ಮಾದರಿ ಆಗಿತ್ತು. ನಮ್ಮ ಪೂರ್ವಿಕರು ರಾಜ್ಯದಲ್ಲಿ ಉತ್ತಮ ವಾತಾವರಣ, ವ್ಯವಸ್ಥೆಯನ್ನು ರೂಪಿಸಿದ್ದರು. ಕರ್ನಾಟಕ ಪೊಲೀಸ್ ಎಂದರೆ ದೇಶದಲ್ಲಿಯೇ ಗೌರವ ಇತ್ತು.

ದುರದೃಷ್ಟ ಎಂದರೆ, ಅದೆಲ್ಲವನ್ನೂ ಸರ್ವನಾಶ ಮಾಡಲು ಈ ಸರಕಾರ ಹೊರಟಿದೆ. ಪೊಲೀಸರ ಗೌರವವನ್ನು ಮಣ್ಣುಪಾಲು ಮಾಡುವ ನಿಟ್ಟಿನಲ್ಲಿ ಇವರು ಕೆಲಸ ಮಾಡುತ್ತಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

### ಕೃತಜ್ಞತೆ ಇಲ್ಲದಂತಹ ಅನಾಗರೀಕ ಸರಕಾರ

ಕಲ್ಬುರ್ಗಿಯಲ್ಲಿ ಸಿಎಂ ಅವರು ಜಯದೇಶ ಆಸ್ಪತ್ರೆ ಉದ್ಘಾಟನೆ ಮಾಡಿದ್ದಾರೆ, ಆ ಆಸ್ಪತ್ರೆಗೆ ಏನಿದೆ ಅವರ ಕೊಡುಗೆ, ನಾನು ಸಿಎಂ ಆಗಿದ್ದಾಗ ಅದಕ್ಕೆ ಚಾಲನೆ ಕೊಟ್ಟಿದ್ದೆ. ನಂತರ ಬಂದ ಬಿಜೆಪಿ ಸರಕಾರ 128 ಕೋಟಿ ಹಣ ಬಿಡುಗಡೆ ಮಾಡಿತ್ತು ಜಯದೇವ ಆಸ್ಪತ್ರೆಯಿಂದ ಡಾ.ಸಿ.ಎನ್.ಮಂಜುನಾಥ್ ಅವರು 40 ಕೋಟಿ ಸಂಗ್ರಹಿಸಿ ಹೂಡಿಕೆ ಮಾಡಿದ್ದರು. ಹಿಂದೆ ಕೆಲಸ ಮಾಡಿರುವವರನ್ನು ನೆನಪಿಸಿಕೊಳ್ಳುವಂತಹ ಕೃತಜ್ಞತೆ ಇಲ್ಲದಂತಹ ಅನಾಗರೀಕ ಸರಕಾರ ಇದು. ಇವರ ಕೊಡುಗೆ ಏನೂ ಇಲ್ಲ. ಈಗ ನೋಡಿದರೆ ನಿಮ್ಯಾನ್ಸ್ ಮಾಡ್ತಾರಂತೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು.

## ಅಮೀತ್ ಶಾ ಅವರನ್ನು ಗಡಿಪಾರು ಮಾಡಿ : ಡಿಎಸ್‌ಎಸ್ ಒತ್ತಾಯ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೆಂಭಾವಿ**

ಸಂವಿಧಾನ ಶಿಲ್ಪಿ ಡಾ: ಬಾಬಾ ಸಾಹೇಬ ಅಂಬೇಡ್ಕರ ಅವರನ್ನು ಅವಮಾನಿಸಿ, ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮೀತಷಾ ಅವರನ್ನು ದೇಶದಿಂದ ಗಡಿಪಾರು ಮಾಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಭೀಮವಾದ ಸಂಘಟನೆಯ ಪದಾಧಿಕಾರಿಗಳು ಉಪತಹಶೀಲ್ದಾರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದಾರೆ. ಮನವಿ ಸಲ್ಲಿಸಿ ಮಾತನಾಡಿದ ಕೆಂಭಾವಿ ಹೋಬಳಿ ಶಾಖೆಯ ಅಧ್ಯಕ್ಷ ಬಸವರಾಜ.ಬಿ.ಹೇಮನೂರ, ಅಮೀತಷಾ ಡಾ: ಬಾಬಾ ಸಾಹೇಬ ಅಂಬೇಡ್ಕರ ಕುರಿತು ಮಾತನಾಡುವಾಗ ಮಹಿಳೇಯರು ಡಾ: ಬಾಬಾ ಸಾಹೇಬ ಅಂಬೇಡ್ಕರ ಹೆಸರನ್ನು ಜಪಿಸುವಷ್ಟು ಮಹಿಳೆಯರು ದೇವರ ಹೆಸರು ಜಪಿಸಿದರೆ ಏಳು ಜನ್ಮದ ಪುಣೆ ಬರುತ್ತಿದ್ದು ಎಂದು ಹೇಳುವ ಮೂಲಕ ಡಾ: ಬಾಬಾ ಸಾಹೇಬ ಅಂಬೇಡ್ಕರವರನ್ನು ಅವಮಾನಿಸಿದಾರೆ. ಡಾ: ಬಾಬಾ ಸಾಹೇಬ ಅಂಬೇಡ್ಕರರವರು ಸಂವಿಧಾನವನ್ನು ಬರೆಯದಿದ್ದರೆ ಎಷ್ಟುತ್ತಿಗೆ ದೇಶದ ಮಹಿಳೆಯರು ಸ್ಥಿತಿ ಹೇಗಿರುತ್ತಿತ್ತು ಎನ್ನುವ ದೇಶದ ಮಹಿಳೇಯರಿಗೆ ಗೊತ್ತಿದೆ ಹಿಂದೆ ಗುಜುರಾತಿನಲ್ಲಿ ಗಲಬೇ ಮಾಡಿಸಿದ್ದರಿಂದ ಗಡಿಪಾರು ಮಾಡಲಾಗಿತ್ತು, ಈಗ ಡಾ: ಬಾಬಾ ಸಾಹೇಬ ಅಂಬೇಡ್ಕರರ ಬಗ್ಗೆ ಹೀಗೆ ಮಾತನಾಡುವ ಅಮೀತಷಾರವರನ್ನು ಈ ದೇಶದಿಂದ ಗಡಿಪಾರು ಮಾಡಬೇಕೆಂದು ಕರ್ನಾಟಕ ದಲಿತ ಸಮಿತಿ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಯಲಪ್ಪ ಭಾವಿಮನಿ, ಜಟ್ಟೆಪ್ಪ ಮುಪ್ಪಳ್ಳಿ, ನಿಂಗಪ್ಪ ಕಟ್ಟಿಮನಿ, ಸಿದ್ದಪ್ಪ ಬಂಡಿ, ಆಕಾಶ್, ಪರಮಣ್ಣ ಪೂಜಾರಿ ಹಾಗೂ ಇತರರು ಇದ್ದರು.

## ಪಾಲಿಕೆಗೆ ಸವಾಲಾಗಿ ಪರಿಣಮಿಸಿದ ಕಸ ವಿಲೇವಾರಿ

• **ಉದಯವಾಹಿನಿ, ಶಿವಮೊಗ್ಗ**

ಯಾವುದೇ ನಗರ ಎಷ್ಟೇ ಪ್ರಗತಿ ಹೊಂದಿದ್ದರೂ ಅದು ಸುಂದರ ಎನಿಸಿಕೊಳ್ಳುವುದು ಸ್ವಚ್ಛತೆ ಕಾಪಾಡಿದಾಗ ಮಾತ್ರ. ಆದರೆ, ಇಲ್ಲಿನ ವಿನೋಬನಗರದ 60 ಅಡಿ ರಸ್ತೆ ಬಳಿಯಿರುವ ನರಸಿಂಹ ಬಡಾವಣೆಯ ಕೆಲ ನಿವಾಸಿಗಳು ರಸ್ತೆಯಲ್ಲಿಯೇ ಕಸ ಸುರಿಯುತ್ತಿದ್ದು, ಸ್ವಚ್ಛತೆ ಎಂಬುದು ಮರೀಚಿಕೆಯಾಗಿದೆ.

ಹಸಿ ಮತ್ತು ಒಣ ಕಸವನ್ನು ಒಂದೇ ಕಡೆ ಸುರಿಯುತ್ತಿರುವುದರಿಂದ ದುರ್ವಾಸನೆ ಬೀರುತ್ತಿದೆ. ಜತೆಗೆ ಸೊಳ್ಳೆಗಳು ಉತ್ಪತ್ತಿಯಾಗಿ ಹಲವು ಸಾಂಕ್ರಾಮಿಕ ರೋಗಗಳು ಹರಡುವ ಅಪಾಯ ಎದುರಾಗಿದೆ. ಮತ್ತೆ ಕೆಲವರು ತಮ್ಮ ಮನೆಗಳ ಅಕ್ಕಪಕ್ಕದಲ್ಲಿರುವ ಖಾಲಿ ನಿವೇಶನಗಳಲ್ಲಿಯೂ ಕಸ ಸುರಿದು ಹೋಗುತ್ತಿದ್ದಾರೆ. ಪರಿಣಾಮವಾಗಿ ರೋಗ ಹರಡುವ ತಾಣಗಳಾಗಿ ಮಾರ್ಪಟ್ಟಿವೆ. ಮಹಾನಗರ ಪಾಲಿಕೆಯಿಂದ ಹಸಿ ಹಾಗೂ ಒಣ ಕಸವನ್ನು ಮನೆಯಲ್ಲಿಯೇ ವಿಂಗಡಣೆ ಮಾಡಲು ನಗರ ಪ್ರದೇಶದ ಪ್ರತಿ ಮನೆಗೂ ಕಸದ ಡಬ್ಬಿಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಕಸ ಸಂಗ್ರಹಿಸಿಕೊಂಡು ಹೋಗಲು ನಿತ್ಯ ಬೆಳಿಗ್ಗೆ, ಪಾಲಿಕೆಯ ವಾಹನಗಳು ಮನೆ ಬಾಗಿಲಿಗೇ ಬರುತ್ತವೆ. ಆದರೂ ನಿವಾಸಿಗಳು ಪಾಲಿಕೆಯ ವಾಹನಗಳಿಗೆ ಕಸವನ್ನು ಹಾಕುತ್ತಿಲ್ಲ. ಬದಲಿಗೆ ರಸ್ತೆಯಲ್ಲಿಯೇ ಸುರಿಯುತ್ತಿದ್ದಾರೆ. ಸಾರ್ವಜನಿಕರ ಸಹಕಾರದ ಕೊರತೆಯಿಂದಾಗಿ ಕಸ ವಿಲೇವಾರಿ ಪಾಲಿಕೆಯ ಅಧಿಕಾರಿಗಳಿಗೆ ತಲೆನೋವಾಗಿ ಪರಿಣಮಿಸಿದೆ.

ಸ್ವಚ್ಛತೆ ಕಾಪಾಡುವಂತೆ ನಿತ್ಯವೂ ಕಸಸಂಗ್ರಹ ವಾಹನಗಳಲ್ಲಿ ಘೋಷಣೆ ಕೂಗುವ ಮೂಲಕ ಸಾಕಷ್ಟು ಜಾಗೃತಿ ಮೂಡಿಸುತ್ತಿದ್ದರೂ ಜನರು ತಮ್ಮ ಧೋರಣೆಯನ್ನು ಬದಲಾಯಿಸಿ ಕೊಳ್ಳದಿರುವುದು ಮೇಲುನೋಟಕ್ಕೆ ಕಂಡು ಬರುತ್ತಿದೆ.


ಉದಯವಾಹಿನಿ ಚಿತ್ರ

> ರಸ್ತೆಯಲ್ಲಿ ಯಾವುದೇ ಕಾರಣಕ್ಕೂ ಕಸ ಹಾಕಬಾರದು. ಪಾಲಿಕೆಯ ಕಸ ಸಂಗ್ರಹ ವಾಹನಗಳು ನಿತ್ಯ ಬೆಳಿಗ್ಗೆ ಮನೆ ಮುಂದೆ ಬರಲಿದ್ದು, ಅಲ್ಲಿಯೇ ಕಸವನ್ನು ಹಾಕಬೇಕು. ಸಾರ್ವಜನಿಕರು ತಮ್ಮ ಜವಾಬ್ದಾರಿ ಅರಿತು ಸ್ವಚ್ಛತೆಗೆ ಕೈಜೋಡಿಸಬೇಕು
> **-ಎಂ.ರಾಜಶೇಖರ್**
> **ನರಸಿಂಹ ಬಡಾವಣೆ ನಿವಾಸಿ**

## ಬಿಸಿಯೂಟ ನೌಕರರ ಪ್ರಮುಖ ಬೇಡಿಕೆಗಳು ಈಡೇರಿಸಿ: ಓಂಕಾರ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಿಂಚೋಳಿ**

ರಾಜ್ಯ ಸರ್ಕಾರ ಚುನಾವಣಾ ಸಂದರ್ಭದ ಭರವಸೆಯಂತೆ ವೇತನ ಹೆಚ್ಚಳ,ಎಪ್ರಿಲ್ ಮೇ ತಿಂಗಳಿನಲ್ಲಿ ಬರಗಾಲ ಘೋಷಿತ ಜಿಲ್ಲೆಗಳಲ್ಲಿ ಕೆಲಸ ಮಾಡಿದ ವೇತನ ಬಿಡುಗಡೆಗೊಳಿಸುವಂತೆ ಅಕ್ಷರ ದಾಸೋಹ ನೌಕರರ ಸಂಘದ ಅಧ್ಯಕ್ಷೆ ವಿಜಯಲಕ್ಷ್ಮಿ ಓಂಕಾರ ಒತ್ತಾಯಿಸಿದರು. ಪಟ್ಟಣದ ಅಕ್ಷರ ದಾಸೋಹ ಅಧಿಕಾರಿಗಳ ಮೂಲಕ ಅಕ್ಷರ ದಾಸೋಹ ನೌಕರರ ಸಂಘದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮನವಿಪತ್ರ ಸಲ್ಲಿಸಿದರು. ಅಡುಗೆ ಕೇಂದ್ರಗಳು ಪುನಶ್ಚೇತನಗೊಳಿಸಬೇಕು, ಗುಣಮಟ್ಟದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಬೇಕು, ತಿಂಗಳಿಗೆ ಸರಿಯಾದ ಸಮಯಕ್ಕೆ ಗೌರವಧನ ವಿತರಿಸಬೇಕು, ಸಾದಿಲ್ವಾರು ಹಣ,ಮೊಟ್ಟೆ ಹಣಗಳು ಸೂಕ್ತವಾಗಿ ಬಿಡುಗಡೆಗೊಳಿಸಬೇಕು, ಎಸ್ಡಿಎಂಸಿ ಮತ್ತು ಮುಖ್ಯಗುರುಗಳು ನಡುವೆ ಜಂಟಿ ಖಾತೆಯಿರುವುದು ಬದಲಾಯಿಸಿ ಮುಖ್ಯ ಅಡುಗೆ ಯವರ ಮತ್ತು ಮುಖ್ಯಗುರುಗಳ ಜಂಟಿ ಖಾತೆ ಪ್ರಾರಂಭಿಸಬೇಕು ಎಂದು ಮನವಿಪತ್ರ ಓದಿ ಸಲ್ಲಿಕೆ ಮಾಡಿದರು. ಲಲಿತಾ ಬಿ.ರಟಕಲ್,ಪುಷ್ಪಾ ಹೋಸಳ್ಳಿ,ವಿಜಯಲಕ್ಷ್ಮಿ ಕೋಡ್ಲಿ,ಜಯಶ್ರೀ ಬೀರನಳ್ಳಿ,ಇಂದುಮತಿ ನಾಗಾಯಿದ್ಲಾಯಿ,ಇದ್ದರು.

## ಅತ್ಯಾಚಾರ ಭ್ರೂಣ ಹತ್ಯೆ : ನಿಷ್ಪಕ್ಷಪಾತ ತನಿಖೆಗೆ ಆಗ್ರಹ

• **ಉದಯವಾಹಿನಿ, ಮುದ್ದೇಬಿಹಾಳ**

ಅತ್ಯಾಚಾರದಿಂದ ಗರ್ಭ ಧರಿಸಿದ್ದ ಯುವತಿಗೆ ಸ್ಥಳೀಯ ಖಾಸಗಿ ಆಸ್ಪತ್ರೆಯೊಂದರಲ್ಲಿ ಗರ್ಭಪಾತ ಮಾಡಿಸಿ, ಅಂದಾಜು 6 ತಿಂಗಳ ಭ್ರೂಣವನ್ನು ಬಟ್ಟೆಯೊಂದರಲ್ಲಿ ಸುತ್ತಿ ಬಸ್ ನಿಲ್ದಾಣ ಪಕ್ಕದಲ್ಲಿರುವ ಮುಳ್ಳುಕಂಟಿಗಳಿಂದ ಕೂಡಿದ ಪ್ರದೇಶದಲ್ಲಿ ಎಸೆದು ಹೋಗಿದ್ದು, ಅದು ಹಂದಿ, ನಾಯಿಗಳಿಗೆ ಆಹಾರವಾಗಿರುವ ಆಘಾತಕಾರಿ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಡಿ.20ರಂದು ರಾತ್ರಿಯೇ ಘಟನೆ ನಡೆದಿದ್ದು ಅಂದೇ ರಾತ್ರಿ ಮುದ್ದೇಬಿಹಾಳ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪೊಲೀಸ್ ಮತ್ತು ಫೊರೆನ್ಸಿಕ್ ತಜ್ಞರ ತಂಡ ಸಾಕ್ಷ್ಯ ಸಂಗ್ರಹಿಸಲು ಸ್ಥಳಕ್ಕೆ ಬಂದಿದ್ದಾಗ ಇದು ಬಹಿರಂಗಗೊಂಡಿದೆ.

ಮುದ್ದೇಬಿಹಾಳ ತಾಲೂಕು ಗುಡದಿನ್ನಿ ಗ್ರಾಮದ ಯುವತಿ ಗರ್ಭಪಾತಕ್ಕೆ ಒಳಗಾಗಿದ್ದಾಳೆ ಆಕೆಯ ಆರೋಗ್ಯ ಸ್ಥಿತಿ ಗಂಭೀರವಾಗಿದೆ. ಅತ್ಯಾಚಾರ ನಡೆಸಿ ಗರ್ಭಧರಿಸುವಂತೆ ಮಾಡಿರುವ ಅದೇ ಗ್ರಾಮದ ಯುವಕ ಪ್ರವೀಣ ಗುರುಸಂಗಪ್ಪ ಮುತ್ತತ್ತಿ ಮತ್ತು ಗರ್ಭಪಾತಕ್ಕೆ ಪ್ರಚೋದನೆ ನೀಡಿರುವ ಪ್ರವೀಣನ ತಂದೆ ಗುರುಸಂಗಪ್ಪ ಮುತ್ತತ್ತಿ ವಿರುದ್ಧ ಸಂತ್ರಸ್ತೆ ತಾಯಿ ಗಂಗೂಬಾಯಿ ಬಿರಾದಾರ ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.


ಉದಯವಾಹಿನಿ ಚಿತ್ರ

**ಘಟನೆ ತಡವಾಗಿ ಬೆಳಕಿಗೆ**

ಆರೋಪಿತ ಯುವಕ ಸಂತ್ರಸ್ತೆ ಯುವತಿಗೆ ಭಯ ಹುಟ್ಟಿಸಿ, ಪದೇ ಪದೇ ಅತ್ಯಾಚಾರ ಮಾಡಿ ಗರ್ಭಧರಿಸಲು ಕಾರಣನಾಗಿದ್ದಾನೆ. ಇವನು ತನ್ನ ಕೃತ್ಯ ಮರೆಮಾಚುವ ಉದ್ದೇಶದಿಂದ ಯುವತಿಗೆ ಮಾತ್ರೆ ಕೊಟ್ಟು ಗರ್ಭಪಾತ ಮಾಡಿಸಿ ಆಕೆ ಸಾವು ಬದುಕಿನ ಮಧ್ಯೆ ಹೋರಾಡುವಂತೆ ಮಾಡಿದ್ದಾನೆ. ಇದಕ್ಕೆ ಯುವಕನ ತಂದೆ ಗುರುಸಂಗಪ್ಪ ಕುಮ್ಮಕ್ಕು ನೀಡಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಸಧ್ಯ ಆರೋಪಿಗಳು ತಲೆಮರೆಸಿಕೊಂಡಿದ್ದು ಇವರ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

ಇಲ್ಲಿನ ಬಸ್ ನಿಲ್ದಾಣದ ಹತ್ತಿರ ಇರುವ ಖಾಸಗಿ ಆಸ್ಪತ್ರೆಯೊಂದರಲ್ಲಿ ಯುವತಿಗೆ ಗರ್ಭಪಾತ ಮಾಡಿಸಲಾಗಿದೆ.

ಗರ್ಭಪಾತದ ನಂತರ ವೈದ್ಯರು ಭ್ರೂಣವನ್ನು ಬಟ್ಟೆಯೊಂದರಲ್ಲಿ ಸುತ್ತಿ ಎಲ್ಲಾದರೂ ಎಸೆಯುವಂತೆ ಆರೋಪಿತನ ಸಹೋದರನಿಗೆ ನೀಡಿದ್ದರು. ಆತ ಬಸ್ ನಿಲ್ದಾಣ ಪಕ್ಕದ ಮುಳ್ಳುಕಂಟಿಗಳಿಂದ ಕೂಡಿದ್ದ ಸ್ಥಳದಲ್ಲಿ ಎಸೆದಿದ್ದಾನೆ. ಹಂದಿ, ನಾಯಿಗಳು ದೇಹವನ್ನು ತಿಂದು ಹಾಕಿದ್ದು ರಕ್ತದಿಂದ ಕೂಡಿದ ಬಟ್ಟೆಗಳು, ಅಳಿದುಳಿದ ಮಾಂಸದ ತುಣುಕುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಪೊಲೀಸರು ನಿಸ್ಪಕ್ಷಪಾತ ತನಿಖೆ ನಡೆಸಿ ಭ್ರೂಣಹತ್ಯೆ ಮಾಡಿರುವ ಆಸ್ಪತ್ರೆ ಮತ್ತು ವೈದ್ಯರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎನ್ನುವ ಮಾತು ಅಲ್ಲಿ ಸೇರಿದ್ದ ಜನರಿಂದ ಕೇಳಿಬಂತು.

## ಸೈಬರ್ ವಂಚಕರಿಗೆ ಸಿಮ್ ಪೂರೈಸುತ್ತಿದ್ದವನ ಬಂಧನ

• **ಉದಯವಾಹಿನಿ, ಮಂಗಳೂರು**

ಸೈಬರ್ ವಂಚಕರಿಗೆ ಅಕ್ರಮವಾಗಿ ಸಿಮ್ ಕಾರ್ಡ್ ಪೂರೈಸುತ್ತಿದ್ದ ಆರೋಪಿಯನ್ನು ಮಂಗಳೂರಿನ ಸೆನ್ ಕ್ರೈಂ ಬ್ರಾಂಚ್ ಪೊಲೀಸರು ದೆಹಲಿ ವಿಮಾನ ನಿಲ್ದಾಣದಲ್ಲಿ ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಕಣಾತಲ ವಾಸುದೇವ ರೆಡ್ಡಿ (25) ಎಂದು ಗುರುತಿಸಲಾಗಿದೆ. ಆರೋಪಿ ಸೈಬರ್ ವಂಚಕರಿಗೆ ಭಾರತದಿಂದ ವಿವಿಧ ಕಂಪನಿಗಳ 500ಕ್ಕೂ ಹೆಚ್ಚು ಸಿಮ್ಮಳನ್ನು ಪೂರೈಕೆ ಮಾಡಿದ್ದ ಆರೋಪ ಎದುರಿಸುತ್ತಿದ್ದಾನೆ. ಆರೋಪಿ ಕಣಾತಲ ವಾಸುದೇವ ರೆಡ್ಡಿ ಒಡಿಶಾ ಮೂಲದವನು. ಸೈಬರ್ ವಂಚನೆ ಪ್ರಕರಣದ ತನಿಖೆ ನಡೆಸುತ್ತಿದ್ದ ವೇಳೆ ಆರೋಪಿ ಕಣಾತಲ ವಾಸುದೇವ ರೆಡ್ಡಿ ಸಿಮ್ ಪೂರೈಕೆ ಮಾಹಿತಿ ಮಂಗಳೂರಿನ ಸೆನ್ ಪೊಲೀಸರಿಗೆ ಗೊತ್ತಾಗಿದೆ.

ಕೂಡಲೇ ಕಾರ್ಯಪ್ರವತ್ತರಾದ ಪೊಲೀಸರು ಆರೋಪಿ ಕಣಾತಲ ವಾಸುದೇವ ರೆಡ್ಡಿಯ ಹೆಡೆಮುರಿ ಕಟ್ಟುವಲ್ಲಿ ಯಶಸ್ವಿಯಾಗಿದ್ದಾರೆ. ವಂಚಕ ನಡವೂಲು ವೀರವೆಂಕಟ ಸತ್ಯನಾರಾಯಣ ರಾಜು ಎಂಬುವವನು ಹಣ ವಿನಿಯೋಗಿಸಲು ವಾಟ್ಸಾಪ್ ಮೂಲಕ ನಕಲಿ ಲಿಂಕ್ ಕಳುಹಿಸಿ ಅದರ ಮೂಲಕ ಲಕ್ಷಾಂತರ ರೂ. ದೋಚಿದ್ದನು. ಹೀಗೆ, ಹಂತ ಹಂತವಾಗಿ 10,84,017 ರೂಪಾಯಿ ಪಡೆದು ವಂಚನೆ ಎಸಗಿದ್ದಾನೆ. ಪ್ರಕರಣ ಸಂಬಂಧ ಪೊಲೀಸರು ಈಗಾಗಲೇ ಸೈಬರ್ ವಂಚಕ ನಡವೂಲು ವೀರ ವೆಂಕಟ ಸತ್ಯನಾರಾಯಣ ರಾಜುನನ್ನು ಬಂಧಿಸಿದ್ದಾರೆ.

**ಕಣಾತಲ ವಿರುದ್ಧ ಲುಕ್‌ಔಟ್ ನೋಟಿಸ್**

ಆರೋಪಿ ನಡವೂಲು ವೀರವೆಂಕಟ ಸತ್ಯನಾರಾಯಣ ರಾಜುನನ್ನು ವಿಚಾರಣೆಗೆ ಒಳಪಡಿಸಿದಾಗ ಸಿಮ್ ಮಾರಾಟ ದಂಧೆಯ ಬಗ್ಗೆ, ಬಾಯಿ ಬಿಟ್ಟಿದ್ದಾನೆ. ಕೂಡಲೇ ಪೊಲೀಸರು ಕಣಾತಲ ವಿರುದ್ಧ ಲುಕ್ ಔಟ್ ನೋಟಿಸ್ ಹೊರಡಿಸಿದ್ದರು. ಆರೋಪಿ ಕಣಾತಲ ದುಬೈಗೆ ತೆರಳು ದೆಹಲಿ ವಿಮಾನ ನಿಲ್ದಾಣಕ್ಕೆ ಆಗಮಿಸಿದಾಗ, ಇಲ್ಲಿನ ಇಮಿಗ್ರೇಶನ್ ಅಧಿಕಾರಿಗಳು ಆರೋಪಿಯನ್ನು ವಶಕ್ಕೆ ಪಡೆದರು. ಇನ್ನುಳಿದ ಆರೋಪಿಗಳ ಪತ್ತೆಗೆ ಮಂಗಳೂರು ಪೊಲೀಸರಿಂದ ತನಿಖೆ ಮುಂದುವರೆದಿದೆ.

## ಪ್ರವಾಸೋದ್ಯಮ ನೆಪದಲ್ಲಿ ಅಕ್ರಮ ಚಟುವಟಿಕೆ?

• **ಉದಯವಾಹಿನಿ, ಗಂಗಾವತಿ**

ತಾಲ್ಲೂಕಿನ ಸಾಣಾಪುರ, ಆನೆಗೊಂದಿ ಭಾಗ ಪ್ರವಾಸಿಗರ ವೀಕ್ಷಣೆಗೆ ಹೇಳಿ ಮಾಡಿಸಿದ ಜಾಗ. ಇಲ್ಲಿನ ಸ್ಥಳಗಳ ವೀಕ್ಷಣೆಗೆ ನಿತ್ಯ ಸಾವಿರಾರು ಸಂಖ್ಯೆಯ ಪ್ರವಾಸಿಗರು ಭೇಟಿ ನೀಡುತ್ತಿದ್ದು, ಪ್ರವಾಸೋದ್ಯಮದ ನೆಪದಲ್ಲಿ ಸ್ಥಳಿಯರು ಪ್ರವಾಸಿಗರಿಗೆ ಗಾಂಜಾ ಮಾರಾಟ, ಪರವಾನಗಿ ಇಲ್ಲದೆ ಹರಿಗೋಲು ಸವಾರಿ, ಪ್ರವಾಸಿಗರಿಗೆ ಪರವಾನಗಿ ಇಲ್ಲದೆ ದ್ವಿಚಕ್ರ ವಾಹನ ಬಾಡಿಗೆ, ಮನೆ ಬಾಡಿಗೆಗೆ ನೀಡುವ ಚಟುವಟಿಕೆಗಳು ಹೆಚ್ಚಾಗಿವೆ. ಸಾಣಾಪುರ, ಆನೆಗೊಂದಿ ಭಾಗದಲ್ಲಿ ಬೆಟ್ಟಗಳು, ಪ್ರಕೃತಿಯ ಸೊಬಗು, ಕುರುಚಲು ಗಿಡಗಳು, ಕಲ್ಲು, ನೀರು, ರೆಸಾರ್ಟ್‌ಗಳು. ಸ್ವಚ್ಛ ಪರಿಸರದಲ್ಲಿನ ಪ್ರವಾಸಿ ಸ್ಥಳಗಳು, ಅಂಜನಾದ್ರಿ, ಪಂಪಾಸರೋವರ, ನವವೃಂದಾವನ, ಋಷಿಮುಖ ಪರ್ವತ, ದುರ್ಗಾದೇವಿ ಬೆಟ್ಟ, ಸಾಣಾಪುರ ಕೆರೆ, ವಾಟರ್‌ಫಾಲ್ಸ್ ಸ್ಥಳಗಳು ಪ್ರವಾಸಿಗರನ್ನು ಕೈಬೀಸಿ ಕರೆಯುವಂತಿದ್ದು. ಹಬ್ಬ-ಹರಿದಿನ, ವಾರಾಂತ್ಯದಲ್ಲಿ ಸಮಯ ದಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚು.


ಉದಯವಾಹಿನಿ ಚಿತ್ರ

ಹರಿಗೋಲು ಸವಾರಿ, ಸಾಣಾಪುರ ವಾಟರ್ ಫಾಲ್ಸ್, ಐಬಿ ಬಳಿ ಹರಿಗೋಲು ಸವಾರಿಗೆ ಅರಣ್ಯ ಇಲಾಖೆ, ಗ್ರಾಮ ಪಂಚಾಯಿತಿ ನಿಷೇಧ ಹೇರಿದ್ದರೂ ಸ್ಥಳೀಯರು ಐಬಿ ಬಳಿಯ ತುಂಗಭದ್ರಾ ನದಿಯಲ್ಲಿ ಪ್ರವಾಸಿಗರನ್ನು ತೆಪ್ಪದಲ್ಲಿ ಕೂಡಿಸಿಕೊಂಡು ಸವಾರಿ ಮಾಡಿಸುತ್ತಾರೆ. ಹರಿಗೋಲು ಸವಾರರು ನಿಗದಿತ ದರಪಟ್ಟಿ ಬಳಸದೆ ಮನಬಂದಂತೆ ಹಣ ಪಡೆಯುತ್ತಾರೆ ಎನ್ನುವುದು ಪ್ರವಾಸಿಗರ ಆರೋಪವಾಗಿದೆ.

**ಗಾಂಜಾ ಮಾರಾಟ:** ವಾರಾಂತ್ಯಕ್ಕೆ ಸಾಣಾಪುರ, ಅನೆಗೊಂದಿ ಭಾಗದ ಪ್ರವಾಸಿ ತಾಣಗಳ ವೀಕ್ಷಣೆಗೆ, ಮೋಜು ಮಸ್ತಿಗೆ ಬಹುತೇಕ ಮುಂಬೈ, ಚೆನ್ನೈ, ಬೆಂಗಳೂರು, ಕೋಲ್ಕತ್ತ, ಹೈದರಾಬಾದ್, ಪುಣೆಯಿಂದ ಜನ ಬರುತ್ತಿದ್ದು, ಇವರಿಗೆ ಗಾಂಜಾ, ಮದ್ಯ ಅಕ್ರಮ ಮಾರುವ ಮಾಡಲಾಗುತ್ತಿದೆ ಎನ್ನುವ ದೂರುಗಳು ಇವೆ. ಈಚೆಗೆ ಪೊಲೀಸ್ ಇಲಾಖೆ ಕ್ಲಿಪ್ ಜಂಪಿಂಗ್, ಬೈಕ್ ಬಾಡಿಗೆ ನೀಡುವವರಿಗೆ, ಹರಿಗೋಲು ಸವಾರರಿಗೆ ಎಚ್ಚರಿಕೆ ನೀಡಿದೆ.

## ಭೀಮಾ ಕೊರೇಗಾಂವ ವಿಜಯೋತ್ಸವ: ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಯಶಸ್ವಿಗೊಳಿಸಿ

• **ಉದಯವಾಹಿನಿ, ಸಿಂಧನೂರು**

ಭೀಮಾ- ಕೊರೇಗಾಂವ್ ವಿಜಯೋತ್ಸವ ಕುರಿತು ವಿಚಾರ ಸಂಕಿರಣ ಹಾಗೂ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ತಾಲ್ಲೂಕು ವತಿಯಿಂದ ಕ್ಯಾಲೆಂಡರ್ ಬಿಡುಗಡೆ ಹಾಗೂ ಪತ್ರಕರ್ತರಿಗೆ ಸನ್ಮಾನ ಕಾರ್ಯಕ್ರಮವನ್ನು ಜನವರಿ 12-01-2025 ರಂದು ನಗರದ ಕೋಟೆ ಈರಣ್ಣ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ನಗರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ತಾಲ್ಲೂಕು ಅಧ್ಯಕ್ಷರು ಮಹಾಕಾಳೆಪ್ಪ ಅವರು ಭೀಮ ಕೋರೆಗಾಂವ್ ದಂಗೆ. ಜನವರಿ 01-1818 ( 207ನೇ ವರ್ಷದ ಭೀಮ ಕೋರೆಗಾಂವ್ ವಿಜಯೋತ್ಸವ ಕಾರ್ಯಕ್ರಮದ ಉದ್ಘಾಟನೆ ಸ್ಥಳಿಯ ಶಾಸಕ ಹಂಪನಗೌಡ ಬಾದರ್ಲಿ ಮತ್ತು ಮಾಜಿ ಸಂಸದರು ಕೆ.ವಿರೂಪಾಕ್ಷಪ್ಪ ಹಾಗೂ ಕ.ರಾ.ಛ.ಮ. ಜಿಲ್ಲಾಧ್ಯಕ್ಷರಾದ ಶಿವರಾಜ್ ಜಾನೇಕಲ್ ಅವರು ಮಾಡಲಿದ್ದಾರೆ. ಡಾ.ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ, ಆರ್ ಬಸನಗೌಡ ಪಾಟೀಲ ತುರ್ವಿಹಾಳ ಹಾಗೂ ವೆಂಕಟರಾವ್ ನಾಡಗೌಡ ಮಾಜಿ ಸಚಿವ ಅವರು ಮಾಲಾರ್ಪಣೆ ಮಾಡುವವರು. ಭೀಮ್ ಕೋರೇಗೌಂವ್ ಯೋದರ ವಿಜಯ ಸ್ಥಂಭಕ್ಕೆ ಮಾಲಾರ್ಪಣೆ ಅರುಣ್ ಎಚ ದೇಸಾಯಿ ಮತ್ತು ಮಂಜುನಾಥ ಗುಂಡೂರು ನಗರ ಸಭೆ ಪೌರಾಯುಕ್ತರು ಹಾಗೂ ಬಿ ಎಸ್ ತಳವಾರ್ ಅವರು ಮಾಲಾರ್ಪಣೆ ಮಾಡುವವರು.



ಉದಯವಾಹಿನಿ ಚಿತ್ರ

**ಕ್ಯಾಲೆಂಡರ್ ಬಿಡುಗಡೆ:** ಬಸನಗೌಡ ಬಾದರ್ಲಿ ವಿಧಾನ ಪರಿಷತ್ ಸದಸ್ಯರು ಮತ್ತು ಕೆ ಕರಿಯಪ್ಪ ಬಿಜೆಪಿ ಮುಖಂಡರು. ಡಾ.ಕೆ ಶಿವರಾಜ್ ಅವರು ಕ್ಯಾಲೆಂಡರ್ ಬಿಡುಗಡೆ ಮಾಡಲಿದ್ದಾರೆ ಎಂದು ಹೇಳಿದರು. ಮುಖ್ಯ ಭಾಷಣಕಾರರಾಗಿ ಆರ ಮಾನಸಯ್ಯ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಟಿಯುಸಿಐ ನವದೆಹಲಿ. ನಿರುಪಾದೆಪ್ಪ ಅವರು ಹಾಗೂ ಚಿಂತಕರು ಸಾಹಿತಿಗಳು ಭಾಗವಹಿಸಿದ್ದಾರೆ ಎಂದು ಹೇಳಿದರು ಆದ್ದರಿಂದ ಈ ಕೊರೇಗೌಂವ್ ವಿಜಯ ಕಾರ್ಯಕ್ರಮಕ್ಕೆ ವಿವಿಧ ಸಮುದಾಯ ಮುಖಂಡರು ಹಾಗೂ ವಿವಿಧ ಸಂಘಟನೆಗಳು ಮುಖಂಡರು ಹಾಗೂ ಸಮಾಜದ ಅನೇಕ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ವೀರೇಶ್ ಹಂಚಿನಾಳ ಅಂಬಣ್ಣ ಮಲ್ಲಾಪೂರ. ಪತ್ರಕರ್ತ ದುಗ್ಗಪ್ಪ ಮಲ್ಲಾಪೂರ ಸೇರಿದಂತೆ ಇತರರು ಸುದ್ದಿಗೋಷ್ಠಿಯಲ್ಲಿ ಇದ್ದರು.

## ಮಾವುತನನ್ನೇ ತುಳಿದು ಕೊಂದ ಆನೆ

• **ಉದಯವಾಹಿನಿ, ಬೆಳಗಾವಿ**

ಮೇವು ಹಾಕಲು ತೆರಳಿದ್ದ ವೇಳೆ ಮಾವುತನನ್ನೇ ತುಳಿದು ದೇವಸ್ಥಾನದ ಆನೆಯೊಂದು ಭೀಕರವಾಗಿ ಕೊಂದಿರುವ ಘಟನೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಅಲಖನೂರ್ ಗ್ರಾಮದ ಕರಿ ಸಿದ್ದೇಶ್ವರ ದೇವಸ್ಥಾನದಲ್ಲಿ ನಡೆದಿದೆ. ಹೌದು ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಅಲಖನುರನಲ್ಲಿ ಕರಿಸಿದ್ದೇಶ್ವರ ದೇವಸ್ಥಾನದಲ್ಲಿ ಆನೆಯ ದಾಳಿಗೆ ಅಲಕನೂರು ಗ್ರಾಮದ ಧರಪ್ಪ ಬೇವನೂರು (32) ಮೃತಪಟ್ಟ ಮಾವುತ ಎಂದು ತಿಳಿದು ಬಂದಿದೆ. ಬೆಳಿಗ್ಗ ಮೇವು ಹಾಕಲು ತೆರಳಿದಾಗ ಮಾವುತನ ಮೇಲೆ ಆನೆ ದಾಳಿ ಮಾಡಿದೆ. ಮಾವುತ ಧರೆಪ್ಪನನ್ನು ತುಳಿದು 21 ವರ್ಷದ ಆನೆ ಧ್ರುವ ಕೊಂದಿದೆ . ಕಳೆದ 10 ದಿನದ ಹಿಂದೆ ಅಷ್ಟೆ ಧರಪ್ಪ ಗಂಡು ಮಗುವಿನ ತಂದೆಯಾಗಿದ್ದ. ಘಟನಾ ಸ್ಥಳಕ್ಕೆ ಹಾರೂಗೇರಿ ಠಾಣೆಯ ಪೊಲೀಸರು ಭೇಟಿ ನೀಡಿ ಪರೀಶೀಲನೆ ನಡೆಸುತ್ತಿದ್ದಾರೆ.

# ಅಸಂಘಟಿತ ಕಾರ್ಮಿಕರಿಗೋಸ್ಕರ ನಮ್ಮ ಸಂಘಟನೆ: ಸಂಗೀತ ನಾಡಗೌಡ

## ಮಹಿಳಾ ಕಾರ್ಮಿಕರು ತಮ್ಮ ಹೆಸರನ್ನು ಕಾರ್ಮಿಕ ಇಲಾಖೆಯಲ್ಲಿ ಅಗತ್ಯ ದಾಖಲೆ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು

• **ಉದಯವಾಹಿನಿ, ಮುದ್ದೇಬಿಹಾಳ**

ದೇಶಾದ್ಯಂತ ಕಾರ್ಮಿಕರ ಪ್ರಮುಖ ಧ್ವನಿಯಾಗಿರುವ ಭಾರತದ ಅತಿದೊಡ್ಡ ಕಾರ್ಮಿಕ ಸಂಘಟನೆ ನ್ಯಾಷನಲ್ ಟ್ರೇಡ್ ಯೂನಿಯನ್ ಕಾಂಗ್ರೆಸ್‌ನ ವ್ಯಾಪ್ತಿಯಲ್ಲಿರುವ ಭಾರತೀಯ ರಾಷ್ಟ್ರೀಯ ಕಟ್ಟಡ ನಿರ್ಮಾಣ, ಅರಣ್ಯ ಮತ್ತು ಮರದ ಕಾರ್ಮಿಕರ ಒಕ್ಕೂಟ (ಐಎನ್ ಬಿಸಿಡಬ್ಲ್ಯುಎಫ್) ಅಸಂಘ ಟಿತ ಕಾರ್ಮಿಕರಿಗೋಸ್ಕರ ಕೆಲಸ ಮಾಡುತ್ತಿದೆ. ರಾಜ್ಯಾದ್ಯಂತ ಇಂಥ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳು ಸುಲಭವಾಗಿ ದೊರೆಯುವಂತೆ ನೋಡಿಕೊಳ್ಳುವ ಹೊಣೆಗಾರಿಕೆ ನಿಭಾಯಿಸುತ್ತಿದೆ ಎಂದು ಐಎನ್‌ಬಿಸಿಡಬ್ಲ್ಯುಎಫ್‌ನ ಮಹಿಳಾ ಘಟಕದ ನೂತನ ರಾಜ್ಯಾಧ್ಯಕ್ಷೆ ಸಂಗೀತಾ ನಾಡಗೌಡ ಹೇಳಿದರು.

ಇಲ್ಲಿನ ಹುಡ್ಕೋ ನಿವಾಸದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಒಕ್ಕೂಟದ ಕಾರ್ಯಚಟುವಟಿಕೆಗಳ ಮಾಹಿತಿ ನೀಡಿದ ಅವರು, ಜಿಲ್ಲೆ, ತಾಲ್ಲೂಕು ವ್ಯಾಪ್ತಿಯಲ್ಲಿರುವ ಕಾರ್ಮಿಕ ಇಲಾಖೆಯಲ್ಲಿ ಅಸಂಘಟಿತ ಕಾರ್ಮಿಕರ ನೋಂದಣಿ, ಸೌಲಭ್ಯ, ಅಗತ್ಯ ನೆರವು ಸೇರಿ ಹಲವು ಮಹತ್ವದ ಅಂಶಗಳ ಮೇಲುಸ್ತುವಾರಿ ನೋಡಿಕೊಳ್ಳುವ ಈ ವಿಭಾಗಕ್ಕೆ ಸಾಕಷ್ಟು ಮಹತ್ವ ಇದೆ ಎಂದರು.

**ನಮ್ಮದು ರಾಜಕೀಯ ಮನೆತನ**

ಅಸಂಘಟಿತ ವಲಯದ ಮಹಿಳಾ ಕಾರ್ಮಿಕರು ತಮಗಾದ ಅನ್ಯಾಯ, ನೋವಿಗೆ ನೊಂದುಕೊಂಡು ಮರ್ಯಾದೆಗೆ ಹೆದರಿ ಮನೆಯಲ್ಲಿ ಕೂಡದೆ ನಮ್ಮ ಫೆಡರೇಷನ್ ಗಮನಕ್ಕೆ ತಂದಲ್ಲಿ ಸೂಕ್ತ ನ್ಯಾಯ ಒದಗಿಸಿಕೊಡಲಾಗುತ್ತದೆ. ರಾಜ್ಯಾದ್ಯಂತ ಈ ಫೆಡರೇಷನ್‌ಗೆ ಜಿಲ್ಲಾಧ್ಯಕ್ಷರು, ತಾಲ್ಲೂಕು ಅಧ್ಯಕ್ಷರು ಇದ್ದಾರೆ. ಇಲ್ಲದ ಕಡೆ ಶೀಘ್ರ ನೇಮಕ ಮಾಡಲಾಗುತ್ತದೆ. ಮಹಿಳಾ ಕಾರ್ಮಿಕರು ತಮ್ಮ ಹೆಸರನ್ನು ಕಾರ್ಮಿಕ ಇಲಾಖೆಯಲ್ಲಿ ಅಗತ್ಯ ದಾಖಲೆ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು ಎಂದರು.

> ನಮ್ಮದು ರಾಜಕೀಯ ಮನೆತನ. ನಮ್ಮ ತಂದೆ 75-80 ವರ್ಷ, ನಮ್ಮ ಸಹೋದರ 50-55 ವರ್ಷ ರಾಜಕಾರಣದಲ್ಲಿದ್ದುದರಿಂದ ರಾಜಕೀಯ ಕ್ಷೇತ್ರ ನನಗೆ ಹೊಸದೇನೂ ಅಲ್ಲ. ನಾನು ಯಾರಿಗೂ ಪ್ರತಿಸ್ಪರ್ಧಿಯಲ್ಲ. ನನ್ನ ಪಕ್ಷ ಸಂಘಟನೆ ಬಲಪಡಿಸುವುದೊಂದೇ ನನ್ನ ಗುರಿ.
> **-ಸಂಗೀತಾ ನಾಡಗೌಡ, ಅಧ್ಯಕ್ಷರು, ಐಎನ್‌ಬಿಸಿಡಬ್ಲ್ಯುಎಫ್ ಮಹಿಳಾ ಘಟಕ, ಕರ್ನಾಟಕ.**



ನಮ್ಮ ದುಡಿಮೆಗೆ ತಕ್ಕ ಪ್ರತಿಫಲ ಸಿಗುವ ಹಾಗೆ ಫೆಡರೇಷನ್‌ನಲ್ಲಿ ಗುರ್ತಿಸಿಕೊಂಡವರಿಗೂ ಪ್ರತಿಫಲ ಸಿಗುತ್ತದೆ. ಅನ್ಯಾಯ, ಶೋಷಣೆ, ದೌರ್ಜನ್ಯ ಮುಂತಾದವುಗಳನ್ನು ತಡೆಗಟ್ಟಲು ಒಕ್ಕೂಟವು ಕಾರ್ಯತತ್ಪರವಾಗಿದೆ. ವಲಸೆ ಕಾರ್ಮಿಕರಿಗೆ ಮತದಾನದ ಹಕ್ಕು ಕೊಡಿಸಲು ನೆರವಾಗುತ್ತದೆ ಎಂದರು.

330 ಹಳ್ಳಿಗಳ ದೇಶಮುಖರೆನ್ನಿಸಿಕೊಂಡಿದ್ದ ಮುದ್ದೇಬಿಹಾಳ ತಾಲ್ಲೂಕು ಕೇಸಾಪುರದ ಸಂಗಣ್ಣ ರಾವ್ ದೇಶ ಮುಖರ ಮಗಳು, ಘಾಳಪೂಜಿಯ ನಾಡಗೌಡರ ಮನೆತನದ ಸೊಸೆಯಾಗಿರುವ ನಾನು ಕಳೆದ 35-40 ವರ್ಷಗಳ ರಾಜಕೀಯ ಅನುಭವ ಹೊಂದಿದ್ದೇನೆ. ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯ ಸದಸ್ಯೆಯಾಗಿ, ವಿವಿಧ ಜವಾಬ್ದಾರಿಯುತ ಪದಾಧಿಕಾರಿ ಹುದ್ದೆ ಅಲಂಕರಿಸಿ, ನನ್ನದೇ ರೀತಿಯಲ್ಲಿ ಪಕ್ಷ ಸಂಘಟನೆ, ಸಾಮಾಜಿಕ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದೇನೆ. ನನ್ನ ಕೆಲಸ ಗುರ್ತಿಸಿ ಒಕ್ಕೂಟದ ಉಪಾಧ್ಯಕ್ಷೆಯಾಗಿದ್ದ ನನ್ನನ್ನು ರಾಜ್ಯ ಮಹಿಳಾ ಘಟಕಕ್ಕೆ ಅಧ್ಯಕ್ಷೆಯಾಗಿ ನೇಮಿಸಲಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಕೆಪಿಸಿಸಿ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಮಾಜಿ ಶಾಸಕಿ ಸೌಮ್ಯಾ ರೆಡ್ಡಿ ಮೇಡಂ ಅವರ ಸಹಕಾರ ಬಹಳಷ್ಟಿದೆ. ಶಾಸಕ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷರಾದ ಸಿ.ಎಸ್.ನಾಡಗೌಡರ ಆಶೀರ್ವಾದವಿದೆ ಎಂದರು.

# ಸ್ಪೇಸ್‌ಎಕ್ಸ್ ಮುಖ್ಯಸ್ಥ ಎಲಾನ್ ಮಸ್ಕ್ ಅಮೆರಿಕದ ಅಧ್ಯಕ್ಷರಾಗಲು ಸಾಧ್ಯವೇ?

## ಸ್ಪೇಸ್‌ಎಕ್ಸ್ ಬಾಸ್‌ಗೆ ಯುಎಸ್ ಅಧ್ಯಕ್ಷ ಗಾದಿ? ಮಸ್ಕ್ ಕುರಿತ ಪ್ರಶ್ನೆಗೆ ಮಸ್ತ್ ಉತ್ತರ ಕೊಟ್ಟ ಟ್ರಂಪ್



**ಜನನ ಅಮೆರಿಕದಲ್ಲಿ ಆಗಿಲ್ಲದ ಕಾರಣ**

**ವಾಷಿಂಗ್ಟನ್:** ಸ್ಪೇಸ್‌ಎಕ್ಸ್, ಟೆಸ್ಲಾ ಮತ್ತು ಸಾಮಾಜಿಕ ಜಾಲತಾಣ ಎಕ್ಸ್‌ನ ಮುಖ್ಯಸ್ಥ ಎಲಾನ್ ಮಸ್ಕ್ ಮತ್ತು ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಣ ಗಟ್ಟಿ ಸಂಬಂಧ ಇಡೀ ಜಗತ್ತಿಗೆ ಗೊತ್ತಿದೆ. ಅಧ್ಯಕ್ಷೀಯಚ ಚುನಾವಣಾ ಸಂದರ್ಭದಲ್ಲಿ ಎಲಾನ್ ಮಸ್ಕ್ ಅವರು ಟ್ರಂಪ್ ಪರ ಪ್ರಚಾರ ಸಭೆಗಳಲ್ಲಿ ಬಹಿರಂಗವಾಗಿಯೇ ಕಾಣಿಸಿ ಕೊಂಡಿದ್ದರು. ಅದೇ ರೀತಿ ಮಸ್ಕ್ ಕುರಿತು ಟ್ರಂಪ್ ಕೂಡ ಭಾರೀ ಸಕಾರಾತ್ಮಕ ನಿಲುವು ಹೊಂದಿದ್ದು, ತಮ್ಮ ಆಡಳಿತದಲ್ಲಿ ಮಸ್ಕ್ ಪ್ರಭಾವ ಇರಲಿದೆ ಎಂಬ ಸಂದೇಶವನ್ನು ಪರೋಕ್ಷವಾಗಿಯೇ ರವಾನಿಸಿದ್ದಾರೆ. ಟ್ರಂಪ್ ಮತ್ತು ಮಸ್ಕ್ ಅವರ ದೋಸ್ತಿ ಈಗ ಅಮೆರಿಕದಲ್ಲಿ ಬಿಸಿ ಬಿಸಿ ಚರ್ಚೆಗೆ ಗ್ರಾಸವಾಗಿದ್ದು, ಎಲಾನ್ ಮಸ್ಕ್ ಮುಂದೊಂದು ದಿನ ಅಮೆರಿಕದ ಅಧ್ಯಕ್ಷರಾಗುವರೇ ಎಂಬ ಪ್ರಶ್ನೆಯನ್ನೂ ಎದುರಿಗಿಟ್ಟಿದೆ.

ಈ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಖುದ್ದು ಉತ್ತರ ನೀಡಿರುವ ಡೊನಾಲ್ಡ್ ಟ್ರಂಪ್, ಎಲಾನ್ ಮಸ್ಕ್ ಈ ದೇಶದ ಅಧ್ಯಕ್ಷರಾಗುವುದು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಇದಕ್ಕೆ ಕಾರಣವನ್ನೂ ನೀಡಿರುವ ಟ್ರಂಪ್, ಎಲಾನ್ ಮಸ್ಕ್ ಅವರ ಜನನ ಅಮೆರಿಕದ ನೆಲದಲ್ಲಿ ಆಗಿಲ್ಲದ ಕಾರಣಕ್ಕೆ ಅವರು ಎಂದೂ ಅಮೆರಿಕದ ಅಧ್ಯಕ್ಷರಾಗಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಅರಿಜೋನಾದ ಫೀನಿಕ್ಸ್‌ನಲ್ಲಿ ನಡೆದ ರಿಪಬ್ಲಿಕನ್ ಸಮ್ಮೇಳನದಲ್ಲಿ ತೂರಿಬಂದ ಪ್ರಶ್ನೆಗೆ ಉತ್ತರ ನೀಡಿದ ಟ್ರಂಪ್, ಅಮೆರಿಕದ ಸಂವಿಧಾನದ ಪ್ರಕಾರ ಕೇವಲ ಅಮೆರಿಕದಲ್ಲಿ ಹುಟ್ಟಿದ ಪ್ರಜೆ ಮಾತ್ರ ಅಧ್ಯಕ್ಷರಾಗಬಹುದು. ಆದರೆ ಎಲಾನ್ ಮಸ್ಕ್ ಅವರ ಜನನ ಅಮೆರಿಕದ ನೆಲದಲ್ಲಿ ಆಗಿಲ್ಲಎಂದು ಹೇಳಿ ದರು. ಟೆಸ್ಲಾ ಮತ್ತು ಸ್ಪೇಸ್‌ಎಕ್ಸ್ ಮುಖ್ಯಸ್ಥ ಎಲಾನ್ ಮಸ್ಕ್ ದಕ್ಷಿಣ ಆಫ್ರಿಕಾದಲ್ಲಿ ಜನಿಸಿದ್ದಾರೆ. ಅಮೆರಿಕದ ಸಂವಿಧಾನದ ನಿಯಮಗಳ ಪ್ರಕಾರ ಕೇವಲ ಅಮೆರಿಕದ ನೆಲದಲ್ಲಿ ಜನಿಸಿದ ಪ್ರಜೆ ಮಾತ್ರ ಅಧ್ಯಕ್ಷ ಗಾದಿಗೆ ಅರ್ಹ. ಹೀಗಾಗಿ ವಿದೇಶಿ ನೆಲದಲ್ಲಿ ಜನಿಸಿದ ಎಲಾನ್ ಮಸ್ಕ್ ಅಮೆರಿಕದ ಅಧ್ಯಕ್ಷರಾಗುವುದು ಸಾಧ್ಯವಿಲ್ಲ.. ಎಂದು ಟ್ರಂಪ್ ನುಡಿದರು.

ವಿರೋಧಿ ಡೆಮಾಕ್ರೆಟಿಕ್ ಪಕ್ಷವು ಡೊನಾಲ್ಡ್ ಟ್ರಂಪ್ ಮತ್ತು ಎಲಾನ್ ಮಸ್ಕ್ ಅವರ ನಡುವಿನ ಗಾಢ ಸ್ನೇಹದ ಕುರಿತು ಚಕಾರ ಎತ್ತಿದ್ದು, ಮಸ್ಕ್ ಅವರನ್ನು ಅಧ್ಯಕ್ಷ ಮಸ್ಕ್ ಎಂದು ಕಾಲೆಳೆಯುತ್ತಿದೆ. ಬಹುಶ: ಟ್ರಂಪ್ ಅವರು ತಮ್ಮ ಸ್ನೇಹಿತ ಎಲಾನ್ ಮಸ್ಕ್ ಅವರಿಗೆ ಭವಿಷ್ಯದಲ್ಲಿ ಅಧ್ಯಕ್ಷ ಗಾದಿ ಬಿಟ್ಟು ಕೊಡಬಹುದು ಎಂದು ಡೆಮಾಕ್ರೆಟಿಕ್ ಪಕ್ಷ ಕುಹುಕವಾಡುತ್ತಿದೆ. ಈ ಹಿನ್ನೆಲೆಯಲ್ಲಿ ಎಲಾನ್ ಮಸ್ಕ್ ಅಮೆರಿಕದ ಅಧ್ಯಕ್ಷರಾಗುವ ಸಾಧ್ಯತೆಯ ಬಗ್ಗೆ ಸ್ಪಷ್ಟನೆ ನೀಡಿರುವ ಟ್ರಂಪ್, ಡೆಮಾಕ್ರೆಟಿಕ್ ನಾಯಕರಿಗೆ ಅಮೆರಿಕದ ಸಂವಿಧಾನದ ನಿಯಮಾವಳಿಗಳ ಬಗ್ಗೆ ಗೊತ್ತಿಲ್ಲದಿರುವುದು ನೋವಿನ ಸಂಗತಿ ಎಂದು ಹೇಳಿದರು.

ಅಸಲಿಗೆ ಟ್ರಂಪ್ ಮತ್ತು ಮಸ್ಕ್ ನಡುವಿನ ಸ್ನೇಹ ಸಂಬಂಧದ ಕುರಿತು ರಿಪಬ್ಲಿಕ್ ನಾಯಕರಲ್ಲೂ ಆತಂಕವಿದೆ. ಟ್ರಂಪ್ ಇನ್ನೂ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿಲ್ಲ. ಆದರೆ ಮಸ್ಕ್ ಈಗಾಗಲೇ ಆಡಳಿತದ ವಿಷಯಗಳಲ್ಲಿ ಮೂಗು ತೂರಿಸಲು ಆರಂಭಿಸಿರುವುದು ಕೆಲವು ರಿಪಬ್ಲಿಕನ್ನರಿಗೂ ಅಸಮಾಧಾನ ತರಿಸಿದೆ. ಪ್ರಮುಖವಾಗಿ ಸರ್ಕಾರಿ ನಿಧಿಯ ಪ್ರಸ್ತಾವನೆಯನ್ನು ವಿರೋಧಿಸಿರುವ ಎಲಾನ್ ಮಸ್ಕ್, ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಮಾಡಿರುವ ಟ್ವೀಟ್ ಭಾರೀ ಚರ್ಚೆಗೆ ಕಾರಣವಾಗಿದೆ. ಜನಪ್ರತಿನಿಧಿ ಅಲ್ಲದ ಎಲಾನ್ ಮಸ್ಕ್ ಈ ರೀತಿ ಆಡಳಿತದ ವಿಷಯದಲ್ಲಿ ಮೂಗು ತೂರಿಸುತ್ತಿರುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಕೆಲವು ಅಪಸ್ವರ ಎತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಮಸ್ಕ್ ಅವರಿಗೆ ಅಧ್ಯಕ್ಷ ಅವಕಾಶದ ಕುರಿತು ಎದ್ದಿರುವ ಪ್ರಶ್ನೆಗೆ ಉತ್ತರಿಸಿರುವ ಡೊನಾಲ್ಡ್ ಟ್ರಂಪ್, ಅಮೆರಿಕದ ನೆಲದಲ್ಲಿ ಜನಿಸಿರದ ಎಲಾನ್ ಮಸ್ಕ್ ಈ ನೆಲದ ನಿಯಮದಂತೆ ಅಧ್ಯಕ್ಷರಾಗುವುದು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

### ಅಮೆರಿಕದ ಅಧ್ಯಕ್ಷರಾಗಲು ಸಾಧ್ಯವಿಲ್ಲ ಎಂದು ಟ್ರಂಪ್ ಸ್ಪಷ್ಟನೆ

**ಡೊನಾಲ್ಡ್ ಟ್ರಂಪ್ ಮತ್ತು ಎಲಾನ್ ಮಸ್ಕ್ ನಡುವಿನ ಗಟ್ಟಿ ಸ್ನೇಹ ಸಂಬಂಧ ಕೇವಲ ಡೆಮಾಕ್ರೆಟಿಕ್ ನಾಯಕರಿಗೆ ಮಾತ್ರವಲ್ಲ, ಬದಲಿಗೆ ರಿಪಬ್ಲಿಕ್ ನಾಯಕರಲ್ಲೂ ಆತಂಕ ಮೂಡಿಸುತ್ತಿದೆ. ಟ್ರಂಪ್ ಭವಿಷ್ಯದಲ್ಲಿ ಮಸ್ಕ್ ಅವರನ್ನು ತಮ್ಮ ಉತ್ತರಾಧಿಕಾರಿ ಎಂದು ಘೋಷಿಸುವರೇ ಎಂಬ ಆತಂಕ ಇದೀಗ ಕೆಲವರಲ್ಲಿ ಮನೆ ಮಾಡಿದೆ. ಆದರೆ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ನೀಡಿರುವ ಡೊನಾಲ್ಡ್ ಟ್ರಂಪ್, ಅಮೆರಿಕದ ಸಂವಿಧಾನದ ನಿಯಮದಂತೆ ಅಮೆರಿಕದ ನೆಲದಲ್ಲಿ ಹುಟ್ಟಿರುವ ಪ್ರಜೆ ಮಾತ್ರ ಅಧ್ಯಕ್ಷರಾಗಲು ಅರ್ಹ ಎಂದು ಸ್ಪಷ್ಟಪಡಿಸಿದ್ದಾರೆ. ಎಲಾನ್ ಮಸ್ಕ್ ದಕ್ಷಿಣ ಆಫ್ರಿಕಾದಲ್ಲಿ ಹುಟ್ಟಿದ್ದರಿಂದ ಅವರು ಎಂದೂ ಅಮೆರಿಕದ ಅಧ್ಯಕ್ಷರಾಗಲು ಸಾಧ್ಯವಿಲ್ಲ ಎಂದು ಟ್ರಂಪ್ ಸ್ಪಷ್ಟನೆ ನೀಡಿದ್ದಾರೆ.**

- **ಡೊನಾಲ್ಡ್ ಟ್ರಂಪ್ ಮತ್ತು ಎಲಾನ್ ಮಸ್ಕ್ ನಡುವಣ ಸ್ನೇಹ ಸಂಬಂಧದಿಂದ ಯಾರಿಗೆಲ್ಲಾ ಉರಿ?**
- **ಅಮೆರಿಕದ ನೆಲದಲ್ಲಿ ಜನಿಸಿರದ ಎಲಾನ್ ಮಸ್ಕ್ ಅಧ್ಯಕ್ಷರಾಗುವುದು ಸಾಧ್ಯವಿಲ್ಲ ಎಂದ ಟ್ರಂಪ್**
- **ದಕ್ಷಿಣ ಆಫ್ರಿಕಾದಲ್ಲಿ ಜನಿಸಿರುವ ಎಲಾನ್ ಮಸ್ಕ್ ಸಂಭವನೀಯ ಅಧ್ಯಕ್ಷ ಗಾದಿ ಕುರಿತು ಟ್ರಂಪ್ ಸ್ಪಷ್ಟನೆ ಏನು?**

# ಮೂವರು ಖಲಿಸ್ತಾನಿ ಉಗ್ರರ ಎನ್‌ಕೌಂಟರ್



**ಲಕ್ನೋ:** ಪಂಜಾಬ್‌ನ ಗುರುದಾಸ್ಪುರದ ಪೊಲೀಸ್ ಪೋಸ್ಟ್ ಮೇಲೆ ಗ್ರೆನೇಡ್ ದಾಳಿ ನಡೆಸಿದ ಆರೋಪಿಗಳೆಂದು ಗುರುತಿಸಲಾಗಿದ್ದ ಮೂವರು ಖಲಿಸ್ತಾನಿ ಉಗ್ರರನ್ನು ಎನ್‌ಕೌಂಟರ್‌ನಲ್ಲಿ ಹತ್ಯೆ ಮಾಡಲಾಗಿದೆ. ಮೂವರು ಅಪರಾಧಿಗಳು, ಉತ್ತರ ಪ್ರದೇಶ, ಪಂಜಾಬ್ ಪೊಲೀಸರ ಜಂಟಿ ತಂಡಗಳ ನ ಡುವೆ ಗುಂಡಿನ ಚಕಮಕಿ ನಡೆದಿದೆ.

ಪೊಲೀಸರು ಅವರನ್ನು ಬಂಧಿಸಲು ಪ್ರಯತ್ನಿಸಿದರು, ಆದರೆ ಅಪರಾಧಿಗಳು ಗುಂಡು ಹಾರಿಸಿದಾಗ ಪ್ರತಿ ದಾಳಿ ನಡೆಸಿ ಅವರನ್ನು ಹತ್ಯೆ ಮಾಡಲಾಗಿದೆ. ಎನ್‌ಕೌಂಟರ್‌ನಲ್ಲಿ ಬಲಿಯಾದವರನ್ನು ಗುರ್ವಿಂದರ್ ಸಿಂಗ್, ವೀರೇಂದ್ರ ಸಿಂಗ್, ಜಸನ್‌ಪ್ರೀತ್ ಸಿಂಗ್ ಎಂದು ಗುರುತಿಸಲಾಗಿದೆ.

ಅವರ ಬಳಿ ಇದ್ದ ಎಕೆ ಸರಣಿಯ ಎರಡು ರೈಫಲ್‌ಗಳು ಮತ್ತು ಗ್ಲಾಕ್ ಪಿಸ್ತೂಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಮೂವರು ಪಾಕಿಸ್ತಾನ ಪ್ರಾಯೋಜಿತ ಖಲಿಸ್ತಾನ್ ಜಿಂದಾ ಬಾದ್ ಫೋರ್ಸ್‌ನ ಭಾಗವಾಗಿದ್ದಾರೆ ಎಂದು ಪಂಜಾಬ್ ಪೊಲೀಸರು ಹೇಳಿದ್ದಾರೆ.

ಈ ಭಯೋತ್ಪಾದನಾ ಘಟಕವು ಪಂಜಾಬ್‌ನ ಗಡಿ ಪ್ರದೇಶಗಳಲ್ಲಿನ ಪೊಲೀಸ್ ಸಂಸ್ಥೆಗಳ ಮೇಲೆ ಗ್ರೆನೇಡ್ ದಾಳಿಯಲ್ಲಿ ತೊಡಗಿದೆ.

ಪಿಲಿಭಿತ್, ಪಂಜಾಬ್‌ನ ಜಂಟಿ ಪೊಲೀಸ್ ತಂಡಗಳ ನಡುವೆ ಪಿಎಸ್ ಪುರನ್ಪುರ್, ಪಿಲಿಭಿತ್ ವ್ಯಾಪ್ತಿಯಲ್ಲಿ ಎನ್‌ಕೌಂಟರ್ ನಡೆದಿದೆ, ಮೂವರು ಘಟಕದ ಸದಸ್ಯರು ಭಾಗಿಯಾಗಿದ್ದಾರೆ. ಗುರುದಾಸ್ಪುರದ ಪೊಲೀಸ್ ಪೋಸ್ಟ್ ಮೇಲೆ ಗ್ರೆನೇಡ್ ದಾಳಿ ನಡೆಸಿದ್ದರು ಎಂದು ಪಂಜಾಬ್ ಡಿಜಿಪಿ ಗೌರವ್ ಯಾದವ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

# ಆರ್ಥಿಕ ಸಮೀಕ್ಷೆ ಕುರಿತು ಹೇಳಿಕೆ; ರಾಹುಲ್ ಗಾಂಧಿಗೆ ಸಮನ್ಸ್



**ಪರಿಷ್ಕರಣೆ ಅರ್ಜಿಯನ್ನು ಸಲ್ಲಿಕೆ**

**ನವದೆಹಲಿ:** ಲೋಕಸಭೆ ಚುನಾವಣೆ ಪ್ರಚಾರದ ವೇಳೆ ಆರ್ಥಿಕ ಸಮೀಕ್ಷೆಗೆ ಸಂಬಂಧಿಸಿದಂತೆ ಹೇಳಿಕೆ ನೀಡಿ ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಉತ್ತರ ಪ್ರದೇಶದ ನ್ಯಾಯಾಲಯ ಸಮನ್ಸ್ ಜಾರಿ ಮಾಡಿದೆ.

ಜನವರಿ 7 ರಂದು ನ್ಯಾಯಾಲಯದ ಮುಂದೆ ಹಾಜರಾಗುವಂತೆ ರಾಹುಲ್‌ಗೆ ಸೂಚಿಸಲಾಗಿದೆ. ಅಖಿಲ ಭಾರತ ಹಿಂದೂ ಮಹಾ ಸಂಘದ ಅಧ್ಯಕ್ಷ ಪಂಕಜ್ ಪಾಠಕ್ ಸಲ್ಲಿಸಿದ್ದ ಅರ್ಜಿಯ ಮೇರೆಗೆ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಸುಧೀರ್ ಕುಮಾರ್ ಅವರು ಸಮನ್ಸ್ ಜಾರಿ ಮಾಡಿದ್ದಾರೆ.

ಪಾಠಕ್ ಅವರನ್ನು ಪ್ರತಿನಿಧಿಸಿದ ವಕೀಲ ವೀರೇಂದ್ರ ಪಾಲ್ ಗುಪ್ತಾ ಪ್ರತಿಕ್ರಿಯಿಸಿ, ರಾಹುಲ್ ಗಾಂಧಿ ಬಡ ವರ್ಗಗಳನ್ನು ಪ್ರಚೋದಿಸಲು ಹೇಳಿಕೆ ನೀಡಿದ್ದಾರೆ. ಅವರ ಹೇಳಿಕೆಗಳು ರಾಜಕೀಯ ಲಾಭಕ್ಕಾಗಿ ವರ್ಗ ದ್ವೇಷವನ್ನು ಸೃಷ್ಟಿಸುವ ಗುರಿಯನ್ನು ಹೊಂದಿವೆ ಎಂದು ಆರೋಪಿಸಿದರು. ತನ್ನ ವೈಯಕ್ತಿಕ ಹಿತಾಸಕ್ತಿ ಗಾಗಿ ಉದ್ದೇಶಪೂರ್ವಕವಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳ ನಡುವೆ ಹಗೆತನ ಮತ್ತು ದ್ವೇಷವನ್ನು ಬಿತ್ತಲು ಕಾಂಗ್ರೆಸ್ ಪ್ರಯತ್ನಿಸಿದೆ ಎಂದು ದೂರಿದರು.

ರಾಹುಲ್ ಗಾಂಧಿ ವಿರುದ್ಧ ಪ್ರಕರಣ ದಾಖಲಿಸಲು ನಿರ್ದೇಶನ ನೀಡುವಂತೆ ಕೋರಿ ಆಗಸ್ಟ್‌ನಲ್ಲಿ ಜನಪ್ರತಿನಿಧಿ ಗಳ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು.

ಆಗಸ್ಟ್ 27 ರಂದು ನ್ಯಾಯಾಲಯವು ಅರ್ಜಿಯನ್ನು ತಿರಸ್ಕರಿಸಿತ್ತು. ನಂತರ ಪಾಠಕ್ ಅವರು ಸೆಷನ್ಸ್ ನ್ಯಾಯಾಲಯದಲ್ಲಿ ಪರಿಷ್ಕರಣೆ ಅರ್ಜಿಯನ್ನು ಸಲ್ಲಿಸಿದ್ದರು.

### ರಾಹುಲ್ ಗಾಂಧಿ ಹೇಳಿದ್ದೇನು?

**ಬಡವರ ಶೇಕಡಾವಾರು ಮತ ಪ್ರಮಾಣ ಹೆಚ್ಚಿದ್ದರೂ, ಅವರು ಹೊಂದಿರುವ ಆಸ್ತಿಯ ಶೇಕಡಾವಾರು ಪ್ರಮಾಣವು ತುಂಬಾ ಕಡಿಮೆಯಾಗಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಹೆಚ್ಚಿನ ಜನಸಂಖ್ಯೆ ಹೊಂದಿರುವವರು ಹೆಚ್ಚಿನ ಆಸ್ತಿಗೆ ಬೇಡಿಕೆ ಸಲ್ಲಿಸಬಹುದು. ಹಿಂದುಳಿದ ಜಾತಿಗಳು, ಪರಿಶಿಷ್ಟ ಜಾತಿಗಳು (ಎಸ್ಸಿಗಳು), ಪರಿಶಿಷ್ಟ ಪಂಗಡಗಳು (ಎಸ್ಟಿಗಳು), ಅಲ್ಪಸಂಖ್ಯಾತರು ಮತ್ತು ಇತರ ಸಮುದಾಯಗಳ ಜನಸಂಖ್ಯೆ ಮತ್ತು ಸ್ಥಿತಿಯನ್ನು ನಿಖರವಾಗಿ ನಿರ್ಣಯಿಸಲು ಜಾತಿ ಗಣತಿಯನ್ನು ನಡೆಸಬೇಕು ಎಂದು ಹೇಳಿದ್ದರು.**

# ವಸತಿ ಶಾಲೆಯಲ್ಲಿ ಸಾವಿರಾರು ಮಕ್ಕಳ ಸಾವು: ಆತಂಕಕ್ಕೆ ಎಡೆ



**ವಾಷಿಂಗ್ಟನ್:** ಅಮೆರಿಕಾದ ಬೋರ್ಡಿಂಗ್ ಶಾಲೆಗಳಲ್ಲಿ ಕೊಲ್ಲಲ್ಪಟ್ಟ ಸ್ಥಳೀಯ ಅಮೆರಿಕನ್ನರ ಸಂಖ್ಯೆ ಸರ್ಕಾರದ ಅಧಿಕೃತ ಅಂಕಿ ಅಂಶಕ್ಕಿಂತ ಕನಿಷ್ಠ ಮೂರು ಪಟ್ಟು ಹೆಚ್ಚಾಗಿದೆ ಎಂದು ಹೇಳಲಾಗಿದ್ದು ಆತಂಕಕ್ಕೆ ಎಡೆ ಮಾಡಿಕೊಟ್ಟಿದೆ

1819 ರಿಂದ 1970 ರವರೆಗೆ, ಅಮೆರಿಕಾದಾದ್ಯಂತ ನೂರಾರು ಭಾರತೀಯ ಬೋರ್ಡಿಂಗ್ ಶಾಲೆಗಳನ್ನು ನಡೆಸಿದೆ ಸ್ಥಳೀಯ ಮಕ್ಕಳನ್ನು ಯುರೋಪಿಯನ್ ವಸಾಹತುಗಾರರ ಸಂಸ್ಕೃತಿಗೆ ಸಂಯೋಜಿಸಲು ಅಥವಾ ಕ್ರಿಶ್ಚಿಯನ್ ಧರ್ಮಕ್ಕೆ ಬಲವಂತದ ಮತಾಂತರವೂ ಸೇರಿದೆ ಎಂದು ಹೇಳಲಾಗಿದೆ. 1828 ಮತ್ತು 1970ರ ನಡುವೆ ಶಾಲೆಗಳಲ್ಲಿ ಸಾವನ್ನಪ್ಪಿದ ಮಕ್ಕಳ ಸಂಖ್ಯೆ 3,104 ರಷ್ಟಿದೆ ಎನ್ನ ಲಾಗಿದೆ. ಆದರೆ ಈ ಸಂಖ್ಯೆ ಇನ್ನೂ ಪೂರು ಪಟ್ಟು ಹೆಚ್ಚಾಗಿದೆ.ಅಮೆರಿಕಾ ಅಧ್ಯಕ್ಷ ಜೋಡನ್ ಅಕ್ಟೋಬರ್‌ನಲ್ಲಿ ಅಮೆರಿಕಾದಾದ್ಯಂತ ವಸತಿ ಶಾಲೆ ಗಳಲ್ಲಿ ಮೃತಪಟ್ಟ ಮಕ್ಕಳ ಮಾಹಿತಿ ನೀಡಿದ್ದರು. ಆದರೆ ವಾಸ್ತವಕ್ಕಿಂತ ಮೂರು ಪಟ್ಟು ಹೆಚ್ಚಾಗಿದೆ ಎನ್ನಲಾಗಿದೆ.

1906 ರಲ್ಲಿ ತೆಗೆದ ಈ ಫೋಟೋದಲ್ಲಿ, ಹ್ಯಾವರ್ಫೋರ್ಡ್ ಕಾಲೇಜಿನಲ್ಲಿ ಕ್ವೇಕರ್, ವಿಶೇಷ ಸಂಗ್ರಹಣೆಗಳು ಮತ್ತಷ್ಟು ಮಾಹಿತಿ ಒದಗಿಸಿವೆ ಅನೇಕ ಸಂದರ್ಭಗಳಲ್ಲಿ, ಮರಣ ಹೊಂದಿದ ಮಕ್ಕಳನ್ನು ಅವರು ಓದಿದ ಶಾಲೆಗಳಲ್ಲಿ ಅಥವಾ ಸಮೀಪವಿರುವ ಸ್ಮಶಾನಗಳಲ್ಲಿ ಸಮಾಧಿ ಮಾಡಲಾಗಿದೆ, ಅನೇಕ ಸಂದರ್ಭಗಳಲ್ಲಿ, ಮಕ್ಕಳ ದೇಹಗಳನ್ನು ಅವರ ಕುಟುಂಬಗಳು ಅಥವಾ ಬುಡಕಟ್ಟುಗಳಿಗೆ ಹೇಗೆ ಮನೆಗೆ ಕಳುಹಿಸಲಾಗಿಲ್ಲ ಎಂದು ಹೇಳಲಾಗಿದೆ.

ಕಳಪೆ ದಾಖಲಾತಿ ಮತ್ತು ಸಮಯದ ಅಂಗೀಕಾರ ಶಾಲೆಗಳಲ್ಲಿ ಎಷ್ಟು ಮಕ್ಕಳು ಸತ್ತರು ಎಂಬುದನ್ನು ನಿಖರವಾಗಿ ನಿರ್ಧರಿಸಲು ಕಷ್ಟಕರವಾಗಿದೆ, ಅಲ್ಲಿ ಪರಿಸ್ಥಿತಿಗಳು ''ಜೈಲು ಶಿಬಿರಗಳಿಗೆ'' ಹೋಲುತ್ತವೆ,ಕೆಲವು ಸ್ಮಶಾನಗಳನ್ನು ಗುರುತಿಸಲಾಗಿದೆ, ಇತರವುಗಳನ್ನು ''ಮರೆಮಾಡಲಾಗಿದೆ ಅಥವಾ ನಿರ್ಲಕ್ಷಿಸಲಾಗಿದೆ ''ನೂರಾರು ಸಾವಿರ'' ಸರ್ಕಾರಿ ದಾಖಲೆಗಳನ್ನು ಆಧರಿಸಿವೆ ಈ ವರದಿ ಮಾಡಲಾಗಿದೆ ಎಂದು ತಿಳಿಸಿದೆ. ಸರ್ಕಾರಿ ವರದಿಯಲ್ಲಿ ಸುಮಾರು 1,000 ಮಕ್ಕಳು ವಿವಿಧ ಕಾರಣದಿಂದ ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ. ಆದರೆ ಈ ಸಂಖ್ಯೆ ಹೆಚ್ಚಿದೆ ಎಂದು ತಿಳಿಸಿದೆ.

# ನ್ಯಾಯಾಧೀಶರ ಮೇಲೆ ಚಪ್ಪಲಿ ಎಸೆದ ಆರೋಪಿ

**ಥಾಣೆ:** ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಸೆಷನ್ಸ್ ನ್ಯಾಯಾಲಯದಲ್ಲಿ ವಿಚಾರಣೆ ವೇಳೆ ಕೊಲೆ ಪ್ರಕರಣದ ಆರೋಪಿ ನ್ಯಾಯಾಧೀಶರ ಮೇಲೆ ಚಪ್ಪಲಿ ಎಸೆದಿದ್ದಾನೆ. ಚಪ್ಪಲಿ ನ್ಯಾಯಾಧೀಶರಿಗೆ ತಾಗಲಿಲ್ಲ ಬದಲಿಗೆ ಅವರ ಮೇಜಿನ ಮುಂದೆ ಮರದ ಚೌಕಟ್ಟಿಗೆ ಬಡಿದು ಬೆಂಚ್ ಕ್ಲರ್ಕ್ ಪಕ್ಕದಲ್ಲಿ ಬಿದ್ದಿತು ಎಂದು ಪೊಲೀಸರು ತಿಳಿಸಿದ್ದಾರೆ.

ಕಲ್ಯಾಣ್ ಪಟ್ಟಣದ ನ್ಯಾಯಾಲಯದಲ್ಲಿ ಈ ಘಟನೆ ನಡೆದಿದ್ದು, ಆರೋಪಿಗಳ ವಿರುದ್ಧ ಪ್ರಥಮ ಮಾಹಿತಿ ವರದಿ ದಾಖಲಿಸಲಾಗಿದೆ. ಆರೋಪಿ ಕಿರಣ್ ಸಂತೋಷ್ ಭರಮ್ ಅವರನ್ನು ಕೊಲೆ ಪ್ರಕರ ಣದ ವಿಚಾರಣೆಗಾಗಿ ಜಿಲ್ಲಾ, ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಆರ್ ಜಿ ವಾಘಮಾರೆ ಅವರ ಮುಂದೆ ಹಾಜರುಪಡಿಸಲಾಗಿತ್ತು.

ಈ ವೇಳೆ ಆರೋಪಿ ತಮ್ಮ ಪ್ರಕರಣವನ್ನು ಬೇರೆ ನ್ಯಾಯಾಲಯಕ್ಕೆ ವಹಿಸುವಂತೆ ನ್ಯಾಯಾಧೀಶರಲ್ಲಿ ಮನವಿ ಮಾಡಿದರು.

**ವಕೀಲರ ಹೆಸರನ್ನು ಕರೆಯಲಾಯಿತು, ಆದರೆ ಅವರು ಸುತ್ತಮುತ್ತ ಇರಲಿಲ್ಲ, ನ್ಯಾಯಾ ಲಯಕ್ಕೆ ಹಾಜರಾಗಲಿಲ್ಲ. ಹೀಗಾಗಿ ಆರೋಪಿಯನ್ನು ವಕಾಲತ್ತು ವಹಿಸಲು ಮತ್ತೊಬ್ಬ ವಕೀಲರ ಹೆಸರನ್ನು ನೀಡುವಂತೆ ಕೋರಲಾಗಿದ್ದು, ನ್ಯಾಯಾಲಯ ಹೊಸ ದಿನಾಂಕವನ್ನು ನೀಡಿತ್ತು ಎಂದರು.**

ನ್ಯಾಯಾಧೀಶರು ಆರೋಪಿಗೆ ತಮ ವಕೀಲರ ಮೂಲಕ ಅರ್ಜಿ ಸಲ್ಲಿಸುವಂತೆ ಹೇಳಿದರು. ಆಗಾರೋಪಿಯು ಕೆಳಗೆ ಬಾಗಿ, ತನ್ನ ಚಪ್ಪಲಿಯ ನ್ನು ಹೊರತೆಗೆದು ನ್ಯಾಯಾಧೀಶರ ದಿಕ್ಕಿನಲ್ಲಿ ಎಸೆದನು, ನ್ಯಾಯಾಲಯದಲ್ಲಿ ಹಾಜರಿದ್ದ ಎಲ್ಲರನ್ನು ಆಶ್ಚರ್ಯ ಚಕಿತಗೊಳಿಸಿದನು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ಮಧ್ಯಪ್ರದೇಶದಲ್ಲಿ ಹುಲಿ ದಾಳಿಗೆ ಇಬ್ಬರು ಬಲಿ



**ಭೂಪಾಲ್:** ಮಧ್ಯಪ್ರದೇಶದ ಉಮಾರಿಯಾ ಮತ್ತು ಬಾಲಘಾಟ್ ಜಿಲ್ಲೆಗಳಲ್ಲಿ ನಡೆದ ಪ್ರತ್ಯೇಕ ಘಟನೆ ಯಲ್ಲಿ ಹುಲಿ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ.

ಉಮಾರಿಯಾ ಜಿಲ್ಲೆಯ ಬಾಂಧವಗಢ ಹುಲಿ ಸಂರಕ್ಷಿತ ಪ್ರದೇಶದ ಖಿಟೋಲಿ ವ್ಯಪ್ತಿಯಲ್ಲಿ ಖೈರುಹಾ ಬೈಗಾ (45) ಎಂಬ ಹುಲಿ ದಾಳಿಯಲ್ಲಿ ಪ್ರಾಣ ಕಳೆದುಕೊಂಡಿದ್ದಾನೆ. ಕಳೆದ ಶುಕ್ರವಾರ ತನ್ನ ಸೋದರ ಮಾವನ ನಿವಾಸದಿಂದ ಕೆಲಸದ ನಿಮಿತ್ತ ಬೈಗಾ ತೆರಳಿ ನಾಪತ್ತೆಯಾಗಿದ್ದಾರು ಭಾನುವಾರ ಹುಲಿ ದಾಳಿಗೆ ಒಳಗಾಗಿರಬಹುದು ಎಂದು ಅರಣ್ಯ ಅಧಿಕಾರಿ ಸ್ವಸ್ತಿ ಶ್ರೀ ಜೈನ್ ತಿಳಿಸಿದ್ದಾರೆ.

ಕುಲುಹಾಬಾ ಪ್ರದೇಶದ ರೆಸಾರ್ಟ್‌ನ ಹಿಂದೆ ತಲೆಬುರುಡೆ, ಕೈ ತುಣುಕುಗಳು ಮತ್ತು ಬಟ್ಟೆ ಪತ್ತೆಯಾಗಿದೆ. ಅವಶೇಷಗಳು ಬೈಗಾ ಅವರದ್ದು ಎಂದು ಕುಟುಂಬ ಸದಸ್ಯರು ದೃಢಪಡಿಸಿದ್ದು, ಸುತ್ತಮು ತ್ತಲ ಪ್ರದೇಶದಲ್ಲಿ ಹುಲಿ ಹೆಜ್ಜೆಗಳು ಪತ್ತೆಯಾಗಿವೆ ಮೊತ್ತೊಂದು ಘಟನೆಯಲ್ಲಿ ತಿರೋಡಿ ತಹಸಿಲ್ ವ್ಯಾಪ್ತಿಯ ಅಂಬೇಝರಿ ಗ್ರಾಮದ ತನ್ನ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾಗ 55 ವರ್ಷದ ರೈತ ಸುಖರಾಮ್ ಉಯ್ಕೆ ಅವರು ಬಾಲಾಘಾಟ್‌ನಲ್ಲಿ ಹುಲಿ ದಾಳಿ ಮಾಡಿ ಕೊಂದುಕಾಕಿದೆ.

ಕುಟುಂಬ ಸದಸ್ಯರು ಗದ್ದೆಗೆ ಬಂದಾಗ ಹುಲಿಯು ಉಕೆಯ ದೇಹವನ್ನು ತಿನ್ನುತ್ತಿರುವುದನ್ನು ಕಂಡು ಆತಂಕದಲ್ಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ನಂತರ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಹುಲಿಯನ್ನು ಸ್ಥಳದಿಂದ ಓಡಿಸಿದ್ದಾರೆ.

ಭವಿಷ್ಯದಲ್ಲಿ ಮಾನವ-ವನ್ಯಜೀವಿ ಸಂಘರ್ಷ ಗಳನ್ನು ತಡೆಯಲು ಹುಲಿ ಪತ್ತೆಗೆ ತಂಡವನ್ನು ನಿಯೋಜಿಸಲಾಗಿದೆ ಎಂದು ರೇಂಜ್ ಆಫೀಸರ್ ವರದಿ ಮಾಡಿದ್ದಾರೆ.

# ಬೆಂಗಳೂರಿಗೆ ವಲಸೆ ಬರುವವರ ಸಂಖ್ಯೆ ಹೆಚ್ಚಾಗಲಿದೆ: ನಾರಾಯಣ ಮೂರ್ತಿ



**ಪುಣೆ:** ಹವಾಮಾನ ಬದಲಾವಣೆಯನ್ನು ಪರಿಹರಿಸುವಲ್ಲಿ ವಿಫಲವಾದರೆ ಮುಂಬರುವ ದಿನಗಳಲ್ಲಿ ಬೆಂಗಳೂರಿಗೆ ದೊಡ್ಡ ಪ್ರಮಾಣದ ವಲಸೆ ಇರಲಿದೆ ಎಂದು ಇನ್ಫೋಸಿಸ್ ಸಂಸ್ಥಾಪಕ ನಾರಾಯಣಮೂರ್ತಿ ಆತಂಕವನ್ನು ಹೊರಹಾಕಿದ್ದಾರೆ. ಪುಣೆಯ ಕಾರ್ಯಕ್ರಮ ವೊಂದರಲ್ಲಿ ಮಾತನಾಡಿದ ಅವರು, ಈ ವಲಸೆಗಳನ್ನು ತಪ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

ಹವಾಮಾನ ಬದಲಾವಣೆಯ ಪರಿಣಾಮವನ್ನು ಪರಿಹರಿಸಲು ಎರಡು ವಿಧಾನದ ಅಗತ್ಯವಿದೆ, ಜನರು ತಮ ಸ್ಥಳೀಯ ಭೂಪ್ರದೇಶಗಳಲ್ಲಿ ಆರಾಮವಾಗಿ ಬದುಕುವುದನ್ನು ರೂಡಿಸಿಕೊಳ್ಳಬೇಕು ಎಂದು ಕನ್ಸಲ್ಟ್ಸ ಇನ್ಕ್ಲೂಸಿವ್‌ನ ಬ್ರ್ಯಾಂಡ್ ಗುರು ಮತ್ತು ಹರೀಶ್ ಬಿಜೂರ್ ಹೇಳಿದ್ದಾರೆ. ಇದರರ್ಥ ಸಣ್ಣ ಪಟ್ಟಣಗಳು, ಹಳ್ಳಿಗಳು ಮತ್ತು ಹವಾಮಾನ-ದುರ್ಬಲ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡುವುದು. ಕಠಿಣ ಹವಾಮಾನ ಪರಿಸ್ಥಿತಿಗಳನ್ನು ಎದುರಿಸುತ್ತಿರುವ ಒಳನಾಡುಗಳು, ಅವುಗಳ ಪ್ರದೇಶಗಳನ್ನು ಗುರುತಿಸಬೇಕು ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಗ್ಗಿಸಲು ಅಗತ್ಯವಾದ ಸಂಪನೂಲ ಸಜ್ಜುಗೊಳಿಸಬೇಕು.

ಸಾಮೂಹಿಕ ವಲಸೆಯನ್ನು ತಡೆಯಲು ಈ ಪ್ರದೇಶಗಳಲ್ಲಿ ಯೋಜನೆ ಮತ್ತು ಹೂಡಿಕೆ ನಿರ್ಣಾಯಕವಾಗಿದೆ ಎಂದು ಬಿಜೂರ್ ಹೇಳಿದರು. ಬೆಂಗಳೂರು, ಪುಣೆ ಮತ್ತು ಹೈದರಾಬಾದ್‌ನಂತಹ ಮೆಗಾಸಿಟಿಗಳು ಉತ್ತಮ ಅವಕಾಶಗಳನ್ನು ಹುಡುಕುವ ವಲಸಿಗರ ಅನಿವಾರ್ಯ ಒಳಹರಿವಿಗೆ ಸಿದ್ಧವಾಗಬೇಕಿದೆ. ಈ ನಗರಗಳು ತಮ ದೊಡ್ಡ ಆವೃತ್ತಿಗಳಾಗುವ ಹಾದಿಯಲ್ಲಿವೆ, ದೂರದ ಪ್ರದೇಶಗಳು ಹೆಚ್ಚು ಹೆಚ್ಚು ಅವಿಭಾಜ್ಯ ಅಂಗಗಳಾಗುತ್ತಿವೆ ಎಂದು ತಮ ಅಭಿಪ್ರಾಯ ವ್ಯಕ್ತ ಪಡಿಸಿದ್ದಾರೆ. ಭಾರತ ಸೇರಿ ಹಲವು ದೇಶಗಳಲ್ಲಿ ಇತ್ತೀಚಿಗೆ ದೊಡ್ಡ ಪ್ರಮಾಣದಲ್ಲಿ ಹವಾಮಾನ ಬದಲಾಗುತ್ತಿದ್ದು ಉಷ್ಣಾಂಶದಲ್ಲಿ ಸಾಕಷ್ಟು ಏರಿಳಿತ ನೋಡುತ್ತಿದ್ದೇವೆ. ಮುಂದಿನ 2 ದಶಕಗಳಲ್ಲಿ ಕೆಲ ದೇಶಗಳು ಭಾರತದ ಕಡೆ ನೋಡುವ ಸಂಭವ ಇದೆ. ಬೆಂಗಳೂರು, ಹೈದರಾಬಾದ್, ಪುಣೆಗೆ ವಲಸೆ ಹೆಚ್ಚಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಟ್ರಾಫಿಕ್ ಸಮಸ್ಯೆ, ಮಾಲಿನ್ಯದ ಕಾರಣ ಈ ನಗರಗಳ ಸ್ಥಿತಿ ಹದಗೆಡಬಹುದು. ಹೀಗಾಗಿ ವಲಸೆ ತಡೆಗೆ ಸರ್ಕಾರಗಳು ಅಗತ್ಯ ಕ್ರಮ ತೆಗದುಕೊಳ್ಳಬೇಕು ಎಂದು ಸಲಹೆ ನೀಡಿದರು.

**ಎಲ್ಲಾ ಪ್ರಮುಖ ಭಾರತೀಯ ನಗರಗಳು ತೀವ್ರ ತೆಯ ವಿವಿಧ ಹಂತಗಳಲ್ಲಿ ಒಂದೇ ರೀತಿಯ ಸವಾಲುಗಳನ್ನು ಎದುರಿಸುತ್ತಿವೆ. ಹೀಗಾಗಿ ತಪ್ಪಿಸಿಕೊಳ್ಳಲು ಬೇರೆ ಸ್ಥಳವಿಲ್ಲದೇ, ನಾವು ಅವರ ಸ್ವಂತ ನಗರಗಳಲ್ಲಿ ಈ ಸಮಸ್ಯೆಗಳನ್ನು ನಿಭಾಯಿಸಬೇಕು.**

# ಶಬರಿಮಲೆಯಲ್ಲಿ ಯಾತ್ರಾರ್ಥಿಗಳ ವಿಪರೀತ ದಟ್ಟಣೆ

## ಡಿ. 25, 26 ರಂದು ಆನ್‌ಲೈನ್ ಬುಕ್ಕಿಂಗ್ ಸಂಖ್ಯೆ ಕಡಿತಕ್ಕೆ ನಿರ್ಧಾರ, ಬುಕ್ಕಿಂಗ್ ಸಂಖ್ಯೆ 10ರಿಂದ 15 ಸಾವಿರ ಕಡಿಮೆಯಾಗಲಿದೆ



**ದರ್ಶನ ಬುಕ್ಕಿಂಗ್ ಕಡಿಮೆ ಮಾಡಲು ನಿರ್ಧಾರ**

**ಶಬರಿಮಲೆ:** ಶಬರಿಮಲೆಯಲ್ಲಿ ಯಾತ್ರಾರ್ಥಿಗಳ ವಿಪರೀತ ದಟ್ಟಣೆ ಪರಿಗಣಿಸಿ ಮಂಡಲ ಪೂಜೆಯ ಪ್ರಧಾನ ದಿನಗಳಾದ ಡಿಸೆಂಬರ್ 25 ಮತ್ತು 26 ರಂದು ಆನ್‌ಲೈನ್ ಬುಕ್ಕಿಂಗ್ ಸಂಖ್ಯೆಯನ್ನು ಕಡಿಮೆ ಮಾಡಲಾಗಿದೆ. ಈ ದಿನಗಳಲ್ಲಿ ಸ್ಪಾಟ್ ಬುಕ್ಕಿಂಗ್ ತೆರವುಗೊಳಿಸಲಾಗಿದೆ. ಸಾಮಾನ್ಯ ದಿನಗಳಲ್ಲಿ ಆನ್‌ಲೈನ್ ಬುಕ್ಕಿಂಗ್ ಸಂಖ್ಯೆ 70 ಸಾವಿರಕ್ಕೆ ನಿಗದಿಪಡಿಸಲಾಗಿದೆ. ಡಿಸೆಂಬರ್ 25 ರಂದು ಸಂಜೆ ತಂಗ ಅಂಗಿ ಘೋಷಯಾತ್ರೆ ಸನ್ನಿಧಾನ ತಲುಪಲಿದೆ. ಅಂದು ಸಂಜೆ 6.30ಕ್ಕೆ ಅಯ್ಯಪ್ಪನಿಗೆ ತಂಗ ಅಂಗಿ ತೊಡಿಸಿ ದೀಪಾರಾಧನೆ ನಡೆಯಲಿದೆ. ಆನ್‌ಲೈನ್ ಬುಕ್ಕಿಂಗ್ ಸಂಖ್ಯೆಯನ್ನು 54,444ಕ್ಕೆ ಸೀಮಿತಗೊಳಿಸಲಾಗಿದೆ.

ಡಿ. 26ರಂದು ಮಧ್ಯಾಹ್ನ 12 ರಿಂದ 12.30ರ ನಡುವೆ ಅಯ್ಯಪ್ಪನಿಗೆ ತಂಗ ಅಂಗಿ ತೊಡಿಸಿ ಮಂಡಲ ಪೂಜೆ ನೆರವೇರಲಿದೆ. ಅಂದು ಆನ್‌ಲೈನ್ ಬುಕ್ಕಿಂಗ್ ಸಂಖ್ಯೆ 60 ಸಾವಿರಕ್ಕೆ ಇಳಿಸಲಾಗಿದೆ. ಈ ಎರಡೂ ದಿನ ಸ್ಪಾಟ್ ಬುಕ್ಕಿಂಗ್‌ಗೆ ಅವಕಾಶವಿಲ್ಲ. ಮಕರ ಜ್ಯೋತಿ ದಟ್ಟಣೆ ಪರಿಗಣಿಸಿ ಜ. 12ರಂದು 60 ಸಾವಿರ, 13ರಂದು 50 ಸಾವಿರ ಮತ್ತು 14 ರಂದು 40 ಸಾವಿರಕ್ಕೆ ನಿಗದಿಪಡಿಸಲಾಗಿದೆ. ಈ ದಿನಗಳಲ್ಲೂ ಸ್ಪಾಟ್ ಬುಕ್ಕಿಂಗ್ ತೆರವು ಗೊಳಿಸುವ ಸಾಧ್ಯತೆ ಇದೆ.

ಶಬರಿಮಲೆ ಅಯ್ಯಪ್ಪ ಸ್ವಾಮಿಗೆ ದೀಪಾರಾಧನೆ, ಮಂಡಲಪೂಜೆ ವೇಳೆ ತೊಡಿಸಲಾಗುವ ತಂಗ ಅಂಗಿ ಆಭರಣಗಳ ಘೋಷಯಾತ್ರೆ, ಭಾನುವಾರ ಬೆಳಗ್ಗೆ 7ಕ್ಕೆ ಪತ್ತನಂತಿಟ್ಟ ಜಿಲ್ಲೆಯ ಅರನ್ಮುಳ ಪಾರ್ಥಸಾರಥಿ ದೇವಸ್ಥಾನದಿಂದ ಹೊರಟಿದೆ.

ನಾನಾ ಕ್ಷೇತ್ರಗಳಲ್ಲಿ ಸ್ವಾಗತ ನೀಡಿದ ಬಳಿಕ ತಂಗ ಅಂಗಿ ಶೋಭಾಯಾತ್ರೆ, ಡಿ.25 ರಂದು ಮಧ್ಯಾಹ್ನ 12.30ಕ್ಕೆ ಪಂಪಾ ತಲುಪಲಿದೆ. ಪಂಪಾ ಗಣಪತಿ ದೇವಸ್ಥಾನದಲ್ಲಿ ಭಕ್ತರ ದರ್ಶನಕ್ಕೆ ಇರಿಸ ಲಾಗುವುದು.

ಸಂಜೆ 3ಕ್ಕೆ ಅಲ್ಲಿಂದ ಹೊರಟು ನೀಲಿಮಲ, ಅಪ್ಪಾಚ್ಚಿಮೇಡ್, ಶಬರಿಪೀಠ, ಶರಂಗುತ್ತಿ ಮೂಲಕ ಸನ್ನಿಧಾನಕ್ಕೆ ತಲುಪಲಿದೆ. ಚಿತ್ತಿರ ತಿರುನಾಳ್ ಮಹಾರಾಜರು ಶಬರಿಮಲೆ ಅಯ್ಯಪ್ಪನಿಗೆ ಅರ್ಪಿಸಿದ 453 ಪವನ್ ಚಿನ್ನದ ತಂಗ ಅಂಗಿಯನ್ನು ಅರನ್ಮುಳ ದೇವಸ್ಥಾನದಲ್ಲಿ ಸುರಕ್ಷಿತವಾಗಿ ಇರಿಸಲಾಗುತ್ತಿದೆ.

**ಹೆಚ್ಚುತ್ತಿರುವ ದಟ್ಟಣೆ:** ಶಬರಿಮಲೆ ಸನ್ನಿಧಾನ, ಪಂಪಾದಲ್ಲಿ ಭಕ್ತರ ದಟ್ಟಣೆ ಹೆಚ್ಚಿದೆ. ಎಲ್ಲಾ ರಸ್ತೆಗಳೂ ಶಬರಿಮಲೆ ಭಕ್ತರಿಂದ ತುಂಬಿ ತುಳುಕುತ್ತಿವೆ. ಭಾನುವಾರ ಮುಂಜಾನೆ 3 ರಿಂದ 7 ಗಂಟೆಯವರೆಗೆ 23, 176 ಭಕ್ತರು ಶಬರಿಮಲೆಗೆ ಭೇಟಿ ನೀಡಿದ್ದಾರೆ.

ಶನಿವಾರ ರಾತ್ರಿ ನಡೆ ಮುಚ್ಚುವ ವೇಳೆ 18, 600 ಮಂದಿ ಭಕ್ತರು 18ನೇ ಮೆಟ್ಟಿಲ ಕೆಳಗೆ ಸರತಿ ಸಾಲಿನಲ್ಲಿ ನಿಂತಿದ್ದರು. ನಡೆ ಮುಚ್ಚಿದ ಬಳಿಕವೂ 18 ಮೆಟ್ಟಿಲೇರಲು ಅವಕಾಶ ನೀಡಲಾಗಿದೆ. ಅವರು ಮುಂಜಾನೆ 3ಕ್ಕೆ ನಡೆ ತೆರೆದಾಗ ಉತ್ತರ ದ್ವಾರದ ಮೂಲಕ ಪ್ರವೇಶಿಸಿ ಸ್ವಾಮಿ ಅಯ್ಯಪ್ಪನ ದರ್ಶನ ಪಡೆದಿದ್ದಾರೆ. ಇದರಿಂದ ದೇಗುಲದ ಪ್ರಾಂಗಣದಲ್ಲಿ ಭಾರಿ ದಟ್ಟಣೆ ಕಂಡು ಬಂದಿದೆ. ಶಬರಿಮಲೆಯಲ್ಲಿ ಈ ಋತುವಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚು ದಟ್ಟಣೆ ಕಂಡು ಬಂದಿದೆ

**ಶಬರಿಮಲೆ ವಿಶೇಷ ನೇರ ಪ್ರಸಾರ ಮಾಡಲು ಟಿವಿ ಚಾನೆಲ್:** ಶಬರಿಮಲೆ ದೇಗುಲಕ್ಕೆ ಸಂಬಂಧಿಸಿದ ಪೂಜೆ, ಧಾರ್ಮಿಕ ವಿಧಿ ವಿಧಾನಗಳು ಮತ್ತು ಸುದ್ದಿಗಳನ್ನು ಜಗತ್ತಿನಾದ್ಯಂತ ಬಿತ್ತರಿಸಲು ಪ್ರತ್ಯೇಕ ಟಿವಿ ಚಾನೆಲ್ ಆರಂಭಿಸುವ ಬಗ್ಗೆ ತಿರುವಿದಾಂಕೂರು ದೇವಸ್ವಂ ಮಂಡಳಿ (ಟಿಡಿಬಿ) ಚಿಂತನೆ ನಡೆಸಿದೆ.

**ಸನ್ನಿಧಾನದಲ್ಲಿ ತಿಂಗಳ ಪೂಜೆ, ಉತ್ಸವ, ಮಂಡಲ-ಮಕರ ಜ್ಯೋತಿ ಅವಧಿಯಲ್ಲಿ ಶಬರಿಮಲೆಯ ವಿಶೇಷಗಳನ್ನು ನೇರ ಪ್ರಸಾರ ಮಾಡಲು ತಿರುಪತಿ ಮಾದರಿ ಸುದ್ದಿ ವಾಹಿನಿ ಆರಂಭಿಸಲು ಟಿಡಿಬಿ ಉದ್ದೇಶಿಸಿದೆ. ಅಯ್ಯಪ್ಪ ದರ್ಶನಕ್ಕೆ ಲಕ್ಷಾಂತರ ಭಕ್ತರು ಆಗಮಿಸುವ ತಮಿಳುನಾಡು, ಕರ್ನಾಟಕ, ಆಂಧ್ರ ಮತ್ತು ತೆಲಂಗಾಣ ಮೊದಲಾದ ರಾಜ್ಯಗಳ ದೊಡ್ಡ ಕಂಪನಿಗಳಿಂದ ಕೋಟ್ಯಂತರ ಮೊತ್ತದ ಜಾಹೀರಾತು ಆದಾಯವನ್ನು ಟಿಡಿಬಿ ನಿರೀಕ್ಷಿಸಿದೆ. ಕೆಲವು ಉದ್ಯಮಿಗಳು ಚಾನೆಲ್ ಆರಂಭಿಸುವ ಆಸಕ್ತಿ ವ್ಯಕ್ತಪಡಿಸಿದ್ದು, ವಿಸ್ತೃತ ಸಮಾಲೋಚನೆ ಬಳಿಕ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು**

**-ಪಿ.ಎಸ್.ಪ್ರಶಾಂತ್, ಟಿಡಿಬಿ ಅಧ್ಯಕ್ಷ**

### ಆನ್‌ಲೈನ್ ಬುಕ್ಕಿಂಗ್

**ಶಬರಿಮಲೆಯಲ್ಲಿ ಯಾತ್ರಾರ್ಥಿಗಳ ವಿಪರೀತ ದಟ್ಟಣೆಯಾಗಿದೆ. ಈ ಹಿನ್ನೆಲೆ ದರ್ಶನ ಬುಕ್ಕಿಂಗ್ ಕಡಿಮೆ ಮಾಡಲು ನಿರ್ಧಾರ ಮಾಡಲಾಗಿದೆ. ಡಿಸೆಂಬರ್ 25 ಮತ್ತು 26 ರಂದು ಆನ್‌ಲೈನ್ ಬುಕ್ಕಿಂಗ್ ಸಂಖ್ಯೆಯನ್ನು ಕಡಿಮೆ ಮಾಡಲಾಗುತ್ತಿದೆ.**



## ಮಿನಿ ನ್ಯೂಸ್

### ಉಕ್ರೇನ್ ದಾಳಿಗೆ ಪ್ರತೀಕಾರ

**ಮಾಸ್ಕೋ:** ರಷ್ಯಾದ ಕೇಂದ್ರ ನಗರವಾದ ಕಜಾನ್ ಮೇಲೆ ಉಕ್ರೇನ್ ಡ್ರೋನ್ ದಾಳಿ ನಡೆಸಿದ್ದು ಇದಕ್ಕೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗುಡುಗಿದ್ದಾರೆ. ಉಕ್ರೇನ್ ತಮ್ಮ ದೇಶದ ಮೇಲೆ ಮತ್ತೆ ಮತ್ತೆ ದಾಳಿ ಮಾಡುತ್ತಿದೆ., ಇದನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಇದಕ್ಕೆ ಮುಂದಿನ ದಿನಗಳಲ್ಲಿ ಉಕ್ರೇನ್ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಗಡಿಯಿಂದ ಸುಮಾರು 1,000 ಕಿಲೋಮೀಟರ್ ದೂರದ ನಗರದ ಐಷಾರಾಮಿ ಅಪಾರ್ಟ್‌ಮೆಂಟ್ ಗೆ ಉಕ್ರೇನ್ ''ಬೃಹತ್'' ಡ್ರೋನ್ ದಾಳಿ ನಡೆಸಿದೆ, ಇದು ಉಕ್ರೇನ್ ವಿನಾಶದ ಸಂಕೇತ ಎಂದು ಮಾಹಿತಿ ನೀಡಿದ್ದಾರೆ. ರಷ್ಯಾದ ಸಾಮಾಜಿಕ ಮಾಧ್ಯಮ ಜಾಲತಾಣಗಳಲ್ಲಿ ವಿಡಿಯೋಗಳು ಡ್ರೋನ್‌ಗಳು ಎತ್ತರದ ಗಾಜಿನ ಕಟ್ಟಡಕ್ಕೆ ಬಡಿದು ಬೆಂಕಿಯ ಚೆಂಡಿನ ದಾಳಿಯಾಗುತ್ತಿದೆ.ಇದರಿಂದ ಸಾವು ನೋವಿನ ಸಂಖ್ಯೆ ಹೆಚ್ಚಳಕ್ಕೆ ಅವಕಾಶ ಮಾಡಿಕೊಡಬಹುದು ಎಂದು ಹೇಳಿದ್ದಾರೆ. ಉಕ್ರೇನ್ ಎಷ್ಟು ನಾಶಪಡಿಸಲು ಪ್ರಯತ್ನಿಸಿದರೂ, ಅನೇಕ ಪಟ್ಟು ಹೆಚ್ಚು ವಿನಾಶವನ್ನು ಎದುರಿಸುತ್ತಾರೆ ಮತ್ತು ನಮ್ಮ ದೇಶದಲ್ಲಿ ಅವರು ಏನು ಮಾಡಲು ಪ್ರಯತ್ನಿಸುತ್ತಿದ್ದಾರೆಂದು ಎಂದು ತಿಳಿದಿದೆ. ಅದಕ್ಕೆ ಅವರು ಬಾರಿ ಬೆಲೆ ತೆತ್ತಬೇಕಾಗುತ್ತದೆ ಎಂದಿದ್ದಾರೆ.

ವಿಡಿಯೋ ಲಿಂಕ್ ಮೂಲಕ ರಸ್ತೆ ಉದ್ಘಾಟನಾ ಸಮಾರಂಭದಲ್ಲಿ ವ್ಲಾಡಿಮಿತ್ ಪುಟಿನ್ ಕಜಾನ್ ಇರುವ ಪ್ರದೇಶವಾದ ಟಾಟಸ್ತಾನ್‌ನ ಸ್ಥಳೀಯ ನಾಯಕರನ್ನು ಉದ್ದೇಶಿಸಿ ಮಾತನಾಡಿ ಉಕ್ರೇನ್ ತಮ್ಮ ತಪ್ಪು ಸರಿ ಮಾಡಿಕೊಂಡರೆ ಸರಿ ಇಲ್ಲದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಎಚ್ಚರಿಕೆ ನೀಡಿದ್ದಾರೆ. ಕಜನ್ ಮೇಲಿನ ಮುಷ್ಕರಸುಮಾರು ಮೂರು ವರ್ಷಗಳ ಸಂಘರ್ಷದಲ್ಲಿ ಹೆಚ್ಚುತ್ತಿರುವ ವೈಮಾನಿಕ ದಾಳಿಯ ಸರಣಿಯಲ್ಲಿ ಇತ್ತೀಚಿನದಾಗಿದೆ. ರಷ್ಯಾದ ಭೂಪ್ರದೇಶದ ಮೇಲೆ ಉಕ್ರೇನಿಯನ್ ದಾಳಿಗೆ ಪ್ರತಿಕ್ರಿಯೆಯಾಗಿ ಹೈಪರ್ಸಾನಿಕ್ ಬ್ಯಾಲಿಸ್ಟಿಕ್ ಕ್ಷಿಪಣಿಯೊಂದಿಗೆ ಕೈವ್ ಕೇಂದ್ರವನ್ನು ಗುರಿಯಾಗಿಸಲು ಪುಟಿನ್ ಹಿಂದೆ ಬೆದರಿಕೆ ಹಾಕಲಾಗಿದೆ. ರಕ್ಷಣಾ ಸಚಿವಾಲಯವು ರಷ್ಯಾದ ವಾಯು ನೆಲೆಗಳು ಮತ್ತು ಶಸ್ತ್ರಾಸ್ತ್ರ ಕಾರ್ಖಾನೆಗಳನ್ನು ಹೊಡೆಯಲು ಪಾಶ್ಚಿಮಾತ್ಯ ಸರಬರಾಜು ಮಾಡಿದ ಕ್ಷಿಪಣಿಗಳನ್ನು ಬಳಸಿಕೊಂಡು ಉಕ್ರೇನ್ ಮೇಲೆ ದಾಳಿ ಮಾಡಲು ಮುಂದಾಗಿದೆ.

### 31 ವರ್ಷಗಳ ಬಳಿಕ ತೆರೆದ ಶಿವ ದೇಗುಲ ಮುಸ್ಲಿಮರಿಂದ ಪುಷ್ಪವೃಷ್ಟಿ

**ಉತ್ತರ ಪ್ರದೇಶ:** ಉತ್ತರ ಪ್ರದೇಶದಲ್ಲಿ ಮುಸ್ಲಿಂ ಪ್ರಾಬಲ್ಯವಿರುವ ಲೂಧಾವಾಲದಲ್ಲಿನ ಶಿವನ ದೇಗುಲವನ್ನು ಸುಮಾರು 31 ವರ್ಷಗಳ ಬಳಿಕ ಸೋಮವಾರ ತೆರೆಯಲಾಗಿದೆ. ಈ ಶಿವ ದೇಗುಲವನ್ನು 1971ರಲ್ಲಿ ನಿರ್ಮಿಸಲಾಗಿತ್ತು. 1992ಲ್ಲಿ ನಡೆದ ಅಯೋಧ್ಯೆ ಗಲಭೆಯ ವೇಳೆ ಸ್ಥಳೀಯ ಹಿಂದೂಗಳು ದೇಗುಲದ ಮೂರ್ತಿ ಮತ್ತು ಶಿವಲಿಂಗವನ್ನು ತೆಗೆದುಕೊಂಡು ವಲಸೆ ಹೋಗಿದ್ದರು.

ಆ ಬಳಿಕ ದೇಗುಲ ಮುಚ್ಚಿತ್ತು. ಯಾವುದೇ ವಿಘ್ನಗಳಿಲ್ಲದೇ ಎಲ್ಲಾ ಕಾರ್ಯಕ್ರಮಗಳು ನಡೆದವು. ಸ್ವಾಮಿ ಯಶೀರ್ ಮಹಾರಾಜರ ನೇತೃತ್ವದಲ್ಲಿ ಹಿಂದೂಗಳು ಶಾಂತಿಯುತವಾಗಿ ಈ ಪ್ರದೇಶಕ್ಕೆ ಮರಳಿದರು' ಎಂದು ನಗರ ಮ್ಯಾಜಿಸ್ಟ್ರೇಟ್ ವಿಕಾಸ್ ಕಶ್ಯಪ್ ಅವರು ತಿಳಿಸಿದ್ದಾರೆ.


ದೇಗುಲಕ್ಕೆ ಆಗಮಿಸಿದ ಹಿಂದೂಗಳ ಮೆರವಣಿಗೆಗೆ ಪುಷ್ಪವೃಷ್ಟಿ ಮಾಡುವ ಮೂಲಕ ಮುಸ್ಲಿಮರು ಸ್ವಾಗತಿಸಿದರು. ಹಲವು ವರ್ಷಗಳಿಂದ ಮುಚ್ಚಿದ್ದ ದೇಗುಲವನ್ನು ಹವನದ ಮೂಲಕ ಶುದ್ದೀಕರಣ ಮಾಡಿ ತೆರೆಯಲಾಯಿತು ಎಂದು ಸ್ವಾಮಿ ಯಶೀರ್ ಮಹಾರಾಜರು ಹರ್ಷ ವ್ಯಕ್ತಪಡಿಸಿದರು. ಸಂಭಲ್‌ನಲ್ಲಿ 46 ವರ್ಷಗಳಿಂದ ಮುಚ್ಚಿದ್ದ ಹಿಂದೂ ದೇಗುಲವನ್ನು ಡಿ.13ರಂದು ತೆರೆಯಲಾಗಿದ್ದು, ಆ ಪ್ರದೇಶದಲ್ಲಿ ಉತ್ಖನನ ನಡೆಯುತ್ತಿದೆ.

### ಬಾಂಗ್ಲಾದಿಂದ 200 ಕೋಟಿ ವಿದ್ಯುತ್ ಬಾಕಿ: ತ್ರಿಪುರಾ ಸಿಎಂ ಮಾಣಿಕ್ ಸಹಾ

**ಅಗರ್ತಲಾ:** ಬಾಂಗ್ಲಾದೇಶವು ತ್ರಿಪುರಾಗೆ 200 ಕೋಟಿ ವಿದ್ಯುತ್ ಬಾಕಿ ನೀಡಬೇಕಿದೆ ಎಂದು ಮುಖ್ಯಮಂತ್ರಿ ಮಾಣಿಕ್ ಸಹಾ ಸೋಮವಾರ ಇಲ್ಲಿ ತಿಳಿಸಿದರು. ಬಾಕಿ ಉಳಿಸಿಕೊಂಡಿರುವ ಬಾಂಗ್ಲಾದೇಶಕ್ಕೆ ವಿದ್ಯುತ್ ಪೂರೈಕೆ ಸ್ಥಗಿತಗೊಳಿಸುವ ಕುರಿತು ಇನ್ನೂ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ದಿನ ಕಳೆ ದಂತೆ ವಿದ್ಯುತ್ ಬಾಕಿ ಮೊತ್ತವು ಹೆಚ್ಚುತ್ತಿದೆ. ವಿದ್ಯುತ್ ಸರಬರಾಜಿಗೆ ಅಡ್ಡಿಯಾಗದಂತೆ ನೆರೆಯ ದೇಶವು ತಮ್ಮ ಬಾಕಿಯನ್ನು ಪಾವತಿಸಲಿದೆ ಎಂದು ನಾವು ಭಾವಿಸಿದ್ದೇವೆ' ಎಂದು ಸಹಾ ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಹೇಳಿದರು. ಬಾಂಗ್ಲಾದೇಶ ಪವರ್ ಡೆವಲಪ್‌ಮೆಂಟ್ ಬೋರ್ಡ್‌ನೊಂದಿಗೆ ಎನ್‌ಟಿಪಿಸಿ ವಿದ್ಯುತ್ ವ್ಯಾಪಾರ್ ನಿಗಮ್ ಲಿಮಿಟೆಡ್ ಮೂಲಕ ತ್ರಿಪುರಾದ ಎಲೆಕ್ಟ್ರಿಸಿಟಿ ಕಾರ್ಪೊರೇಷನ್ ಲಿಮಿಟೆಡ್ ಮಾಡಿಕೊಂಡಿರುವ ಒಪ್ಪಂದದಂತೆ ನಿತ್ಯ 60-70 ಮೆಗಾವಾಟ್ ವಿದ್ಯುತ್ತನ್ನು 2016ರಿಂದಲೂ ಪೂರೈಸುತ್ತಿದೆ.

### ಶ್ವೇತ ಭವನದ ಎಐನ ಹಿರಿಯ ಸಲಹೆಗಾರನಾಗಿ ಶ್ರೀರಾಮ ಕೃಷ್ಣನ್



**ಸ್ಯಾನ್ ಫ್ರಾನ್ಸಿಸ್ಕೋ:** ಭಾರತ ಮೂಲದ ಉದ್ಯಮಿ, ಲೇಖಕ ಶ್ರೀರಾಮ ಕೃಷ್ಣನ್ ಅವರನ್ನು ಶ್ವೇತಭವನದ ಕೃತಕ ಬುದ್ಧಿಮತ್ತೆ ವಿಭಾಗದ ನೀತಿ ಸಲಹೆಗಾರರನ್ನಾಗಿ ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇಮಕ ಮಾಡಿದ್ದಾರೆ.

ಶ್ರೀರಾಮ ಕೃಷ್ಣನ್ ಅವರು ಶ್ವೇತಭವನದ ವಿಜ್ಞಾನ ಮತ್ತು ತಂತ್ರಜ್ಞಾನ ನೀತಿ ಕಚೇರಿಯಲ್ಲಿ ಕೃತಕ ಬುದ್ಧಿಮತ್ತೆಯ ಹಿರಿಯ ನೀತಿ ಸಲಹೆಗಾರರಾಗಿ ಸೇವೆ ಸಲ್ಲಿಸಲಿದ್ದಾರೆ' ಎಂದು ಟ್ರಂಪ್ ಭಾನುವಾರ ಘೋಷಿಸಿದ್ದಾರೆ.

ಈ ಹಿಂದೆ ಮೈಕ್ರೋಸಾಫ್ಟ್, ಟ್ವಿಟರ್, ಯಾಹೂ, ಫೇಸ್‌ಬುಕ್ ಮತ್ತು ಸ್ನಾಪ್‌ನಲ್ಲಿ ಉತ್ಪನ್ನ ತಂಡಗಳನ್ನು ಮುನ್ನಡೆಸಿರುವ ಕೃಷ್ಣನ್, ವೈಟ್ ಹೌಸ್ ಎಐ ಮತ್ತು ಕ್ರಿಪ್ಟೋ ಮುಖ್ಯಸ್ಥರಾಗಿರುವ ಡೇವಿಡ್ ಒ. ಸ್ಯಾಕ್ಸ್ ಜೊತೆಗೆ ಕೆಲಸ ಮಾಡಲಿದ್ದಾರೆ.

ದೇಶಕ್ಕೆ ಸೇವೆ ಸಲ್ಲಿಸಲು ಮತ್ತು ಎಐನಲ್ಲಿ ಅಮೆರಿಕದ ನಾಯಕತ್ವವನ್ನು ಖಚಿತಪಡಿಸಿಕೊಳ್ಳಲು ಡೇವಿಡ್ ಸ್ಯಾಕ್ಸ್ ಅವರೊಂದಿಗೆ ಕೆಲಸ ಮಾಡಲು ಅವಕಾಶ ಲಭಿಸಿದ್ದು ನನಗೆ ಸಿಕ್ಕಿ ಗೌರವ ಎಂದು ಕೃಷ್ಣನ್ ಹೇಳಿದ್ದಾರೆ.

ಕೃಷ್ಣನ್ ಅವರ ನೇಮಕವನ್ನು ಅಮೆರಿಕದ ಭಾರತೀಯ ಸಮುದಾಯ ಸ್ವಾಗತಿಸಿದೆ. ನಾವು ಶ್ರೀರಾಮ ಕೃಷ್ಣನ್ ಅವರನ್ನು ಹೃತ್ಪೂರ್ವಕವಾಗಿ ಅಭಿನಂದಿಸುತ್ತೇವೆ. ಅವರನ್ನು ಶ್ವೇತಭವನದ ಕೃತಕ ಬುದ್ಧಿಮತ್ತೆ ವಿಭಾಗದ ನೀತಿ ಸಲಹೆಗಾರರನ್ನಾಗಿ ನೇಮಿಸಿರುವುದಕ್ಕೆ ಸಂತೋಷ ಪಡುತ್ತೇವೆ' ಎಂದು ಇಂಡಿಯಾಸ್ಪೋರಾದ ಕಾರ್ಯನಿರ್ವಾಹಕ ನಿರ್ದೇಶಕ ಸಂಜೀವ್ ಜೋಶಿಪುರ ಹರ್ಷ ವ್ಯಕ್ತಪಡಿಸಿದ್ದಾರೆ.

# ನೀಲಿ ತಾರೆ ಸನ್ನಿ ಲಿಯೋನ್ ಹೆಸರಲ್ಲಿ ವಂಚನೆ

ಛತ್ತೀಸ್‌ಗಢದ ವ್ಯಕ್ತಿಯೊಬ್ಬರು ನಟಿ ಸನ್ನಿ ಲಿಯೋನ್ ಹೆಸರಿನಲ್ಲಿ ಖಾತೆ ತೆರೆಯುವ ಮೂಲಕ ವಿವಾಹಿತ ಮಹಿಳೆಯರಿಗೆ ಛತ್ತೀಸ್‌ಗಢ ರಾಜ್ಯ ಯೋಜನೆಗೆ ವಂಚಿಸಿದ ಘಟನೆ ಬೆಳಕಿಗೆ ಬಂದಿದೆ. ವೀರೇಂದ್ರ ಜೋಶಿ ಎನ್ನುವರು ರಾಜ್ಯ ಸರ್ಕಾರದ ಮಹತಾರಿ ವಂದನ್ ಯೋಜನೆಯ ಫಲಾನುಭವಿಗಳಿಗೆ ಮಾಸಿಕ 1,000 ಠೇವಣಿಗಳನ್ನು ಬಾಲಿವುಡ್ ಬೆಡಗಿ ನೀಲಿ ಚಿತ್ರಗಳ ತಾರೆ ಸನ್ನಿ ಲಿಯೋನ್ ಹೆಸರಲ್ಲಿ ಖಾತೆ ತೆರೆದು ಸ್ವೀಕರಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಬಿಜೆಪಿ ಸರ್ಕಾರ ಜಾರಿಗೆ ತಂದಿರುವ ಈ ಯೋಜನೆಯು ರಾಜ್ಯದಲ್ಲಿ ವಿವಾಹಿತ ಮಹಿಳೆಯರಿಗೆ ತಿಂಗಳಿಗೆ 1,000 ರೂ. ಬಸ್ತಾರ್ ಜಿಲ್ಲೆಯ ತಾಲೂರ್ ಗ್ರಾಮದಲ್ಲಿ ವಂಚನೆ ಪತ್ತೆಯಾಗಿದೆ. ತನಿಖೆ ನಡೆಸಿ ಬ್ಯಾಂಕ್ ಖಾತೆ ಜಪ್ತಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾರಿಸ್ ಎಸ್. ತಿಳಿಸಿದ್ದಾರೆ. ಈ ಘಟನೆ ಆಡಳಿತಾರೂಢ ಬಿಜೆಪಿ ಮತ್ತು ಪ್ರತಿಪಕ್ಷ ಕಾಂಗ್ರೆಸ್ ನಡುವೆ ರಾಜಕೀಯ ಘರ್ಷಣೆಗೆ ಕಾರಣವಾಗಿತ್ತು. ರಾಜ್ಯ ಕಾಂಗ್ರೆಸ್ ಮುಖ್ಯಸ್ಥ ದೀಪಕ್ ಬೈಜ್, ''ಮಹತಾರಿ ವಂದನ್ ಯೋಜನೆಯಡಿಯಲ್ಲಿ ಶೇಕಡಾ 50 ಕ್ಕೂ ಹೆಚ್ಚು ಫಲಾನುಭವಿಗಳು ನಕಲಿ'' ಎಂದು ಹೇಳಿದ್ದಾರೆ. ಉಪಮುಖ್ಯಮಂತ್ರಿ ಅರುಣ್ ಸಾವೋ ಪ್ರತಿಕ್ರಿಯೆ ನೀಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಸಮಗ್ರ ತನಿಖೆ ನಡೆಸುವುದಾಗಿ ತಿಳಿಸಿದ್ದು, ಫಲಾನುಭವಿಗಳ ಪರಿಶೀಲನೆಯಲ್ಲಿ ತೊಡಗಿರುವ ಅಧಿಕಾರಿಗಳನ್ನು ಗುರುತಿಸಲಾಗುತ್ತಿದೆ ಎಂದಿದ್ದಾರೆ. ಛತ್ತೀಸ್‌ಗಢದ ಮಹತಾರಿ ವಂದನ್ ಯೋಜನೆಯಡಿ ಅರ್ಹ ವಿವಾಹಿತ ಮಹಿಳೆಯರಿಗೆ ರೂ.ಗಳ ಆರ್ಥಿಕ ನೆರವು ನೀಡಲಾಗುತ್ತದೆ. ತಿಂಗಳಿಗೆ 1000. ಮಹಿಳೆ ತನ್ನ ಸ್ವಂತ ಬ್ಯಾಂಕ್ ಖಾತೆಯನ್ನು ಹೊಂದಿರುವುದು ಕಡ್ಡಾಯವಾಗಿದೆ. ಯೋಜನೆಯ ಅಡಿಯಲ್ಲಿ ಜಂಟಿ ಖಾತೆಯು ಮಾನ್ಯವಾಗಿರುವುದಿಲ್ಲ. ನೀವು ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಖಾತೆಯಲ್ಲಿ ನೋಂದಾಯಿಸಲಾದ ಮೊಬೈಲ್ ಸಂಖ್ಯೆಯನ್ನು ಹೊಂದಿರಬೇಕು ಎಂದು ತಿಳಿಸಿದರು. ಯೋಜನೆಯ ಪ್ರಯೋಜನಗಳನ್ನು ಪಡೆಯಲು ಮಹಿಳೆಯ ಸ್ವಂತ ಬ್ಯಾಂಕ್ ಖಾತೆಯಲ್ಲಿ ಆಧಾರ್ ಲಿಂಕ್ ಮಾಡಬೇಕು ಮತ್ತು ನೇರ ಮಗದು ವರ್ಗಾವಣೆ ಮೂಲಕ ಹಣ ಪಾವತಿ ಮಾಡಲಾಗುವುದು ಎಂದಿದ್ದಾರೆ. ಸರ್ಕಾರದ ಪ್ರಕಾರ ''ಮಹಿಳೆಯರ ಸ್ವಾವಲಂಬನೆಯನ್ನು ಕಾಪಾಡಿಕೊಳ್ಳುವುದು ಮತ್ತು ಅವರ ಅವಲಂಬಿತ ಮಕ್ಕಳ ಆರೋಗ್ಯ ಮತ್ತು ಪೌಷ್ಟಿಕಾಂಶದ ಸ್ಥಿತಿಯಲ್ಲಿ ಸುಸ್ಥಿರ ಸುಧಾರಣೆ'', ಮತ್ತು ''ಮಹಿಳೆಯರನ್ನು ಹೆಚ್ಚು ಆರ್ಥಿಕವಾಗಿ ಸ್ವತಂತ್ರಗೊಳಿಸುವುದು'' ಮತ್ತುನಡೆಸಿದ ಮಹಿಳೆಯರ ಪರಿಣಾಮಕಾರಿ ಪಾತ್ರವನ್ನು ಪ್ರೋತ್ಸಾಹಿಸುವುದು'' ಯೋಜನೆಯ ಉದ್ದೇಶವಾಗಿದೆ ಎಂದಿದ್ದಾರೆ.



# 'FIR 6 to 6' ಸಿನಿಮಾದಲ್ಲಿ ವಿಜಯ್



ವಿಜಯ್ ರಾಘವೇಂದ್ರ ಅಭಿನಯದ ಕುತೂಹಲಕಾರಿ ಥ್ರಿಲ್ಲರ್ ಚಿತ್ರ ''FIR 6 to 6' ಬಿಡುಗಡೆಗೆ ಸಿದ್ಧವಾಗಿದೆ. ಈ ಹಿಂದೆ ಪಟ್ಟಾಭಿಷೇಕ ಎಂಬ ಚಿತ್ರವನ್ನು ನಿರ್ಮಿಸಿದ್ದ ಭಾಗ್ಯ ರಮೇಶ್ ಅವರು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕೆ.ವಿ.ರಮಣರಾಜ್ ಅವರು ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಓಂಜಿ ಅವರ ಕ್ಯಾಮೆರಾ ವರ್ಕ್ ಚಿತ್ರಕ್ಕಿದೆ. ಸತೀಶ್ ಬಾಬು ಹಾಗೂ ಎಂ.ಎಸ್. ತ್ಯಾಗರಾಜ್ ಸಂಗೀತ ಸಂಯೋಜನೆ ಮಾಡಿರುವ ಈ ಚಿತ್ರದ ಟ್ರೈಲರ್ ಹಾಗೂ ಆಡಿಯೋ ಬಿಡುಗಡೆ ಸಮಾರಂಭ ಇತ್ತೀಚೆಗೆ ನೆರವೇರಿತು. ಫಿಲಂ ಚೇಂಬರ್ ಉಪಾಧ್ಯಕ್ಷ ಶಿಲ್ಪಾ ಶ್ರೀನಿವಾಸ್, ಹಿರಿಯ ನಿರ್ದೇಶಕ ಕೂಡ್ಲು ರಾಮಕೃಷ್ಣ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಟ್ರೈಲರ್ ಪ್ರದರ್ಶನದ ನಂತರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಚಿತ್ರದ ಕುರಿತಂತೆ ಮಾಹಿತಿ ಹಂಚಿಕೊಂಡರು. ವಿಜಯ್ ರಾಘವೇಂದ್ರ ಮಾತನಾಡಿ, ಎಫ್.ಐ.ಆರ್ .ಭಾಗ್ಯ ರಮೇಶ್ ರಮಣರಾಜ್ ಅವರ ಕನಸು. ಇದೊಂದು ಆಕ್ಷನ್ ಥ್ರಿಲ್ಲರ್ ಸಿನಿಮಾ. ಇಡೀ ಚಿತ್ರವನ್ನು ನೈಟ್ ಎಫೆಕ್ಟ್ ನಲ್ಲೇ ಶೂಟ್ ಮಾಡಿದ್ದೇವೆ. ಸುಮಾರು ರಾತ್ರಿ ಈ ಸಿನಿಮಾಗಾಗಿ ಕಷ್ಟಪಟ್ಟಿದ್ದೇವೆ. ನಿರ್ದೇಶಕರು ತುಂಬಾ ಎಫರ್ಟ್ ಹಾಕಿದ್ದಾರೆ. ಕಷ್ಟಪಟ್ಟು ಇಷ್ಟಪಟ್ಟು ಈ ಸಿನಿಮಾ ಮಾಡಿದ್ದೇವೆ. ಈ ಕಥೆಯಲ್ಲಿ ಮೇಜರ್ ಆಗಿರುವುದೇ ಆ್ಯಕ್ಷನ್. ಒಮ್ಮೊಮ್ಮೆ ಬೆಳಗಿನಜಾವ ನಾಲ್ಕರವರೆಗೆ ಶೂಟ್ ಮಾಡಿದ್ದೇವೆ. ಅಲ್ಲದೆ ಥ್ರಿಲ್ಲರ್ ಮಂಜು ಅವರ ಜೊತೆ ಆಕ್ಷನ್ ಮಾಡುವುದು ತುಂಬಾ ಸುಲಭ. ಒಳ್ಳೆಯ ಅನುಭವ ಸಿಗುತ್ತೆ ಎಂದು ಹೇಳಿದರು. ಯುವಕನೊಬ್ಬ ಒಂದು ಘಟನೆಯಲ್ಲಿ ಸಿಕ್ಕಿ ಹಾಕಿಕೊಂಡು ನಂತರ ಆ ಸಂದರ್ಭವನ್ನು ಹೇಗೆ ಫೇಸ್ ಮಾಡುತ್ತಾನೆ ಅನ್ನೋದನ್ನು ಸಂಜೆ 6ರಿಂದ ಬೆಳಗಿನ ಜಾವ 6ರವರೆಗೆ ನಡೆಯುವ ಕಥೆಯ ಮೂಲಕ ಥ್ರಿಲ್ಲಿಂಗ್ ಆಗಿ ಹೇಳಲು ಪ್ರಯತ್ನಿಸಿದ್ದೇವೆ. ವಿಜಯ್ ರಾಘವೇಂದ್ರ ಅವರ ಜೊತೆ ಕೆಲಸ ಮಾಡಿದ್ದು ಒಳ್ಳೆಯ ಅನುಭವ. 35 ದಿನ ಪೂರ್ತಿ ರಾತ್ರಿ ವೇಳೆಯಲ್ಲೇ ಶೂಟ್ ಮಾಡಿದ್ದೇವೆ. ಸಿನಿಮಾ ತುಂಬಾ ಚೆನ್ನಾಗಿ ಬಂದಿದೆ ಎಂದು ಹೇಳಿದರು. ನಂತರ ಚಿತ್ರದ ಸಂಕಲನಕಾರ ನಾಗೇಂದ್ರ ಅರಸ್, ನಟ ವಿದ್ಯಾಭರಣ, ಸಂಗೀತ ನಿರ್ದೇಶಕ ಎಂ.ಎಸ್.ತ್ಯಾಗರಾಜ್ ಚಿತ್ರದ ವಿಶೇಷತೆಗಳ ಕುರಿತಂತೆ ಮಾತನಾಡಿದರು.

# ದುಬಾರಿ ಕಾರು ಖರೀದಿಸಿದ ದಿವ್ಯಾ ಉರುಡುಗ



ಬಿಗ್ ಬಾಸ್ 8 ಖ್ಯಾತಿಯ ದಿವ್ಯಾ ಉರುಡುಗ ಮನೆಗೆ ಹೊಸ ಅತಿಥಿಯ ಆಗಮನವಾಗಿದೆ. ದುಬಾರಿ ಕಾರನ್ನು ನಟಿ ಖರೀದಿಸಿದ್ದಾರೆ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ ಫೋಟೋ ಹಂಚಿಕೊಂಡು ನಟಿ ಸಂಭ್ರಮಿಸಿದ್ದಾರೆ. ದಿವ್ಯಾರವರ ಖುಷಿ ಕಂಡು ಫ್ಯಾನ್ಸ್ ಶುಭಕೋರಿದ್ದಾರೆ. ಟಾಟಾ ಹ್ಯಾರಿಯರ್ ಕಾರಿನ್ನು ಮನೆಗೆ ತಂದಿದ್ದಾರೆ. ಕಾರು ಖರೀದಿಸುವಾಗ ಕುಟುಂಬಸ್ಥರು, ಅರವಿಂದ್ ಕೆಪಿ ಕೂಡ ನಟಿಯ ಜೊತೆಯಿದ್ದರು. ಇನ್ನೂ ಈ ಕಾರಿನ ಬೆಲೆ 16 ಲಕ್ಷ ರೂ.ಯಿಂದ ಆರಂಭಗೊಂಡು 32 ಲಕ್ಷ ರೂ. ವರೆಗೂ ಇದೆ. ನಟಿ ಹಂಚಿಕೊಂಡಿರುವ ಪೋಸ್ಟ್‌ಗೆ ಅರವಿಂದ್ ಕೆಪಿ ಕೂಡ ಕಾಮೆಂಟ್ ಮಾಡಿ, ಅಭಿನಂದನೆಗಳು.. ನಿನ್ನ ಬಗ್ಗೆ ಹೆಮ್ಮೆಯಿದೆ. ಹೀಗೆ ಮುನ್ನುಗ್ಗು ಎಂದು ಶ್ಲಾಘಿಸಿದ್ದಾರೆ. ಸದ್ಯ ದಿವ್ಯಾ 'ನಿನಗಾಗಿ' ಸೀರಿಯಲ್‌ನಲ್ಲಿ ನಾಯಕಿಯಾಗಿ ರಚನಾ ಎಂಬ ಪಾತ್ರದಲ್ಲಿ ಮಿಂಚುತ್ತಿದ್ದಾರೆ. ಅಂದಹಾಗೆ, ಬಿಗ್ ಬಾಸ್ ಕನ್ನಡ ಸೀಸನ್ 8ರಲ್ಲಿ ದಿವ್ಯಾ ಮತ್ತು ಅರವಿಂದ್ ಪರಿಚಯವಾದರು. ಆ ಸ್ನೇಹವೇ ಪ್ರೀತಿಗೆ ತಿರುಗಿತ್ತು. ಇಬ್ಬರೂ ಅದ್ಯಾವಾಗ ಮದುವೆ ಬಗ್ಗೆ ಗುಡ್ ನ್ಯೂಸ್ ಕೊಡಲಿದ್ದಾರೆ ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ.



# ಪತ್ನಿ ಅವಿವ ಜೊತೆ ಅಭಿಷೇಕ್ ಅಂಬರೀಶ್ ಮಸ್ತ್ ಫೋಟೋಶೂಟ್

ಜೂ. ರೆಬೆಲ್ ಸ್ಟಾರ್ ಅಭಿಷೇಕ್ ಅಂಬರೀಶ್ ಮತ್ತು ಅವಿವ ಮಗುವಿನ ಪಾಲನೆಯಲ್ಲಿ ಬ್ಯುಸಿಯಾಗಿದ್ದು, ಇದರ ನಡುವೆ ಹೊಸದೊಂದು ಫೋಟೋಶೂಟ್ ಮಾಡಿಸಿದ್ದಾರೆ. ಮಸ್ತ್ ಆಗಿ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ. ಚೆಂದದ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಅವಿವ ಹಂಚಿಕೊಂಡಿದ್ದಾರೆ. ಬಿಳಿ ಬಣ್ಣದ ಉಡುಗೆಯಲ್ಲಿ ಅಭಿಷೇಕ್ ಮತ್ತು ಅವಿವ ದಂಪತಿ ಮಿಂಚಿದ್ದಾರೆ. ಇಬ್ಬರೂ ರೊಮ್ಯಾಂಟಿಕ್ ಆಗಿ ಪೋಸ್ ಕೊಟ್ಟಿದ್ದಾರೆ. ಅಂದಹಾಗೆ, ಸ್ನೇಹಿತೆಯ ಮದುವೆಯಲ್ಲಿ ಭಾಗಿಯಾಗಲು ಅವಿವ ಜೋಡಿ ಮಸ್ತ್ ಆಗಿ ರೆಡಿಯಾಗಿದ್ದಾರೆ.

ಅಂದಹಾಗೆ, ಕಳೆದ ವರ್ಷ ಈ ಜೋಡಿ ಬೆಂಗಳೂರಿನಲ್ಲಿ ಅದ್ದೂರಿಯಾಗಿ ಮದುವೆಯಾದರು. ನ.12ರಂದು ಗಂಡು ಮಗುವಿಗೆ ಅವಿವ ಜನ್ಮ ನೀಡಿದರು. ಇನ್ನೂ 'ಬ್ಯಾಡ್ ಮ್ಯಾನರ್ಸ್' ಸಿನಿಮಾ ಬಳಿಕ ಅಭಿಷೇಕ್ ಅವರು ಮದಗಜ, ಅಯೋಗ್ಯ ಡೈರೆಕ್ಟರ್ ಮಹೇಶ್ ಕುಮಾರ್ ಜೊತೆ ಕೈಜೋಡಿಸಿದ್ದಾರೆ. ಈ ಸಿನಿಮಾ ಯಾವಾಗ ಶುರು ಆಗಲಿದೆ ಎಂಬುದನ್ನು ಸದ್ಯದಲ್ಲೇ ಮಾಹಿತಿ ಹೊರಬೀಳಲಿದೆ.

# ವಾರಣಾಸಿ ಕಾಶಿ ವಿಶ್ವನಾಥ ಸನ್ನಿಧಿಯಲ್ಲಿ ಸಾಯಿ ಪಲ್ಲವಿ




ಸೌತ್ ಬ್ಯೂಟಿ ಸಾಯಿ ಪಲ್ಲವಿ ಸಿನಿಮಾ ಕೆಲಸಗಳಿಗೆ ಬ್ರೇಕ್ ಕೊಟ್ಟು ವಾರಣಾಸಿಗೆ ಭೇಟಿ ನೀಡಿದ್ದಾರೆ. ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ಕೊಟ್ಟು ವಿಶೇಷ ಪೂಜೆ ಸಲ್ಲಿಸಿದ್ದಾರೆ. ತೆಲುಗು ಮತ್ತು ಬಾಲಿವುಡ್ ಸಿನಿಮಾ ಗಳಲ್ಲಿ ಬ್ಯುಸಿಯಾಗಿರುವ ಸಾಯಿ ಪಲ್ಲವಿ ಸೋಮವಾರ ವಾರಣಾಸಿ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ್ದಾರೆ. ದೇವರ ಸನ್ನಿಧಿಯಲ್ಲಿ ಕೆಲ ಕಾಲ ಸಮಯ ಕಳೆದಿದ್ದಾರೆ. ನಟಿ ವಾರಣಾಸಿಗೆ ಭೇಟಿ ಕೊಟ್ಟಿರುವ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿವೆ. ಅಂದಹಾಗೆ, ನಾಗಚೈತನ್ಯ ಜೊತೆಗಿನ 'ತಾಂಡೇಲ್' ಸಿನಿಮಾ ರಿಲೀಸ್‌ಗೆ ರೆಡಿಯಿದೆ.

ಮುಂದಿನ ವರ್ಷ ಫೆಬ್ರವರಿಯಲ್ಲಿ ರಿಲೀಸ್ ಆಗಲಿದೆ.

ರಣ್‌ಬೀರ್ ಕಪೂರ್‌ಗೆ ಸೀತೆಯಾಗಿ 'ರಾಮಾಯಣ' ಸಿನಿಮಾದಲ್ಲಿ ಸಾಯಿ ಪಲ್ಲಿವಿ ನಟಿಸುತ್ತಿದ್ದಾರೆ. ಚಿತ್ರದಲ್ಲಿ ರಾವಣನ ಪಾತ್ರದಲ್ಲಿ ಯಶ್ ಅಬ್ಬರಿಸಲಿದ್ದಾರೆ.

# ದುಬೈನಲ್ಲಿ ಕ್ರಿಸ್‌ಮಸ್ ಆಚರಿಸಿದ್ರಾ ಮೊಹಮ್ಮದ್ ಶಮಿ-ಸಾನಿಯಾ ಮಿರ್ಜಾ



ಮೊಹಮ್ಮದ್ ಶಮಿ, ಸಾನಿಯಾ ಮಿರ್ಜಾ ಮದುವೆಯಾಗಲಿದ್ದಾರೆ ಎಂಬ ಸುದ್ದಿಗಳ ನಡುವೆ ಇಬ್ಬರೂ ಜೊತೆಗಿರುವ ಚಿತ್ರವೊಂದು ವೈರಲ್ ಆಗಿದೆ. ದುಬೈನಲ್ಲಿ ಇಬ್ಬರೂ ಜೊತೆಗಿರುವ ಚಿತ್ರ ಎಂದು ಇದನ್ನು ಹಂಚಿಕೊಳ್ಳಲಾಗುತ್ತಿದೆ. ಸುಮಾರು ಐದು ಲಕ್ಷ ಜನರು ಈ ಚಿತ್ರವನ್ನು ಲೈಕ್ ಮಾಡಿದ್ದು, 1,600ಕ್ಕೂ ಹೆಚ್ಚು ಜನರು ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ. ಪರಿಶೀಲನೆ ನಡೆಸಿದಾಗ ಈ ಚಿತ್ರ ಎಐನಿಂದ ಸೃಷ್ಟಿಸಿದ್ದು ಎಂದು ಸಾಬೀತಾಗಿದೆ. ಭಾರತ ಕ್ರಿಕೆಟ್ ತಂಡದ ಖ್ಯಾತ ಬೌಲರ್ ಮೊಹಮ್ಮದ್ ಶಮಿ ಹಾಗೂ ಟೆನಿಸ್ ತಾರೆ ಸಾನಿಯಾ ಮಿರ್ಜಾ ಮದುವೆಯಾಗಲಿದ್ದಾರೆ ಎಂಬ ಸುದ್ದಿಗಳು ಆಗಾಗ ಓಡಾಡುತ್ತಲೇ ಇವೆ. ಇದೇ ವೇಳೆ ಇಬ್ಬರೂ ಜೊತೆಗಿರುವ ಚಿತ್ರವೊಂದು ವೈರಲ್ ಆಗಿದ್ದು, ದುಬೈನಲ್ಲಿ ಒಟ್ಟಿಗಿರುವ ಚಿತ್ರ ಎಂದು ಹೇಳಲಾಗಿದೆ. ಇದು ನಿಜವೇ ಪರಿಶೀಲಿಸೋಣ. ಮೂಗುತಿ ಸುಂದರಿ ಸಾನಿಯಾ ಮಿರ್ಜಾ ತಮ್ಮ ಪತಿ, ಪಾಕಿಸ್ತಾನ ಕ್ರಿಕೆಟಿಗ ಶೋಯಿಬ್ ಮಲಿಕ್ ಅವರಿಂದ ವಿಚ್ಛೇದನ ಪಡೆದುಕೊಂಡಿದ್ದರೆ, ಇತ್ತ ಮೊಹಮ್ಮದ್ ಶಮಿ ಕೂಡ ತಮ್ಮ ಪತ್ನಿಯಿಂದ ದೂರವಾಗಿದ್ದಾರೆ. ವಿಚ್ಛೇದನ ಪಡೆದುಕೊಂಡಿರುವ ಇಬ್ಬರೂ ಮದುವೆಯಾಗಲಿದ್ದಾರೆ ಎಂಬ ಸುದ್ದಿಗಳು ಹಲವು ಸಮಯದಿಂದಲೇ ಕೇಳಿ ಬರುತ್ತಿವೆ. ಇದೇ ವೇಳೆ ಇಬ್ಬರೂ ಜೊತೆಗಿರುವ ಚಿತ್ರವೊಂದು ಭಾರೀ ವೈರಲ್ ಆಗಿದೆ.

**ವೈರಲ್ ಚಿತ್ರ ಎಷ್ಟು ನಿಜ?**

**ಪೋಸ್ಟ್‌ನಲ್ಲಿ ಏನಿದೆ?:** 'ಕ್ರಿಕೆಟ್ ಗುರು' ಎಂಬ ಫೇಸ್‌ಬುಕ್ ಪೇಜ್‌ನಲ್ಲಿ ಮೊಹಮ್ಮದ್ ಶಮಿ ಹಾಗೂ ಸಾನಿಯಾ ಮಿರ್ಜಾ ಜೊತೆಗಿರುವ ಚಿತ್ರವನ್ನು ಹಂಚಿಕೊಳ್ಳಲಾಗಿದೆ. 'ದುಬೈನಲ್ಲಿ ತೆಗೆದ ಮೊಹಮ್ಮದ್ ಶಮಿ ಮತ್ತು ಸಾನಿಯಾ ಮಿರ್ಜಾ ಅವರ ಸುಂದರವಾದ ಚಿತ್ರ' ಎಂದು ಇದರ ಜೊತೆಗೆ ಬರೆಯಲಾಗಿದೆ. ಜೊತೆಗೆ ಎರಡು ಚಿತ್ರಗಳನ್ನು ಹಂಚಿಕೊಳ್ಳಲಾಗಿದೆ. ಇವು ಭಾರೀ ವೈರಲ್ ಆಗಿದ್ದು, ಸುಮಾರು ಐದು ಲಕ್ಷ ಜನರು ಲೈಕ್ ಮಾಡಿದ್ದಾರೆ. ಜೊತೆಗೆ 9 ಸಾವಿರದಷ್ಟು ಜನರು ಲೈಕ್ ಮಾಡಿದ್ದು, 1,600ಕ್ಕೂ ಹೆಚ್ಚು ಜನರು ಈ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ. ಇದರ ಸತ್ಯಾಸತ್ಯತೆ ಪರಿಶೀಲನೆ ನಡೆಸುವ ಉದ್ದೇಶದಿಂದ ಮೊದಲಿಗೆ 'ಸಜಗ್' ತಂಡ 'Mohammad Shami Sania Mirza in Dubai' ಎಂಬ ಕೀವರ್ಡ್ ಬಳಸಿ ಗೂಗಲ್‌ನಲ್ಲಿ ಹುಡುಕಾಟ ನಡೆಸಿತು. ಆದರೆ ಇವರು ಇಬ್ಬರೂ ದುಬೈಗೆ ಭೇಟಿ ನೀಡಿರುವ ಯಾವ ಸುದ್ದಿಯೂ ಸಿಗಲಿಲ್ಲ. ಮುಂದುವರಿದು ಫೋಟೋದ ಸತ್ಯಾಸತ್ಯತೆ ಬಯಲಿಗೆಳಯಲು ವಿವಿಧ ಎಐ ಟೂಲ್‌ಗಳ ಮೊರೆ ಹೋಗಲಾಯಿತು. 'ಸೈಟ್ ಇಂಜಿನ್ ಡಾಟ್ ಕಾಂ' ಎಂಬ ಎಐ ಚಿತ್ರಗಳನ್ನು ಪತ್ತೆಹಚ್ಚುವ ಟೂಲ್‌ನಲ್ಲಿ ಈ ಚಿತ್ರವನ್ನು ಹಾಕಿದಾಗ ಇದು ಶೇ. 99ರಷ್ಟು ಜನರೇಟಿವ್ ಎಐ ಬಳಸಿ ರಚಿಸಿದ ಚಿತ್ರ ಎಂದು ಅದು ಫಲಿತಾಂಶ ನೀಡಿತು. ಇದನ್ನು ಖಚಿತಪಡಿಸಲು ಇನ್ನೊಂದು ಟೂಲ್ ಹೈವ್ ಮಾಡರೇಷನ್‌ನಲ್ಲಿ ಪರಿಶೀಲನೆ ನಡೆಸಿದಾಗ ಅದು, ಇದು ಶೇ. 99.3ರಷ್ಟು ಎಐ ಚಿತ್ರ ಎಂಬ ಫಲಿತಾಂಶವನ್ನು ತೋರಿಸಿತು.

**ಸ್ಪಷ್ಟನೆ ನೀಡಿದ್ದರು ಸಾನಿಯಾ ಮಿರ್ಜಾ ತಂದೆ:** ಈ ಹಿಂದೆಯೂ ಮೊಹಮ್ಮದ್ ಶಮಿ ಹಾಗೂ ಸಾನಿಯಾ ಮಿರ್ಜಾ ಮದುವೆಯ ಗಾಸಿಪ್‌ಗಳು ಹರಿದಾಡಿದ್ದವು. ಈ ಸಂದರ್ಭದಲ್ಲಿ ಎನ್‌ಡಿಟಿವಿಗೆ ನೀಡಿದ್ದ ಸಂದರ್ಶನದಲ್ಲಿ ಸ್ಪಷ್ಟನೆ ನೀಡಿದ್ದ ಸಾನಿಯಾ ಮಿರ್ಜಾ ತಂದೆ ಇಮ್ರಾನ್ ಮಿರ್ಜಾ, ಆ ರೀತಿಯ ಯಾವುದೇ ಪ್ರಸ್ತಾಪಗಳು ಇಲ್ಲ ಎಂದಿದ್ದರು. ತನ್ನ ಮಗಳು ಕ್ರಿಕೆಟಿಗ ಶಮಿಯನ್ನು ಭೇಟಿಯೇ ಆಗಿಲ್ಲ. ವದಂತಿಗಳೆಲ್ಲ ಆಧಾರ ರಹಿತ ಎಂದಿದ್ದರು. ಇವೆಲ್ಲವೂ ಆಧಾರ ರಹಿತ. ಆಕೆ ಆತನನ್ನು ಭೇಟಿಯೇ ಮಾಡಿಲ್ಲ, ಎಂದು ಸ್ಪಷ್ಟಪಡಿಸಿದ್ದರು.

**ತೀರ್ಮಾನ ಏನು:** ದುಬೈನಲ್ಲಿ ಸಾನಿಯಾ ಮಿರ್ಜಾ ಹಾಗೂ ಮೊಹಮ್ಮದ್ ಶಮಿ ಒಟ್ಟಾಗಿರುವ ಚಿತ್ರ ನಕಲಿ ಎಂಬ ತೀರ್ಮಾನಕ್ಕೆ ಬರಲಾಗಿದೆ. ಅಲ್ಲದೆ ಈ ಚಿತ್ರವನ್ನು ಎಐನಿಂದ ಸೃಷ್ಟಿಸಲಾಗಿದೆ ಎಂದು ದೃಢಪಟ್ಟಿದೆ.

# ಮೆಲ್ಬರ್ನ್‌ನಲ್ಲಿ ಭಾರತ ತಂಡದ ತಾಲೀಮಿಗೆ ಹಳೇ ಪಿಚ್ ಆಸೀಸ್‌ಗೆ ಮಾತ್ರ ತಾಜಾ ಟ್ರ್ಯಾಕ್

ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ರೇಸ್ ನಲ್ಲಿ ಉಳಿಯಬೇಕಾದರೆ ಆಸ್ಟ್ರೇಲಿಯಾ ತಂಡದ ವಿರುದ್ಧ ಇನ್ನುಳಿದಿರುವ ಎರಡು ಟೆಸ್ಟ್ ಪಂದ್ಯಗಳನ್ನು ಗೆಲ್ಲಲೇಬೇಕಿರುವ ಟೀಂ ಇಂಡಿಯಾ ಈಗಾಗಲೇ ಮೆಲ್ಬರ್ನ್ ಕ್ರಿಕೆಟ್ ಗ್ರೌಂಡ್‌ಯಲ್ಲಿ ತಾಲೀಮು ಪ್ರಾರಂಭಿಸಿದೆ. ಆದರೆ ಭಾರತ ತಂಡದ ಅಭ್ಯಾಸಕ್ಕೆ ಮೈದಾನದ ಆಡಳಿತ ಮಂಡಳಿ ಹಳೆಯದಾದ ಪಿಚ್ ಗಳನ್ನು ಒದಗಿಸಿದ್ದು, ಆಸ್ಟ್ರೇಲಿಯಾಕ್ಕೆ ಮಾತ್ರ ಹೊಸ ಪಿಚ್‌ಗಳನ್ನು ನೀಡಿದೆ ಎಂಬ ಆರೋಪ ಕೇಳಿ ಬಂದಿದೆ. ಈ ಎರಡೂ ಪಿಚ್‌ಗಳ ಫೋಟೋ ಮತ್ತು ವಿಡಿಯೋಗಳು ಇದೀಗ ಇಂಟರ್ ನೆಟ್ ನಲ್ಲಿ ಹರಿದಾಡುತ್ತಿದ್ದು, ವೈರಲ್ ಆಗುತ್ತಿದೆ.

ನಾಯಕ ರೋಹಿತ್ ಶರ್ಮಾ, ಮಾಜಿ ನಾಯಕ ವಿರಾಟ್ ಕೊಹ್ಲಿ, ಫಾರ್ಮ್ ನಲ್ಲಿರುವ ಬ್ಯಾಟರ್ ಕೆಎಲ್ ರಾಹುಲ್, ಬೌಲರ್ ಗಳಾದ ಜಸ್ಪ್ರೀತ್ ಬುಮ್ರಾ, ಆಕಾಶ್ ದೀಪ್, ಮೊಹಮ್ಮದ್ ಸಿರಾಜ್ ಸೇರಿದಂತೆ ಎಲ್ಲಾ ಸದಸ್ಯರು ಹಳೇ ಪಿಚ್ ನಲ್ಲೇ ತಾಲೀಮು ನಡೆಸಿದ್ದರು. ಬಾರ್ಡರ್ ಗಾವಸ್ಕರ್ ಟ್ರೋಫಿ ಸರಣಿಯ 4ನೇ ಪಂದ್ಯವನ್ನಾಡಲು ಪ್ರವಾಸಿ ಭಾರತ ಮತ್ತು ಆತಿಥೇಯ ಆಸ್ಟ್ರೇಲಿಯಾ ತಂಡಗಳು ಸಜ್ಜಾಗುತ್ತಿವೆ. ಬ್ರಿಸ್ಬೇನ್‌ನಿಂದ ಮೆಲ್ಬರ್ನ್ ತಲುಪಿರುವ ಇತ್ತಂಡಗಳೂ ಇದೀಗ ಮೆಲ್ಬರ್ನ್ ಕ್ರಿಕೆಟ್ ಗ್ರೌಂಡ್‌ನ ನೆಟ್ಸ್ ನಲ್ಲಿ ಅಭ್ಯಾಸ ನಿರತವಾಗಿವೆ. ಆದರೆ ಇಲ್ಲಿ ಭಾರತ ತಂಡಕ್ಕೆ ಹಳೆಯ ಕಳಪೆ ಪಿಚ್ ಗಳನ್ನು ನೀಡಿ ಆಸ್ಟ್ರೇಲಿಯಾ ತಂಡಕ್ಕೆ ಹೊಸ ಪಿಚ್ ಗಳನ್ನು ನೀಡಲಾಗಿದೆ ಎಂಬ ಆರೋಪ ಕೇಳಿ ಬಂದಿದೆ.

**ಪಿಚ್ ಕ್ಯುರೇಟರ್ ಹೇಳಿದ್ದೇನು?:** ಆದರೆ ಈ ವಿವಾದಕ್ಕೆ ಪ್ರತಿಕ್ರಿಯಿಸಿರುವ ಎಂಸಿಜೆಯ ಪಿಚ್ ಕ್ಯುರೇಟರ್ ಮ್ಯಾಟ್ ಪೇಜ್, ನಿಯಮದ ಪ್ರಕಾರ ಪಂದ್ಯ ಶುರುವಾಗುವ ಕೇವಲ 3 ದಿನಕ್ಕೆ ಮುಂಚಿತವಾಗಿ ಮಾತ್ರ ಹೊಸ ಪಿಚ್ ಅನ್ನು ನೀಡುವ ಕ್ರಮವಿದೆ ಎಂದು ತಿಳಿಸಿದ್ದಾರೆ.

''ನಮಗೆ ಭಾರತ ತಂಡದ ಅಭ್ಯಾಸದ ವೇಳಾಪಟ್ಟಿಯೂ ಕೈಗೆ



ಬಂದಿದೆ. ಪಂದ್ಯ ಪ್ರಾರಂಭವಾಗುವ ಕೇವಲ 3 ದಿನಕ್ಕೆ ಮುಂಚಿತವಾಗಿ ಮಾತ್ರ ಹೊಸ ಪಿಚ್ ಅನ್ನು ನೀಡುತ್ತೇವೆ. ಈ ನಿಯಮ ಎಲ್ಲಾ ತಂಡಗಳಿಗೂ ಅನ್ವಯವಾಗುತ್ತದೆ ಎಂದಿದ್ದಾರೆ. ಭಾರತ ತಂಡ ಹಳೇ ಪಿಚ್ ಗಳಲ್ಲಿ ಅಭ್ಯಾಸ ನಡೆಸಿತ್ತು. ಆಸ್ಟ್ರೇಲಿಯಾ ತಂಡ ಪಂದ್ಯಕ್ಕೆ 3 ದಿನ ಮುಂಚಿತವಾಗಿ ಅಂದರೆ ಸೋಮವಾರ ಮೊದಲ ಬಾರಿಗೆ ನೆಟ್ಸ್ ನಲ್ಲಿ ಅಭ್ಯಾಸ ನಡೆಸಿದೆ. ಭಾರತ ತಂಡ ಸೋಮವಾರ ನೆಟ್ಸ್ ನಲ್ಲಿ ಅಭ್ಯಾಸ ನಡೆಸಿಲ್ಲ. ಭಾರತ ತಂಡ ಇನ್ನು ಯಾವಾಗ ನೆಟ್ಸ್ ನಲ್ಲಿ ಅಭ್ಯಾಸ ನಡೆಸಿದರೂ ತಾಜಾ ಪಿಚ್ ಅನ್ನೇ ನೀಡಲಾಗುತ್ತದೆ ಎಂದು ಮ್ಯಾಟ್ ಪೇಜ್ ಮಾಹಿತಿ ನೀಡಿದ್ದಾರೆ.

**ಹೇಗಿತ್ತು ಭಾರತಕ್ಕೆ ನೀಡಲಾದ ಪಿಚ್**

**ವರದಿಗಳ ಪ್ರಕಾರ ಈ ಪಿಚ್ ನಲ್ಲಿ ಹೇಳಿಕೊಳ್ಳುವಂತಹ ವೇಗ ಮತ್ತು ಬೌನ್ಸ್ ಇರಲಿಲ್ಲ. ಚೆಂಡು ತಳಮಟ್ಟದಲ್ಲಿ ಬ್ಯಾಟಿಗೆ ಬರುತ್ತಿತ್ತು. ಶಾರ್ಟ್ ಪಿಚ್ ಡೆಲಿವರಿಗಳು ಸಹ ಬ್ಯಾಟರ್‌ಗಳ ಸೊಂಟಕ್ಕಿಂತ ಮೇಲೆ ಪುಟಿಯುತ್ತಿರಲಿಲ್ಲ. ಪಿಚ್‌ನಲ್ಲಿನ ಬೌನ್ಸ್ ಅನ್ನು ಅರ್ಥೈಸಲಾಗದ ಕಾರಣಕ್ಕೇ ಎಸೆತವೊಂದು ರೋಹಿತ್ ಶರ್ಮಾ ಅವರ ಮೊಣಕಾಲಿಗೆ ಬಡಿದು ಅವರು ಸಣ್ಣಮಟ್ಟಿಗೆ ಗಾಯಗೊಂಡಿದ್ದರು. ಇದೇ ವೇಳೆ ಆಸ್ಟ್ರೇಲಿಯಾದ ಆಟಗಾರರ ಅಭ್ಯಾಸಕ್ಕೆ ಸೋಮವಾರ ಹೊಸ ಪಿಚ್ ನೀಡಲಾಗಿತ್ತು. ಇದು ತಾಜಾತನದಿಂದ ಕೂಡಿದ್ದು ಬ್ಯಾಟರ್ ಗಳಿಗೆ ಅಭ್ಯಾಸ ನಡೆಸಲು ಅನುಕೂಲಕರವಾಗಿತ್ತು ಎಂದು ತಿಳಿದು ಬಂದಿದೆ. ಈ ಬಗ್ಗೆ ಭಾರತೀಯ ಕ್ರಿಕೆಟ್ ಪ್ರೇಮಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ಎಂಬ ಗಾದೆಯಂತೆ ಪ್ರವಾಸಿ ತಂಡದ ಜೊತೆ ತಾರತಮ್ಯ ಮೆರೆದಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.**



# ಖೇಲ್ ರತ್ನ ಪ್ರಶಸ್ತಿಗೆ ಶಿಫಾರಸ್ಸುಗೊಳ್ಳದ ಶೂಟರ್ ಮನು ಭಾಕರ್ ಹೆಸರು

ಮಹಿಳೆಯರ 10m ಏರ್ ಪಿಸ್ತೂಲ್ ಸ್ಪರ್ಧೆ ಮತ್ತು 10m ಪಿಸ್ತೂಲ್ ಡಬಲ್ಸ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆಲ್ಲುವ ಮೂಲಕ ಪ್ಯಾರಿಸ್ ಒಲಂಪಿಕ್ಸ್‌ನಲ್ಲಿ ಐತಿಹಾಸಿಕ ಸಾಧನೆ ಮಾಡಿದ್ದ ಮನು ಭಾಕರ್ ಅವರನ್ನು ಖೇಲ್ ರತ್ನ ಪ್ರಶಸ್ತಿಗೆ ಶಿಫಾರಸ್ಸು ಮಾಡಿಲ್ಲ ಎಂದು ಮೂಲಗಳು ಹೇಳಿವೆ.

ಭಾರತೀಯ ಪುರುಷರ ಹಾಕಿ ತಂಡದ ನಾಯಕ ಹರ್ಮನ್‌ಪ್ರೀತ್ ಸಿಂಗ್ ಮತ್ತು ಪ್ಯಾರಾ-ಅಥ್ಲೀಟ್ ಪ್ರವೀಣ್ ಕುಮಾರ್ ಖೇಲ್ ರತ್ನ ಪ್ರಶಸ್ತಿಗೆ ನಾಮನಿರ್ದೇಶನಗೊಂಡಿದ್ದು ಮನು ಭಾಕರ್ ಅವರು ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸದ ಹಿನ್ನೆಲೆ ಅವರನ್ನು ಪರಿಗಣಿಸಿಲ್ಲ ಎಂದು ಕ್ರೀಡಾ ಇಲಾಖೆ ಹೇಳಿದೆ. ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಾಧೀಶ ನ್ಯಾಯಮೂರ್ತಿ ವಿ.ರಾಮಸುಬ್ರಮಮ್ ನೇತೃತ್ವದ 12 ಸದಸ್ಯರ ಸಮಿತಿಯನ್ನು ರಚಿಸಲಾಗಿತ್ತು. ರಾಷ್ಟ್ರೀಯ ಕ್ರೀಡಾ ದಿನಾಚರಣೆಗೆ ಭಾರತದ ಅತ್ಯುನ್ನತ ಕ್ರೀಡಾ ಗೌರವವಾದ ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗೆ ಹೆಸರು ಶಿಫಾರಸ್ಸು ಮಾಡಲು ಸೂಚಿಸಲಾಗಿತ್ತು.

**ತಂದೆ ಆಕ್ಷೇಪ**

ಸಮಿತಿಯ ನಿರ್ಧಾರಕ್ಕೆ ಮನು ಭಾಕರ್ ತಂದೆ ರಾಮಕೃಷ್ಣ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಒಂದೇ ಒಲಿಂಪಿಕ್ಸ್‌ನಲ್ಲಿ ಎರಡು ಪದಕಗಳನ್ನು ಗೆದ್ದು ಪ್ರಶಸ್ತಿಗಾಗಿ ಭಿಕ್ಷೆ ಬೇಡಿದರೆ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ. ಪ್ರಶಸ್ತಿಗಾಗಿ ನಾನು ಅರ್ಜಿ ಸಲ್ಲಿಸಿದ್ದೇನೆ ಸಮಿತಿಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದರು. ಕ್ರಿಕೆಟಿಗರು ಅರ್ಜಿ ಸಲ್ಲಿಸದಿದ್ದರೂ ಮೊಹಮ್ಮದ್ ಶಮಿ ಅವರಿಗೆ ಈ ವರ್ಷದ ಆರಂಭದಲ್ಲಿ ಅರ್ಜುನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಆದರೆ ಒಂದೇ ಒಲಂಪಿಕ್ಸ್ ನಲ್ಲಿ ಎರಡು ಕಂಚು ಗೆದ್ದರೂ ನಮ್ಮನ್ನು ಪರಿಗಣಿಸಿಲ್ಲ. ಪ್ರಶಸ್ತಿಯನ್ನು ಒಬ್ಬ ಸರ್ಕಾರಿ ಅಧಿಕಾರಿ ನಿರ್ಧರಿಸುತ್ತಿದ್ದಾರೆ, ಮತ್ತು ಸಮಿತಿಯ ಸದಸ್ಯರು ತಮ್ಮ ಅಭಿಪ್ರಾಯವನ್ನು ನೀಡದೆ ಮೌನವಾಗಿದ್ದಾರೆ ನನಗೆ ಅರ್ಥವಾಗುತ್ತಿಲ್ಲ, ನೀವು ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುತ್ತಿರುವ ರೀತಿ ಇದೇನಾ ಎಂದು ಕೇಳಿದ್ದಾರೆ.

# ಉದ್ಯಮಿಯೊಂದಿಗೆ ವೈವಾಹಿಕ ಜೀವನಕ್ಕೆ ಕಾಲಿಟ್ಟ ಸಿಂಧು

ಭಾರತದ ಸ್ಟಾರ್ ಬ್ಯಾಡ್ಮಿಂಟನ್ ಆಟಗಾರ್ತಿ ಹಾಗೂ ಒಲಿಂಪಿಕ್ಸ್ ಪದಕ ವಿಜೇತೆ ಪಿವಿ ಸಿಂಧು ಅವರು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ರಾಜಸ್ಥಾನದ ಉದಯಪುರದಲ್ಲಿ ಅದ್ದೂರಿಯಾಗಿ ನಡೆದ ಮದುವೆ ಸಮಾರಂಭದಲ್ಲಿ ಉದ್ಯಮಿ ವೆಂಕಟ್ ದತ್ತಾ ಸಾಯಿ ಅವರೊಂದಿಗೆ ಸಿಂಧು ವೈವಾಹಿಕ ಜೀವನಕ್ಕೆ ಕಾಲಿರಿಸಿದ್ದಾರೆ. ಪಿವಿ ಸಿಂಧು ಮತ್ತು ವೆಂಕಟ್ ಮದುವೆಯ ಮೊದಲ ಫೋಟೋ ಇದೀಗ ವೈರಲ್ ಆಗಿದೆ. ಈ ನವ ಜೋಡಿಗೆ ಅಭಿಮಾನಿಗಳು ಶುಭ ಹಾರೈಸಿದ್ದಾರೆ.



ಡಿಸೆಂಬರ್ 22 ರಂದೇ ಸಿಂಧು ಮತ್ತು ವೆಂಕಟ್ ಮದುವೆಯಾಗಿದ್ದಾರೆ. ಅವರ ವಿವಾಹ ಸಮಾರಂಭವನ್ನು ಖಾಸಗಿಯಾಗಿ ಇರಿಸಲಾಗಿರುವುದರಿಂದ ಸಿಂಧು ತಮ್ಮ ಮದುವೆಯ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಇನ್ನೂ ಹಂಚಿಕೊಳ್ಳಲಾಗಿಲ್ಲ. ಈ ಮದುವೆಯಲ್ಲಿ ಭಾಗಿಯಾಗಿರುವ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ನವ ಜೋಡಿಯ ಮದುವೆಯ ಫೋಟೋವನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು ನವದಂಪತಿಗಳಿಗೆ ಶುಭಕೋರಿದ್ದಾರೆ. ಈ ಫೋಟೋ ಈಗ ವೈರಲ್ ಆಗಿದೆ. ಡಿ.14ರಂದು ಇಬ್ಬರ ನಿಶ್ಚಿತಾರ್ಥ ನಡೆದಿತ್ತು. ಇದೀಗ ಆತ್ಮೀಯರ ಸಮ್ಮುಖದಲ್ಲಿ ವೈವಾಹಿಕ ಜೀವನಕ್ಕೆ ಕಾಲಿರಿಸಿರುವ ಈ ಜೋಡಿ ಮಂಗಳವಾರ ಹೈದರಾಬಾದ್‌ನಲ್ಲಿ ಅದ್ದೂರಿಯಾಗಿ ಆರತಕ್ಷತೆಯನ್ನು ಏರ್ಪಡಿಸಿದೆ.

**ಪಿವಿ ಸಿಂಧು ಪತಿ ಯಾರು?:** ಪಿವಿ ಸಿಂಧು ಅವರ ಪತಿ ವೆಂಕಟ್ ದತ್ತಾ ಸಾಯಿ ಅವರು ಫೌಂಡೇಶನ್ ಆಫ್ ಲಿಬರಲ್ ಮತ್ತು ಮ್ಯಾನೇಜ್‌ಮೆಂಟ್ ಎಜುಕೇಶನ್‌ನಿಂದ ಲಿಬರಲ್ ಆರ್ಟ್ಸ್ ಅಂಡ್ ಸೈನ್ಸಸ್‌ನಲ್ಲಿ ಪದವಿ ಪಡೆದಿದ್ದಾರೆ. 2018 ರಲ್ಲಿ, ಅವರು ಫ್ಲೇಮ್ ವಿಶ್ವವಿದ್ಯಾಲಯದಿಂದ ಅಕೌಂಟಿಂಗ್ ಮತ್ತು ಫೈನಾನ್ಸ್‌ನಲ್ಲಿ ಬಿಬಿಎ ಮಾಡಿದ್ದರು. ಪ್ರಸ್ತುತ ಅವರು ಪೊಸಿಡೆಕ್ಸ್ ಟೆಕ್ನಾಲಜಿಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966